



# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜೂನ್ 8 ಬುಧವಾರ 2022

ಸಂಪುಟ: 43 | ಸಂಚಿಕೆ: 53 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4


ಕೆಬಿಜಿಯವರ
ಛೂಮಂತ್ರ...

ಯಾರಾಗಬಹುದು ದೇಶದ ಮುಂದಿನ ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ...!?

ಪುಟ–4

## ಮೈಸೂರಲ್ಲಿ 15 ಸಾವಿರ ಮಂದಿಗೆ ಪ್ರಧಾನಿ ಮೋದಿಯೊಂದಿಗೆ

# ಯೋಗಾ ಮಾಡುವ ಯೋಗ

**ಸಿದ್ಧತೆ ಕುರಿತು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ ಸಿಎಂ ಬಸವರಾಜ ಬೊಮ್ಮಾಯಿ**

■ ಜೂನ್ 13ರೊಳಗೆ ಯೋಗಪಟುಗಳ ಆಯ್ಕೆಗೆ ಜಿಲ್ಲಾಧಿಕಾರಿಗಳಿಗೆ ಸೂಚನೆ; ಸಮಾಜದ ಎಲ್ಲಾ ವರ್ಗಗಳಿಗೆ ಆದ್ಯತೆ ನೀಡಲು ಸಲಹೆ ■ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಸಾರಿಗೆ ಸೌಲಭ್ಯ, ಲಘು ಉಪಾಹಾರ, ಕುಡಿಯುವ ನೀರಿನ ವ್ಯವಸ್ಥೆ ಮಾಡಿ ■ ಕಾರ್ಯಕ್ರಮದ ಯಶಸ್ಸಿಗೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ 14 ಸಮಿತಿಗಳ ರಚನೆ ■ ಹಳೇಬೀಡು, ಹಂಪಿ, ಪಟ್ಟದಕಲ್, ವಿಜಯಪುರ, ಗೋಲಗುಂಬಜ್‌ನಲ್ಲೂ ಕಾರ್ಯಕ್ರಮ ಆಯೋಜನೆ; ಕೇಂದ್ರ ಸಚಿವರಿಂದ ಚಾಲನೆ



ಮೈಸೂರಲ್ಲಿ ನಡೆಯಲಿರುವ ಯೋಗ ದಿನಾಚರಣೆಯಲ್ಲಿ ಪ್ರಧಾನಿ ಮೋದಿ ಭಾಗವಹಿಸಲಿದ್ದು, ಈ ಕುರಿತು ಕೈಗೊಂಡಿರುವ ಪೂರ್ವಸಿದ್ಧತೆಗಳ ಸಂಬಂಧ ಸಿಎಂ ಬೊಮ್ಮಾಯಿ ಸಭೆ ನಡೆಸಿದರು.

ಬೆಂಗಳೂರು, ಜೂ.7– ಆಜಾದಿ ಕಾ ಅಮೃತ್ ಮಹೋತ್ಸವದ ಅಂಗವಾಗಿ ಮೈಸೂರಿನಲ್ಲಿ ನಡೆಯಲಿರುವ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಭಾಗವಹಿಸಲಿದ್ದು, ಮೈಸೂರು ಅರಮನೆ ಆವರಣದಲ್ಲಿ 15 ಸಾವಿರ ಜನರು ಯೋಗ ಮಾಡಲಿದ್ದಾರೆ.

ಈ ಕುರಿತು ಕೈಗೊಂಡಿರುವ ಪೂರ್ವಸಿದ್ಧತೆಗಳ ಪರಿಶೀಲನೆ ನಡೆಸಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಈ 15 ಸಾವಿರ ಯೋಗಪಟುಗಳ ಆಯ್ಕೆ ಪ್ರಕ್ರಿಯೆಯನ್ನು ಜೂನ್ 13ರೊಳಗೆ ಪೂರ್ಣಗೊಳಿಸುವಂತೆ ಮೈಸೂರು ಜಿಲ್ಲಾಧಿಕಾರಿಗೆ ಸೂಚಿಸಿದರು. ಈ ಆಯ್ಕೆ ಪ್ರಕ್ರಿಯೆಯಲ್ಲಿ ಪ್ರಧಾನಮಂತ್ರಿಗಳ ಕಚೇರಿ ಸೂಚಿಸಿದಂತೆ ಸಮಾಜದ ಎಲ್ಲ ವರ್ಗಗಳ ಜನರನ್ನೂ ಸೇರ್ಪಡೆಗೊಳಿಸುವಂತೆ ತಿಳಿಸಿದರು.

ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಸಾರಿಗೆ ಸೌಲಭ್ಯ, ಲಘು ಉಪಾಹಾರ, ಕುಡಿಯುವ ನೀರು ಮತ್ತಿತರ ವ್ಯವಸ್ಥೆಗಳನ್ನು ಯಾವುದೇ ಲೋಪವಿಲ್ಲದಂತೆ ▸ 8ನೇ ಪುಟಕ್ಕೆ

### ಇಂದು ಮೈಸೂರಿಗೆ ಸಿಎಂ

ಮೈಸೂರು, ಜೂ.7(ಆರ್‌ಕೆ)–ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ನಾಳೆ (ಜೂ.8) ಮೈಸೂರಿಗೆ ಆಗಮಿಸುವರು. ಬೆಳಗ್ಗೆ 9.30 ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ಹೊರಡಲಿರುವ ಮುಖ್ಯಮಂತ್ರಿಗಳು, ಬೆಳಗ್ಗೆ 10.20 ಗಂಟೆಗೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಬೆಳಗ್ಗೆ 11ರಿಂದ ಅಪರಾಹ್ನ 12 ಗಂಟೆವರೆಗೆ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್‌ನಲ್ಲಿ ಆಯೋಜಿಸಿರುವ ಬಿಜೆಪಿ ವಿಭಾಗ ಮಟ್ಟದ ಸಭೆಯಲ್ಲಿ ಭಾಗವಹಿಸುವರು.

ಮಧ್ಯಾಹ್ನ 12.15ರಿಂದ 1.45 ಗಂಟೆವರೆಗೆ ರಾಮಾನುಜ ರಸ್ತೆಯ ರಾಜೇಂದ್ರ ಕಲಾಮಂದಿರದಲ್ಲಿ ನಡೆಯುವ ದಕ್ಷಿಣ ಪದವೀಧರ ಕ್ಷೇತ್ರದ ಮತದಾರರ ಸಭೆಯಲ್ಲಿ ಪಾಲ್ಗೊಳ್ಳಲಿರುವ ಸಿಎಂ, ಮಧ್ಯಾಹ್ನ 1.50 ಗಂಟೆಗೆ ಸುತ್ತೂರು ಮಠಕ್ಕೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದು, ಮಧ್ಯಾಹ್ನ 2.30 ಗಂಟೆಗೆ ಬೆಂಗಳೂರಿಗೆ ಹಿಂದಿರುಗುವರು.

### ಮೇಕೆದಾಟು ಯೋಜನೆಗೆ ತ.ನಾಡು ಮತ್ತೆ ತಕರಾರು

ನವದೆಹಲಿ, ಜೂ.7– ಮೇಕೆದಾಟು ಅಣೆಕಟ್ಟು ನಿರ್ಮಾಣ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ನಿರ್ಧಾರಗಳಿಗೆ ತಮಿಳುನಾಡು ಮತ್ತೆ ಅಡ್ಡಗಾಲು ಹಾಕುವ ಪ್ರಯತ್ನ ಆರಂಭಿಸಿದೆ. ಸುಪ್ರೀಂಕೋರ್ಟ್‌ಗೆ ಹೊಸ ಅರ್ಜಿಯೊಂದನ್ನು ಸಲ್ಲಿಸಿರುವ ಎಂ.ಕೆ.ಸ್ಟಾಲಿನ್ ನೇತೃತ್ವದ ಸರ್ಕಾರ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಮೇಕೆದಾಟು ಯೋಜನೆಯ ಬಗ್ಗೆ ಚರ್ಚಿಸದಂತೆ ತಡೆಯಾಜ್ಞೆ ನೀಡಲು ಮನವಿ ಮಾಡಿದೆ. ಇಂದು ಈ ಬಗ್ಗೆ ಅರ್ಜಿ ಸಲ್ಲಿಸಿರುವ ತಮಿಳುನಾಡು ಸರ್ಕಾರ, ▸ 8ನೇ ಪುಟಕ್ಕೆ













## ಬೆಂಗಳೂರಲ್ಲಿ ಶಂಕಿತ ಕಾಶ್ಮೀರಿ ಉಗ್ರನ ಬಂಧನ

**ಸ್ಫೋಟದ ಬೆದರಿಕೆ: ಆರ್‌ಎಸ್‌ಎಸ್ ಕಚೇರಿಗಳಿಗೆ ಪೊಲೀಸ್ ಭದ್ರತೆ**

- ಶಂಕಿತನೊಂದಿಗೆ ಸಂಬಂಧ ಇದ್ದವರ ತನಿಖೆ
- 10 ವರ್ಷದಿಂದ ಬೆಂಗಳೂರಲ್ಲೇ ನೆಲೆಸಿದ್ದ
- ಮೊಬೈಲ್, ಇತರ ದಾಖಲೆ ಬಗ್ಗೆ ವಿಚಾರಣೆ


ತಾಲಿಬ್ ಹುಸೇನ್


ಬೆಂಗಳೂರು, ಜೂ. 7 (ಕೆಎಂಶಿ) – ಶಂಕಿತ ಉಗ್ರ ತಾಲಿಬ್ ಹುಸೇನ್ ಬಂಧನದ ಬೆನ್ನಲ್ಲೇ ರಾಜ್ಯದ ಆರ್‌ಎಸ್‌ಎಸ್ ಕಚೇರಿಗಳಿಗೆ ಬಿಗಿ ಭದ್ರತೆ ಒದಗಿಸಲಾಗಿದೆ.

ರಾಜ್ಯದ ಆರ್‌ಎಸ್‌ಎಸ್ ಕಚೇರಿಗಳ ಮೇಲೆ ದಾಳಿ ಬೆದರಿಕೆ ಸಂದೇಶ ಬಂದಿರುವ ಹಿನ್ನೆಲೆಯಲ್ಲಿ ಎಲ್ಲಾ ಕಚೇರಿಗಳಿಗೆ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಲಾಗಿದೆ. ಉತ್ತರಪ್ರದೇಶದ ಎರಡು ಹಾಗೂ ಕರ್ನಾಟಕದ ನಾಲ್ಕು ಆರ್‌ಎಸ್‌ಎಸ್ ಕಚೇರಿಗಳನ್ನು ಧ್ವಂಸಗೊಳಿಸುವುದಾಗಿ ವಾಟ್ಸಪ್ ಸಂದೇಶವೊಂದನ್ನು ತಮಿಳುನಾಡಿನ ವ್ಯಕ್ತಿಯೊಬ್ಬ ಉತ್ತರಪ್ರದೇಶದ ವ್ಯಕ್ತಿಯೊಬ್ಬರಿಗೆ ಕಳುಹಿಸಿದ್ದು, ಇದಕ್ಕೆ ಸಂಬಂಧಿಸಿದಂತೆ ಮೊಕದ್ದಮೆ ದಾಖಲು ಮಾಡಲಾಗಿದೆ. ನಿಷೇಧಿತ ಉಗ್ರ ▸ 8ನೇ ಪುಟಕ್ಕೆ




## ವಿಜಯೇಂದ್ರರ ರೈಲು ಹತ್ತಿಸಬೇಡಿ...! ಅವರನ್ನು ಹರಕೆಯ ಕುರಿ ಮಾಡಬೇಡಿ...!!

- ಅಭಿಮಾನಿಗಳಿಗೆ ಸಚಿವ ಸೋಮಣ್ಣ ಖಡಕ್ ವಾರ್ನಿಂಗ್
- ದಕ್ಷಿಣ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರವಿಶಂಕರ್ ಪರ ಪ್ರಚಾರ ಸಭೆಯಲ್ಲಿ ಜೈಕಾರ, ಗದ್ದಲ
- ವಿಜಯೇಂದ್ರರ ಅಭಿಮಾನಿಗಳಿಗೆ ಶಿಸ್ತಿನ ಪಾಠ ಹೇಳಿದ ಸಚಿವ ವಿ.ಸೋಮಣ್ಣ
- ನಾನು ವಿಜಯೇಂದ್ರಗೆ ಸಾಟಿ ಅಲ್ಲ; ಅವರಿಗೆ 40, ನನಗೆ 71!


ಸೋಮಣ್ಣರ ಭಾಷಣದ ವೇಳೆ ಅಭಿಮಾನಿಗಳನ್ನು ಸಮಾಧಾನಪಡಿಸುತ್ತಿರುವ ವಿಜಯೇಂದ್ರ.

ಭಾಷಣದುದ್ದಕ್ಕೂ ಗದ್ದಲ ಮಾಡಿದ್ದ ಸಭಿಕರಿಂದಲೇ ಬಿ.ವೈ.ವಿಜಯೇಂದ್ರ, ಸಚಿವ ವಿ.ಸೋಮಣ್ಣನವರಿಗೆ ಜೈಕಾರ ಹಾಕಿಸಿದರು. ತಮ್ಮ ಭಾಷಣದ ವೇಳೆ ಭಾರತ ಮಾತೆ, ಪ್ರಧಾನಿ ಮೋದಿ, ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ನಂತರ ವಿ.ಸೋಮಣ್ಣನವರ ಹೆಸರನ್ನೂ ಹೇಳಿದಾಗ ನೆರೆದಿದ್ದವರು ಜೈ ಎಂದು ಕೂಗಿದರು. ಸಭೆ ಮುಕ್ತಾಯವಾದ ಬಳಿಕ ವೇದಿಕೆಯಲ್ಲಿ ತಮ್ಮ ಬಳಿ ಏನೋ ಹೇಳಿದ ವಿಜಯೇಂದ್ರರ ಭುಜತಟ್ಟಿದ ಸೋಮಣ್ಣ, ಸಹಜವಾಗಿಯೇ ಅಲ್ಲಿಂದ ಹೊರಟರು.

### ಮುಂದಿನ ಸಿಎಂ ಘೋಷಣೆ

ಬಿ.ವೈ.ವಿಜಯೇಂದ್ರ ಕಾರಿನಿಂದ ಇಳಿದು ಸಭಾಂಗಣ ಪ್ರವೇಶಿಸುವ ಸಂದರ್ಭದಲ್ಲಿ ಅವರ ಅಭಿಮಾನಿಗಳು ಮುಂದಿನ ಸಿಎಂ, ರಾಜಾಹುಲಿ ವಿಜಯೇಂದ್ರಣ್ಣನಿಗೆ ಜೈ ಎಂದು ಕೂಗಿದರು. ವೇದಿಕೆ ಬಳಿಯೂ ಜಮಾಯಿಸಿ ಕೆಲ ಕಾಲ ಜೈಕಾರ ಹಾಕಿದರು.

ಮೈಸೂರು, ಜೂ.7(ಎಸ್‌ಬಿಡಿ)– ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ವೀರಶೈವ ಲಿಂಗಾಯತ ಸಮುದಾಯದಲ್ಲಿರುವ ಗೊಂದಲ ನಿವಾರಣೆ ಉದ್ದೇಶದಿಂದ ಆಯೋಜಿಸಿದ್ದ ಸಭೆಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಮಾನಿಗಳ ನಡೆಯಿಂದ ಮುಜುಗರಕ್ಕೀಡಾದ ವಸತಿ ಸಚಿವ ವಿ.ಸೋಮಣ್ಣ, ಆಕ್ರೋಶದಿಂದ ಶಿಸ್ತಿನ ಪಾಠ ಹೇಳಿದ ಪ್ರಸಂಗ ನಡೆಯಿತು.

ದಕ್ಷಿಣ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಂ.ವಿ. ರವಿಶಂಕರ್ ಪರವಾಗಿ ಮತಯಾಚನೆ ಜೊತೆಗೆ ವೀರಶೈವ ಲಿಂಗಾಯತ ಮುಖಂಡರ ಬಗ್ಗೆ ಸಮುದಾಯದವರಲ್ಲಿರುವ ವೈರುಧ್ಯ ನಿವಾರಣೆಗಾಗಿ ಮೈಸೂರಿನ ಸಯ್ಯಾಜಿರಾವ್ ರಸ್ತೆ ಹೈವೇ ವೃತ್ತದ ಬಳಿ ಇರುವ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ಸಭೆ ಆಯೋಜಿಸಲಾಗಿತ್ತು. ಗಣ್ಯರ ಆಗಮನಕ್ಕೂ ಮುನ್ನವೇ ಬಿಜೆಪಿ ಮುಖಂಡ ಕಾ.ಪು.ಸಿದ್ದಲಿಂಗಸ್ವಾಮಿ, ಸಾಮಾಜಿಕ ಜಾಲತಾಣದಲ್ಲಿ ಇಲ್ಲಸಲ್ಲದ ವಿಚಾರಗಳನ್ನು ಹರಿಬಿಟ್ಟು ಸಮುದಾಯದಲ್ಲಿ ಗೊಂದಲ ಮೂಡಿಸಲಾಗುತ್ತಿದೆ. ಹಾಗಾಗಿ ಸಚಿವ ವಿ.ಸೋಮಣ್ಣನವರು ಹಾಗೂ ಬಿ.ವೈ.ವಿಜಯೇಂದ್ರ ಇಬ್ಬರೂ ಅಭ್ಯರ್ಥಿ ಎಂ.ವಿ.ರವಿಶಂಕರ್ ಪರ ಮತಯಾಚನೆ ಮಾಡಲಿದ್ದಾರೆ. ದಯವಿಟ್ಟು ಯಾರೂ ವೈಯಕ್ತಿಕ ಘೋಷಣೆ ಕೂಗಬಾರದು, ಸಭೆ ಉತ್ತಮ ಸಂದೇಶ ರವಾನಿಸಲು ಅನುವು ಮಾಡಿಕೊಡಬೇಕೆಂದು ಕಿಕ್ಕಿರಿದಿದ್ದ ಸಭಿಕರಲ್ಲಿ ಮನವಿ ಮಾಡಿದರು.

ಆದರೆ ಬಿ.ವೈ.ವಿಜಯೇಂದ್ರ ಸಭಾಂಗಣಕ್ಕೆ ಆಗಮಿಸುತ್ತಿದ್ದಂತೆ ಅಭಿಮಾನಿಗಳ ಜೈಕಾರ ಆರಂಭವಾಯಿತು. ವೇದಿಕೆಯಲ್ಲಿದ್ದ ಗಣ್ಯರನ್ನು ಸ್ವಾಗತಿಸುವ ವೇಳೆ, ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ ಅವರ ಭಾಷಣ, ಕಾ.ಪು. ಸಿದ್ದಲಿಂಗಸ್ವಾಮಿ ಪ್ರಾಸ್ತಾವಿಕ ನುಡಿ ಸಂದರ್ಭದಲ್ಲಿ ಮಾಜಿ ಸಿಎಂ ಯಡಿಯೂರಪ್ಪ, ವಿಜಯೇಂದ್ರ ಅವರ ಹೆಸರೇಳುತ್ತಿದ್ದಂತೆ ಜೈಕಾರ, ಶಿಳ್ಳೆ, ಚಪ್ಪಾಳೆ ಜೋರಾಗಿತ್ತು. ಸಭೆಗೆ ಸ್ವಲ್ಪ ತಡವಾಗಿ ಆಗಮಿಸಿದ ಸಚಿವ ಸೋಮಣ್ಣ ಹಾಗೂ ಸಂಸದ ಪ್ರತಾಪ್ ಸಿಂಹ ಅವರ ಭಾಷಣದ ಸಂದರ್ಭದಲ್ಲೂ ಹಾಗೆಯೇ ಮುಂದುವರೆದಿತ್ತು. ▸ 8ನೇ ಪುಟಕ್ಕೆ












ವಕೀಲರ ಬಗ್ಗೆ ಅವಹೇಳನ ಎಂಬುದು ಕಾಂಗ್ರೆಸ್ಸಿಗರ ಅಪಪ್ರಚಾರ

## ವಕೀಲ ಬಂಧುಗಳು ಕಿವಿಗೊಡ ಬೇಡಿ



ಸಂಸದ ಪ್ರತಾಪ್ ಸಿಂಹ ಮನವಿ

ಮೈಸೂರು,ಜೂ.7(ಪಿಎಂ)– ಸಂಸದರು ವಕೀಲರ ಬಗ್ಗೆ ಅವಹೇಳನ ಮಾಡಿದ್ದಾರೆ ಎಂಬುದು ಕಾಂಗ್ರೆಸ್ಸಿಗರ ಅಪಪ್ರಚಾರ. ವಕೀಲ ಬಂಧುಗಳು ಇದಕ್ಕೆ ಕಿವಿಗೊಡಬಾರದು ಎಂದು ಸಂಸದ ಪ್ರತಾಪ್ ಸಿಂಹ ಮನವಿ ಮಾಡಿದ್ದಾರೆ.

ನಾನು ವಕೀಲರ ಬಗ್ಗೆ ಅಪಾರ ಗೌರವ ಹೊಂದಿದ್ದೇನೆ. ಮೈಸೂರು ವಕೀಲರ ಸಂಘದ ಯಾವುದೇ ಪ್ರಸ್ತಾಪ ನನ್ನ ಮುಂದಿಟ್ಟಾಗಲೂ ಸ್ಪಂದಿಸಿದ್ದೇನೆ. 'ತಾಲೂಕು ಕೋರ್ಟ್‌ನಲ್ಲಿ ವಕೀಲಗಿರಿ ಮಾಡುತ್ತಿದ್ದ ಸಿದ್ದರಾಮಯ್ಯನವರು 13 ಬಜೆಟ್ ಮಂಡಿಸಿದ್ದರೂ ಅರ್ಥ ವ್ಯವಸ್ಥೆಯ ಕನಿಷ್ಠ ಜ್ಞಾನವೂ ಇಲ್ಲದಂತೆ ಮಾತನಾಡುತ್ತಿದ್ದಾರೆ' ಎಂದು ಟೀಕಿಸಿದ್ದೇನೆ. ಇದರ ಹೊರತು ವಕೀಲ ವೃತ್ತಿಯ ಬಗ್ಗೆ ಹಗುರವಾಗಿ ಮಾತನಾಡಿಲ್ಲ. ಆದರೆ ಕಾಂಗ್ರೆಸ್ಸಿನ ಕೆಲವರು, ವಕೀಲರಿಗೆ ಅವಮಾನ ಮಾಡಿದ್ದಾರೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ನಮ್ಮ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸರ್ಕಾರದ ಬಗ್ಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಲ್ಲಸಲ್ಲದ ಆರೋಪ ಮಾಡುತ್ತಿರುತ್ತಾರೆ. ಇತ್ತೀಚೆಗೆ ಕೇಂದ್ರ ಸರ್ಕಾರ ರಾಜ್ಯದಿಂದ 19 ಲಕ್ಷ ಕೋಟಿ ಹಣವನ್ನು ತೆರಿಗೆ ರೂಪದಲ್ಲಿ ಲೂಟಿ ಮಾಡಿದೆ ಎಂದು ತಮ್ಮ ಟ್ವೀಟ್‌ನಲ್ಲಿ ಅವರು ಆರೋಪಿಸಿದ್ದಾರೆ. ಕೇಂದ್ರ ಸರ್ಕಾರ ಕೆಜಿಗೆ 32 ರೂ. ಕೊಟ್ಟು ಅಕ್ಕಿ ಖರೀದಿಸಿ, ರಾಜ್ಯ ಸರ್ಕಾರಕ್ಕೆ 3 ರೂ.ಗೆ ನೀಡುತ್ತದೆ. ಅದರಲ್ಲಿ 2 ರೂ. ಕಡಿಮೆ ಮಾಡಿ ನಾನು 1 ರೂ. ಕೆಜಿ ಅಕ್ಕಿ ಕೊಟ್ಟೆ ಎಂದು ಸಿದ್ದರಾಮಯ್ಯ ಬಡಾಯಿ ಕೊಚ್ಚಿಕೊಳ್ಳುತ್ತಿದ್ದರು.

ಆದರೆ ಕೇಂದ್ರ ಸರ್ಕಾರ ಭರಿಸುವ 29 ರೂ. ಬಗ್ಗೆ ಎಂದೂ ಮಾತನಾಡಿಲ್ಲ. ಜಗತ್ತಿನಾದ್ಯಂತ ಇರುವ ರಾಜತಾಂತ್ರಿಕ ಕಚೇರಿಗಳು, 16 ಲಕ್ಷ ಸೈನಿಕರು, 50 ಲಕ್ಷದ ಹೆಚ್ಚು ಕೇಂದ್ರ ಸರ್ಕಾರದ ಉದ್ಯೋಗಿಗಳು ಸೇರಿದಂತೆ ಇವರಿಗೆ ಸಂಬಳ ಎಲ್ಲಿಂದ ಕೊಡಬೇಕು? ಪ್ರತಿವರ್ಷ ಖರೀದಿಸುವ ಶಸ್ತ್ರಾಸ್ತ್ರಗಳು, ಕೋವಿಡ್ ವೇಳೆ ಕೊಟ್ಟ ಉಚಿತ ಲಸಿಕೆಗಳು, ಕಳೆದ 2 ವರ್ಷಗಳಿಂದ ಪ್ರಧಾನಮಂತ್ರಿ ಅನ್ನ ಕಲ್ಯಾಣ ಯೋಜನೆಯಡಿ ನೀಡುತ್ತಿರುವ ಉಚಿತ ಪಡಿತರ ಸೇರಿದಂತೆ ಇವುಗಳಿಗೆ ದುಡ್ಡು ಎಲ್ಲಿಂದ ಬರಬೇಕು? ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಒಂದಕ್ಕೇ ವರ್ಷಕ್ಕೆ 50ರಿಂದ 60 ಸಾವಿರ ಕೋಟಿ ರೂ. ಖರ್ಚಾಗುತ್ತದೆ. ಹೈವೇ–ರೈಲ್ವೆ, ಸ್ಮಾರ್ಟ್ ಸಿಟಿ, ಅಮೃತ್ ಯೋಜನೆಯಿಂದ 15ನೇ ಹಣಕಾಸು ಆಯೋಗದವರೆಗೂ 42 ಕೇಂದ್ರ ಪುರಸ್ಕೃತ ಯೋಜನೆಗಳ ಮೂಲಕ ಲಕ್ಷಾಂತರ ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರ ವಾಪಸ್ಸು ರಾಜ್ಯಗಳಿಗೆ ನೀಡುತ್ತದೆ ಎಂದು ಸಂಸದರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಕೀಲರಿಗೆ ಸಂಸದ ಪ್ರತಾಪ್ ಸಿಂಹ ಅವಮಾನ

# ಮೈಸೂರಲ್ಲಿ ವಕೀಲರಿಂದ ಪ್ರತಿಭಟನೆ



ಮೈಸೂರಿನ ನ್ಯಾಯಾಲಯದ ಎದುರಿನ ಗಾಂಧಿ ಪುತ್ಥಳಿ ಎದುರು ಮೈಸೂರು ವಕೀಲರ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು,ಜೂ.7(ಪಿಎಂ)– ಸಂಸದ ಪ್ರತಾಪ್ ಸಿಂಹ ವಕೀಲರ ಸಮುದಾಯದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಮಂಗಳವಾರ ಕೋರ್ಟ್ ಕಲಾಪದಿಂದ ಹೊರಗುಳಿದ ವಕೀಲರು, ಮೈಸೂರು ವಕೀಲರ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಮೈಸೂರಿನ ನ್ಯಾಯಾಲಯದ ಎದುರಿನ ಗಾಂಧಿ ಪುತ್ಥಳಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಸಂಸದರ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ, ಸಂಸದರ ಭಾವಚಿತ್ರಗಳಿಗೆ ಬೆಂಕಿ ಹಚ್ಚಿ ಕಿಡಿಕಾರಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಸಂಘದ ಅಧ್ಯಕ್ಷ ಎಂ.ಮಹದೇವಸ್ವಾಮಿ, ಮತ್ತೊಬ್ಬರನ್ನು ಟೀಕಿಸುವ ಭರದಲ್ಲಿ ಸಂಸದ ಪ್ರತಾಪ್ ಸಿಂಹ ವಕೀಲ ವೃಂದಕ್ಕೆ ಅಪಮಾನ ಮಾಡಿದ್ದಾರೆ. ಅವರ ವಿರುದ್ಧ ಸಂಘದ ಸರ್ವ ಸದಸ್ಯರ ಸಭೆ ಕರೆದು ಖಂಡನಾ ನಿರ್ಣಯ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಅಲ್ಲದೆ, ಮೈಸೂರು ವಕೀಲರ ಸಂಘದ ಯಾವುದೇ ವಕೀಲರು ಪ್ರತಾಪ್‌ಸಿಂಹ ಅವರ ಕೋರ್ಟ್ ಸಂಬಂಧಿತ ವಿಚಾರಗಳಲ್ಲಿ ಸಹಕರಿಸದಂತೆ ತೀರ್ಮಾನ ಕೈಗೊಳ್ಳಲಾಗಿದೆ. ಅವರ ಹೇಳಿಕೆ ಖಂಡಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೂ ಪತ್ರ ಬರೆಯುವ ತೀರ್ಮಾನ ಮಾಡಿದ್ದೇವೆ. ಪ್ರತಾಪ್ ಸಿಂಹ ಅವರು ಸಾಮಾನ್ಯ ಜ್ಞಾನ ಇಲ್ಲದೆ ಈ ರೀತಿ ಹೇಳಿಕೆ ನೀಡಿದ್ದಾರೆ ಎಂದು ಕಿಡಿಕಾರಿದರು.

ಸಂಘದ ಕಾರ್ಯದರ್ಶಿ ಎಸ್.ಉಮೇಶ್, ಉಪಾಧ್ಯಕ್ಷ ಮುಟ್ಟಸಿದ್ದೇಗೌಡ, ಖಜಾಂಚಿ ಹೆಚ್.ಎಸ್.ಮಹದೇವಸ್ವಾಮಿ, ಮಹಿಳಾ ಘಟಕದ ಜಂಟಿ ಕಾರ್ಯದರ್ಶಿ ಬಿ.ಎಸ್.ಭಾಗ್ಯಮ್ಮ ವಕೀಲರಾದ ಎನ್.ಪುನೀತ್, ಕವಿತಾ ಕಾಳೆ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಸಿದ್ದರಾಮಯ್ಯ ವಿರುದ್ಧ ಹೇಳಿಕೆ; ಪ್ರತಾಪ್ ಸಿಂಹ ವಿರುದ್ಧ ಪ್ರತಿಭಟನೆ



ಮೈಸೂರು,ಜೂ.7(ಪಿಎಂ)–ಮಾಜಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಸಂಸದ ಪ್ರತಾಪ್ ಸಿಂಹ ನೀಡಿರುವ ಹೇಳಿಕೆಯನ್ನು ಖಂಡಿಸಿ ಅಖಿಲ ಕರ್ನಾಟಕ ಸಿದ್ದರಾಮಯ್ಯ ಅಭಿಮಾನಿಗಳ ಬ್ರಿಗೇಡ್ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ನ್ಯಾಯಾಲಯದ ಎದುರಿನ ಗಾಂಧಿ ಪುತ್ಥಳಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಸಿದ್ದರಾಮಯ್ಯ ಅವರ ಬಗ್ಗೆ ಹಗುರವಾಗಿ ಮಾತನಾಡಿರುವ ಪ್ರತಾಪ್ ಸಿಂಹ ಅವರು ಆಕ್ಸ್‌ಫರ್ಡ್ ಯೂನಿವರ್ಸಿಟಿಯಲ್ಲಿ ಪದವಿ–ಪಾರಿತೋಷಕ ಪಡೆದು ಬಂದಿದ್ದಾರೆಯೇ? ನಮ್ಮ ನಾಯಕರ ಬಗ್ಗೆ ಮಾತನಾಡುವ ನೈತಿಕತೆ ಇವರಿಗಿಲ್ಲ ಎಂದು ಕಿಡಿಕಾರಿದರು. ಸಂಸದರಾಗಿ ಪ್ರತಾಪ್‌ಸಿಂಹರ ಕೊಡುಗೆ ಕೇವಲ ರೈಲು ಬಿಡುವುದೇ ಆಗಿದೆ. ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಲೋಕೋಪಯೋಗಿ ಸಚಿವರಾಗಿದ್ದ ಡಾ.ಹೆಚ್.ಸಿ.ಮಹದೇವಪ್ಪ, ಮೈಸೂರು–ಬೆಂಗಳೂರು ನಡುವೆ 8 ಪಥದ ರಸ್ತೆಗೆ ಅನುಮೋದನೆ ದೊರಕಿಸಿಕೊಟ್ಟಿದ್ದರು. ಆದರೆ ಪ್ರತಾಪ್ ಸಿಂಹ ಇದನ್ನು ತಾವು ಮಾಡಿಸಿದ್ದೆಂದು ಸಾಮಾಜಿಕ ಜಾಲತಾಣ ಹಾಗೂ ಮಾಧ್ಯಮಗಳಲ್ಲಿ ಬಿಂಬಿಸಿಕೊಳ್ಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೈಸೂರು–ಬೆಂಗಳೂರು ಹೆದ್ದಾರಿ ಸಂಬಂಧ ಇವರ ಮತಕ್ಷೇತ್ರದ ವ್ಯಾಪ್ತಿಗೆ ಕೇವಲ 6 ಕೀ.ಮಿ. ಮಾತ್ರ ಬರಲಿದ್ದು, ಅದೂ ಪ್ರತಾಪ್ ಸಿಂಹರಿಗೆ ತಿಳಿದಿಲ್ಲವೇ? ರಾಜ್ಯದ ಪಾಲಿನ ಜಿಎಸ್‌ಟಿ ಹಣವನ್ನು ಪಡೆದು ಅಭಿವೃದ್ಧಿ ಕಾರ್ಯಗಳನ್ನು ಮಾಡದೇ ಕಾಲಹರಣ ಮಾಡುತ್ತಾ ಮತ್ತೊಬ್ಬರನ್ನು ಟೀಕಿಸುವುದರಲ್ಲೇ ಪ್ರತಾಪ್ ಸಿಂಹ ಕಾಲ ಕಳೆಯುತ್ತಿದ್ದಾರೆ. ಇದು ಇವರಿಗೆ ಶೋಭೆಯಲ್ಲ ಎಂದು ಕಿಡಿಕಾರಿದರು.

ಬ್ರಿಗೇಡ್ ರಾಜ್ಯಾಧ್ಯಕ್ಷ ಹಿನಕಲ್ ಉದಯ್, ಉಪಾಧ್ಯಕ್ಷ ಜೆ.ಮಹದೇವು, ಮುಖಂಡರಾದ ಮೈಸೂರು ಬಸವಣ್ಣ, ಕಾಡನಹಳ್ಳಿ ಸ್ವಾಮಿಗೌಡ, ಧನಪಾಲ್ ಕುರುಬಾರಹಳ್ಳಿ, ಮಹೇಶ್, ಸುರೇಶ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಆರ್‌ಎಸ್‌ಎಸ್ ಹಿತೈಷಿಗಳಿಂದ ಸಿದ್ದರಾಮಯ್ಯ, ನಲಪಾಡ್‌ಗೆ ಚಡ್ಡಿ ರವಾನೆ

ಮೈಸೂರು,ಜೂ.7(ಪಿಎಂ)– ಆರ್‌ಎಸ್‌ಎಸ್‌ನ ಚಡ್ಡಿ ಸುಡುತ್ತೇವೆಂಬ ಮಾಜಿ ಸಿಎಂ ಸಿದ್ದರಾಮಯ್ಯ ಮತ್ತು ರಾಜ್ಯ ಯೂತ್ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಹೇಳಿಕೆಗಳಿಗೆ ಆರ್‌ಎಸ್‌ಎಸ್ ಹಿತೈಷಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಮೈಸೂರಿನ ನೆಹರು ವೃತ್ತದ ಮುಖ್ಯ ಅಂಚೆ ಕಚೇರಿ ಮೂಲಕ ಬೆಂಗಳೂರು ಕೆಪಿಸಿಸಿ ಕಚೇರಿಗೆ ಎರಡು ಚಡ್ಡಿಗಳನ್ನು ಮಂಗಳವಾರ ಕಳುಹಿಸಿಕೊಡುವ ಮೂಲಕ ಆರ್‌ಎಸ್‌ಎಸ್ ಹಿತೈಷಿಗಳು ತಮ್ಮ ಪ್ರತಿರೋಧ ದಾಖಲಿಸಿದರು. ಇದಕ್ಕೂ ಮುನ್ನ ಅಂಚೆ ಕಚೇರಿ ಎದುರು ಚಡ್ಡಿಗಳನ್ನು ಪ್ರದರ್ಶಿಸಿ, ಚಡ್ಡಿಗಳನ್ನು ಸುಡಬೇಕು ಎಂಬ ಕೀಳು ಮಟ್ಟದ ಹೇಳಿಕೆ ಕೊಟ್ಟಿದ್ದಾರೆ. ಇವರಿಗೆ ಮಾಡಲು ಬೇರೆ ಕೆಲಸವಿಲ್ಲ. ನಾವು ಕಳುಹಿಸುವ ಚಡ್ಡಿಗಳನ್ನು ಸುಡುತ್ತ ಕುಳಿತುಕೊಳ್ಳಲಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಿಎಂ ಸಿದ್ದರಾಮಯ್ಯ ಮತ್ತು ಮೊಹಮ್ಮದ್ ಹ್ಯಾರಿಸ್ ನಲಪಾಡ್ ಇಬ್ಬರಿಗೂ ಒಂದೊಂದು ಚಡ್ಡಿಯನ್ನು ಅಂಚೆ ಮೂಲಕ ಕಳುಹಿಸಲಾಯಿತು. ಬಿಜೆಪಿ ಮುಖಂಡರಾದ ಗೋಕುಲ ಗೋವರ್ಧನ್, ಮಹೇಶ್ ರಾಜೇಅರಸ್, ಆರ್‌ಎಸ್‌ಎಸ್ ಹಿತೈಷಿಗಳಾದ ಬ್ರಹ್ಮಾಚಾರ್, ರಘು, ಶೇಖರ್ ಬ್ಯಾಟ್ರಿ, ಕಿಟ್ಟಿ ಪಾಲ್ಗೊಂಡಿದ್ದರು.

## ಪಿಎಸ್‌ಐ ಹಗರಣ: ಯಾರೇ ತಪ್ಪು ಮಾಡಿದ್ದರೂ ಕ್ರಮ ನಿಶ್ಚಿತ

ಮೈಸೂರಲ್ಲಿ ಸಚಿವ ಡಾ. ಅಶ್ವತ್ಥ ನಾರಾಯಣ್ ಸ್ಪಷ್ಟನೆ

ಮೈಸೂರು,ಜೂ.7(ಎಂಟಿವೈ)– ಪಿಎಸ್‌ಐ ನೇಮಕಾತಿ ಹಗರಣದಲ್ಲಿ ಯಾರೇ ತಪ್ಪು ಮಾಡಿದ್ದರೂ ಅವರ ಮೇಲೆ ಕ್ರಮ ನಿಶ್ಚಿತ ಎಂದು ಉನ್ನತ ಶಿಕ್ಷಣ ಸಚಿವ ಡಾ.ಅಶ್ವಥ್‌ನಾರಾಯಣ್ ಸ್ಪಷ್ಟಪಡಿಸಿದ್ದಾರೆ.



ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಪಿಎಸ್‌ಐ ಸೇರಿದಂತೆ ಯಾವುದೇ ಅಕ್ರಮ ನಡೆಸಿದ್ದರೂ ಹಾಗೂ ಅದರಲ್ಲಿ ಯಾರೇ ಪಾಲ್ಗೊಂಡಿದ್ದರೂ ಅವರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ. ಅಕ್ರಮದಲ್ಲಿ ಪಾಲ್ಗೊಂಡು ಸಿಕ್ಕಿಹಾಕಿಕೊಂಡಿರುವವರು ಅವರ ಕಡೆಯವರು, ಇವರ ಕಡೆಯವರು ಎಂದು ಸುಮ್ಮನಾಗುವುದಿಲ್ಲ ಎಂದರು.

ಕಾಂಗ್ರೆಸ್ ಅಧಿಕಾರಾವಧಿಯಲ್ಲೂ ಇಂತಹ ನೂರು ತಪ್ಪುಗಳು ನಡೆದಿವೆ. ಆದರೆ ಒಮ್ಮೆಯೂ ತನಿಖೆ ನಡೆಸಿಲ್ಲ. ಈ ಅವ್ಯವಹಾರ ಬಯಲು ಮಾಡಿದ್ದು ಕಾಂಗ್ರೆಸ್‌ನವರಲ್ಲ. ಮಾಜಿ ಸಿಎಂ ಸಿದ್ದರಾಮಯ್ಯ ಈಗಲೂ ಬಾಯಲಿ ಕಡುಬು ಇಟ್ಟುಕೊಂಡಿದ್ದಾರೆ. ಮಾತಾಡಿದರೆ ಎಲ್ಲಿ ತಮ್ಮ ಹಗರಣ ಬಯಲಾಗುತ್ತವೆ ಎಂಬ ಭಯ ಅವರಲ್ಲಿ ಇದೆ. ಪ್ರಾಧ್ಯಾಪಕರ ನೇಮಕಾತಿ ಪ್ರಶ್ನೆ ಪತ್ರಿಕೆ ಸೋರಿಕೆ ವಿಚಾರದಲ್ಲಿ ಎಷ್ಟು ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ತನಿಖೆ ನಡೆಯುತ್ತಿದೆ. ಅದರ ವರದಿ ಬಂದ ಮೇಲೆ ಪುನರ್ ಪರೀಕ್ಷೆ ನಡೆಸಬೇಕೋ ಅಥವಾ ಈಗಾಗಲೇ ನಡೆದಿರುವ ಪರೀಕ್ಷೆಯನ್ನೇ ಪರಿಗಣಿಸಬೇಕೋ ಎಂಬುದನ್ನು ತೀರ್ಮಾನಿಸುತ್ತೇವೆ ಎಂದರು.

## ಆರ್‌ಎಸ್‌ಎಸ್ ಚಡ್ಡಿ ಬಗ್ಗೆ ಮಾತನಾಡಲ್ಲ...!

ಮೈಸೂರು,ಜೂ.7(ಎಂಟಿವೈ)– ಆರ್‌ಎಸ್‌ಎಸ್ ಚಡ್ಡಿ ವಿಚಾರ ಸೇರಿದಂತೆ ಸೂಕ್ಷ್ಮ ವಿಚಾರಗಳ ಬಗ್ಗೆ ಪ್ರತಿಕ್ರಿಯೆ ನೀಡದಂತೆ ನಮಗೆ ಆದೇಶ ಬಂದಿದೆ. ಹಾಗಾಗಿ ನಾನು ಆ ವಿಚಾರದ ಬಗ್ಗೆ ಮಾತನಾಡುವುದಿಲ್ಲ ಎಂದು ವಸತಿ ಸಚಿವ ವಿ.ಸೋಮಣ್ಣ ಇಂದಿಲ್ಲಿ ತಿಳಿಸಿದ್ದಾರೆ.



ಮೈಸೂರಲ್ಲಿ ವಸತಿ ಸಚಿವ ವಿ.ಸೋಮಣ್ಣ ಸ್ಪಷ್ಟನೆ

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡುವ ವೇಳೆ ಆರ್‌ಎಸ್‌ಎಸ್ ಚಡ್ಡಿ ವಿವಾದದ ಬಗ್ಗೆ ಮಾತನಾಡಲ್ಲ ಎಂದು ಸ್ಪಷ್ಟಪಡಿಸಿದರಲ್ಲದೆ, ಆರ್‌ಎಸ್‌ಎಸ್ ಚಡ್ಡಿ ಸುಡುವ ಕಾಂಗ್ರೆಸ್ ಅಭಿಯಾನ, ಕಾಂಗ್ರೆಸ್ ನಾಯಕರಿಗೆ ಚಡ್ಡಿ ಕಳುಹಿಸುವ ಬಿಜೆಪಿ ಅಭಿಯಾನದ ಪ್ರತಿಕ್ರಿಯೆ ನೀಡಲು ನಿರಾಕರಿಸಿದರು.

ಕೆಲವು ಸೂಕ್ಷ್ಮ ವಿಚಾರಗಳ ಬಗ್ಗೆ ಮಾತಾಡಬಾರದು ಎಂದು ನಮಗೆ ಆದೇಶ ಬಂದಿದೆ. ಹೀಗಾಗಿ ಸೂಕ್ಷ್ಮ ವಿಚಾರಗಳ ಬಗ್ಗೆ ನಾನು ಮಾತನಾಡುವುದಿಲ್ಲ. ಆರ್‌ಎಸ್‌ಎಸ್ ದೇಶಕ್ಕೆ ನೀಡಿರುವ ಕೊಡುಗೆ ಎಲ್ಲರಿಗೂ ಗೊತ್ತಿದೆ. ಈ ದೇಶದ ಪ್ರತಿ ಕಣ ಕಣದಲ್ಲೂ ಆರ್‌ಎಸ್‌ಎಸ್‌ನ ಕೊಡುಗೆ ಇದೆ. ಕೆಲವರ ನಂಬಿಕೆಗಳಿಗೆ ಅಪಮಾನ, ಅಗೌರವ ಮಾಡುವುದು ಸರಿಯಲ್ಲ ಎಂದಷ್ಟೇ ಹೇಳುತ್ತೇನೆ. ಇವೆಲ್ಲವೂ ಬೀದಿ ಜಗಳ ಆಗಬಾರದು. ಎಲ್ಲವೂ ಸುಖಾಂತ್ಯವಾಗಬೇಕು ಎಂದು ಅಭಿಪ್ರಾಯಪಟ್ಟರು.

**ಸೌಹಾರ್ದತೆಗೆ ಭೇಟಿಯಾಗಬಾರದೆ:** ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಸಿದ್ದರಾಮಯ್ಯ ಅವರು ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪರಸ್ಪರ ಭೇಟಿಯಾಗಿದ್ದಾರೆ. ಅವರಿಬ್ಬರದ್ದು ಸೌಹಾರ್ದ ಭೇಟಿಯಷ್ಟೇ. ಅದಕ್ಕೆ ರೆಕ್ಕೆಪುಕ್ಕ ಕಟ್ಟುವುದು ಬೇಡ. ಇಬ್ಬರೂ ಹಿರಿಯ ನಾಯಕರಿದ್ದಾರೆ. ರಾಜಕೀಯ ಹೊರತಾಗಿ ಸೌಹಾರ್ದ ಭೇಟಿ ಮಾಡಿರುವುದು ತಪ್ಪೇನಿಲ್ಲ ಎಂದು ಇದೇ ಸಂದರ್ಭದಲ್ಲಿ ವಸತಿ ಸಚಿವ ವಿ. ಸೋಮಣ್ಣ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಪಕ್ಷ ಬೇರೆಯಾದ ಮಾತ್ರಕ್ಕೆ ಸೌಹಾರ್ದ ಭೇಟಿಯಾಗಬಾರದೇ?. ವಿಮಾನ ನಿಲ್ದಾಣದಲ್ಲಿ ಪ್ರಯಾಣಿಸಲು ಪ್ರತ್ಯೇಕವಾಗಿ ಬಂದು ಕುಶಲೋಪರಿ ವಿಚಾರಿಸಿದ್ದಾರೆ. ಅದನ್ನು ಯಾರೋ ವಿಡಿಯೋ ಮಾಡಿ ವೈರಲ್ ಮಾಡಿದ್ದಾರೆ. ಅವರಿಬ್ಬರು ರಾಜ್ಯಸಭೆ ವಿಚಾರವಾಗಿ ಮಾತನಾಡಿಯೇ ಇಲ್ಲ. ಈ ಭೇಟಿಗೆ ಬೇರೆ ತರಹದ ಅರ್ಥಗಳನ್ನು ಕಲ್ಪಿಸಬೇಡಿ ಎಂದರು.

## ಬ್ಯಾಕ್‌ಲಾಗ್ ಭರ್ತಿ ಮಾಡಿಸುತ್ತೇನೆ ಮತ ನೀಡಿ; ಪಕ್ಷೇತರ ಅಭ್ಯರ್ಥಿ ಮನವಿ

ಮೈಸೂರು, ಜೂ.7(ಆರ್‌ಕೆಬಿ)–ವಿಧಾನಪರಿಷತ್‌ಗೆ ದಕ್ಷಿಣ ಪದವೀಧರ ಕ್ಷೇತ್ರದಿಂದ ನಡೆಯುವ ಚುನಾವಣೆಯಲ್ಲಿ ಸ್ಪರ್ಧಿಸಿರುವ ತಮ್ಮನ್ನು ಚುನಾಯಿಸುವಂತೆ ಪಕ್ಷೇತರ ಅಭ್ಯರ್ಥಿ ಡಾ.ಪುಟ್ಟಸ್ವಾಮಿ ಮತದಾರರಲ್ಲಿ ಮನವಿ ಮಾಡಿದ್ದಾರೆ.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಮ್ಮನ್ನು ವಿಧಾನಪರಿಷತ್‌ಗೆ ಆಯ್ಕೆ ಮಾಡಿದರೆ ತಾವು ಸಂಶೋಧನಾ ವಿದ್ಯಾರ್ಥಿಗಳಿಗೆ ಮಾಸಿಕ 50 ಸಾವಿರ ವಿದ್ಯಾರ್ಥಿ ವೇತನ, ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್, ಇನ್ನಿತರ ಹುದ್ದೆಗಳ ಭರ್ತಿಗೆ ಹೋರಾಟ, ಎಲ್ಲಾ ವರ್ಗಗಳನ್ನು ಪ್ರತಿನಿಧಿಸುವ ಖಾಸಗಿ ವಲಯದಲ್ಲಿಯೂ ಮೀಸಲಾತಿ, ಉನ್ನತ ಶಿಕ್ಷಣದಲ್ಲಿ ಕೌಶಲ್ಯ ವೃದ್ಧಿ ತರಬೇತಿ, ಹೊಸ ಪಿಂಚಣಿ ವ್ಯವಸ್ಥೆ ರದ್ದುಗೊಳಿಸಿ, ಹಳೆ ಪಿಂಚಣಿ ವ್ಯವಸ್ಥೆ ಜಾರಿ ಇನ್ನಿತರೆ ವಿಷಯಗಳ ಬಗ್ಗೆ ಹೋರಾಟ ನಡೆಸುವುದಾಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಡಿ.ಕಾಂತರಾಜು, ಡಿ.ಸಿದ್ದಪ್ಪಾಜಿ, ಮಹೇಶ್‌ಕುಮಾರ್, ಡಿ.ರಾಚಪ್ಪಾಜಿ ಉಪಸ್ಥಿತರಿದ್ದರು.



ಇಲವಾಲ ನಾಡಕಚೇರಿಯ ಉಪ ತಹಸೀಲ್ದಾರ್ ಕುಬೇರ್, ರೆವಿನ್ಯೂ ಇನ್ಸ್‌ಪೆಕ್ಟರ್ ಶಿವಕುಮಾರ್ ಅವರನ್ನು ಜಯಲಕ್ಷ್ಮೀಪುರಂ ಬಡವರ ಬಂಧು ಕನ್ನಡ ಯುವಕರ ಸಂಘದಿಂದ ಅಭಿನಂದಿಸಲಾಯಿತು. ಪಡುವಾರಹಳ್ಳಿ ಪಾಪಣ್ಣ, ನಂದಕುಮಾರ್, ರಮೇಶ್, ಮಹದೇಶ, ಭೈರ, ಶಿವರಾಜು ಚಿತ್ರದಲ್ಲಿದ್ದಾರೆ.

## ಸರ್ಕಾರಿ ನೌಕರರ ದಿನಾಚರಣೆಯಂತೆ ಪಿಂಚಣಿದಾರರ ದಿನಾಚರಣೆಗೆ ಆಗ್ರಹ

ಮೈಸೂರು, ಜೂ.7 (ಆರ್‌ಕೆಬಿ)– ಸರ್ಕಾರಿ ನೌಕರರ ದಿನಾಚರಣೆ ರೀತಿಯಲ್ಲಿಯೇ ಪಿಂಚಣಿದಾರರ ದಿನವನ್ನು ಆಚರಿಸುವ ಮೂಲಕ ಹಿರಿಯ ನಿವೃತ್ತ ನೌಕರರನ್ನು ಗೌರವಿಸಬೇಕೆಂದು ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಕಾರ್ಯಾಧ್ಯಕ್ಷ ಬಿ.ಆರ್.ಉಮಾಕಾಂತ್ ಆಗ್ರಹಿಸಿದ್ದಾರೆ. ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘವು ಸುಮಾರು 7 ಸಾವಿರ ಸರ್ಕಾರಿ ನಿವೃತ್ತ ನೌಕರ ಸದಸ್ಯರನ್ನು ಹೊಂದಿದೆ. ಹಾಗಾಗಿ ಇವರನ್ನು ಗೌರವಿಸುವ ಕೆಲಸ ಮಾಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು. ಸರ್ಕಾರಿ ಸೇವೆಯಲ್ಲಿದ್ದು ಉತ್ತಮ ಸೇವೆ ಸಲ್ಲಿಸಿ ನಿವೃತ್ತರಾದವರಿಗೆ ಗೌರವಿಸಬೇಕಾದದ್ದು ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಪಿಂಚಣಿ ಆದಾಯವಲ್ಲ. ಹೀಗಾಗಿ ಅದರ ಮೇಲೆ ತೆರಿಗೆಯನ್ನು ವಿಧಿಸಬಾರದು ಎಂದು ಸರ್ಕಾರವನ್ನು ಮನವಿ ಮಾಡಿದರು. ಜುಲೈ ತಿಂಗಳಲ್ಲಿ ಬೆಂಗಳೂರಿನಲ್ಲಿ ಸಂಘದ ಸುವರ್ಣ ಮಹೋತ್ಸವ ಕಾರ್ಯಕ್ರಮ ಆಯೋಜಿಸಲಿದ್ದು, ನಿವೃತ್ತ ಸರ್ಕಾರಿ ನೌಕರರು ಭಾಗವಹಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಕೆ.ಎಂ.ನಾಗರಾಜ್, ನಾಗಮ್ಮ, ಮರಿಯಾದಾಸ್, ಚಿಕ್ಕಲಿಂಗಸ್ವಾಮಿ ಉಪಸ್ಥಿತರಿದ್ದರು.

## ಮಗನಿಂದ ಸ್ಕೂಟರ್‌ನಲ್ಲಿ ಬಸ್‌ಸ್ಟ್ಯಾಂಡ್‌ಗೆ ಡ್ರಾಪ್ ತೆಗೆದುಕೊಂಡ ಗೃಹಿಣಿ ನಾಪತ್ತೆ

ಮೈಸೂರು, ಜೂ. 7–ಗೃಹಿಣಿಯೊಬ್ಬರು ಕಾಣೆಯಾಗಿರುವ ಬಗ್ಗೆ ಲಷ್ಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ರಾಜೀವ್‌ನಗರದ ವಾಸಿ ಝೀಖಾವುಲ್ಲಾ ಅವರ ಪತ್ನಿ, ಪರ್ವೀನ್ ತಾಜ್(37) ಕಾಣೆಯಾದ ಗೃಹಿಣಿ. ಕಡಕೊಳದ ಬಳಿ ಇರುವ ಗ್ರಾನೈಟ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡುವ ಝೀಖಾವುಲ್ಲಾ ಅವರು ನಂಜನಗೂಡಿನ ಪರ್ವೀನ್ ತಾಜ್ ಅವರನ್ನು ವಿವಾಹವಾಗಿದ್ದು, ದಂಪತಿಗೆ 18 ವರ್ಷದ ಮಗ ಮತ್ತು 16 ವರ್ಷದ ಮಗಳು ಇದ್ದಾರೆ. ಮೇ 31ರಂದು ಈಕೆ ತನ್ನ ಮಗನ ಮೂಲಕ ಕೆಎಸ್‌ಆರ್‌ಟಿಸಿ ಗ್ರಾಮಾಂತರ ಬಸ್ ನಿಲ್ದಾಣದ ಬಳಿಗೆ ಸ್ಕೂಟರ್‌ನಲ್ಲಿ ಡ್ರಾಪ್ ತೆಗೆದುಕೊಂಡವರು ಇದುವರೆಗೂ ಮನೆಗೆ ಹಿಂತಿರುಗಿಲ್ಲ ಎಂದು ದೂರಿನಲ್ಲಿ ತಿಳಿಸಲಾಗಿದೆ. ನಂತರ ಮಗಳಿಗೆ ಫೋನ್ ಮಾಡಿ ತಾನು ಬರುವುದಿಲ್ಲ, ನನ್ನನ್ನು ಹುಡುಕಬೇಡಿ, ನೀವು ಚೆನ್ನಾಗಿ ಓದಿಕೊಂಡು ಇರಿ ಎಂದು ತಿಳಿಸಿ ಫೋನ್ ಸ್ವಿಚ್‌ಆಫ್ ಮಾಡಿಕೊಂಡಿದ್ದಾರೆ ಎಂದು ಹೇಳಲಾಗಿದೆ. ಈಕೆಯ ಬಗ್ಗೆ ಸುಳಿವು ಸಿಕ್ಕವರು ದೂ.: 2418107, 2418307, 2418100, 2418339 ಮೂಲಕ ತಿಳಿಸಲು ಕೋರಲಾಗಿದೆ.



ದಕ್ಷಿಣ ಪದವೀಧರ ಕ್ಷೇತ್ರದಿಂದ ವಿಧಾನಪರಿಷತ್‌ಗೆ ಚುನಾವಣೆ

# ಮತಗಟ್ಟೆ ಅಧಿಕಾರಿಗಳು, ಸಿಬ್ಬಂದಿಗೆ ತರಬೇತಿ

ಮೈಸೂರು, ಜೂ.7(ಆರ್‌ಕೆ)–ಜೂನ್ 13ರಂದು ದಕ್ಷಿಣ ಪದವೀಧರ ಕ್ಷೇತ್ರದಿಂದ ವಿಧಾನಪರಿಷತ್‌ಗೆ ನಡೆಯಲಿರುವ ಚುನಾವಣಾ ಮತಗಟ್ಟೆ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗೆ ಮೊದಲ ಹಂತದ ತರಬೇತಿ ಸೋಮವಾರ ನಡೆಯಿತು.



ಮೈಸೂರಿನ ಮಹಾರಾಣಿ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಸಭಾಂಗಣದಲ್ಲಿ ಚುನಾವಣಾ ಮತಗಟ್ಟೆ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗೆ ಮೊದಲ ಹಂತದ ತರಬೇತಿ ಸೋಮವಾರ ನಡೆಯಿತು.

ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿರುವ ಮಹಾರಾಣಿ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಹಾಯಕ ಚುನಾವಣಾಧಿಕಾರಿಗಳೂ ಆದ ಮೈಸೂರು ಜಿಲ್ಲಾಧಿಕಾರಿ ಡಾ. ಬಗಾದಿ ಗೌತಮ್, ಮತಗಟ್ಟೆ ಅಧ್ಯಕ್ಷೀಯ ಅಧಿಕಾರಿ, ಮತದಾನ ಸಿಬ್ಬಂದಿಯ ಜವಾಬ್ದಾರಿ, ಮತದಾನದ ವೇಳೆ ಪಾಲಿಸಬೇಕಾದ ನಿಯಮಗಳ ಬಗ್ಗೆ ಮಾಹಿತಿ ನೀಡಿದರು.

ಮಸ್ಟರಿಂಗ್ ಮತ್ತು ಡಿ–ಮಸ್ಟರಿಂಗ್, ಮತಪೆಟ್ಟಿಗೆಗಳನ್ನು ಸ್ಟ್ರಾಂಗ್ ರೂಂಗೆ ಕೊಂಡೊಯ್ದು ಸುರಕ್ಷತೆಯಿಂದಿರಿಸುವುದು, ಮತ ಎಣಿಕೆ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕ್ರಮದ ಬಗ್ಗೆ ನೀಡಿರುವ ಮಾರ್ಗಸೂಚಿಗಳನ್ನು ಇದೇ ಸಂದರ್ಭ ವಿವರಿಸಲಾಯಿತು.

ಮತಗಟ್ಟೆ ಮತ್ತು ಮತ ಎಣಿಕಾ ಕೇಂದ್ರಗಳಲ್ಲಿ ಪೊಲೀಸ್ ಭದ್ರತೆ ಒದಗಿಸುವುದು, ಅಭ್ಯರ್ಥಿಗಳು ಹಾಗೂ ಏಜೆಂಟರುಗಳೊಂದಿಗೆ ಸಮಾಲೋಚಿಸುವಾಗ ಅನುಸರಿಸಬೇಕಾದ ಕ್ರಮಗಳು, ಮತದಾನದ ವೇಳೆ ಉಂಟಾಗಬಹುದಾದ ಗೊಂದಲ ನಿವಾರಣೆ, ಮುಂತಾದ ಮೂಲಭೂತ ಅಂಶಗಳ ಕುರಿತು ಡಾ. ಬಗಾದಿ ಗೌತಮ್ ಇದೇ ವೇಳೆ ಮಾರ್ಗದರ್ಶನ ನೀಡಿದರು.

ಮೈಸೂರು ನಗರ ಮತ್ತು ತಾಲೂಕು ಸೇರಿದಂತೆ ಜಿಲ್ಲೆಯಾದ್ಯಂತ 66 ಮತಗಟ್ಟೆಗಳಿದ್ದು, ಜೂನ್ 12ರಂದು ಬೆಳಗ್ಗೆ ಮೈಸೂರು ಮಹಾನಗರ ಪಾಲಿಕೆ ಕಚೇರಿ ಮತ್ತು ಆಯಾ ತಾಲೂಕುಗಳ ತಹಸೀಲ್ದಾರ್ ಕಚೇರಿಗಳಲ್ಲಿ ನಡೆಯಲಿರುವ ಮಸ್ಟರಿಂಗ್‌ನಲ್ಲಿ ಮತದಾನ ಸಲಕರಣೆಗಳನ್ನು ಪಡೆದು ಅಂದೇ ನಿಯೋಜಿತ ಮತಗಟ್ಟೆಗಳಿಗೆ ತೆರಳಿ ಸಿದ್ಧತೆ ಮಾಡಿಕೊಳ್ಳಬೇಕೆಂದು ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಬಿ.ಎಸ್.ಮಂಜುನಾಥಸ್ವಾಮಿ ತಿಳಿಸಿದರು.

ಜೂನ್ 13ರಂದು ಬೆಳಗ್ಗೆ 8ರಿಂದ ಮಧ್ಯಾಹ್ನ 4 ಗಂಟೆವರೆಗೆ ಮತದಾನ ನಡೆಯಲಿದ್ದು, ಮತದಾನ ಆರಂಭವಾಗುವ ಮುನ್ನ ಸರ್ವ ರೀತಿಯಲ್ಲಿ ಸಜ್ಜಾಗಿ ಯಾವುದೇ ಲೋಪವಾಗದಂತೆ ಎಚ್ಚರ ವಹಿಸಬೇಕು ಹಾಗೂ ಪ್ರಕ್ರಿಯೆ ಮುಗಿದ ಬಳಿಕ ಮತಪೆಟ್ಟಿಗೆಗಳನ್ನು ಮತ ಎಣಿಕಾ ಕೇಂದ್ರಕ್ಕೆ ಪೊಲೀಸ್ ಭದ್ರತೆಯೊಂದಿಗೆ ತಂದು ಸ್ಟ್ರಾಂಗ್ ರೂಂನಲ್ಲಿರಿಸುವವರೆಗೆ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ ಎಂದು ತಿಳಿಸಿದರು.


ಸುಮಾರು 150 ಮಂದಿ ತರಬೇತಿ ಕಾರ್ಯಕ್ರಮದಲ್ಲಿ ಹಾಜರಾಗಿ ಮಾಹಿತಿ ಪಡೆದು, ತಮ್ಮ ಸಂಶಯಗಳ ನಿವಾರಿಸಿಕೊಂಡರು. ಜಿಲ್ಲಾಧಿಕಾರಿ ಕಚೇರಿ ಚುನಾವಣಾ ತಹಸೀಲ್ದಾರ್ ರಾಮಪ್ರಸಾದ್, ತಹಸೀಲ್ದಾರ್ ನಿಶ್ಚಯ್ ಹಾಗೂ ಇತರರು ಈ ಸಂದರ್ಭ ಉಪಸ್ಥಿತರಿದ್ದರು.

## ನಿರುದ್ಯೋಗಿ ಪದವೀಧರರ ಅಭಿವೃದ್ಧಿ ನಿಗಮ ಸ್ಥಾಪನೆಗೆ ಹೋರಾಟ

ಮೈಸೂರು, ಜೂ.7(ಆರ್‌ಕೆಬಿ)– ದಕ್ಷಿಣ ಪದವೀಧರರ ಕ್ಷೇತ್ರದಿಂದ ವಿಧಾನಪರಿಷತ್‌ಗೆ ನಡೆಯುವ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ತನ್ನನ್ನು ಆಯ್ಕೆ ಮಾಡುವಂತೆ ಎನ್.ವೀರಭದ್ರಸ್ವಾಮಿ ಮತದಾರರಲ್ಲಿ ಮನವಿ ಮಾಡಿದ್ದಾರೆ.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಿರುದ್ಯೋಗಿ ಪದವೀಧರರ ಅಭಿವೃದ್ಧಿ ನಿಗಮ ಸ್ಥಾಪಿಸಿ, ನಿರುದ್ಯೋಗಿ ಪದವೀಧರರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಶೇ.50 ಸಹಾಯಧನ ಸಹಿತ ಬಡ್ಡಿ ರಹಿತ ಸಾಲ ಸೌಲಭ್ಯ ದೊರಕಿಸಿಕೊಡಲು ಹೋರಾಟ ನಡೆಸುವುದಾಗಿ ತಿಳಿಸಿದರು. ನೋಂದಾಯಿತ ನಿರುದ್ಯೋಗಿ ಪದವೀಧರರು ಅಕಾಲಿಕ ಮರಣ ಹೊಂದಿದ ಸಂದರ್ಭದಲ್ಲಿ ಅವರ ಕುಟುಂಬಕ್ಕೆ 10 ಲಕ್ಷ ರೂ. ಜೀವವಿಮೆ ನೀಡುವಂತೆ ನಿರಂತರ ಹೋರಾಟ, ಮಹಿಳಾ ನಿರುದ್ಯೋಗಿ ಪದವೀಧರರಿಗೆ ಸ್ವಯಂ ಉದ್ಯೋಗಕ್ಕೆ ಉಚಿತ ತರಬೇತಿ ಕಾರ್ಯಾಗಾರ, ಶೇ.50 ಸಹಾಯಧನದೊಂದಿಗೆ ಸ್ವಯಂ ಉದ್ಯೋಗಕ್ಕೆ ಕಾರ್ಯಕ್ರಮ ಸೇರಿದಂತೆ ಹಲವು ಹೋರಾಟ ನಿರಂತರವಾಗಿ ನಡೆಸುವುದಾಗಿ ತಿಳಿಸಿದರು.

## ಮೈಸೂರು ಹಾಗೂ ಸುತ್ತಮುತ್ತ ಇಂದು...



### ಇಂದಿನ ಪಂಚಾಂಗ

8.06.2022 ಬುಧವಾರ, ಮಳೆ ನಕ್ಷತ್ರ : ಮೃಗಶಿರ 08.06.2022 ರಿಂದ 21.06.2022
ಶ್ರೀ ಶುಭಕೃತುನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ
ತಿಥಿ: ನವಮಿ, ನಕ್ಷತ್ರ : ಉಫ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಶ್ರೀ ಚಂದ್ರಮೌಳೀಶ್ವರ ಸ್ವಾಮಿ ದೇವಸ್ಥಾನಂ ಚಾರಿಟಬಲ್ ಟ್ರಸ್ಟ್ :** 80ನೇ ಜಯಂತ್ಯುತ್ಸವ, ಬೆಳಗ್ಗೆ 9ಕ್ಕೆ ಗಿರಿಜಾ ಕಲ್ಯಾಣ, ಸ್ಥಳ: ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಸ್ಥಾನ, ವಿ.ವಿ. ಮೊಹಲ್ಲಾ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ 80ನೇ ಜನ್ಮದಿನೋತ್ಸವ, ಲಕ್ಷ ಶ್ರೀಸೂಕ್ತ ಮಹಾಯಾಗ ಮತ್ತು ಕೋಟಿ ದತ್ತ ಹೋಮ, ಶ್ರೀ ದತ್ತ ವೆಂಕಟೇಶ್ವರ ಕ್ಷೇತ್ರದ 23ನೇ ಬ್ರಹ್ಮೋತ್ಸವ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಊಟಿ ರಸ್ತೆ.

■ **ಶ್ರೀ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ:** ವಿಮಾನ ಗೋಪುರ ಮತ್ತು ರಾಜಗೋಪುರ ಮಹಾ ಕುಂಭಾಭಿಷೇಕ ಮಹೋತ್ಸವ, ಬೆಳಗ್ಗೆ 9 ರಿಂದ ಪುಣ್ಯಾಹವಾಚನ, ಗವ್ಯಾಮೃತಸ್ನಪನ, ಯಾಗಶಾಲಾ ಪ್ರವೇಶ, ಮಂಟಪ ಸಂಸ್ಕಾರ, ಪ್ರಧಾನ ಕಲಶಾದಿ ಪ್ರತಿಷ್ಠಾನ, ಅಗ್ನಿಜನನ ಪೂರ್ವಕ ಪ್ರತಿಷ್ಠಾಂಗ ಹೋಮಗಳು, ತ್ರಿಶತ ಕಳಸಾಭಿಷೇಕ ಬಿಂಬಶುದ್ಧಿ ಸೇವೆಗಳು, ಸ್ಥಳ: ದೇವಸ್ಥಾನ, ವಿಶ್ವೇಶ್ವರನಗರ.

■ **ಡಾ. ಅಗರವಾಲ್ಸ್ ಹೆಲ್ತ್ ಕೇರ್ :** ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣೆ, ಸ್ಥಳ: ಕುವೆಂಪುನಗರ, ಸಯ್ಯಾಜಿರಾವ್ ರಸ್ತೆ, ಆಸ್ಪತ್ರೆ ಶಾಖೆ, ಬೆಳಗ್ಗೆ 10 ರಿಂದ.


■ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ:** ಮಲೇರಿಯಾ ವಿರೋಧಿ ಮಾಸಾಚರಣೆ, ಸ್ಥಳ: ಮೈಸೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣ, ಬೆಳಗ್ಗೆ 10ಕ್ಕೆ.

■ **ಫ್ಯಾಷಿನಿಸ್ತಾ ಕಂಪನಿ:** ಪ್ರಶಸ್ತಿ ವಿಜೇತ ಫ್ಯಾಷನಾವ್ಯ ಪ್ರದರ್ಶನ, ಸ್ಥಳ: ಹೋಟೆಲ್ ಸದರರ್ನ್ ಸ್ಟಾರ್, ಬೆಳಗ್ಗೆ 10ರಿಂದ.

**ಮನುಗನಹಳ್ಳಿ ಗ್ರಾಮದಲ್ಲಿಂದು, ಹುಣಸೂರು ತಾ.**

■ **ಸರ್ಕಾರಿ ಪ್ರೌಢಶಾಲೆ, ಮನುಗನಹಳ್ಳಿ, ಹುಣಸೂರು ತಾಲೂಕು, ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ:** ಪ್ರತಿಭಾ ಪುರಸ್ಕಾರ ಸಮಾರಂಭ, ಅಧ್ಯಕ್ಷತೆ: ಮುಖ್ಯ ಶಿಕ್ಷಕಿ ಗೀತಾ, ಮುಖ್ಯ ಅತಿಥಿಗಳು : ಸಾಹಿತಿ ಬನ್ನೂರು ಕೆ.ರಾಜು, ಉದ್ಘಾಟನೆ: ವಿಶ್ರಾಂತ ಇಂಜಿನಿಯರ್ ಎಸ್. ಗೋವಿಂದೇಗೌಡ, ಪ್ರತಿಭಾ ಪುರಸ್ಕಾರ: ಕಲಾವಿದೆ ಡಾ.ಜಮುನಾರಾಣಿ ಮಿರ್ಲೆ, ಸ್ಥಳ: ಸರ್ಕಾರಿ ಪ್ರೌಢಶಾಲೆ, ಮನುಗನಹಳ್ಳಿ, ಬೆಳಗ್ಗೆ 11.30ಕ್ಕೆ.

### ಮೈಸೂರು ಆಕಾಶವಾಣಿ



**ಬೆಳಗ್ಗೆ:** 6.05 ಚಿಂತನ, 6.20 ಗೀತಾರಾಧನ, 6.30 ಮೈಸೂರಿನ ಯೋಗ ವಿದ್ಯಾ ಪರಂಪರೆ–ಮಾಲಿಕೆ, ಲೇಖನ ಪ್ರಸ್ತುತಿ– ಡಾ. ಎ.ಎಸ್.ಚಂದ್ರಶೇಖರ್, 6.35 ಅಮೃತ ಸ್ವಾತಂತ್ರ್ಯ ಮಾಲಿಕೆಯಲ್ಲಿ ವಸಾಹತು ಕಾಲದ ಕಾನೂನುಗಳು–ಬಾನುಲಿ ಸರಣಿ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ, ಗಾಯನ– ಅಂಬಯ್ಯನುಲಿ ಮತ್ತು ಎಂ.ಎ. ಶೋಭ, ವ್ಯಾಖ್ಯಾನ– ಡಾ.ಲತಾ ಮೈಸೂರು, 9.00 ಸ್ವಾತಂತ್ರ್ಯ ಅಮೃತ ಮಹೋತ್ಸವದ ವಿಶೇಷ ಕಾರ್ಯಕ್ರಮ, 9.30 ಆಕಾಶವಾಣಿಯೊಂದಿಗೆ ಸ್ವಾತಂತ್ರ್ಯ ಚಳವಳಿಯ ಪಯಣ–ಬಾನುಲಿ ಸರಣಿ, 10.00 ಹಿಂದೂಸ್ಥಾನಿ ಸಂಗೀತ–ರವೀಂದ್ರ ಸೊರ್ ಗಾವಿ – ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ, 11.15 ಯೋಗದತ್ತ ಜಗತ್ತು– ವಿಶೇಷ ಸರಣಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.30 ದೇವರನಾಮ–ಸಿ.ಎಸ್.ಲಕ್ಷ್ಮಿ, 12.45 ಲಾಕ್‌ಡೌನ್ ಕಥಾ ನಾಟಕ–ಲಾಕ್‌ಡೌನ್ ಕಥೆಗಳನ್ನಾಧರಿಸಿದ ಸರಣಿ "ಲಾಕ್‌ಡೌನ್‌ನಲ್ಲಿ ಲಾಕ್ ಇನ್", ಪ್ರಸ್ತುತಿ– ಇ.ಆರ್. ರಾಮಚಂದ್ರನ್, 1.20 ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ವಿಶೇಷ ಕಾರ್ಯಕ್ರಮ–ಯೋಗ ಸುಯೋಗ, 3.00 ಲಯ ಸಂಭ್ರಮ –ತಾಳ, ಲಯ ರಸಾಸ್ವಾದ. ಪರಿಕಲ್ಪನೆ ಮತ್ತು ಪ್ರಸ್ತುತಿ–ಎಚ್.ಎಲ್.ಶಿವಶಂಕರ ಸ್ವಾಮಿ, ನಿರ್ಮಾಣ–ಎಸ್.ಸುಬ್ರಹ್ಮಣ್ಯ, 4.00 ಮಹಿಳಾರಂಗ–ಸ್ತ್ರೀ ಚೇತನ, ಭಾಗವಹಿಸುವವರು ರೇಣು ಪ್ರಿಯದರ್ಶಿನಿ, 4.30 ಚಟ್‌ಪಟ್ ಚುರುಮುರಿ, ಪ್ರಸ್ತುತಿ–ಪ್ರಭುಸ್ವಾಮಿ ಮಳೀಮಠ್ ಹಾಗೂ ಕೆ.ಬಿ.ಮೀನಾ, 6.50 ಕೃಷಿರಂಗ–ಕಿಸಾನ್‌ವಾಣಿ, ಕೃಷಿ ಬೀಜೋತ್ಪಾದನೆಯಲ್ಲಿ ಆರ್ಥಿಕ ಅಭಿವೃದ್ಧಿ ಕುರಿತು ಕಾಳಪ್ಪ ಅವರೊಂದಿಗೆ ಮಾತುಕತೆ, 9.05 ಕ್ಷಿತಿಜ, Literacy ಗುರು, ಸಾಹಿತ್ಯ ದಿಗ್ಗಜರೊಂದಿಗೆ ಸಂವಾದ, 10.00 ಜನಪದ ಸಂಗೀತ–ಎಚ್.ಸಿ. ಶಿವಬುದ್ಧಿ ಮತ್ತು ಸಂಗಡಿಗರಿಂದ ತತ್ವಪದಗಳು

# ಕಾಂಗ್ರೆಸ್ ಎರಡನೇ ಅಭ್ಯರ್ಥಿ ನಿಲ್ಲಿಸುವ ಮೂಲಕ ಬಿಜೆಪಿಗೆ ಪರೋಕ್ಷ ಸಹಾಯ

## ಸಿದ್ದರಾಮಯ್ಯ ವಿರುದ್ಧ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ

ಮೈಸೂರು, ಜೂ. 7(ಆರ್‌ಕೆಬಿ)– ರಾಜ್ಯಸಭಾ ಚುನಾವಣೆಯಲ್ಲಿ ಕಾಂಗ್ರೆಸ್, ಎರಡನೇ ಅಭ್ಯರ್ಥಿಯನ್ನು ನಿಲ್ಲಿಸುವ ಮೂಲಕ ವಿಪಕ್ಷ ನಾಯಕ ಸಿದ್ದರಾಮಯ್ಯ ಬಿಜೆಪಿಗೆ ಪರೋಕ್ಷವಾಗಿ ಸಹಾಯ ಮಾಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಇಂದಿಲ್ಲಿ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು.

ದಕ್ಷಿಣ ಪದವೀಧರ ಕ್ಷೇತ್ರದ ಪಕ್ಷದ ಅಭ್ಯರ್ಥಿ ಹೆಚ್.ಕೆ.ರಾಮು ಪರವಾಗಿ ಮತಯಾಚನೆಗೆ ಮೈಸೂರಿಗೆ ಆಗಮಿಸಿದ್ದ ಅವರು, ಮಂಗಳವಾರ ಮೈಸೂರಿನ ರಮಾವಿಲಾಸ ರಸ್ತೆಯಲ್ಲಿರುವ ಕೆ.ಆರ್.ನಗರ ಶಾಸಕ ಸಾ.ರಾ.ಮಹೇಶ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. 32 ಶಾಸಕರನ್ನು ಹೊಂದಿರುವ ಜೆಡಿಎಸ್ ಪಕ್ಷವು ಕುಪೇಂದ್ರ ರೆಡ್ಡಿ ಅವರನ್ನು ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿಸಿದೆ. ಬಿಜೆಪಿ ಅಭ್ಯರ್ಥಿಯನ್ನು ಸೋಲಿಸಲು ಕಾಂಗ್ರೆಸ್ ಜೆಡಿಎಸ್ ನೊಂದಿಗೆ ಒಪ್ಪಂದ ಮಾಡಿಕೊಳ್ಳಬಹುದಿತ್ತು. ಆದರೆ ನಾಲ್ಕನೇ ಸ್ಥಾನಕ್ಕಾಗಿ, ಎರಡು ವಿರೋಧ ಪಕ್ಷಗಳ ನಡುವೆ ಸಾಮರಸ್ಯ ಒಡಂಬಡಿಕೆ ಸಾಧ್ಯತೆಯನ್ನು ಸಿದ್ದರಾಮಯ್ಯ ಹಾಳು ಮಾಡಿದ್ದಾರೆ ಎಂದು ಆರೋಪಿಸಿದರು.

2018ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ನೂರಕ್ಕೂ ಹೆಚ್ಚು ಸ್ಥಾನ ಗಳಿಸಲು ಸಿದ್ದರಾಮಯ್ಯ ಅವರೇ ಕಾರಣ. ಒಂದೆಡೆ ಬಿಜೆಪಿ ಸರ್ಕಾರವನ್ನು 40 ಪರ್ಸೆಂಟ್ ಕಮಿಷನ್ ಸರ್ಕಾರ ಎಂದು ಆರೋಪಿಸುತ್ತಿರುವ ಕಾಂಗ್ರೆಸ್ ನಾಯಕರು, ಮತ್ತೊಂದೆಡೆ ತನ್ನ ಎರಡನೇ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಮೂಲಕ ಬಿಜೆಪಿಗೆ ಪರೋಕ್ಷವಾಗಿ ಸಹಾಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

**ಮತ ವಿನಿಮಯಕ್ಕೆ ಕಾಂಗ್ರೆಸ್‌ನೊಂದಿಗೆ ಜೆಡಿಎಸ್ ಸಿದ್ಧವಿದೆ:** ಕಾಂಗ್ರೆಸ್ ಅನುಕೂಲಕರವಾಗಿ ಪ್ರತಿಕ್ರಿಯಿಸಿದರೆ, ಜೆಡಿಎಸ್ ಎರಡನೇ ಪ್ರಾಶಸ್ತ್ಯದ ಮತಗಳನ್ನು ಕಾಂಗ್ರೆಸ್ ನೊಂದಿಗೆ ವಿನಿಮಯ ಮಾಡಿಕೊಳ್ಳಲು ಸಿದ್ಧವಾಗಿದೆ. ಆತ್ಮಸಾಕ್ಷಿಯ ಮತಗಳ ಬಗ್ಗೆ ಮಾತನಾಡುವ ಸಿದ್ದರಾಮಯ್ಯ ಅವರು ಮೊದಲು ತಮ್ಮ ಆತ್ಮಸಾಕ್ಷಿಯನ್ನು ಪ್ರಶ್ನಿಸಿಕೊಳ್ಳಬೇಕು. ಬಿಜೆಪಿಯನ್ನು ಸೋಲಿಸುವುದು ಜೆಡಿಎಸ್‌ನ ಮೊದಲ ಆದ್ಯತೆಯಾಗಿದೆ ಎಂದರು.

ರಾಜ್ಯ ಉಳಿಯಬೇಕು, ಬಿಜೆಪಿಯನ್ನು ರಾಜ್ಯದಿಂದ ತೆಗೆಯಬೇಕು ಎಂಬುದಾದರೆ ಸಿದ್ದರಾಮಯ್ಯ ಅವರು ತಮ್ಮ ಮನಸ್ಸಿನಲ್ಲಿರುವ ಕಲ್ಮಶಗಳನ್ನು ತೊಲಗಿಸಿ ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಅಧಿಕಾರದಿಂದ ದೂರವಿಡಲು ಅನುಕೂಲಕರ ವಾತಾವರಣ ನಿರ್ಮಿಸಬೇಕು. ರಾಜ್ಯಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಎದುರಿಸಲು ನಾನು ಕಾಂಗ್ರೆಸ್‌ನೊಂದಿಗೆ ಕೈಜೋಡಿಸಲು ಸಿದ್ಧ ಎಂದು ಹೇಳಿದರು.

ದಕ್ಷಿಣ ಪದವೀಧರರ ಕ್ಷೇತ್ರದಲ್ಲಿ ಜೆಡಿಎಸ್‌ನ ಭವಿಷ್ಯವೇನು ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕ್ಷೇತ್ರದ ವ್ಯಾಪ್ತಿಯ ನಾಲ್ಕು ಜಿಲ್ಲೆಗಳಲ್ಲೂ ಪಕ್ಷಕ್ಕೆ ಅನುಕೂಲಕರ ಪರಿಸ್ಥಿತಿ ಇದೆ. ನಮ್ಮ ಪಕ್ಷದ ಅಭ್ಯರ್ಥಿ ಹೆಚ್.ಕೆ.ರಾಮು ಗೆಲುವಿಗೆ ಎಲ್ಲಾ ರೀತಿಯ ಪ್ರಯತ್ನ ನಡೆಸಿದ್ದೇವೆ ಎಂದರು.

ಶಾಸಕರಾದ ಸಾ.ರಾ.ಮಹೇಶ್, ಅಶ್ವಿನ್‌ಕುಮಾರ್, ಬಂಡೆಪ್ಪ ಕಾಶೆಂಪೂರ್, ಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ಕೆ.ಟಿ.ಶ್ರೀಕಂಠೇಗೌಡ, ಪಕ್ಷದ ಅಭ್ಯರ್ಥಿ ಹೆಚ್.ಕೆ.ರಾಮು, ಮಾಜಿ ಮೇಯರ್‌ಗಳಾದ ಆರ್.ಲಿಂಗಪ್ಪ, ಎಂ.ಜೆ.ರವಿಕುಮಾರ್, ಪಕ್ಷದ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ ಇನ್ನಿತರರು ಗೋಷ್ಠಿಯಲ್ಲಿದ್ದರು. ಇದಕ್ಕೂ ಮುನ್ನ ಹೆಚ್.ಡಿ.ಕುಮಾರಸ್ವಾಮಿ ಅವರು ಚಾಮುಂಡಿಬೆಟ್ಟಕ್ಕೆ ತೆರಳಿ ಚಾಮುಂಡೇಶ್ವರಿ ದರ್ಶನದೊಂದಿಗೆ ವಿಶೇಷ ಪೂಜೆ ಸಲ್ಲಿಸಿದರು.



> "ಚಡ್ಡಿ ವಿಚಾರ ಈಗ ತೀವ್ರ ಚರ್ಚೆಯಲ್ಲಿದ್ದು, ಇದರಿಂದಾಗಿ ಚಡ್ಡಿಗೆ ಡಿಮ್ಯಾಂಡ್ ಜಾಸ್ತಿಯಾಗಿದೆ. ಚಡ್ಡಿ ವ್ಯಾಪಾರ ಮಾಡುವವರಿಗೆ, ಟೈಲರ್‌ಗಳಿಗೆ ಅನುಕೂಲವಾಗಲಿ ಬಿಡಿ. ಪ್ರತಿನಿತ್ಯ ಕೇವಲ ಚಡ್ಡಿ ಬಗ್ಗೆ ಚರ್ಚೆ ನಡೆಯುತ್ತಿದೆ. ಚಡ್ಡಿಯಲ್ಲಿ ಏನಿಲ್ಲ ಬಿಡಿ. ಚಡ್ಡಿ ಹಾಕಿಕೊಂಡು ಕಾನ್ಪುರ ಅಜೆಂಡಾ ಬಗ್ಗೆ ಮಾತನಾಡಿ. ಚಡ್ಡಿ ರೈತನದ್ದು, ಪಟಾಪಟಿ ಚಡ್ಡಿ ಬಗ್ಗೆ ಮಾತನಾಡಬೇಡಿ. ಆರ್‌ಎಸ್‌ಎಸ್ ಚಡ್ಡಿ ಬಗ್ಗೆ ನಾನೇಕೆ ಮಾತನಾಡಲಿ. **–ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಿಎಂ**



ದಕ್ಷಿಣ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಪರ ಇಂಧನ ಸಚಿವ ಸುನೀಲ್‌ಕುಮಾರ್ ಮೈಸೂರಿನ ಚೆಸ್ಕಾಂ ವಲಯ ಕಚೇರಿ, ರಂಗಾಯಣ, ಮಾನಸ ಸರೋವರ ಶಾಲೆ, ಸ್ಕ್ಯಾನ್ ರೇ ಟೆಕ್ನಾಲಜಿ, ಕೃಪಾ ಫಡ್ಕೆ ನೃತ್ಯ ಶಾಲೆ, ಕೃಷ್ಣಧಾಮ, ತುಳುನಾಡ ಭಾಷಿಕರ ಸಂಘದ ಕಚೇರಿಯಲ್ಲಿ ಮತಯಾಚಿಸಿದರು. ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರತಾಪ್, ಚಾಮುಂಡೇಶ್ವರಿ ಕ್ಷೇತ್ರದ ಬಿಜೆಪಿ ನಿಕಟಪೂರ್ವ ಅಧ್ಯಕ್ಷ ಅರುಣ್‌ಕುಮಾರ್‌ಗೌಡ, ಪರೀಕ್ಷಿತ್‌ರಾಜ್ ಅರಸ್, ಸೋಮಶೇಖರ್, ರಮೇಶ್, ಜಗದೀಶ್, ಹೇಮಂತ್, ಶಂಭು ಪಟೇಲ್ ಮತ್ತಿತರಿದ್ದರು.

# ಮಂಕಿಪಾಕ್ಸ್ ಬಗ್ಗೆ ರಾಜ್ಯದಲ್ಲಿ ಕಟ್ಟೆಚ್ಚರ

ಬೆಂಗಳೂರು, ಜೂ. 7(ಕೆಎಂಶಿ)–ವಿಶ್ವದ ಹಲವೆಡೆ ಮಂಕಿಪಾಕ್ಸ್ ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲೂ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ. ಸುಧಾಕರ್ ತಿಳಿಸಿದ್ದಾರೆ. ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಮಂಕಿಪಾಕ್ಸ್ ಸೋಂಕು ಹರುಡುತ್ತಿರುವುದನ್ನು ಸೂಕ್ಷ್ಮವಾಗಿ ಪರಿಗಣಿಸಿದ್ದು, ಮುನ್ನೆಚ್ಚರಿಕೆ ವಹಿಸಲಾಗಿದೆ. ರಾಜ್ಯದಲ್ಲಿ ರೋಗದ ಮುನ್ಸೂಚನೆ ಕಂಡು ಬಂದ ಕೂಡಲೇ ಸ್ಕ್ರೀನಿಂಗ್ ಮಾಡಲು ಸೂಚಿಸಲಾಗಿದೆ.



ಎಲ್ಲಾ ಜಿಲ್ಲೆಗಳ ಆಸ್ಪತ್ರೆಯಲ್ಲಿ ಹಾಸಿಗೆ ಕಾಯ್ದಿರಿಸಲಾಗುವುದು. ವಿಮಾನ ನಿಲ್ದಾಣದಲ್ಲಿ ಸ್ಕ್ರೀನಿಂಗ್ ಸೇರಿದಂತೆ ಹಲವಾರು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ.

ರಾಜ್ಯದಲ್ಲಿ ಕಣ್ಗಾವಲು ಚಟುವಟಿಕೆಗಳನ್ನು ತೀವ್ರಗೊಳಿಸಲು ನಿರ್ದೇಶನ ನೀಡಿದೆ. ಮಂಕಿಪಾಕ್ಸ್ ಶಂಕಿತ ವರದಿಯಾದಲ್ಲಿ ಮಾರ್ಗಸೂಚಿ ಪಾಲಿಸುವಂತೆ ಸೂಚಿಸಿದೆ. ಶಂಕಿತ ಪ್ರಕರಣ ಕಂಡುಬಂದಾಗ ಅಂತಹ ರೋಗಿಯನ್ನು ಪ್ರತ್ಯೇಕಿಸಿ ಚಿಕಿತ್ಸೆ ನೀಡಲು ಜಿಲ್ಲಾ ಆಸ್ಪತ್ರೆಯಲ್ಲಿ 2 ಹಾಸಿಗೆ ಮೀಸಲಿಡಲು ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ಸೂಚಿಸಲಾಗಿದೆ. ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಇರುವ ಬೆಂಗಳೂರು ಗ್ರಾಮಾಂತರ ಮತ್ತು ದಕ್ಷಿಣಕನ್ನಡ ಜಿಲ್ಲೆಯ ಡಿಎಸ್‌ಒಗಳು ವಿಮಾನ ನಿಲ್ದಾಣದ ಆರೋಗ್ಯ ಅಧಿಕಾರಿಯೊಂದಿಗೆ ಸಮನ್ವಯ ಸಾಧಿಸಿ ವಿಮಾನ ನಿಲ್ದಾಣದಲ್ಲಿ ಸ್ಕ್ರೀನಿಂಗ್ ನಡೆಸಲು ತಿಳಿಸಲಾಗಿದೆ ಎಂದಿದ್ದಾರೆ.

## ನಕ್ಕರೆ ಅದೇ ಸ್ವರ್ಗ

ರೋಗಿ (ಆಪರೇಷನ್ ಟೇಬಲ್ ಮೇಲೆ ಮಲಗಿದ್ದಾಗ) : "ಆಪರೇಷನ್ ನಂತರ ನಾನು ಎಷ್ಟು ದಿವಸ ಆಸ್ಪತ್ರೆಯಲ್ಲಿ ಉಳಿಯಬೇಕಾದೀತು?"
ಉದಯೋನ್ಮುಖ ಡಾಕ್ಟರ್ : "ಆಪರೇಷನ್ ಯಶಸ್ವಿಯಾದರೆ ಒಂದು ವಾರ. ಇಲ್ಲವಾದರೆ ಒಂದು ಗಂಟೆ!"

ಮೈಸೂರು ಮಿತ್ರ

ಬುಧವಾರ, 8 ಜೂನ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ *M.A.*

### ಅಮೃತವಾಹಿನಿ

ಸ್ವಯಂ ಶಿಸ್ತು ಎಂದರೆ ನ್ಯಾಯುಗಳಿದ್ದಂತೆ, ಹೆಚ್ಚು ಅಭ್ಯಾಸ ಮಾಡಿದಷ್ಟು ಹೆಚ್ಚು ದೃಢವಾಗುತ್ತವೆ. –ಡೇನಿಯಲ್ ಗೋಲ್ಡ್‌ಸ್ಮಿತ್

### ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ದಾನ ಕೊಟ್ಟ ಎತ್ತಿನ ಹಲ್ಲು ಎಣಿಸಿದರಂತೆ

## ನಿಮ್ಮ ಪತ್ರಗಳು

### ದಟ್ಟಗಳ್ಳಿ ಬಸಪ್ಪ ಘಂಟೆ ದೇವಸ್ಥಾನ ರಸ್ತೆಗೆ ಬೀದಿ ದೀಪದ ವ್ಯವಸ್ಥೆ ಕಲ್ಪಿಸಿ



ಮಾನ್ಯರೆ,

ಮೈಸೂರು ನಗರದ ದಟ್ಟಗಳ್ಳಿಯ ನಂದಿ ವೃತ್ತದಿಂದ ಘಂಟೆ ಬಸಪ್ಪ ದೇವಸ್ಥಾನಕ್ಕೆ ಹೋಗುವ ರಸ್ತೆಯಲ್ಲಿ ಬೀದಿ ದೀಪಗಳಿಲ್ಲದೆ ದಿನನಿತ್ಯ ಓಡಾಡುವವರಿಗೆ ತುಂಬಾ ತೊಂದರೆಯಾಗುತ್ತಿದೆ. ಇಲ್ಲಿ ಎರಡು ರಸ್ತೆಗಳಿದ್ದು, ಮಧ್ಯೆ ದೊಡ್ಡಮೋರಿ ಇದೆ. ಮೋರಿಯ ಎಡಭಾಗದ ಕದಂಬ ಬೇಕರಿಗೆ ಹೋಗುವ ರಸ್ತೆಗೆ ವಿದ್ಯುತ್ ದೀಪದ ವ್ಯವಸ್ಥೆಯಿದ್ದು, ಬಲಭಾಗದ ಘಂಟೆ ಬಸಪ್ಪ ದೇವಸ್ಥಾನಕ್ಕೆ ಹೋಗುವ ರಸ್ತೆಯಲ್ಲಿ ದೀಪಗಳಿಲ್ಲ. ಇದರಿಂದ ರಾತ್ರಿಯಾಗುತ್ತಿದ್ದಂತೆ ಇಡೀ ರಸ್ತೆ ಕತ್ತಲೆ ಆವರಿಸುತ್ತದೆ. ಇದು ಕುಡುಕರು ಹಾಗೂ ಸರಗಳ್ಳರಿಗೆ ವರದಾನವಾಗಿದೆ. ಅಷ್ಟೇ ಅಲ್ಲದೆ, ರಸ್ತೆಯ ಎರಡೂ ಭಾಗಗಳಲ್ಲಿ ಗಿಡ–ಗಂಟಿಗಳು ಹುಲುಸಾಗಿ ಬೆಳೆದು ನಿಂತಿರುವುದರಿಂದ ಇದು ಹಾವು ಹಾಗೂ ಇನ್ನಿತರೆ ವಿಷಜಂತುಗಳ ಆವಾಸ ಸ್ಥಾನವಾಗಿದೆ. ಹೀಗಾಗಿ, ಇಲ್ಲಿನ ಹಿರಿಯ ನಾಗರಿಕರೂ ಸೇರಿದಂತೆ ಹೆಂಗಸರು, ಮಕ್ಕಳು, ಪಾದಚಾರಿಗಳು ಭಯದಿಂದ ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ, ಸಂಬಂಧಪಟ್ಟವರು ಇನ್ನಾದರೂ ಎಚ್ಚೆತ್ತು ರಸ್ತೆಗೆ ತ್ವರಿತವಾಗಿ ದೀಪದ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ, ಗಿಡಗಂಟಿಗಳನ್ನು ತೆರವುಗೊಳಿಸಿ. ಸಾರ್ವಜನಿಕರು ನಿರ್ಭೀತಿಯಿಂದ ಓಡಾಡಲು ಅನುವು ಮಾಡಿಕೊಡಬೇಕಿದೆ.

–ಬಿ.ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.

### ತ್ರಿನೇತ್ರ ವೃತ್ತದ ರಸ್ತೆಗೆ ಡಾಂಬರೀಕರಣ ಭಾಗ್ಯ ಕಲ್ಪಿಸಿ

ಮಾನ್ಯರೆ,

ಯೋಗ ದಿನಾಚರಣೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಮೈಸೂರಿಗೆ ಆಗಮಿಸುತ್ತಿರುವುದು ತಮಗೆಲ್ಲಾ ಹೆಮ್ಮೆಯ ವಿಷಯ. ಮೋದಿಯವರ ಆಗಮನದ ಹಿನ್ನೆಲೆಯಲ್ಲಿ ಕೆಲವು ಪ್ರಮುಖ ರಸ್ತೆಗಳನ್ನು ಡಾಂಬರೀಕರಣ ಮಾಡುತ್ತಿರುವ ಬಗ್ಗೆ ಪತ್ರಿಕೆಗಳಲ್ಲಿ ಓದಿದ್ದೇನೆ. ಸಕಲ ಸಿದ್ಧತೆಗಳನ್ನು ಮಾಡುತ್ತಿರುವ ಜಿಲ್ಲಾಡಳಿತಕ್ಕೆ ನನ್ನದೊಂದು ಮನವಿ. ತಾವು ದಯಮಾಡಿ ಪ್ರಧಾನಿಯವರನ್ನು ವಿಜಯನಗರದ 2ನೇ ಹಂತದಲ್ಲಿನ ತ್ರಿನೇತ್ರ ವೃತ್ತದಿಂದ ರಿಂಗ್ ರಸ್ತೆಯವರೆಗೆ ಇರುವ ಹೈಟೆನ್ಷನ್ ರಸ್ತೆಯ ಮೂಲಕ ಹಾದು ಹೋಗುವಂತೆ ಮಾಡಬೇಕಾಗಿ ವಿನಂತಿ. ಈ ಮೂಲಕವಾದರೂ ಈ ಯಮಸ್ವರೂಪಿ ರಸ್ತೆಗೆ ಸರಿಯಾದ ಡಾಂಬರೀಕರಣದ ಭಾಗ್ಯ ಲಭಿಸಬಹುದೆಂಬ ಆಸೆ. ಈ ರಸ್ತೆಯಲ್ಲಿ ನಿತ್ಯ ಸಾವಿರಾರು ಜನ ಓಡಾಡುತ್ತಾರೆ. ಅದರಲ್ಲೂ ವಿಶೇಷವಾಗಿ ಹೆಂಗಸರು ಮತ್ತು ಶಾಲಾ ಮಕ್ಕಳು ಸಂಚರಿಸುತ್ತಾರೆ. ಈ ರಸ್ತೆಯಲ್ಲಿ ಬರಿ ಹೊಂಡಗಳೇ ತುಂಬಿವೆ. ಈ ರಸ್ತೆಯು ಕಳೆದ ಕೆಲವು ವರ್ಷಗಳಿಂದ ಡಾಂಬರನ್ನೇ ಕಾಣದೆ ವಾಹನ ಸಂಚಾರಿಗಳಿಗೆ ಯಮಸ್ವರೂಪಿಯಾಗಿ ಮಾರ್ಪಟ್ಟಿದ್ದರೂ ಸಂಬಂಧಪಟ್ಟ ಜನಪ್ರತಿನಿಧಿಗಳು, ನಗರಪಾಲಿಕೆ ಅಧಿಕಾರಿಗಳು ಜಾಣ ಕುರುಡು ಪ್ರದರ್ಶಿಸುತ್ತಿದ್ದು, ಯಾವುದಾದರೂ ಅನಾಹುತಕ್ಕೆ ಕಾದಿರುವಂತೆ ತೋರುತ್ತಿದೆ. ಈಗಲಾದರೂ ಈ ರಸ್ತೆಯನ್ನು ಸಂಚಾರ ಯೋಗ್ಯವನ್ನಾಗಿ ಮಾಡಬೇಕಾಗಿ ಮನವಿ.

–ರಾಕೇಶ್.ಎಲ್, ಮೈಸೂರು.

### ಗುಂಡಿ ಬಿದ್ದ ರಸ್ತೆಯನ್ನು ಸರಿಪಡಿಸಿ

ಮಾನ್ಯರೆ,

ಮೈಸೂರಿನ ಬನ್ನಿಮಂಟಪದ ಶ್ರೀನಿವಾಸ ಟಾಕೀಸ್ ಕಡೆಗೆ ಹೋಗುವ ಜೋಡಿ ತೆಂಗಿನ ಮರದ ರಸ್ತೆ ಅಲ್ಲಲ್ಲಿ ಬಹಳ ಕಾಲದಿಂದ ಗುಂಡಿ ಬಿದ್ದಿದೆ. ಈ ರಸ್ತೆಯಲ್ಲಿ ಪ್ರಯಾಣಿಸುವುದೇ ದುಸ್ಸಾಹಸವಾಗಿದೆ. ಕೆಲವೊಮ್ಮೆ ವಾಹನ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿದ್ದು ಉಂಟು. ಆದ್ದರಿಂದ ಸಂಬಂಧಪಟ್ಟವರು ತಕ್ಷಣವೇ ರಿಪೇರಿ ಮಾಡಿಸಿ, ವಾಹನ ಸಂಚಾರಕ್ಕೆ ಅನುಕೂಲ ಕಲ್ಪಿಸಿ.

– ನೊಂದ ವಾಹನ ಸವಾರರು, ಬನ್ನಿಮಂಟಪ, ಮೈಸೂರು.

### ಗೀತಾಂಜಲಿ ಶ್ರೀಗೆ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ

ಮಾನ್ಯರೆ,



ಭಾರತ ಪ್ರಪಂಚದ ಸಾಹಿತ್ಯದ ತವರು ಎಂದರೆ ಅತಿಶಯೋಕ್ತಿಯಾಗಲಾರದು. ಹಲವಾರು ಮಹಾನ್ ಕಾವ್ಯಗಳು ನಮ್ಮ ನೆಲದಲ್ಲಿ ಜನ್ಮ ತಾಳಿರುವುದು ನಮ್ಮೆಲ್ಲರಿಗೆ ಹೆಮ್ಮೆಯ ಸಂಗತಿಯಾಗಿದೆ. ಇಂತಹ ಕಾವ್ಯ, ಕಾದಂಬರಿಗಳನ್ನು ಬರೆದು ಜಗತ್ತು ಪ್ರಸಿದ್ಧರಾದ ಮಹನೀಯರಲ್ಲಿ ಲೆಕ್ಕವಿಲ್ಲದಷ್ಟು ಮಂದಿ ಭಾರತದಲ್ಲಿ ಜನಿಸಿದ್ದಾರೆ.


ಇದೇ ಹಾದಿಯಲ್ಲಿ ದೆಹಲಿ ಮೂಲದ ಗೀತಾಂಜಲಿ ಶ್ರೀ ಅವರು ಬರೆದಿರುವ "ಟೋಂಬ್ ಆಫ್ ಸ್ಯಾಂಡ್" ಅಂದರೆ "ಮರಳಿನ ಸಮಾಧಿ" ಕೃತಿಗೆ ಅಂತರ ರಾಷ್ಟ್ರೀಯ ಬೂಕರ್ ಪ್ರಶಸ್ತಿ ಲಭಿಸಿದ್ದು, ಈ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಪಡೆದ ಮೊದಲ ಭಾರತೀಯ ಲೇಖಕಿ ಎಂಬ ಖ್ಯಾತಿಗೆ ಭಾಜನರಾಗಿದ್ದಾರೆ ಮತ್ತು ಭಾರತೀಯ ಭಾಷೆಯ ಪುಸ್ತಕಕ್ಕೆ ಮೊದಲ ಬಾರಿಗೆ ಇಂತಹ ಪ್ರಶಸ್ತಿ ಲಭಿಸಿದೆ.

ಗೀತಾಂಜಲಿ ಶ್ರೀ ಅವರು ಹಿಂದಿಯಲ್ಲಿ ಬರೆದ "ರೇತ್ ಸಮಾಧಿ" ಪುಸ್ತಕವನ್ನು ಅಮೆರಿಕದ ಡೈಸಿ ರಾಕ್ ವೆಲ್ ಅವರು ಆಂಗ್ಲ ಬಾಷೆಯಲ್ಲಿ ಅನುವಾದಿಸಿದ್ದಾರೆ ಮತ್ತು ಇಬ್ಬರು ಜೊತೆಗೂಡಿ ಈ ಪ್ರಶಸ್ತಿಯನ್ನು ಸ್ವೀಕರಿಸಲಿದ್ದಾರೆ. ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿಯು 50000 ಸಾವಿರ ಪೌಂಡ್ ನಗದು ಬಹುಮಾನವನ್ನು ಹೊಂದಿದ್ದು, ಭಾರತೀಯ ರೂಪಾಯಿಯಲ್ಲಿ ಇದರ ಮೌಲ್ಯ 48 ಲಕ್ಷ ರೂ.ಗಳು.

ಗೀತಾಂಜಲಿ ಶ್ರೀ ಮೂಲತಃ ಉತ್ತರ ಪ್ರದೇಶ ಮೈನ್ ಪುರಿ ಪ್ರದೇಶದವರು. ಪ್ರಸ್ತುತ ದೆಹಲಿಯಲ್ಲಿ ವಾಸವಾಗಿದ್ದಾರೆ. ಇವರು ಬರೆದ ಪುಸ್ತಕಗಳು ಇಂಗ್ಲಿಷ್, ಫ್ರೆಂಚ್, ಕೊರಿಯನ್, ಜರ್ಮನ್ ಮತ್ತು ಸರ್ಬಿಯನ್ ಭಾಷೆಗೆ ಭಾಷಾಂತರಗೊಂಡಿವೆ.

ಗ್ರೀತಾಂಜಲಿ ಶ್ರೀಗೆ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಲಭಿಸಿರುವುದು ಭಾರತೀಯರಾದ ನಮಗೆಲ್ಲರಿಗೂ ಹೆಮ್ಮಯ ವಿಷಯವಾಗಿದೆ. ಅವರ ಈ ಸಾಧನೆ ನಮ್ಮ ದೇಶದ ಮತ್ತು ಜಗತ್ತಿನ ಮಹಿಳೆಯರಿಗೆ ಸ್ಫೂರ್ತಿಯಾಗಲೆಂದು ಮತ್ತು ಭಾರತೀಯರ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸೋಣ.

–ರಾಸುಮ ಭಟ್, ಚಿಕ್ಕಮಗಳೂರು.



ಕೆಬಿಜಿಯವರ

## ಭೂಮಂತ್ರ... ಭೂಮಂತ್ರ... ಭೂಮಂತ್ರ...

# ಯಾರಾಗಬಹುದು ದೇಶದ ಮುಂದಿನ ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ...!?

ಇತ್ತೀಚೆಗೆ (28.05.2022) ಕನ್ನಡ ಬೆಳಗಿನ ದಿನಪತ್ರಿಕೆಯೊಂದರಲ್ಲಿ ದೇಶದ ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ ಚುನಾವಣೆಯ ಬಗ್ಗೆ ದೆಹಲಿ ಮೂಲ ಹೊಂದಿದ್ದ ಸುದ್ದಿಯೊಂದನ್ನು ಓದಿದೆ. ಪ್ರಸ್ತುತ ಈ ಹುದ್ದೆಯಲ್ಲಿರುವವರ ಅಧಿಕಾರ ಅವಧಿ ಮುಗಿಯುತ್ತಾ ಬಂದಿದ್ದು, ಮುಂದಿನ ಜುಲೈ 24ರ ಒಳಗೆ ಹೊಸಬರ ಆಯ್ಕೆಯಾಗಬೇಕಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಈ ಎರಡು ಪ್ರಮುಖ ಹಾಗೂ ಸಾಂವಿಧಾನಿಕ ಉನ್ನತವಾದ ಪ್ರತಿಷ್ಠಿತ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳ ಹುಡುಕಾಟದಲ್ಲಿ ನಿರತವಾಗಿದೆ.

ಈ ಸುದ್ದಿಯ ಪ್ರಕಾರ ಎರಡು ಪ್ರಮುಖ ಹುದ್ದೆಗಳಿಗೆ ಪ್ರಧಾನವಾಗಿ ಕೇಳಿ ಬರುತ್ತಿರುವ ಹೆಸರುಗಳೆಂದರೆ, ಡಾ.ಸುಧಾಮೂರ್ತಿ, ಹಾಲಿ ಉಪ ರಾಷ್ಟ್ರಪತಿ ವೆಂಕಯ್ಯನಾಯ್ಡು, ಕೇಂದ್ರ ಹಣಕಾಸು ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್, ಕಾಂಗ್ರೆಸ್ ಹಿರಿಯ ನಾಯಕರೂ ಆದ ಮಾಜಿ ಕೇಂದ್ರ ಸಚಿವ ಗುಲಾಂ ನಬಿ ಆಜಾದ್ ಮತ್ತು ಹಾಲಿ ಕೇರಳದ ರಾಜ್ಯಪಾಲ ಆರೀಫ್ ಮೊಹಮದ್ ಖಾನ್. ಇವರೆಲ್ಲರದು ಪರಿಚಿತ ಹೆಸರು ಮತ್ತು ಮುಖಗಳಾಗಿವೆ. ಖಂಡಿತವಾಗಿ, ಅಂತಿಮ ಆಯ್ಕೆಯನ್ನು ಜಾತಿ, ಧರ್ಮ ಹಾಗೂ ಲಿಂಗ ಸಮಾನತೆಯನ್ನು ಪರಿಗಣನೆಗೆ ತೆಗೆದುಕೊಂಡೇ ಮಾಡಲಾಗುವುದು.

ನನ್ನ ಈ ಭೂಮಂತ್ರ ಅಂಕಣದಲ್ಲಿ ಪ್ರಸ್ತುತ ಸುದ್ದಿಯ ಬಗ್ಗೆ ವಿಮರ್ಶೆ ಮಾಡಲು ಒಂದು ಕಾರಣವಿದೆ. ನಾನು ಇದೇ ಅಂಕಣದಲ್ಲಿ ಅಕ್ಟೋಬರ್ 11ನೇ 2018ರಂದು ಡಾ.ಸುಧಾಮೂರ್ತಿಯವರ ಬಗ್ಗೆ ಬರೆದಿದ್ದೆ. ಅದರ ಶೀರ್ಷಿಕೆ "ಹೊಳೆಯಿತು! ಭಾರತದ ರಾಷ್ಟ್ರಪತಿ 2022". ಈ ಅಂಕಣದಲ್ಲಿ ಡಾ. ಸುಧಾಮೂರ್ತಿಯವರ ಹೆಸರನ್ನು 2022ಕ್ಕೆ (ಈ ವರ್ಷ) ನಡೆಯಲಿರುವ ರಾಷ್ಟ್ರಪತಿ ಚುನಾವಣೆಗೆ ಸೂಚಿಸಿದ್ದೆ. ಶಹಬಾಶ್! ಈಗ ಮತ್ತೆ ರಾಷ್ಟ್ರಪತಿ ಸಂಭವನೀಯ ಅಭ್ಯರ್ಥಿಗಳ ಪಟ್ಟಿಯಲ್ಲಿ ಅವರ ಹೆಸರನ್ನು ನೋಡಿದೆ. ನನ್ನ ಸೂಚನೆ ಸರಿ ಎನಿಸಿತು.

ಒಳ್ಳೆಯದು, ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ ಹುದ್ದೆಗೆ ಮೇಲೆ ಉಲ್ಲೇಖಿಸಲಾಗಿರುವ ಐದು ಊಹಾತ್ಮಕ ಅಭ್ಯರ್ಥಿಗಳ ಪೈಕಿ, ನನ್ನ ಆಯ್ಕೆಯು, 2018ರಲ್ಲಿ ನಾನು ಬರೆದಿದ್ದಕ್ಕಿಂತ ಭಿನ್ನವಾಗಿದೆ. ಈ ಐದು ಹೆಸರುಗಳಲ್ಲಿ ನನ್ನ ಆಯ್ಕೆ **ರಾಷ್ಟ್ರಪತಿ ಹುದ್ದೆಗೆ ಆರಿಫ್ ಮೊಹಮದ್ ಖಾನ್ ಹಾಗೂ ಉಪರಾಷ್ಟ್ರಪತಿ ಹುದ್ದೆಗೆ ಡಾ.ಸುಧಾಮೂರ್ತಿ**.

ಅದು ಹಾಗಿರಲಿ. ಅಕ್ಟೋಬರ್ 11, 2018 ರಂದು ನಾನು ಈ ಅಂಕಣದಲ್ಲಿ ಬರೆದ ಭೂಮಂತ್ರವನ್ನು ಸ್ವಲ್ಪ ಪರಿಷ್ಕರಿಸಿ ನನ್ನ ಓದುಗರಿಗೆ ನೀಡುತ್ತಿದ್ದೇನೆ.

**ಈ** ವರ್ಷದ (2018) ದಸರಾ ಉದ್ಘಾಟನೆಗೆ ಇನ್ಫೋಸಿಸ್ ಫೌಂಡೇಷನ್ ಅಧ್ಯಕ್ಷೆ ಡಾ.ಸುಧಾಮೂರ್ತಿಯವರನ್ನು ಆಯ್ಕೆ ಮಾಡಲಾಗಿದೆ ಎಂಬುದನ್ನು ತಿಳಿದು ನನಗೆ ಸಂತೋಷವಾಯಿತು. ಚಾಮುಂಡಿಬೆಟ್ಟದ ಮೇಲಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಅವರು ಪೂಜೆ ಸಲ್ಲಿಸಿದ ನಂತರ 10 ದಿನಗಳ ದಸರಾ ಮಹೋತ್ಸವವನ್ನು ಧಾರ್ಮಿಕ ವಿಧಿ ವಿಧಾನಗಳಂತೆ ಉದ್ಘಾಟಿಸಿದ್ದಾರೆ.

ಅವರ ಸಾಮಾಜಿಕ ಸೇವೆಗಳನ್ನು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪುಸ್ತಕ ಹಾಗೂ ಪ್ರಬಂಧಗಳನ್ನು ಬರೆಯುವ ಅವರ ಕ್ರಿಯಾಶೀಲ ವ್ಯಕ್ತಿತ್ವವನ್ನು ನಾನು ಹಲವಾರು ವರ್ಷಗಳಿಂದ ಗಮನಿಸುತ್ತಾ ಬಂದಿದ್ದೇನೆ.

ವಾರಣಾಸಿಗೆ ಭೇಟಿ ನೀಡಿದ ನಂತರ ಡಾ.ಸುಧಾಮೂರ್ತಿಯವರು ಸೀರೆಗಳ "ಶಾಪಿಂಗ್" ಮಾಡುವುದನ್ನು ಬಿಟ್ಟುಬಿಟ್ಟಿದ್ದಾರೆ. ಈ ಮೊದಲು ಅವರಿಗೆ ಅದು ಪ್ರಿಯವಾದ ಹವ್ಯಾಸವಾಗಿತ್ತು. ನಮಗೆ ಗೊತ್ತಿರುವ ಹಾಗೆ, ಕಾಶಿಗೆ ಭೇಟಿ ನೀಡಿದವರು ತಮಗೆ ಅತ್ಯಂತ ಪ್ರಿಯವಾದುದ್ದನ್ನು ಅಲ್ಲಿ ಬಿಡಬೇಕೆಂಬುದು ನಮ್ಮ ಸಂಪ್ರದಾಯ ಹಾಗೂ ನಂಬಿಕೆಯಾಗಿದೆ. ಡಾ.ಸುಧಾಮೂರ್ತಿಯವರಿಗೆ "ಶಾಪಿಂಗ್" ಅಂದರೆ ತುಂಬಾ ಇಷ್ಟವಾಗಿದ್ದರಿಂದ ಅವರು ಅದನ್ನು ಬಿಟ್ಟರು. ಅವರು ತಮ್ಮ ಹಳೆಯ ಅಭ್ಯಾಸಕ್ಕೆ ಮತ್ತೆ ಹಿಂದಿರುಗಿಲ್ಲ ಎಂದು ಭಾವಿಸುತ್ತೇನೆ. ಏಕೆಂದರೆ, ನಿಮಗೆ ತಿಳಿದಿರಲಿ ಹಳೆಯ ಅಭ್ಯಾಸಗಳು ನಮ್ಮನ್ನು ಅಷ್ಟು ಬೇಗ ಬಿಡುವುದಿಲ್ಲ.

ಪತ್ರಕರ್ತನಾಗಿ ನನ್ನ ನಲವತ್ತು ವರ್ಷಗಳ ಅನುಭವದಿಂದ ಹೇಳುವುದಾದರೆ, ದಸರಾ ಹಬ್ಬದ ಉದ್ಘಾಟಕರ ಆಯ್ಕೆ ಮಾಡುವ ವಿಚಾರದಲ್ಲಿ ಚಕಾರ ಎತ್ತದವರು ಇರುವುದಾದರೆ ಅವರು ಕೆಲವರು ಮಾತ್ರ. ಇಂತಹ ವಿರೋಧಿಗಳು, ವಿಚಾರವಾದಿಗಳು ಅಥವಾ ಜಾತ್ಯತೀತರ ಮಧ್ಯೆ ಇರುತ್ತಾರೆ. ಇಂತಹವರು ಸಾಮಾನ್ಯವಾಗಿ ಮಾದರಿ ಭಾರತದ ಪ್ರಾಯೋಜಕರಾಗಿರುತ್ತಾರೆ. ಸಂತೋಷಭರಿತವಾಗಿ, ಹಾಗೂ ಅರ್ಥಪೂರ್ಣವಾಗಿ, ಈ ಬಾರಿಯ ಆಯ್ಕೆಯನ್ನು ಎಲ್ಲಾ ವರ್ಗದ ಜನರು ಗೌರವದಿಂದ ಸ್ವೀಕರಿಸಿದ್ದಾರೆ. ಓರ್ವ ಶ್ರೇಷ್ಠ ಲೇಖಕಿಯಾಗಿ ಹಾಗೂ ಸಮಾಜ ಸೇವಕಿಯಾಗಿ ಅವರು ಒಳ್ಳೆಯ ಹೆಸರು ಮತ್ತು ಪ್ರಸಿದ್ಧಿಯನ್ನು ಗಳಿಸಿದ್ದಾರೆ. ಬಿಇ, ಐಐಎಸ್‌ಸಿ ಮತ್ತು ಎಂ.ಟೆಕ್ (ಚಿನ್ನದ ಪದಕ) ಪದವಿಗಳನ್ನು ಗಳಿಸುವ ಮೂಲಕ ಶೈಕ್ಷಣಿಕವಾಗಿಯೂ ಉತ್ತಮ ಸಾಧನೆಗೈದಿದ್ದಾರೆ. ಇನ್ಫೋಸಿಸ್ ಫೌಂಡೇಷನ್‌ನ ಸಂಸ್ಥಾಪಕ ಅಧ್ಯಕ್ಷೆಯಾಗಿ ಅವರು ಓರ್ವ ಶ್ರೇಷ್ಠ ದಾನಿಯೂ ಆಗಿದ್ದಾರೆ. ಅವರ ನೆರವಿಲ್ಲದೆ ಒಳ್ಳೆಯ ಉದ್ದೇಶದ ಯಾವ ಕಾರ್ಯವೂ ಜರುಗುವುದಿಲ್ಲ. ಇಂತಹ ಮೇರು ವ್ಯಕ್ತಿತ್ವ ಹೊರತು ನಮ್ಮ ನಾಡದೇವತೆ ಶ್ರೀಚಾಮುಂಡೇಶ್ವರಿಗೆ ವಯಸ್ಸು ಅಥವಾ ಲಿಂಗದ ಅಡ್ಡಿಯಿಲ್ಲ–ಕೇರಳದ ಶಬರಿ ಮಲೆಯ ಅಯ್ಯಪ್ಪ ಸ್ವಾಮಿಯ ಹಾಗೆ.

2017ನೇ ಸಾಲಿನಲ್ಲಿ ನಾಡಹಬ್ಬ ದಸರಾವನ್ನು ಉದ್ಘಾಟಿಸಲು ನಾಡಿನ ಓರ್ವ ಪ್ರಖ್ಯಾತ ಲೇಖಕರಾದ ಡಾ. ನಿಸಾರ್ ಅಹಮದ್ (ಮುಸ್ಲಿಂ) ಅವರನ್ನು ಆಹ್ವಾನಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನಾವು ಅಭಿನಂದಿಸಲೇಬೇಕು. ಒಂದು ಕ್ಷಣ, ಎಲ್ಲಾ ಅಲ್ಪ ಸಂಖ್ಯಾತರು ಪ್ರೊ. ನಿಸಾರ್ ಅಹಮದ್‌ರವರ ಹಾಗೆ ಬಹುಸಂಖ್ಯಾತ ಹಿಂದೂಗಳ ಜೊತೆ ಸಮಾಜದ ಮುಖ್ಯವಾಹಿನಿಯಲ್ಲಿ ಸಾಗುವಂತಾದರೆ ನಮ್ಮ ದೇಶ ಉನ್ನತ ಭವಿಷ್ಯವನ್ನು ಹೊಂದುತ್ತದೆ ಹಾಗೂ ಈಗಿರುವಂತೆ ಡೋಂಗಿ ಜಾತ್ಯತೀತ ರಾಷ್ಟ್ರವಾಗದೇ ನಿಜವಾದ ಜಾತ್ಯತೀತ ರಾಷ್ಟ್ರವಾಗಿ ಭಾರತ ಹೊರಹೊಮ್ಮುತ್ತದೆ.



ಆರಿಫ್ ಮೊಹಮದ್ ಖಾನ್



ಡಾ. ಸುಧಾಮೂರ್ತಿ



ವೆಂಕಯ್ಯ ನಾಯ್ಡು



ನಿರ್ಮಲಾ ಸೀತಾರಾಮನ್



ಗುಲಾಂ ನಬಿ ಆಜಾದ್

ಕುತೂಹಲಕಾರಿ ಸಂಗತಿ ಎಂದರೆ, ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಬಲಪಂಥೀಯ ವರ್ಗಕ್ಕೆ ಸೇರಿದವರು ಎಂದು ಭಾವಿಸಲಾದ ಡಾ.ಎಸ್.ಎಲ್. ಭೈರಪ್ಪನವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸದೇ ಇರುವುದರ ಬಗ್ಗೆ ಗುಲ್ಲೆಬ್ಬಿಸಿದ್ದ ಭಾರತೀಯ ಜನತಾ ಪಕ್ಷ, ತಾನೇ ಸ್ವತಃ ತನ್ನ ಆಡಳಿತ ಕಾಲದಲ್ಲಿ (2008–2013) ಭೈರಪ್ಪನವರನ್ನು ಮರೆತಿತ್ತು. ಆಗ ಅದರ ಆಯ್ಕೆ, ಧಾರ್ಮಿಕ ಮುಖಂಡರ ಮೇಲೆ ಮಾತ್ರ ಕೇಂದ್ರೀಕೃತಗೊಂಡಿತ್ತು. 2008ರಲ್ಲಿ ಸಿದ್ದಗಂಗಾ ಮಠದ ಡಾ.ಶಿವಕುಮಾರಸ್ವಾಮಿ, 2009ರಲ್ಲಿ ಆರ್ಟ್ ಆಫ್ ಲಿವಿಂಗ್ ಫೌಂಡೇಷನ್‌ನ ಡಾ. ಶ್ರೀ ಶ್ರೀ ರವಿಶಂಕರ್ ಗುರೂಜಿ, 2010ರಲ್ಲಿ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆ, 2011ರಲ್ಲಿ ಪೇಜಾವರ ಮಠದ ಮುಖ್ಯಸ್ಥರಾದ ಶ್ರೀ ವಿಶ್ವೇಶತೀರ್ಥ ಸ್ವಾಮೀಜಿ, 2012ರಲ್ಲಿ ಸಿದ್ದೇಶ್ವರ ಸ್ವಾಮೀಜಿ. ಅಚ್ಚರಿ ಎಂದರೆ, ಬಿಜೆಪಿ ಪರ ಒಲವಿರುವಂತೆ ಕಂಡುಬರುವ ಅಥವಾ ಬಲ ಪಂಥೀಯ ವರ್ಗಕ್ಕೆ ಸೇರಿದವರು ಎಂದು ಭಾವಿಸಲ್ಪಡುವ ಡಾ. ಎಸ್.ಎಲ್. ಭೈರಪ್ಪ ಈ ಅವಕಾಶದಿಂದ ವಂಚಿತರಾಗಿ ದಯಾಳುತನದ ಮೌನ ವಹಿಸಿದ್ದರು.

ಈಗ, ಮತ್ತೆ ಡಾ. ಸುಧಾಮೂರ್ತಿಯವರ ವಿಚಾರಕ್ಕೆ ಬರುವುದಾದರೆ, ಅವರ ಜೀವನ ತೆಗೆದುಕೊಂಡರೆ ಅವರೆಂದೂ ಮೂಲ ಲೋಹವನ್ನು ಉತ್ಪಾದಿಸಿಲ್ಲ. ಚಿನ್ನವೇ ಅವರ ಲೋಹ. ಅಚ್ಚರಿಯಾದರೂ, ಅವರು ರಸವಿದ್ಯೆ ಪಾರಂಗತೆಯೇ. ಉತ್ಪ್ರೇಕ್ಷೆಗಾಗಿಯೇ ಹೇಳುವುದಾದರೆ, ಅವರು ಏನನ್ನೇ ಮುಟ್ಟಿದರೂ ಅದು ಚಿನ್ನವಾಗುತ್ತದೆ. ಒಂದು ಸಕಾರಾತ್ಮಕ ಸ್ವರ್ಣ ಸ್ಪರ್ಶ. ಅಮೇರಿಕಕ್ಕೆ ಭೇಟಿ ನೀಡಿದ ನಂತರ, ಯೌವನದಲ್ಲಿ, ಬಹುಶಃ ಅವಿವಾಹಿತರಾಗಿದ್ದಾಗ, 1979ರಲ್ಲಿ ಕನ್ನಡದಲ್ಲಿ ಒಂದು ಪುಸ್ತಕವನ್ನು ಬರೆದಿದ್ದರೂ ಸಹ, ತಮ್ಮ 53ನೇ ವಯಸ್ಸಿನಲ್ಲಿ ಆಂಗ್ಲ ಭಾಷೆಯಲ್ಲಿ ತಮ್ಮ ಪ್ರಥಮ ಪುಸ್ತಕವನ್ನು ಬರೆದಿದ್ದಾಗಿ ಅವರು ಹೇಳುತ್ತಾರೆ. ನೀರದ್ ಸಿ. ಚೌಧುರಿ ಎಂಬುವವರು ತಮ್ಮ 54ನೇ ವಯಸ್ಸಿನಲ್ಲಿ ತಮ್ಮ ಪ್ರಥಮ ಪುಸ್ತಕ "An Autobiography of an Unknown Indian" ಬರೆದದ್ದು ನನಗೆ ನೆನಪಿದೆ. ಆನಂತರ ಆಂಗ್ಲ ಸಾಹಿತ್ಯದಲ್ಲಿ ಅವರು ಬಹಳ ಪ್ರಸಿದ್ಧರಾದರು. ಒಳ್ಳೆಯದು, ಅತಿಶಯವಾದ ಸಾಮರ್ಥ್ಯ ಹೊಂದಿದವರಿಗೆ ಪ್ರಕಾಶಮಾನಕ್ಕೆ ಬರಲು ವಯಸ್ಸು ಅಡ್ಡಿಯಾಗಲಾರದು. ಹಿರಿಯ ಪತ್ರಕರ್ತ ಹಾಗೂ ಲೇಖಕ ಇಂಡಿಯನ್ ಎಕ್ಸ್‌ಪ್ರೆಸ್‌ನ ಟಿ.ಜೆ.ಎಸ್. ಜಾರ್ಜ್ ಅವರು "ನಿಮ್ಮಲ್ಲಿ ಸಾಮರ್ಥ್ಯವಿದೆ, ಆಂಗ್ಲ ಭಾಷೆಯಲ್ಲಿ ಪುಸ್ತಕ ಬರೆಯಿರಿ" ಎಂದು ಸಲಹೆ ನೀಡುವವರೆಗೂ, ಆಂಗ್ಲ ಭಾಷೆಯಲ್ಲಿ ಪುಸ್ತಕ ಬರೆಯುವಷ್ಟು ತಾವು ಸಮರ್ಥರಲ್ಲವೆಂಬುದನ್ನು ಸ್ವತಃ ಡಾ.ಸುಧಾಮೂರ್ತಿಯವರೇ ಒಪ್ಪಿಕೊಂಡಿದ್ದಾರೆ.

ನಿನ್ನೆ ದಿನ ಬೆಳಗ್ಗೆ, ಮೈಸೂರು ಆಕಾಶವಾಣಿಯ ಶ್ರೀ ಅಬ್ದುಲ್ ರಶೀದ್ ಅವರಿಗೆ ಮೈಸೂರು ದಸರಾ ಮಹೋತ್ಸವವನ್ನು ಉದ್ಘಾಟಿಸಿದ ನಂತರ ಡಾ.ಸುಧಾಮೂರ್ತಿ ಅವರು ನೀಡಿದ ಸಂದರ್ಶನವನ್ನು ಆಲಿಸುತ್ತಿದ್ದೆ. ಅದು ಅತ್ಯಂತ ಅಮೋಘವಾಗಿತ್ತು. ಅದು ಎಷ್ಟು ಅರ್ಥಗರ್ಭಿತವಾಗಿತ್ತು ಅಂದರೆ ಅದರ ತುಂಬಾ ಜೀವನದ ಪಾಠಗಳೇ ತುಂಬಿದ್ದವು. ಸಂದರ್ಶನ ಮುಗಿಯುವ ತನಕ ನಾನು ಮತ್ತು ನನ್ನ ಪತ್ನಿ ಟ್ರಾನ್ಸಿಸ್ಟರ್‌ಗೆ ಅಂಟಿಕೊಂಡು ಬಿಟ್ಟಿದ್ದೆವು. ಓರ್ವ ಪ್ರತಿಭಾವಂತ ನಿರೂಪಕ ಹಾಗೂ ಸಂದರ್ಶಕರಾದ ಅಬ್ದುಲ್ ರಶೀದ್‌ರವರು ಡಾ. ಸುಧಾಮೂರ್ತಿಯವರಿಗೆ ಸಂಬಂಧಿಸಿದಂತೆ ಎಲ್ಲಾ ಅರಿವು ಮತ್ತು ತಿಳುವಳಿಕೆಯನ್ನು ಹಾಗೂ ಅನ್ಯ ವಿಚಾರಾಮೃತವನ್ನು ಅವರ ಜೀವನ ಅನುಭವದಿಂದ ಹೊರತೆಗೆಯುವಲ್ಲಿ ಸಫಲರಾಗಿದ್ದರು.

ಪ್ರತಿಯೊಂದು ಉತ್ತರವೂ ಚಿನ್ನದ ಗಟ್ಟಿಯಂತಿತ್ತು. ಅದರ ಆಧ್ಯಾತ್ಮಿಕ ಒಳನೋಟವು, ರೋಮನ್ ಚಕ್ರವರ್ತಿ– ತತ್ವಜ್ಞಾನಿ ಮಾರ್ಕಸ್ ಅರೇಲಿಯಾಸ್ ಹಾಗೂ ಅವರ ಪುಸ್ತಕ "Meditations" ಅನ್ನು ಸ್ಮರಿಸುವಂತೆ ಮಾಡಿತು. ವಾಕ್ ಚಾತುರ್ಯವನ್ನು ತೋರಿಸದೆ ಅಥವಾ ಬೋಧನಾ ತತ್ವಗಳನ್ನು ಒಳಗೊಳ್ಳದೆ, ಇಲ್ಲವೇ ಆಕಾಶವಾಣಿ ಕೇಂದ್ರದಿಂದ ಮಂತ್ರಗಳನ್ನು ಉಚ್ಚರಿಸದ ರೀತಿಯಲ್ಲಿ ವಿವೇಕದ ಅಥವಾ ಜಾಣ್ಮೆಯ ಮುತ್ತುಗಳು ಅವರ ಮಾತುಗಳ ಮೂಲಕ ಹೊರ ಬರುತ್ತಿದ್ದವು. ಇಲ್ಲಿ ಹಲವನ್ನು ನಾನು ಹೆಕ್ಕಿಕೊಂಡಿದ್ದೇನೆ ಹಾಗೂ ಅವುಗಳನ್ನು ನನ್ನ ಸ್ಮೃತಿಪಟಲದಲ್ಲಿ ಇರಿಸಿದ್ದೇನೆ. ಲೈಂಗಿಕ ದೌರ್ಜನ್ಯವೂ ಸೇರಿದಂತೆ ನಾನಾ ಸಮಸ್ಯೆಗಳನ್ನು ಎದುರಿಸುತ್ತಿರುವ ನಮ್ಮ ಹೆಣ್ಣು ಮಕ್ಕಳಿಗೆ ನೀವು ನೀಡುವಂತಹ ಸಂದೇಶವೇನು ಎಂದು ಕೇಳಿದಾಗ ಅದಕ್ಕೆ ಡಾ. ಸುಧಾಮೂರ್ತಿ ಹೇಳಿದ್ದು:

"ನಾನು ಹೆಣ್ಣು ಮಕ್ಕಳಿಗೆ ಹೇಳಬಯಸುವುದೇನೆಂದರೆ ಅವರಲ್ಲಿ ಹೆಚ್ಚಿನ ಶಕ್ತಿ–ಸಾಮರ್ಥ್ಯ ಇದೆ. ದುರದೃಷ್ಟಕರ ವಿಚಾರವೆಂದರೆ ಅವರಿಗೇನೇ ತಮ್ಮ ಶಕ್ತಿ ಸಾಮರ್ಥ್ಯದ ಬಗ್ಗೆ ತಿಳಿದಿಲ್ಲ. ಕೆಲವು ಹುಡುಗಿಯರು ತಾವು ಹುಡುಗಿಯರಾಗಿರುವುದರಿಂದ ಬಲಹೀನರಾಗಿದ್ದೇವೆ ಎಂದು ಭಾವಿಸುತ್ತಾರೆ. ಆದರೆ, ನಾನು ಅವರಿಗೆ ಹೇಳುವುದೇನೆಂದರೆ ಅವರಲ್ಲಿ ಪುರುಷರಿಗಿಂತ ಸಾಧಿಸುವ ಹೆಚ್ಚಿನ ಸಾಮರ್ಥ್ಯ ಇದೆ. ದೇವರು ಅವರನ್ನು ಆ ರೀತಿಯಲ್ಲಿ ಸೃಷ್ಟಿಸಿದ್ದಾನೆ. ಒಂದು ಹೆಣ್ಣು ಮಗು ಅನೇಕ ಪಾತ್ರಗಳನ್ನು ನಿರ್ವಹಿಸುತ್ತದೆ. ಮಗಳಾಗಿ, ಹೆಂಡತಿಯಾಗಿ, ತಾಯಿಯಾಗಿ ಆಕೆ ನಾನಾ ಪಾತ್ರ ನಿರ್ವಹಿಸುತ್ತಾಳೆ. ಭಯದಲ್ಲಿ ಅವರು ತಮ್ಮ ಅಮೂಲ್ಯವಾದ ಸಮಯವನ್ನು ಕಳೆಯಬಾರದು ಹಾಗೂ ಆ ಮೂಲಕ ಬದುಕಿನ ಉದ್ದೇಶವನ್ನು ಕಳೆದುಕೊಳ್ಳಬಾರದು. ಅವರು ಆತ್ಮವಿಶ್ವಾಸವನ್ನು ಹೊಂದಬೇಕು ಹಾಗೂ ತಮಗೆ ಸಿಗುವ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ನೌಕರಿಯನ್ನು ಪಡೆಯಲು ಅವರು ಕೆಲವೊಂದು ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಜೊತೆಗೆ ಪ್ರತಿದಿನ ಏನಾದರೂ ಹೊಸದನ್ನು ಕಲಿಯಲು ಪ್ರಯತ್ನಿಸಬೇಕು".

ಓರ್ವ ಹೆಣ್ಣು ಮಗಳು ತಮ್ಮಂತೆ, ಕ್ರಿಯಾಶೀಲ ಲೇಖಕಿ ಯಾವ ರೀತಿಯಲ್ಲಿ ಆಗಬಹುದು ಎಂಬ ಮತ್ತೊಂದು ಪ್ರಶ್ನೆಗೆ ಡಾ.ಸುಧಾಮೂರ್ತಿಯವರು, ಪುಸ್ತಕಗಳನ್ನು ಓದುವ ಮೂಲಕ ಅದು ಪ್ರಾರಂಭವಾಗಬೇಕೆಂದು ಹೇಳಿದ್ದಾರೆ. **ಬದುಕಲ್ಲಿ ನಾವೇನಾಗಬೇಕೆಂಬುದನ್ನು ನಮಗೆ ನಾವೇ ಕಂಡುಕೊಳ್ಳಬೇಕು. ಇದನ್ನು ನಿಮಗೆ ನಿಮ್ಮ ಗಂಡ, ಅತ್ತೆ, ಮಾವ, ನಿಮ್ಮ ಸಹೋದರಿ ಅಥವಾ ಸ್ನೇಹಿತರು ಕೂಡ ಹೇಳಲಾಗುವುದಿಲ್ಲ.**

ನಂತರ, ಉಪಹಾರಕ್ಕೆ ಡೈನಿಂಗ್ ಟೇಬಲ್ ಬಳಿ, ಅವರ ಸಂದರ್ಶನವನ್ನು ನೆನಪಿಸಿಕೊಳ್ಳುತ್ತಾ, ನೆನಪುಗಳನ್ನು ಪುನರ್ ಮನನ ಮಾಡಿಕೊಂಡೆ. ದೇಶಕ್ಕೆ ಸ್ವಾತಂತ್ರ್ಯ ಬಂದ ಮೇಲೆ ರಾಜಕಾರಣಿ – ಮಹಾಮೇಧಾವಿ ಡಾ.ಬಾಬು ರಾಜೇಂದ್ರ ಪ್ರಸಾದ್ ಸೇರಿದಂತೆ ದೇಶ ಹಲವಾರು ರಾಷ್ಟ್ರಪತಿಗಳನ್ನು ಕಂಡಿದೆ. ಪ್ರಸಾದರ ನಂತರ ಶ್ರೇಷ್ಠ ತತ್ವಜ್ಞಾನಿ–ರಾಜನೀತಿಜ್ಞ ಡಾ. ಎಸ್. ರಾಧಾಕೃಷ್ಣನ್, ಅವರಂತೆಯೇ ಮತ್ತೊಬ್ಬ ಮಹಾಮೇಧಾವಿಗಳಾದ ಡಾ. ಜಾಕೀರ್ ಹುಸೇನ್. ಡಾ. ಎ.ಪಿ.ಜೆ. ಅಬ್ದುಲ್ ಕಲಾಂರವರನ್ನು ನಾವು ಮರೆಯಲು ಹೇಗೆ ಸಾಧ್ಯ? ಕೆಲವು ರಾಷ್ಟ್ರಪತಿಗಳು ಅಧಿಕಾರದ ಸವಿಯನ್ನು ಸವಿದರೇ ಹೊರತು ತಮ್ಮ ಕುರುಹಾಗಿ (ಸಾಧನೆ) ಏನನ್ನೂ ಬಿಟ್ಟು ಹೋಗಲಿಲ್ಲ.

ಇದಾದ ನಂತರ, ಬಹುಚರ್ಚಿತ ಹಾಗೂ ಬಹಳ ವರ್ಷಗಳಿಂದ ಕಾಯುತ್ತಾ (ಕೊಳೆಯುತ್ತಾ) ಕುಳಿತಿರುವ **"ಮಹಿಳಾ ಮೀಸಲಾತಿ ಮಸೂದೆ"**ಯನ್ನು ಸಂಸತ್ತಿನಲ್ಲಿ ಅಂಗೀಕರಿಸಲು ನಮ್ಮ ರಾಜಕಾರಣಿಗಳಿಗೆ ಸಾಧ್ಯವಾಗಿಲ್ಲ. ಈ ವೈಫಲ್ಯಕ್ಕೆ ಪ್ರಾಯಶ್ಚಿತ್ತ ಎನ್ನುವ ರೀತಿಯಲ್ಲಿ ಮಹಾರಾಷ್ಟ್ರದ ಹಿರಿಯ ರಾಜಕಾರಣಿ ಶ್ರೀಮತಿ ಪ್ರತಿಭಾದೇವಿ ಸಿಂಗ್ ಪಾಟೀಲರು ದೇಶದ ಪ್ರಥಮ ಮಹಿಳಾ ರಾಷ್ಟ್ರಪತಿಯಾಗಿ ಆಯ್ಕೆಗೊಂಡರು. ಹಿಂದಿನ ಕೆಲವು ರಾಷ್ಟ್ರಪತಿಗಳ ಹಾಗೆ ಅವರೂ ಸಹ ರಬ್ಬರ್ ಸ್ಟ್ಯಾಂಪ್ (ಕೈಗೊಂಬೆ) ರಾಷ್ಟ್ರಪತಿ ಎನಿಸಿದರು.

ಮುಂದಿನ ರಾಷ್ಟ್ರಪತಿ ಚುನಾವಣೆ ಜುಲೈ 2022ರಲ್ಲಿ ನಡೆಯಲಿದೆ. ಪ್ರಸ್ತುತ ರಾಷ್ಟ್ರಪತಿ ರಾಮನಾಥ ಕೋವಿಂದ್ ಅವರ ಅವಧಿ ಆಗ ಮುಗಿಯುತ್ತದೆ (24.07.2022). **ಮಹಿಳಾ ಮೀಸಲಾತಿ ವಿಧೇಯಕವನ್ನು ಸಂಸತ್ತಿನಲ್ಲಿ ಅಂಗೀಕರಿಸದಿದ್ದ ವೈಫಲ್ಯಕ್ಕೆ ಪ್ರಾಯಶ್ಚಿತ್ತ ಅನ್ನುವ ಹಾಗೆ ಡಾ.ಸುಧಾಮೂರ್ತಿಯವರನ್ನು ಮುಂದಿನ ರಾಷ್ಟ್ರಪತಿಯನ್ನಾಗಿ ಚುನಾಯಿಸಿದರೆ ಹೇಗೆ? ಅವರೊಬ್ಬ ಮಹಾನ್ ರಾಷ್ಟ್ರಪತಿಯಾಗಿ ಹೊರಹೊಮ್ಮಬಲ್ಲರು.** ಅವರ ಸಾರ್ವಜನಿಕ ಭಾಷಣಗಳು, ಡಾ.ಎ.ಪಿ.ಜೆ. ಅಬ್ದುಲ್ ಕಲಾಂರವರ ಭಾಷಣಗಳ ಹಾಗೆಯೇ ಇದ್ದು, ಅದೇ ರೀತಿಯ ಸಾಮಾಜಿಕ ಮತ್ತು ಮಾನವೀಯ ಕಳಕಳಿಯನ್ನು ಹೊಂದಿರುತ್ತವೆ. ದಿವಂಗತ ಡಾ. ಕಲಾಂ ತಮ್ಮ ಅಧಿಕಾರಾವಧಿಯಲ್ಲಿ ಹಾಗೂ ಅಧಿಕಾರ ಮುಗಿಸಿದ ನಂತರವೂ ಇವುಗಳನ್ನು ಪ್ರತಿಬಿಂಬಿಸಿದ್ದರು.

ಬಲ, ಎಡ ಹಾಗೂ ಕೇಂದ್ರೀಕೃತ ವಿಚಾರಧಾರೆಯುಳ್ಳ ರಾಜಕೀಯ ಪಕ್ಷಗಳು ಇದರ ಬಗ್ಗೆ ಯೋಚಿಸಲಿ. ಏಕೆಂದರೆ, ಡಾ.ಸುಧಾಮೂರ್ತಿಯವರು ನನ್ನ ಆಲೋಚನೆಯ ಜಾತ್ಯತೀತ ಭಾರತವನ್ನು ಪ್ರತಿನಿಧಿಸುತ್ತಾರೆ.

ಜೈ ಹಿಂದ್.

email:
kbg@starofmysore.com

# ಪಂಚಾಯಿತಿಯಿಂದ ಪಾರ್ಲಿಮೆಂಟ್‌ವರೆಗೂ ಬಿಜೆಪಿ ಬಲಿಷ್ಠಗೊಳಿಸಬೇಕಾಗಿದೆ

## ರಾಷ್ಟ್ರೀಯ ಅಧ್ಯಕ್ಷ ನಡ್ಡಾರ ಮಾತು ಈಡೇರಿಸಲು ಬಿಜೆಪಿ ರಾಜ್ಯ ಉಪಾಧ್ಯಕ್ಷ ವಿಜಯೇಂದ್ರ ಕಾರ್ಯಕರ್ತರಿಗೆ ಕರೆ



ಮೈಸೂರು, ಜೂ.7(ಎಂಕೆ)– ಪಂಚಾಯಿತಿಯಿಂದ ಪಾರ್ಲಿಮೆಂಟ್‌ವರೆಗೂ ಬಿಜೆಪಿಯನ್ನು ಗಟ್ಟಿಗೊಳಿಸಬೇಕಾಗಿದೆ ಎಂಬ ಬಿಜೆಪಿ ರಾಷ್ಟ್ರಾಧ್ಯಕ್ಷರ ಮಾತನ್ನು ಈಡೇರಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಪಕ್ಷ ಸಂಘಟನೆ ಮಾಡುವಂತೆ ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಕರೆ ನೀಡಿದರು.

ನಗರ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ದಕ್ಷಿಣ ಪದವೀಧರ ಕ್ಷೇತ್ರ ಚುನಾವಣೆ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಪದವೀಧರ ಮತದಾರರೊಂದಿಗಿನ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಬಿಜೆಪಿಯಲ್ಲಿ ಮಾತ್ರ ಗಟ್ಟಿ ನಾಯಕತ್ವ ಇರುವುದು. ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ವಿಶ್ವವೇ ಮೆಚ್ಚಿದೆ. ಕಳೆದ 8 ವರ್ಷಗಳಲ್ಲಿ ಒಂದು ದಿನವೂ ವಿಶ್ರಾಂತಿ ಪಡೆಯದೆ ದೇಶದ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿರುವ ದೂರದೃಷ್ಟಿಯುಳ್ಳ ನಾಯಕರಾಗಿದ್ದಾರೆ ಎಂದು ಬಣ್ಣಿಸಿದರು.

> ದಕ್ಷಿಣ ಪದವೀಧರ ಕ್ಷೇತ್ರದಲ್ಲಿ ಇಲ್ಲಿಯವರೆಗೆ ಗೆದ್ದ ವಿಧಾನ ಪರಿಷತ್ ಸದಸ್ಯರಾಗಿರುವ ಯಾರೊಬ್ಬರು ಶಿಕ್ಷಕರ, ಉಪನ್ಯಾಸಕರ ಸಮಸ್ಯೆಗಳನ್ನು ಬಗೆಹರಿಸಿಲ್ಲ. ಚುನಾವಣೆ ಸಂದರ್ಭದಲ್ಲಷ್ಟೇ ಭರವಸೆ ನೀಡುತ್ತಾ ಬಂದಿದ್ದಾರೆ. ಆದ್ದರಿಂದ ಶಿಕ್ಷಕರ, ಉಪನ್ಯಾಸಕರ ಎಲ್ಲಾ ಸಮಸ್ಯೆಗಳು ಬಗೆಹರಿಯಬೇಕಾದರೆ ಸಮರ್ಥ ಅಭ್ಯರ್ಥಿಯಾದ ಮೈ.ವಿ.ರವಿ ಶಂಕರ್ ಅವರನ್ನು ಗೆಲ್ಲಿಸಬೇಕಾಗಿದೆ.
> - ಆರ್.ರಘು ಕೌಟಿಲ್ಯ, ಮಾಜಿ ಅಧ್ಯಕ್ಷ, ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ

ರಾಜ್ಯ ಬಿಜೆಪಿ ಸರ್ಕಾರವೂ ಹತ್ತು ಹಲವು ಯೋಜನೆಗಳ ಮೂಲಕ ಉತ್ತಮ ಆಡಳಿತ ನೀಡುತ್ತಿದ್ದು, ಸರ್ವ ವ್ಯಾಪಿ-ಸರ್ವ ಸ್ಪರ್ಶಿಯಾಗಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, ರಾಜ್ಯದ ಎಲ್ಲಾ ಜನತೆಯೂ ಮೆಚ್ಚಿಕೊಂಡ ನಾಯಕರಾಗಿದ್ದು, ಯುವ ರಾಜಕಾರಣಿಗಳಿಗೆ ಪ್ರೇರಣೆಯಾಗಿದ್ದಾರೆ. ರಾಜ್ಯದಲ್ಲಿ ಪ್ರವಾಸೋದ್ಯಮ ಕ್ಷೇತ್ರ ಅಭಿವೃದ್ಧಿಯಾಗಬೇಕಾಗಿದೆ. ಶಿಕ್ಷಣ ಕ್ಷೇತ್ರದಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಬೇಕಾಗಿದೆ. ಈ ನಿಟ್ಟಿನಲ್ಲಿ ಪಕ್ಷದ ಅಭ್ಯರ್ಥಿ ಮೈ.ವಿ.ರವಿಶಂಕರ್ ಅವರನ್ನು ಗೆಲ್ಲಿಸುವ ಹೊಣೆ ನಮ್ಮೆಲ್ಲರದಾಗಿದೆ ಎಂದು ಹೇಳಿದರು.

**ಸಂಬಂಧಗಳು ಕಣ್ಮರೆ:** ಆಧುನಿಕ ತಂತ್ರಜ್ಞಾನದಿಂದ ಮನುಷ್ಯ–ಮನುಷ್ಯನ ನಡುವಿನ ಸಂಬಂಧಗಳು ಕಣ್ಮರೆಯಾಗುತ್ತಿವೆ. ಆದ್ದರಿಂದ ಸದಾ ಸಕಾರಾತ್ಮಕ ಚಿಂತನೆ, ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳುವುದು ಮುಖ್ಯವಾಗಿದೆ. ಕೆಲಸದ ಒತ್ತಡಗಳ ನಡುವೆಯೂ ಕುಟುಂಬದೊಂದಿಗೆ ಒಂದಷ್ಟು ಹೊತ್ತು ಸಮಯ ಕಳೆಯುವುದು ಉತ್ತಮ. ಇದರಿಂದ ಕುಟುಂಬದಲ್ಲಿ ಸಾಮರಸ್ಯ ಮತ್ತು ಅನ್ಯೋನ್ಯತೆ ಹೆಚ್ಚಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ದಕ್ಷಿಣ ಪದವೀಧರ ಕ್ಷೇತ್ರ ಅಭ್ಯರ್ಥಿ ಮೈ.ವಿ.ರವಿಶಂಕರ್, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ನಂದೀಶ್ ಹಂಚೆ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ನಿಂಗರಾಜ್‌ಗೌಡ ಮತ್ತಿತರರು ಉಪಸ್ಥಿತರಿದ್ದರು.

### ಮೈಸೂರಲ್ಲಿ ಯೋಗ ದಿನಾಚರಣೆ

# ಸಿವಿಲ್ ಕಾಮಗಾರಿಗೆ 10 ಕೋಟಿ ಅನುದಾನ

ಮೈಸೂರು, ಜೂ.7(ಆರ್‌ಕೆ)–ಜೂನ್ 21ರಂದು ಮೈಸೂರಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಗಮಿಸುತ್ತಿರುವುದರಿಂದ ಕೈಗೊಳ್ಳಬೇಕಾದ ಸಿವಿಲ್ ಕಾಮಗಾರಿಗಳಿಗೆ ಸರ್ಕಾರ 10 ಕೋಟಿ ರೂ. ಅನುದಾನ ಮಂಜೂರು ಮಾಡಿದೆ. ಅರಮನೆ ಸುತ್ತಲಿನ ರಸ್ತೆ, ಚರಂಡಿ, ಫುಟ್‌ಪಾತ್ ಅಭಿವೃದ್ಧಿ, ಪ್ರಮುಖ ರಸ್ತೆಗಳಿಗೆ ಡಾಂಬರೀಕರಣ, ಪ್ರಧಾನಿಗಳು ಸಾಗುವ ಮಾರ್ಗದ ಸ್ವಚ್ಛತೆ ಮತ್ತು ಆಸ್ಫಾಲ್ಟಿಂಗ್ ಕೆಲಸಗಳಿಗೆ 15 ಕೋಟಿ ರೂ. ಹಣದ ಅಗತ್ಯವಿದೆ ಎಂದು ಪ್ರಸ್ತಾವನೆ ಸಲ್ಲಿಸಲಾಗಿತ್ತು. ಸರ್ಕಾರವು 10 ಕೋಟಿ ರೂ. ಅನುದಾನಕ್ಕೆ ಅನುಮೋದನೆ ನೀಡಿದೆ ಎಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಲಕ್ಷ್ಮೀಕಾಂತ ರೆಡ್ಡಿ ಅವರು ತಿಳಿಸಿದ್ದಾರೆ.

ಈಗಾಗಲೇ ಮೈಸೂರಿನ ಬಹುತೇಕ ರಸ್ತೆಗಳ ಅಭಿವೃದ್ಧಿ, ಫುಟ್‌ಪಾತ್ ಸ್ವಚ್ಛತೆ, ಒಳಚರಂಡಿ, ಮಳೆ ನೀರು ಚರಂಡಿಗಳ ಹೂಳು ತೆಗೆದು ಗಿಡ–ಗಂಟಿ ತೆರವುಗೊಳಿಸುವ ಕಾರ್ಯ ನಡೆಯುತ್ತಿದೆ. ಮಹಾತ್ಮಗಾಂಧಿ ರಸ್ತೆಯ ಮೀಡಿಯನ್ ಅಭಿವೃದ್ಧಿ ಮತ್ತು ಆಸ್ಫಾಲ್ಟಿಂಗ್ ಕಾಮಗಾರಿಯೂ ಪ್ರಗತಿಯಲ್ಲಿದೆ ಎಂದು ಅವರು ತಿಳಿಸಿದರು. ಪ್ರಧಾನಮಂತ್ರಿಗಳು ಆಗಮಿಸುತ್ತಿರುವುದರಿಂದ ಶಿಷ್ಟಾಚಾರದ ಪ್ರಕಾರ ಕೆಲ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲೇಬೇಕಾಗಿದ್ದು, ಆದ್ಯತೆ ಮೇಲೆ ಸರ್ಕಾರದ ಅನುದಾನ ಬಳಸಿ ಕ್ರಮ ವಹಿಸಲಾಗಿದೆ. ಈಗಾಗಲೇ ಬಹುತೇಕ ಕೆಲಸ ಮುಗಿದಿದೆ ಎಂದು ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

# ಪಿಯುಸಿ ಪಠ್ಯ ಪರಿಷ್ಕರಣಾ ಸಮಿತಿಯಿಂದ 'ರೋಹಿತ್ ಚಕ್ರತೀರ್ಥ' ಕೈಬಿಟ್ಟ ಸರ್ಕಾರ

ಬೆಂಗಳೂರು, ಜೂ.7– ಶಾಲಾ ಪಠ್ಯಪುಸ್ತಕ ಸಮಿತಿಯ ಸಾಲು–ಸಾಲು ವಿವಾದಗಳ ಕೇಂದ್ರ ಬಿಂದುವಾಗಿದ್ದ ರೋಹಿತ್ ಚಕ್ರತೀರ್ಥ ಅವರನ್ನು ಪಿಯುಸಿ ಪಠ್ಯ ಪರಿಷ್ಕರಣಾ ಸಮಿತಿಯಿಂದ ಕೈಬಿಡಲಾಗಿದೆ. ಈ ಬಗ್ಗೆ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ಮಾಹಿತಿ ನೀಡಿದ್ದು, ದ್ವಿತೀಯ ಪಿಯುಸಿ ಪಠ್ಯಪುಸ್ತಕ ಪರಿಷ್ಕರಣೆ ಸಮಿತಿಯಿಂದ ರೋಹಿತ್ ಚಕ್ರತೀರ್ಥ ಅವರನ್ನು ಶಿಕ್ಷಣ ಇಲಾಖೆ ಕೈಬಿಟ್ಟಿದೆ. ಪಠ್ಯ ಪರಿಷ್ಕರಣೆಗೆ ರೋಹಿತ್ ಚಕ್ರತೀರ್ಥ ಅವರನ್ನು ಈ ಮೊದಲು ಸರ್ಕಾರವು ನೇಮಿಸಿತ್ತು. ಆದರೆ ಸಾಲುಸಾಲು ವಿವಾದಗಳು ಎದುರಾಗಿತ್ತು. ಇದೀಗ ರೋಹಿತ್ ಚಕ್ರತೀರ್ಥ ಅವರನ್ನು ಕೈಬಿಡಲು ಸರ್ಕಾರ ನಿರ್ಧರಿಸಿದೆ ಎಂದು ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ತಿಳಿಸಿದ್ದಾರೆ.

ದ್ವಿತೀಯ ಪಿಯುಸಿಯಲ್ಲಿ ಅಧ್ಯಾಯ 4.2ರ ಹೊಸ ಧರ್ಮಗಳ ಉದಯ ಪಠ್ಯಭಾಗದ ಪರಿಷ್ಕರಣೆಗೆ ಈ ಮೊದಲು ಸರ್ಕಾರ ಮುಂದಾಗಿತ್ತು. ಪಠ್ಯ ಪರಿಷ್ಕರಣೆ ಜವಾಬ್ದಾರಿಯನ್ನು ರೋಹಿತ್ ಚಕ್ರತೀರ್ಥ ಅವರಿಗೆ ವಹಿಸಲಾಗಿತ್ತು. ಶಾಲೆಗಳ ಪಠ್ಯದ ಪರಿಷ್ಕರಣೆ ವಿವಾದದ ಹಿನ್ನೆಲೆಯಲ್ಲಿ ರೋಹಿತ್ ಚಕ್ರತೀರ್ಥ ನೇತೃತ್ವದ ಸಮಿತಿಯನ್ನು ಕೈಬಿಡಲು ಸರ್ಕಾರ ಮುಂದಾಗಿತ್ತು. ಇದೀಗ ರೋಹಿತ್ ಚಕ್ರತೀರ್ಥ ನೇತೃತ್ವದ ಸಮಿತಿಯನ್ನು ವಿಸರ್ಜಿಸಿರುವ ಕಾರಣ, ಪಿಯುಸಿ ಪಠ್ಯಪುಸ್ತಕ ಪರಿಷ್ಕರಣೆಯ ವರದಿಯನ್ನು ಪಡೆಯುವುದಿಲ್ಲ ಎಂದು ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ಹೇಳಿದ್ದಾರೆ.

**ಶಾಲಾ ಪಠ್ಯಪುಸ್ತಕ ಸಮಿತಿ ವಿಸರ್ಜನೆ:** ಚಿಂತಕ ರೋಹಿತ್ ಚಕ್ರತೀರ್ಥ ನೇತೃತ್ವದ ಪಠ್ಯ ಪರಿಷ್ಕರಣೆ ಸಮಿತಿಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇತ್ತೀಚೆಗೆ (ಜೂನ್ 3) ವಿಸರ್ಜಿಸಿದ್ದರು. ಪಠ್ಯ ಪರಿಷ್ಕರಣೆಯ ಕ್ರಮಗಳ ಬಗ್ಗೆ ಎದ್ದಿರುವ ವಿವಾದಗಳ ಕಾರಣಕ್ಕೆ ಅಥವಾ ಯಾವುದೇ ಒತ್ತಡಕ್ಕೆ ಮಣಿದು ಈ ಸಮಿತಿಯನ್ನು ವಿಸರ್ಜಿಸುತ್ತಿಲ್ಲ ಎಂಬ ಸೂಚನೆಯನ್ನೂ ಪತ್ರಿಕಾ ಪ್ರಕಟಣೆಯಲ್ಲಿ ಮುಖ್ಯಮಂತ್ರಿ ನೀಡಿದ್ದರು. ಆ ಮೂಲಕ ಪರೋಕ್ಷವಾಗಿ ಸಮಿತಿಯ ಕಾರ್ಯವೈಖರಿಯನ್ನು ಸಮರ್ಥಿಸಿಕೊಂಡಿದ್ದರು.

# ಗ್ರಂಥಾಲಯ ಪುಸ್ತಕ ಎರವಲು ಸೇವೆಯಲ್ಲಿ ವ್ಯತ್ಯಯ

ಮೈಸೂರು, ಜೂ.7– ಮೈಸೂರು ಜಿಲ್ಲಾ ಕೇಂದ್ರ ಗ್ರಂಥಾಲಯದ ಅಧೀನದಲ್ಲಿ ಬರುವ ಶಾಖಾ ಗ್ರಂಥಾಲಯಗಳಲ್ಲಿ ಹುಣಸೂರು, ಕೆ.ಆರ್.ನಗರ, ಪಿರಿಯಾಪಟ್ಟಣ, ನಂಜನಗೂಡು, ಟಿ. ನರಸೀಪುರ, ಹೆಚ್.ಡಿ.ಕೋಟೆ, ಬನ್ನೂರು, ಸರಗೂರು ತಾಲೂಕುಗಳಲ್ಲಿ ಜೂನ್ ಮಾಹೆಯಲ್ಲಿ ಪುಸ್ತಕಗಳ ಭೌತಿಕ ದಾಸ್ತಾನು ಪರಿಶೀಲನೆ ನಡೆಯಲಿದ್ದು, ಗ್ರಂಥಾಲಯದ ಪುಸ್ತಕ ಎರವಲು ಸೇವೆಯಲ್ಲಿ ಸಾರ್ವಜನಿಕರಿಗೆ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರಿಗೆ ಗ್ರಂಥಾಲಯದಲ್ಲಿ ದಿನಪತ್ರಿಕೆ, ನಿಯತಕಾಲಿಕೆ ಸೇವೆ ಹಾಗೂ ಪರಾಮರ್ಶನ ಸೇವೆ ಇರಲಿದೆ ಎಂದು ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಖಿಲ ಭಾರತೀಯ ಗ್ರಾಹಕ ಪಂಚಾಯತ್‌ಗೆ ನೇಮಕ



ಮೈಸೂರು, ಜೂ. 7– ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ನಗರ ಸಂಘಟನಾ ಕಾರ್ಯದರ್ಶಿಯಾಗಿ ಕೆಎಂಸಿಕೆ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷರು ಮತ್ತು ಮೈಸೂರು ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಂ ಅಯ್ಯಂ ಗಾರ್ ನೇಮಕ ಮಾಡಿ ಅಖಿಲ ಭಾರತೀಯ ಗ್ರಾಹಕ ಪಂಚಾ ಯತ್‌ನ ಕರ್ನಾಟಕ ಪ್ರಾಂತದ ಅಧ್ಯಕ್ಷ ರಾವ್ ಕಿಣಿ ಆದೇಶ ಹೊರಡಿಸಿದ್ದಾರೆ.

# ಹಳೆ ಮೈಸೂರು ಭಾಗದಲ್ಲಿ ಬಿಜೆಪಿ ಬೇರು ಇನ್ನೂ ಗಟ್ಟಿಗೊಳ್ಳಬೇಕಿದೆ

## ● ಬಿಜೆಪಿ ರಾಜ್ಯ ಉಪಾಧ್ಯಕ್ಷ ವಿಜಯೇಂದ್ರ ಅಭಿಮತ ● ಬಿಎಸ್‌ವೈ ಮತ್ತೆ ಬಿಜೆಪಿ ಅಧಿಕಾರಕ್ಕೆ ತರುವ ಸವಾಲು ಹಾಕಿದ್ದಾರೆ



ಮೈಸೂರು, ಜೂ.7(ಎಸ್‌ಬಿಡಿ)– ವಿಧಾನ ಪರಿಷತ್ ಸೇರಿದಂತೆ ಮುಂಬರುವ ಎಲ್ಲಾ ಚುನಾವಣೆಯಲ್ಲಿ ಬಿಜೆಪಿ ಗೆಲ್ಲುವ ನಿಟ್ಟಿನಲ್ಲಿ ಹಳೆ ಮೈಸೂರು ಭಾಗದಲ್ಲಿ ಬೇರು ಇನ್ನೂ ಗಟ್ಟಿಯಾಗಬೇಕಿದೆ ಎಂದು ಪಕ್ಷದ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಮೈಸೂರಿನಲ್ಲಿ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ದಕ್ಷಿಣ ಪದವೀಧರ ಕ್ಷೇತ್ರದ ಅಭ್ಯರ್ಥಿ ಎಂ.ವಿ.ರವಿಶಂಕರ್ ಪರ ಮತಯಾಚಿಸಿ ಮಾತನಾಡಿದ ಅವರು, ಪಂಚಾಯ್ತಿಯಿಂದ ಪಾರ್ಲಿಮೆಂಟ್‌ವರೆಗೂ ಬಿಜೆಪಿ ಸದೃಢವಾಗಬೇಕು ಎನ್ನುವುದು ಪ್ರಧಾನಿ ಮೋದಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಡ್ಡಾ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಆಶಯವಾಗಿದೆ. ಪ್ರಧಾನಿ ಮೋದಿಯವರು, ಹಿಂದಿನ ಸಿಎಂ ಬಿ.ಎಸ್.ಯಡಿಯೂರಪ್ಪನವರು ಹಾಗೂ ಹಾಲಿ ಸಿಎಂ ಬಸವರಾಜ ಬೊಮ್ಮಾಯಿ ಅವರ ಕಾರ್ಯಕ್ರಮಗಳ ಆಧಾರದಲ್ಲಿ ಮುಂದಿನ ಎಲ್ಲಾ ಚುನಾವಣೆ ಗೆಲ್ಲಬೇಕಿದೆ ಎಂದರು.

ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ಕ್ಷೇತ್ರ ಉಪಚುನಾವಣೆ ಹೊಡೆತದ ಬೆನ್ನಲ್ಲೇ ಶಿರಾದಲ್ಲಿ ಬಿಜೆಪಿ ಗೆಲುವು ದಾಖಲಿಸುವ ಮೂಲಕ ಪ್ರತಿಪಕ್ಷಗಳಿಗೆ ಮರ್ಮಾಘಾತವಾಗಿದೆ. ಈ ಭಾಗದ ಮುಖಂಡರು, ಕಾರ್ಯಕರ್ತರು ಪಕ್ಷದ ಬೇರನ್ನು ಮತ್ತಷ್ಟು ಗಟ್ಟಿಗೊಳಿಸಬೇಕು. ಸಮಾಜದ ಮುಖಂಡರು ಸಾಮಾನ್ಯರಲ್ಲ. ನೂರಲ್ಲ, ಸಾವಿರಾರು ಮತಗಳನ್ನು ಪರಿವರ್ತನೆ ಮಾಡುವ ಶಕ್ತಿ ಇದೆ. ಹಿರಿಯರಾದ ವಿ.ಸೋಮಣ್ಣ ಹಾಗೂ ನಾನು ಒಟ್ಟಿಗೆ ಚುನಾವಣೆಯಲ್ಲಿ ಕೆಲಸ ಮಾಡಲು ಬಂದಿದ್ದೇವೆ. ನೀವೆಲ್ಲಾ ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಎಂ.ವಿ.ರವಿಶಂಕರ್ ಅವರನ್ನು ಗೆಲ್ಲಿಸಿಕೊಡಬೇಕೆಂದು ಮನವಿ ಮಾಡಿದರು.

**ಇದು ಮಹತ್ವದ ಚುನಾವಣೆ:** ಯಾರಾದರೂ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರೆ ಮನೆಗೆ ಹೋಗಿ ಮಲಗುತ್ತಾರೆ. ಅಂತಹವರನ್ನು ಜನರೂ ಬೇಗ ಮರೆಯುತ್ತಾರೆ. ಆದರೆ ಬಿ.ಎಸ್.ಯಡಿಯೂರಪ್ಪನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಸಂದರ್ಭದಲ್ಲಿ ಮುಂದಿನ ಚುನಾವಣೆಯಲ್ಲಿ ಮತ್ತೆ ಬಿಜೆಪಿಯನ್ನು ಅಧಿಕಾರಕ್ಕೆ ತರುವ ಸವಾಲು ಹಾಕಿದರು. ಬಿಎಸ್‌ವೈ ಅವರ ಸವಾಲಿನ ಪರಿಣಾಮ ವಿಪಕ್ಷದವರಿಗೆ ಚೆನ್ನಾಗಿ ತಿಳಿದಿದೆ. ಈ ಸಂದರ್ಭದಲ್ಲಿ ನಾವೆಲ್ಲಾ ಜಾಗೃತರಾಗಿ ಬಿಎಸ್‌ವೈ ಅವರ ಸವಾಲಿಗೆ ಅನುಗುಣವಾಗಿ ಈ ಮಹತ್ವದ ಚುನಾವಣೆಯಲ್ಲಿ ರವಿಶಂಕರ್ ಅವರನ್ನು ಗೆಲ್ಲಿಸೋಣ ಎಂದು ಸಭಿಕರಲ್ಲಿ ಉತ್ಸಾಹ ತುಂಬಿದರು.

**ಜನನಾಯಕ ಬಿಎಸ್‌ವೈ:** ಎರಡು ರೀತಿಯ ರಾಜಕಾರಣಿಗಳಿದ್ದಾರೆ. ಶಾಸಕ, ಸಚಿವನಾಗಿ ಅಧಿಕಾರ ಅನುಭವಿಸಬೇಕೆನ್ನುವವರು ಒಂದು ವರ್ಗ. ಇದೆಲ್ಲವನ್ನೂ ಮೀರಿ ಜನ ಸೇವೆಗೆ ಆದ್ಯತೆ ನೀಡುವ ಮತ್ತೊಂದು ವರ್ಗ. ಅಂತಹವರು ಜನನಾಯಕರೆನಿಸಿಕೊಳ್ಳುತ್ತಾರೆ. ಜನರ ಆಶೀರ್ವಾದ, ಲಕ್ಷಾಂತರ ಕಾರ್ಯಕರ್ತರು, ಮುಖಂಡರ ಪರಿಶ್ರಮ, ಎಲ್ಲಾ ಸಮುದಾಯದ ಶ್ರೀಗಳ ಆಶೀರ್ವಾದದಿಂದ 4 ಬಾರಿ ಮುಖ್ಯಮಂತ್ರಿಯಾಗಿ ಸಾಕಷ್ಟು ಯೋಜನೆಗಳನ್ನು ನೀಡಿದ್ದಾರೆ. ರಾಜಕೀಯದಲ್ಲಿ ಹಂತ ಹಂತವಾಗಿ ಬೆಳೆದು ರೈತರು, ದಲಿತರು ಸೇರಿದಂತೆ ಎಲ್ಲಾ ವರ್ಗದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ಬಿ.ಎಸ್.ಯಡಿಯೂರಪ್ಪ ನವರನ್ನು ಮಾತ್ರ ಜನನಾಯಕರೆಂದು ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.

**ದಿಟ್ಟ ನಾಯಕತ್ವ:** ಪ್ರಧಾನಿ ಮೋದಿ ಅವರ ದಿಟ್ಟ ನಾಯಕತ್ವದಿಂದ ವಿಶ್ವದಲ್ಲಿ ಭಾರತದ ಗೌರವ ಹೆಚ್ಚಿದೆ. 8 ವರ್ಷಗಳಿಂದ ಒಂದು ದಿನವೂ ವಿಶ್ರಮಿಸದೆ ದೇಶದ ಆರ್ಥಿಕತೆ, ಸದೃಢತೆ, ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದ್ದಾರೆ. ಯುದ್ಧ ಉಪಕರಣಗಳನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸಿ, 45–50 ಸಾವಿರ ಕೋಟಿ ರೂ. ಮೌಲ್ಯದ ಉಪಕರಣಗಳನ್ನು ರಫ್ತು ಮಾಡುವಷ್ಟು ದೇಶ ಬಲಿಷ್ಠವಾಗಿದೆ. ಹಲವು ದೇಶಗಳು ವಿವಿಧ ಕಾರಣ, ಸಮಸ್ಯೆಗಳಿಂದ ಕಂಗಾಲಾಗಿರುವ ಸಂದರ್ಭದಲ್ಲಿ ಭಾರತ ಸಮರ್ಥವಾಗಿದೆ. ಮುಂದಿನ 50 ವರ್ಷಗಳ ದೃಷ್ಟಿಕೋನದಲ್ಲಿ ಯೋಜನೆ ರೂಪಿಸಿ, ಆಡಳಿತ ನಡೆಸುತ್ತಿದ್ದಾರೆ ಎಂದು ಬಣ್ಣಿಸಿದರು.

> **ಜೋಡೆತ್ತಿನ ಹೋರಾಟಕ್ಕೆ ವೇದಿಕೆ**
> ಹಿರಿಯರಾದ ಸೋಮಣ್ಣ ಹಾಗೂ ಬಿ.ವೈ.ವಿಜಯೇಂದ್ರ ಕೈ ಜೋಡಿಸಿ ಕೆಲಸ ಮಾಡಿದರೆ ಮೈಸೂರು–ಚಾಮರಾಜನಗರ ಜಿಲ್ಲೆಯ ಒಟ್ಟು 15 ವಿಧಾನಸಭಾ ಕ್ಷೇತ್ರಗಳಲ್ಲಿ 10ಕ್ಕಿಂತ ಹೆಚ್ಚು ಸ್ಥಾನ ಗೆಲ್ಲುತ್ತೇವೆ. ಈ ಜೋಡೆತ್ತಿನ ಹೋರಾಟಕ್ಕೆ ಎಂ.ವಿ.ರವಿಶಂಕರ್ ಪರ ಮತಯಾಚನೆ ವೇದಿಕೆಯಾಗಿದೆ. ಕಳೆದ ಚುನಾವಣೆಯಲ್ಲಿ ಎಂ.ವಿ.ರವಿಶಂಕರ್‌ಗೆ ಮತ ಹಾಕಿದ್ದವರು, ಮತ್ತೋರ್ವ ಅಭ್ಯರ್ಥಿ ಕೆ.ಎಸ್.ಭಗವಾನ್ ಹೆಸರಿನ ಮುಂದೆ ಏನೇನೋ ಬರೆದಿದ್ದರು. ಈ ರೀತಿಯ ಕಾರಣದಿಂದ 3 ಸಾವಿರಕ್ಕೂ ಹೆಚ್ಚು ಮತಗಳು ಮೌಲ್ಯ ಕಳೆದುಕೊಂಡಿದ್ದರಿಂದ 183 ಮತಗಳಿಂದ ರವಿಶಂಕರ್ ಸೋತರು. ಸೋಮಣ್ಣ ಹಾಗೂ ವಿಜಯೇಂದ್ರ ಅವರಿಗಾಗಿ ಈ ಪ್ರಮಾಣದಲ್ಲಿ ಸೇರಿರುವ ನೀವು, ಎಂ.ವಿ.ರವಿಶಂಕರ್ ಅವರನ್ನೂ ಪ್ರೀತಿ, ವಿಶ್ವಾಸದಿಂದ ಗೆಲ್ಲಿಸಬೇಕೆಂದು ವಿನಮ್ರವಾಗಿ ಕೇಳುತ್ತೇನೆ.
> -ಸಂಸದ ಪ್ರತಾಪ್ ಸಿಂಹ

# ಶಿಕ್ಷಣದ ಪರವಾಗಿ ಇರುವ ಪಕ್ಷ ಬಿಜೆಪಿ

## ● ಅತಿಥಿ ಉಪನ್ಯಾಸಕರೊಂದಿಗೆ ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವಥ್ ನಾರಾಯಣ್ ಸಂವಾದ ● 4 ಕೋಟಿ ರೂ. ವೆಚ್ಚದಲ್ಲಿ ವಿವಿಗಳಲ್ಲೇ ಅಂಕಪಟ್ಟಿ ಸಿದ್ಧಪಡಿಸುವ ವ್ಯವಸ್ಥೆ ● ಆಯಾ ಕಾಲೇಜುಗಳಲ್ಲಿ ಮೌಲ್ಯ ಮಾಪನ ಮಾಡುವ ಅವಕಾಶ ● ಈಗ ಹೆಚ್ಚು ಮಾತನಾಡಿದರೆ ಇನ್ನೂ 4 ಕೇಸು ಹೆಚ್ಚಾಗುತ್ತೆ



ಮೈಸೂರು,ಜೂ. 7(ಜಿಎ)– ಶಿಕ್ಷಣದ ಪರವಾಗಿ ಇರುವ ಪಕ್ಷ ಬಿಜೆಪಿ. ಶಿಕ್ಷಣದಿಂದ ಮಾತ್ರ ಬದಲಾವಣೆ ಸಾಧ್ಯ ಎಂದು ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವಥ್ ನಾರಾಯಣ್ ಇಂದಿಲ್ಲಿ ತಿಳಿಸಿದರು.

ದಕ್ಷಿಣ ಪದವೀಧರ ಕ್ಷೇತ್ರ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮೈ.ವಿ.ರವಿಶಂಕರ್ ಪರ ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವಥ್ ನಾರಾಯಣ ಅವರು ಮಂಗಳವಾರ ಅತಿಥಿ ಉಪನ್ಯಾಸಕರೊಂದಿಗೆ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಮತಯಾಚಿಸಿ ಮಾತನಾಡಿದರು.

ಸರ್ಕಾರವು ಈಗಾಗಲೇ 11,500 ಅತಿಥಿ ಉಪನ್ಯಾಸಕರ ಸಮಸ್ಯೆಯನ್ನು ಬಗೆಹರಿಸಲಾಗಿದೆ ಹಾಗೂ ವೇತನವನ್ನು ಎರಡು ಪಟ್ಟು ಹೆಚ್ಚಿಸಲಾಗಿದೆ ಜೊತೆಗೆ ಅತಿಥಿ ಉಪನ್ಯಾಸಕರಿಗೆ ಈಗ ಸೂಕ್ತ ಕಾರ್ಯಭಾರದ ಅಧಿಕಾರವಿದ್ದು, ನಿಮ್ಮ ಇಚ್ಛೆಯ ಕಾಲೇಜನ್ನೇ ಆಯ್ಕೆ ಮಾಡಿಕೊಳ್ಳುವ ಅವಕಾಶ ಕೊಡಲಾಗಿದೆ ಎಂದು ಅವರು ನುಡಿದರು.


ನಾಲ್ಕು ಕೋಟಿ ರೂ. ವೆಚ್ಚದೊಂದಿಗೆ ವಿ.ವಿ.ಗಳಲ್ಲೇ ಅಂಕಪಟ್ಟಿ ಸಿದ್ಧಪಡಿಸುವ ವ್ಯವಸ್ಥೆ ಕಲ್ಪಿಸಲಾಗಿದೆ. ಮುಂದಿನ ದಿನಗಳಲ್ಲಿ ಆಯಾ ಕಾಲೇಜಿನಲ್ಲಿಯೇ ಪರೀಕ್ಷಾ ಮೌಲ್ಯ ಮಾಪನ ಮಾಡುವ ವ್ಯವಸ್ಥೆ ಮಾಡುತ್ತೇವೆ. ಏಕೆಂದರೆ ಇದರ ಮುಖ್ಯ ಉದ್ದೇಶವೇ ಹಣ ಉಳಿಸುವುದಾಗಿದೆ ಎಂದು ಸಚಿವರು ಹೇಳಿದರು.

ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಕಳೆದ 75 ವರ್ಷಗಳಿಂದ ವರ್ಗಾವಣೆಯೇ ಆಗಿರಲಿಲ್ಲ ಮತ್ತು 30 ವರ್ಷಗಳಲ್ಲಿ ಬಡ್ತಿಯನ್ನು ಸಹ ನೀಡಿರಲಿಲ್ಲ. ನಮ್ಮ ಸರ್ಕಾರ ಅದನ್ನು ಮಾಡಿದೆ. ಈ ವರ್ಗಾವಣೆ ಮತ್ತು ಬಡ್ತಿ ವಿಭಾಗದಲ್ಲಿ ನನ್ನ ಹಾಗೂ ಮುಖ್ಯ ಮಂತ್ರಿಗಳ ಯಾವುದೇ ಅಭ್ಯರ್ಥಿಗಳು ಇಲ್ಲ, ಯಾರಿಗೂ ಶಿಫಾರಸ್ಸು ಮಾಡಿಲ್ಲ ಎಂದ ಅವರು, ಚುನಾವಣೆ ನೀತಿ ಸಂಹಿತೆ ಇರುವುದರಿಂದ ಹೆಚ್ಚು ಮಾತನಾಡುವುದಿಲ್ಲ. ಮಾತನಾಡಿದರೆ ಮತ್ತೇ ನಾಲ್ಕು ಕೇಸ್ ಹೆಚ್ಚಾಗುತ್ತದೆ ಎಂದು ತಮಾಷೆಯಾಗಿ ಹೇಳಿದರು. ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಹನುಮಂತೇಶ್, ಲಿಂಗರಾಜು, ಪವಿತ್ರ ವಿನಯ್, ಜಯಪ್ರಕಾಶ್, ಹೇಮಾ ನಂದೀಶ್, ಜ್ಞಾನಪ್ರಕಾಶ್ ಉಪಸ್ಥಿತರಿದ್ದರು.

ನಂತರ ಕುವೆಂಪುನಗರದಲ್ಲಿರುವ ಬಾಸುದೇವ ಸೋಮಾನಿ ಕಾಲೇಜಿಗೆ ಭೇಟಿ ನೀಡಿ ಮೈ.ವಿ.ರವಿಶಂಕರ್ ಪರ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಂದಿನ ದಿನದಲ್ಲಿ ಕೌಶಲ್ಯಕ್ಕೆ ಹೆಚ್ಚು ಪ್ರಾಮುಖ್ಯತೆ ಇದ್ದು, ಕೌಶಲ್ಯದ ಬಗ್ಗೆ ಹೆಚ್ಚು ಒತ್ತು ನೀಡಿ. ಏಕೆಂದರೆ ನೀವುಗಳು ಉತ್ತಮ ಪ್ರತಿಭೆಗಳನ್ನು ಗುರುತಿಸುವವರು ಎಂದರು.

ಭಾರತದಲ್ಲಿ ಕುಟುಂಬ ರಾಜಕಾರಣವಿಲ್ಲದ ಏಕೈಕ ಪಕ್ಷ ಎಂದರೆ ಅದು ಬಿಜೆಪಿ ಪಕ್ಷವಾಗಿದ್ದು, ಉತ್ತಮ ಕೆಲಸಗಳನ್ನು ಮಾಡುತ್ತಿದೆ. ಆದರಿಂದ ದಕ್ಷಿಣ ಪದವೀಧರರ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿರುವ ಮೈ.ವಿ. ರವಿಶಂಕರ್ ಅವರಿಗೆ ತಮ್ಮ ಮೊದಲ ಪ್ರಾಶಸ್ತ್ಯ ಮತ ನೀಡಿ ಎಂದು ಮತಯಾಚನೆ ಮಾಡಿದರು. ಅವರಿಗೆ ಸ್ಥಳೀಯ ಬಿಜೆಪಿ ಮುಂಡರು ಸಾಥ್ ನೀಡಿದರು.

# ಒಡಿಶಾ: ಅಗ್ನಿ–4 ಕ್ಷಿಪಣಿ ಪರೀಕ್ಷೆ ಯಶಸ್ವಿ



ಒಡಿಶಾ, ಜೂ.7– ಭಾರತ ಜೂ. 7ರಂದು ಒಡಿಶಾದಿಂದ ಅಗ್ನಿ–4 ಕ್ಷಿಪಣಿ ಪರೀಕ್ಷೆಯನ್ನು ಯಶಸ್ವಿಗೊಳಿಸಿದೆ. ಮಧ್ಯಂತರ ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿಯ ಈ ಪರೀಕ್ಷೆ ಯಶಸ್ವಿಯಾಗಿರುವುದರಿಂದ ದೇಶದ ಸೇನಾ ಸಾಮರ್ಥ್ಯ ವೃದ್ಧಿಸಿದೆ. ರಕ್ಷಣಾ ಸಚಿವಾಲಯ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿದ್ದು, "ಸಂಜೆ 7.30ಕ್ಕೆ ಅಗ್ನಿ–4 ಕ್ಷಿಪಣಿ ಪರೀಕ್ಷೆ ಯಶಸ್ವಿಯಾಗಿದ್ದು ಮಿನಿಮಮ್ ಡೆಟರೆನ್ಸ್ ಸಾಮರ್ಥ್ಯವನ್ನು ಹೊಂದಿದೆ" ಹೇಳಿದೆ. ಪರೀಕ್ಷೆ ಯಶಸ್ವಿಯಾಗಿರುವುದು ಕಾರ್ಯಾಚರಣೆಯ ಎಲ್ಲಾ ನಿಯತಾಂಕಗಳನ್ನು ಮೌಲ್ಯೀಕರಿಸಿದ್ದು, ಸೇನೆಯ ಸಾಮರ್ಥ್ಯ ವೃದ್ಧಿಸಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

# ರಂಗಾಯಣಕ್ಕೆ ಕನ್ನಡ, ಸಂಸ್ಕೃತಿ ಇಲಾಖೆ ಸಚಿವರ ಭೇಟಿ

## ಕಲಾವಿದರೊಂದಿಗೆ ಚರ್ಚೆ, ಕಾರ್ಯಚಟುವಟಿಕೆಗಳ ಬಗ್ಗೆ ಮೆಚ್ಚುಗೆ



**ಮೈಸೂರಿನ ರಂಗಾಯಣಕ್ಕೆ ಕನ್ನಡ ಮತ್ತು ಸಂಸ್ಕೃತಿ ಸಚಿವ ಸುನೀಲ್‌ಕುಮಾರ್ ಮಂಗಳವಾರ ಸೌಹಾರ್ದಯುತ ಭೇಟಿ ನೀಡಿ ಕಲಾವಿದರೊಂದಿಗೆ ಕುಶಲೋಪರಿ ವಿಚಾರಿಸಿದರು. ಚಿತ್ರದಲ್ಲಿ ರಂಗಾಯಣದ ನಿರ್ದೇಶಕ ಅಡ್ಡಂಡ ಕಾರ್ಯಪ್ಪ ಹಾಗೂ ಇನ್ನಿತರರನ್ನು ಕಾಣಬಹುದು.**

ಮೈಸೂರು, ಜೂ.7(ಎಂಟಿವೈ)– ಮೈಸೂರಿನ ರಂಗಾಯಣಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಸುನೀಲ್ ಕುಮಾರ್ ಅವರು ಮಂಗಳವಾರ ಸೌಹಾರ್ದಯುತ ಭೇಟಿ ನೀಡಿ ಕಲಾವಿದರೊಂದಿಗೆ ಚರ್ಚಿಸಿ ಕುಶಲೋಪರಿ ವಿಚಾರಿಸಿದರು.

ದಕ್ಷಿಣ ಪದವೀಧರ ಕ್ಷೇತ್ರ ಚುನಾವಣೆ ಹಿನ್ನೆಲೆಯಲ್ಲಿ ಮೈಸೂರಿಗೆ ಆಗಮಿಸಿದ್ದ ಸಚಿವ ಸುನೀಲ್‌ಕುಮಾರ್ ರಂಗಾಯಣಕ್ಕೆ ಮಧ್ಯಾಹ್ನ ಭೇಟಿ ನೀಡಿ, ರಂಗಾಯಣದ ವತಿಯಿಂದ ನಡೆದಿರುವ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ಪಡೆದರು. ಇದೇ ವೇಳೆ ಬಿ.ವಿ.ಕಾರಂತ ಸಭಾಂಗಣದಲ್ಲಿ ರಂಗಾಯಣದ ಕಲಾವಿದರೊಂದಿಗೆ ಅನೌಪಚಾರಿಕ ಸಭೆ ನಡೆಸಿ ಕುಶಲೋಪರಿ ವಿಚಾರಿಸಿದರು. ಅಲ್ಲದೆ, ರಂಗಭೂಮಿ ಕ್ಷೇತ್ರ ಹಾಗೂ ಪಾಲ್ಗೊಂಡಿರುವ ರಂಗ ಚಟುವಟಿಕೆ ಬಗ್ಗೆ ಮಾಹಿತಿ ಪಡೆದು ಶುಭ ಕೋರಿದರು.

ಬಳಿಕ ರಂಗಾಯಣ ನಿರ್ದೇಶಕ ಅಡ್ಡಂಡ ಕಾರ್ಯಪ್ಪ ಅವರ ಕೊಠಡಿಗೆ ತೆರಳಿ ರಂಗಾಯಣದ ವತಿಯಿಂದ ಈ ಹಿಂದೆ ನಡೆಸಿರುವ ನಾಟಕೋತ್ಸವ, ಶಿಬಿರಗಳು, ವಿವಿಧ ಕಾರ್ಯಕ್ರಮಗಳ ಪಟ್ಟಿ ಪಡೆದು ಶ್ಲಾಘಿಸಿದರು. ಬಳಿಕ ಪದವೀಧರರ ಚುನಾವಣೆಯ ಪ್ರಚಾರಕ್ಕೆಂದು ತೆರಳಿದರು. ಈ ಸಂದರ್ಭದಲ್ಲಿ ರಂಗಾಯಣದ ನಿರ್ದೇಶಕ ಅಡ್ಡಂಡ ಕಾರ್ಯಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಹೆಚ್.ಚನ್ನಪ್ಪ, ಬಿಜೆಪಿ ಯುವ ಬಿಜೆಪಿ ಯುವ ಮುಖಂಡ ಪ್ರತಾಪ್ ಜಿ.ದೇವನೂರು, ವಸಂತ್ ಕುಮಾರ್ ಹಾಗೂ ಇನ್ನಿತರರು ಇದ್ದರು.

**ಇದೊಂದು ಸೌಹಾರ್ದ ಭೇಟಿ:** ಇದೇ ವೇಳೆ ರಂಗಾಯಣದ ನಿರ್ದೇಶಕ ಅಡ್ಡಂಡ ಕಾರ್ಯಪ್ಪ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಸುನೀಲ್ ಕುಮಾರ್ ಅವರಿಗೆ ಈ ಹಿಂದೆ ಮೈಸೂರಿಗೆ ಬಂದಾಗ ರಂಗಾಯಣಕ್ಕೆ ಭೇಟಿ ನೀಡುವಂತೆ ಕೋರಿದ್ದೆ. ನನ್ನ ಮನವಿಗೆ ಓಗೊಟ್ಟು ಇಂದು ಸೌಹಾರ್ದಯುತವಾಗಿ ಭೇಟಿ ನೀಡಿದ್ದರು. ಕಲಾವಿದರೊಂದಿಗೆ ಕುಶಲೋಪರಿ ವಿಚಾರಿಸಿದರು. ಚುನಾವಣೆಯ ನೀತಿ ಸಂಹಿತೆ ಮುಗಿದ ನಂತರ ಮತ್ತೆ ರಂಗಾಯಣಕ್ಕೆ ಬಂದು ಇಲಾಖೆ ವತಿಯಿಂದ ನೀಡುವ ನೆರವನ್ನು ಪ್ರಕಟಿಸುವುದಾಗಿ ವೈಯಕ್ತಿಕವಾಗಿ ಹೇಳಿ ಹೋದರು ಎಂದು ತಿಳಿಸಿದರು.

# ಮೈಸೂರಲ್ಲಿ ರಾಜ್ಯ ಯುವ ನೀತಿ ಕುರಿತ ಕಾರ್ಯಾಗಾರ

## ಕರಡು ಪ್ರತಿ ಅಂತಿಮಗೊಳಿಸಲು ಅಧಿಕಾರಿಗಳು, ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳಿಂದ ಅಭಿಪ್ರಾಯ ಸಂಗ್ರಹ



ಮೈಸೂರು, ಜೂ.7(ಆರ್‌ಕೆ)– ಮೈಸೂರಿನ ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ 'ಕರ್ನಾಟಕ ರಾಜ್ಯ ಯುವ ನೀತಿ–2022' (ಕರಡು) ಅನ್ನು ಅಂತಿಮಗೊಳಿಸಲು ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘ–ಸಂಸ್ಥೆಗಳ ಪ್ರತಿನಿಧಿಗಳಿಂದ ಅಭಿಪ್ರಾಯ ಸಂಗ್ರಹಿಸಲಾಯಿತು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯೂನಿಸೆಫ್ ಹಾಗೂ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಕಾರ್ಯಾಗಾರವನ್ನು ಮೈಸೂರು ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್ ಅವರು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

ರಾಜ್ಯ ಯುವ ನೀತಿ ಕರಡು ರಚನೆ ಸಮಿತಿ ಅಧ್ಯಕ್ಷರಾದ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥಾಪಕ ಡಾ. ಆರ್.ಬಾಲಸುಬ್ರಹ್ಮಣ್ಯಂ ಅವರ ನೇತೃತ್ವದ ಸಮಿತಿ ಸಿದ್ಧಪಡಿಸಿರುವ ಕರಡು ಪ್ರತಿಗೆ ಇಂದು ಸಂಜೆವರೆಗೂ ನಡೆದ ಕಾರ್ಯಾಗಾರದಲ್ಲಿ ಸಲಹೆ, ಅಭಿಪ್ರಾಯಗಳನ್ನು ಸಲ್ಲಿಸಲಾಯಿತು. ಜೂನ್ 10 ರಂದು ಗುಲ್ಬರ್ಗಾದಲ್ಲಿ ನಡೆಯಲಿರುವ ಸಭೆಯಲ್ಲಿ ಅಂತಿಮಗೊಳಿಸಿ ಜೂನ್ 20ರೊಳಗಾಗಿ ರಾಜ್ಯ ಯುವ ನೀತಿ ಕರಡು ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಡಾ. ಬಾಲಸುಬ್ರಹ್ಮಣ್ಯಂ ತಿಳಿಸಿದರು.

ಈ ಸಂದರ್ಭ ಮಾತನಾಡಿದ ಅವರು, ಯುವ ನೀತಿ–2022ಕ್ಕೆ ಕರಡು ತಯಾರಿಸಲು ತಮಗೆ ಜವಾಬ್ದಾರಿ ನೀಡಿದ ಸರ್ಕಾರ, ಸಮಿತಿಗೆ ಉತ್ತಮ ಜ್ಞಾನವುಳ್ಳ ತಜ್ಞರನ್ನು ಸದಸ್ಯರನ್ನಾಗಿ ನೇಮಿಸಿದ್ದರಿಂದ ನಾವು, ರಾಜ್ಯದಾದ್ಯಂತ ಯುವ ಸಮೂಹ ಸೇರಿದಂತೆ ಎಲ್ಲ ಕ್ಷೇತ್ರಗಳ ಜನರಿಂದ ಅಭಿಪ್ರಾಯ, ಸಲಹೆ, ಬೇಡಿಕೆ, ಅಪೇಕ್ಷೆಗಳನ್ನು ಆನ್‌ಲೈನ್‌ನಲ್ಲಿ ಪಡೆದು ಕರಡು ಪ್ರತಿ ತಯಾರಿಸಿದ್ದೇವೆ ಎಂದರು.

ಯುವಕರಿಗೆ ಅಗತ್ಯವಿರುವ ಸೌಲಭ್ಯ, ಗ್ರಾಮೀಣ ಭಾಗದ ಆರ್ಥಿಕ ಸಬಲೀಕರಣ, ಕ್ರೀಡೆ, ಸುಸ್ಥಿರ ಅಭಿವೃದ್ಧಿ, ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ರಾಷ್ಟ್ರೀಯ ಯುವ ನೀತಿಯನ್ನು ಗಮನದಲ್ಲಿರಿಸಿಕೊಂಡು ಒಟ್ಟಾರೆ ಯುವಕರ ಸಮಗ್ರ ಅಭಿವೃದ್ಧಿಗೆ ಬೇಕಾದ ಅಂಶಗಳನ್ನು ಕ್ರೋಢೀಕರಿಸಿ ಶಿಫಾರಸ್ಸಿನೊಂದಿಗೆ ರಾಜ್ಯ ಯುವ ನೀತಿ ತಯಾರಿಸಿದ್ದೇವೆ ಎಂದರು.

ರಾಜ್ಯ ಬಜೆಟ್‌ನಲ್ಲಿ ಪ್ರತ್ಯೇಕ ಯುವ ಬಜೆಟ್ ಆಗಬೇಕು. ಸಲಹಾ ಸಮಿತಿ ರಚನೆ, ಯೂತ್ ಡೆವಲಪ್‌ಮೆಂಟ್ ಇಂಡೆಕ್ಸ್ ಅಗತ್ಯವಿದೆ. ಯುವ ನೀತಿಯನ್ನು ಗರಿಷ್ಠ ಪ್ರಮಾಣದಲ್ಲಿ ಅನುಷ್ಠಾನಗೊಳಿಸುವ ಬಗ್ಗೆಯೂ ಸಮಿತಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಿದೆ ಎಂದು ಡಾ. ಬಾಲಸುಬ್ರಹ್ಮಣ್ಯಂ ಅವರು ತಿಳಿಸಿದರು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್ ಅವರು, ಯುವಕರ ಮನಸ್ಸಿನ ಅಂತರ್ಯದಲ್ಲಿ ಹುದುಗಿರುವ ಚೈತನ್ಯವನ್ನು ಹೊರತರಲು ಆಧ್ಯಾತ್ಮಿಕ, ಧ್ಯಾನ, ಯೋಗದಂತಹ ಅಂಶಗಳಿಗೆ ಒತ್ತು ನೀಡಬೇಕೆಂಬುದನ್ನು ರಾಜ್ಯ ಯುವ ನೀತಿಯಲ್ಲಿ ಸೇರಿಸಬೇಕು ಎಂದು ಸಲಹೆ ನೀಡಿದರು.

ಸರ್ವ ಜನರ ಹಿತ ಬಯಸುವುದು, ಸಮನ್ವಯತೆ, ಮಾನಸಿಕ ಜ್ಞಾನ, ಮೆಡಿಟೇಟಿವ್ ಅಪ್ರೋಚ್‌ಗಳ ಬಗ್ಗೆ ಜಾಗೃತಗೊಳಿಸಿದಾಗ ಮಾತ್ರ ಅದರ ಶಕ್ತಿ, ಪರಿಶುದ್ಧತೆ, ಆತ್ಮವಿಶ್ವಾಸ ಮೂಡುತ್ತದೆ. ಯುವಕರಿಗೆ ಯೋಗ, ಧ್ಯಾನ ಹೇಳಿಕೊಡಬೇಕು. ಹೊರ ದೇಶದವರೇ ಇಲ್ಲಿ ಬಂದು ಯೋಗ, ಧ್ಯಾನ ಮಾಡುತ್ತಿರುವಾಗ ನಮ್ಮವರಿಗೆ ಆಧ್ಯಾತ್ಮಿಕ ಮತ್ತು ಸಂಸ್ಕೃತಿಯ ಬಗ್ಗೆ ಮನನ ಮಾಡಿಕೊಡುವುದು ಅತ್ಯವಶ್ಯಕವಾಗಿರುವುದರಿಂದ ಯುವ ನೀತಿಯಲ್ಲಿ ಈ ಅಂಶಗಳನ್ನು ಸೇರಿಸುವುದು ಸೂಕ್ತ ಎಂದು ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್ ಅವರು ಇದೇ ವೇಳೆ ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಅಡಿಷನಲ್ ಡಿಸಿ ಡಾ. ಬಿ.ಎಸ್.ಮಂಜುನಾಥಸ್ವಾಮಿ, ಸಹಾಯಕ ಪ್ರಾದೇಶಿಕ ಆಯುಕ್ತ ಶಿವರಾಜ್, ಯೂನಿಸೆಫ್ ರಾಜ್ಯ ಮುಖ್ಯಸ್ಥ ಮುರಳಿಕೃಷ್ಣನ್, ನೆಹರು ಯುವ ಕೇಂದ್ರದ ಎಂ.ಎನ್.ನಟರಾಜ್, ಕ್ರೀಡಾ ಇಲಾಖೆ ಜಂಟಿ ನಿರ್ದೇಶಕ ಕೆ.ಎಲ್.ಸುಭಾಷ್, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಡಾ. ಜಿ.ಎಸ್. ಕುಮಾರ್ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಕೆ.ಸುರೇಶ್ ಸ್ವಾಗತಿಸಿದರೆ, ಉಪ ನಿರ್ದೇಶಕಿ ಡಾ. ಹೆಚ್.ಪಿ. ಮಂಜುಳಾ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಹಾಕಿ ತರಬೇತುದಾರ ಆರ್.ಸುಂದರೇಶ ವಂದಿಸಿದರು.

*Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com*

ಮುಂಬರುವ ಚುನಾವಣೆಯಲ್ಲಿ ಸ್ಪಷ್ಟ ಬಹುಮತದೊಂದಿಗೆ

# ಬಿಜೆಪಿ ಅಧಿಕಾರಕ್ಕೇರಲು ಜಿಲ್ಲೆಯ ಸಹಕಾರ ಅತಿಮುಖ್ಯ

## ರಾಜ್ಯ ಬಿಜೆಪಿ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಪ್ರಾಯ

ಮಂಡ್ಯ, ಜೂ.7(ಮೋಹನ್‌ರಾಜ್)– ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸ್ಪಷ್ಟ ಬಹುಮತದೊಂದಿಗೆ ರಾಜ್ಯದಲ್ಲಿ ಬಿಜೆಪಿ ಮತ್ತೊಮ್ಮೆ ಅಧಿಕಾರ ಹಿಡಿಯಬೇಕೆಂಬುದು ಯಡಿಯೂರಪ್ಪನವರ ಆಶಯ. ಇದಕ್ಕೆ ಮಂಡ್ಯ ಜಿಲ್ಲೆಯ ಸಹಕಾರ ಅತಿಮುಖ್ಯ ಎಂದು ರಾಜ್ಯ ಬಿಜೆಪಿ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಪ್ರಾಯಪಟ್ಟರು.

ನಗರದ ಅಮರಾವತಿ ಹೋಟೆಲ್‌ನಲ್ಲಿ ಮಂಗಳವಾರ ದಕ್ಷಿಣ ಪದವೀಧರರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಪರ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯ 7 ಕ್ಷೇತ್ರಗಳಲ್ಲೂ ಪಕ್ಷದ ಅಭ್ಯರ್ಥಿಗಳು ಗೆಲ್ಲುವಂತಾಗಬೇಕು. ಅದಕ್ಕೆ ಪೂರಕವಾಗಿ ಪದವೀಧರರ ಕ್ಷೇತ್ರದಲ್ಲೂ ಬಿಜೆಪಿ ಗೆಲ್ಲಬೇಕು. ಯಡಿಯೂರಪ್ಪನವರ ಜನ್ಮಭೂಮಿ, ಕರ್ಮ ಭೂಮಿ ಮಂಡ್ಯ. ನಾನು ಯಾವಾಗಲೂ ಮಂಡ್ಯಕ್ಕೆ ಬಂದಾಗ ಹೆಮ್ಮೆಯಾಗುತ್ತದೆ ಎಂದರು.

ಇನ್ನು ಕಾಂಗ್ರೆಸ್–ಜೆಡಿಎಸ್ ಪಕ್ಷಗಳ ಹಪಾಹಪಿಯಿಂದ ಮೈತ್ರಿ ಸರ್ಕಾರ ಬಂತು. ಸರ್ಕಾರದಲ್ಲಿ ಗೊಂದಲ ಸೃಷ್ಟಿಯಾದ ಕಾರಣ ಬಿಜೆಪಿ ಅಧಿಕಾರಕ್ಕೆ ಬಂತು. ಅಂದು ನಾರಾಯಣಗೌಡರ ಸ್ಥಾನದಲ್ಲಿ ನಾನಿದ್ದರೂ, ರಾಜೀನಾಮೆ ಕೊಡುತ್ತಿರಲಿಲ್ಲ. ಯಡಿಯೂರಪ್ಪ ಅವರ ಮೇಲೆ ವಿಶ್ವಾಸವಿಟ್ಟು ರಾಜೀನಾಮೆ ಕೊಟ್ಟು ಬಂದರು. ಕೆ.ಆರ್.ಪೇಟೆಯಲ್ಲಿ ಬಿಜೆಪಿ ಗೆಲ್ಲುವ ಭರವಸೆ ಯಾರಲ್ಲೂ ಇರಲಿಲ್ಲ. ಕೊನೆ ಕ್ಷಣದವರೆಗೂ ಹೋರಾಟ ಮಾಡಿದೆವು. ಜೆಡಿಎಸ್ ಭದ್ರಕೋಟೆಯಲ್ಲೂ ಕಮಲ ಅರಳಿಸಿದ್ದೇವೆ.



ಎಲ್ಲರೂ ಒಗ್ಗಟ್ಟಿನಿಂದ ಹೋರಾಡಿದರೆ ಯಶಸ್ಸು ಸಾಧ್ಯ ಎನ್ನುವುದಕ್ಕೆ ಇದೇ ಸಾಕ್ಷಿ ಎಂದರು.

ಸಚಿವ ಕೆ.ಸಿ.ನಾರಾಯಣಗೌಡ ಮಾತನಾಡಿ, ಬಿ.ಎಸ್.ವಿಜಯೇಂದ್ರ ಅವರು ಮುಂದಿನ ಸಿಎಂ ಆಗುವ ಎಲ್ಲಾ ಲಕ್ಷಣಗಳಿವೆ. ತಂದೆಗೆ ತಕ್ಕ ಮಗ ವಿಜಯೇಂದ್ರ ಅವರು ಎಂದು ಭವಿಷ್ಯ ನುಡಿದರು.

ಪದವೀಧರ ಚುನಾವಣೆಯಲ್ಲಿ ರವಿಶಂಕರ್ ಅವರನ್ನು ಗೆಲ್ಲಿಸಿದರೆ ಜಿಲ್ಲೆಯಲ್ಲಿ ನಮಗೆ ಮತ್ತಷ್ಟು ಶಕ್ತಿ ಬರುತ್ತದೆ. ಮಂಡ್ಯಕ್ಕೆ ಎರಡೂ ಪಕ್ಷದಿಂದ ದೊಡ್ಡ ಕೊಡುಗೆ ಏನು ಇಲ್ಲ. ಮಾಜಿ ಸಿಎಂ ಯಡಿಯೂರಪ್ಪನವರು ಜಿಲ್ಲೆಗೆ ಸಾಕಷ್ಟು ಕೊಡುಗೆ ಕೊಟ್ಟಿದ್ದಾರೆ ಎಂದರು.

ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಕರ್ನಾಟಕದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತಂದರು. ಅವರನ್ನು ನಂಬಿ ನಾವೆಲ್ಲ ಬಿಜೆಪಿಗೆ ಹೋಗಿದ್ದೇವೆ. ಮುಂದೆಯೂ ಬಿಎಸ್‌ವೈ ನೇತೃತ್ವದಲ್ಲಿ 150ಕ್ಕೂ ಹೆಚ್ಚು ಸ್ಥಾನ ಗೆಲ್ಲುತ್ತೇವೆ ಎಂದರು.

ಮುಂಬರುವ ದಿನಗಳಲ್ಲಿ ಹಳೇ ಮೈಸೂರು ಭಾಗದ ನೇತೃತ್ವವನ್ನು ವಿಜಯೇಂದ್ರ ವಹಿಸುತ್ತಾರೆ. ಯಡಿಯೂರಪ್ಪನವರ ಆಶಯದಂತೆ ವಿಜಯೇಂದ್ರ ಕೆಲಸ ಮಾಡುತ್ತಿದ್ದಾರೆ. ಮುಂಬರುವ ಚುನಾವಣೆಯಲ್ಲಿ ಮಂಡ್ಯದಲ್ಲಿ 5 ಸೀಟ್ ಗೆಲ್ಲಿಸಿ ಕೊಡುತ್ತೇವೆ. ಯಡಿಯೂರಪ್ಪ ಜನ್ಮ ಭೂಮಿ ಬೂಕನಕೆರೆ, ಮಂಡ್ಯದಲ್ಲಿ ವಿದ್ಯಾಭ್ಯಾಸ ಮಾಡಿದರು ಅವರು ಓದಿದ ಶಾಲೆ, ಕಾಲೇಜಿಗೆ ಅನುದಾನ ಕೊಟ್ಟಿದ್ದಾರೆ. 2ನೇ ಶಿಕಾರಿಪುರವಾಗಿ ಕೆ.ಆರ್.ಪೇಟೆ ಬದಲಾಗುತ್ತದೆ ಎಂಬ ಕಾರಣಕ್ಕೆ ನಾನು ತ್ಯಾಗ ಮಾಡಿದೆ. ಅದಕ್ಕಾಗಿ ನಮ್ಮ ಕೆ.ಆರ್.ಪೇಟೆಗೆ ಸಾಕಷ್ಟು ಅನುದಾನ ನೀಡಿದ್ದಾರೆ ಎಂದು ತಿಳಿಸಿದರು.

ಇದಕ್ಕೂ ಮುನ್ನಾ ಬಿ.ವೈ.ವಿಜಯೇಂದ್ರರಿಗೆ ಮಂಡ್ಯ ಹೊರವಲಯದ ಖಾಸಗಿ ಹೋಟೆಲ್ ಬಳಿಕ್ರೇನ್ ಮೂಲಕ 350 ಕೆಜಿ ಬೃಹತ್ ಹೂವಿನ ಹಾರ ಹಾಗೂ 250 ಕೆಜಿ ತೂಕದ ಸೇಬಿನ ಹಾರ ಹಾಕಿ ಅದ್ಧೂರಿ ಸ್ವಾಗತ ಕೋರಲಾಯಿತು.

ವೇದಿಕೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ. ಉಮೇಶ್, ಮಾಜಿ ಸಚಿವ ಬಿ.ಸೋಮಶೇಖರ್, ಮುಖಂಡರಾದ ಇಂದ್ರೇಶ್, ಲಕ್ಷ್ಮೀ ಅಶ್ವಿನ್‌ಗೌಡ, ಸ್ವಾಮಿ, ಸಿದ್ದರಾಮಯ್ಯ, ಅಶೋಕ್ ಜಯರಾಂ, ಕೆ.ಎಸ್.ನಂಜುಂಡೇಗೌಡ, ಚಂದಗಾಲು ಶಿವಣ್ಣ, ಮುಡಾ ಅಧ್ಯಕ್ಷ ಶ್ರೀನಿವಾಸ್ ಉಪಸ್ಥಿತರಿದ್ದರು.

## ರವಿಶಂಕರ್ ಗೆಲ್ಲಿಸುವ ಮೂಲಕ ಪಕ್ಷಕ್ಕೆ ಬಲ ತುಂಬಿ

ಮದ್ದೂರು, ಜೂ.7– ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಅವರನ್ನು ಗೆಲ್ಲಿಸುವ ಮೂಲಕ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಹಳೇ ಮೈಸೂರು ಭಾಗದಲ್ಲಿ ಪಕ್ಷಕ್ಕೆ ಹೆಚ್ಚಿನ ಬಲ ತುಂಬಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಮನವಿ ಮಾಡಿದರು.

ಬೆಂಗಳೂರಿನಿಂದ ಮಂಡ್ಯಕ್ಕೆ ಹೋಗುವ ಮಾರ್ಗಮಧ್ಯ ಮಂಗಳವಾರ ಇಲ್ಲಿನ ಶಿವಪುರದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರಿಂದ ಜೆಸಿಬಿ ಮೂಲಕ ಭಾರೀ ಗಾತ್ರದ ಹೂವಿನ ಹಾರ ಹಾಕಿಸಿಕೊಂಡು ಅಭಿನಂದನೆ ಸ್ವೀಕರಿಸಿ ಅವರು ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಜನಪರ ಕಾರ್ಯಗಳನ್ನು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪ್ರಚಾರ ಮಾಡುವ ಮೂಲಕ ಮೈ.ವಿ.ರವಿಶಂಕರ್ ಗೆಲುವಿಗೆ ಶ್ರಮಿಸಬೇಕು ಎಂದರು.

ಮೈ.ವಿ.ರವಿಶಂಕರ್ ಉತ್ತಮ ಅಭ್ಯರ್ಥಿಯಾಗಿದ್ದು, ಕಳೆದ ಚುನಾವಣೆಯಲ್ಲಿ ಕಡಿಮೆ ಮತಗಳ ಅಂತರದಿಂದ ಸೋತಿದ್ದಾರೆ. ಈ ಹಿನ್ನೆಲೆಯಲ್ಲಿ ಅವರಿಗೆ ಈ ಬಾರಿ ಅನುಕಂಪದ ಜೊತೆಗೆ ಬಿಜೆಪಿ ಸರ್ಕಾರಗಳು ಉತ್ತಮ ರೀತಿ ಕೆಲಸ ಮಾಡುತ್ತಿರುವುದರಿಂದ ರವಿಶಂಕರ್ ಹೆಚ್ಚಿನ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಂಬರುವ ಚುನಾವಣೆಯಲ್ಲಿ ಸಿಎಂ ಬಸವರಾಜ ಬೊಮ್ಮಾಯಿ, ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಹಾಗೂ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ನೇತೃತ್ವದಲ್ಲಿ ಬಿಜೆಪಿ ರಾಜ್ಯದಲ್ಲಿ 150ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆಯುವ ಮೂಲಕ ಮತ್ತೊಮ್ಮೆ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಸಚಿವ ಕೆಸಿನಾರಾಯಣಗೌಡ, ಮನ್‌ಮುಲ್ ನಿರ್ದೇಶಕ ಎಸ್.ಪಿ. ಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ.ಉಮೇಶ್, ತಾಲೂಕು ಅಧ್ಯಕ್ಷ ಪಿ.ಸಿ.ರಘು, ತಾಲೂಕು ಮಹಿಳಾ ಮೋರ್ಚಾ ಅಧ್ಯಕ್ಷೆ ಶ್ವೇತಾ, ಪುರಸಭಾ ಸದಸ್ಯ ಮನ. ಪ್ರಸನ್ನಕುಮಾರ್, ತಾಲೂಕು ರೈತ ಮೋರ್ಚಾ ಅಧ್ಯಕ್ಷ ಸತೀಶ್, ಮುಖಂಡರಾದ ಸಿದ್ದರಾಮಯ್ಯ, ಎಂ.ಸಿ.ಸಿದ್ದು, ಎಚ್.ಪಿ. ಸ್ವಾಮಿ, ಎನ್.ಜೆ.ಮಧುಕುಮಾರ್, ಸುಧಾಕರ್, ಧನಂಜಯ, ಬಿ.ಸಿ.ಮಹೇಂದ್ರ, ಮಲ್ಲಿಕಾರ್ಜುನ, ಕೆಂಪಬೋರ, ಶಿವಮಲ್ಲಪ್ಪ, ಸೋಮು, ಸೌಮ್ಯ, ಮಮತಾ, ಪೂರ್ಣಿಮಾ ಇದ್ದರು.



ಪಕ್ಷ ನನಗೆ ಸೂಕ್ತ ಸ್ಥಾನಮಾನ ನೀಡಿಲ್ಲ ಎಂಬುದು ಸತ್ಯಕ್ಕೆ ದೂರವಾದ ಸಂಗತಿ. ನನ್ನ ಮುಂದಿನ ನಡೆ ಬಗ್ಗೆ ಯಾವುದೇ ನಿಗೂಢತೆಯಿಲ್ಲ. ಪಕ್ಷ ನನ್ನನ್ನು ರಾಜ್ಯ ಉಪಾಧ್ಯಕ್ಷನನ್ನಾಗಿ ಮಾಡಿದೆ. ಮುಂಬರುವ ದಿನಗಳಲ್ಲಿ ಪಕ್ಷ ಸಂಘಟಿಸುವ ಮೂಲಕ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಹೆಚ್ಚು ಸ್ಥಾನಗಳಿಸಲು ಕಾರ್ಯತಂತ್ರ ರೂಪಿಸಲಾಗುವುದು.

– ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯ ಉಪಾಧ್ಯಕ್ಷ.

## ಸಾಲಬಾಧೆ: ರೈತ ಆತ್ಮಹತ್ಯೆ

ಮದ್ದೂರು, ಜೂ.7– ಸಾಲಬಾಧೆ ತಾಳಲಾರದೇ ಯುವ ರೈತರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಮಲ್ಲನಾಯಕನಹಳ್ಳಿ ಗ್ರಾಮದಲ್ಲಿ ಮಂಗಳವಾರ ನಡೆದಿದೆ.

ಗ್ರಾಮದ ನಿವಾಸಿ ಮಂಚಯ್ಯ ಅವರ ಪುತ್ರ ಸಂದೇಶ್ (24) ಆತ್ಮಹತ್ಯೆ ಮಾಡಿಕೊಂಡವರು. ಮೃತರ ತಂದೆಗೆ 2 ಎಕರೆ ಜಮೀನಿದ್ದು ಭತ್ತ, ರಾಗಿ, ರೇಷ್ಮೆ ಇನ್ನಿತರ ಬೆಳೆಗಳನ್ನು ಬೆಳೆಯುತ್ತಿದ್ದರು ಎನ್ನಲಾಗಿದೆ. ವ್ಯವಸಾಯ, ಹೈನುಗಾರಿಕೆಗೆಂದು ಕೆಸ್ತೂರು ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಲ್ಲಿ 1 ಲಕ್ಷ, ಚಿನ್ನ ಅಡವಿಟ್ಟು 1.5 ಲಕ್ಷ, ಬ್ಯಾಂಕ್ ಆಫ್ ಬರೋಡಾ ಮಲ್ಲನಕುಪ್ಪೆ ಶಾಖೆಯಲ್ಲಿ ಚಿನ್ನ ಅಡವಿಟ್ಟು 2 ಲಕ್ಷ ರೂ. ಸಾಲ, ಖಾಸಗಿಯಾಗಿ 3 ಲಕ್ಷ ಸೇರಿದಂತೆ ಒಟ್ಟು 8 ಲಕ್ಷಕ್ಕೂ ಅಧಿಕ ಸಾಲ ಮಾಡಿಕೊಂಡಿದ್ದರು. ಇದರಿಂದ ಮನನೊಂದು ವಾರದ ಹಿಂದೆ ಜಮೀನಿನ ಬಳಿ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿ ಅಸ್ವಸ್ಥಗೊಂಡಿದ್ದರು. ಅವರನ್ನು ಚಿಕಿತ್ಸೆಗೆ ಬೆಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಕೆಸ್ತೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜಿಲ್ಲೆಯ ರೈತರ 648 ಕೋಟಿ ಸಾಲ ಮನ್ನಾ ಮಾಡಿದ್ದು ನಮ್ಮ ಸರ್ಕಾರ

• ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ • ಜೆಡಿಎಸ್ ಅಭ್ಯರ್ಥಿ ಎಚ್.ಕೆ.ರಾಮು ಪರ ಪ್ರಚಾರ

ಶ್ರೀರಂಗಪಟ್ಟಣ, ಜೂ.7 (ವಿನಯ್ ಕಾರೇಕುರ)– ಮಂಡ್ಯ ಜಿಲ್ಲೆಗೆ ಜೆಡಿಎಸ್ ಕೊಡುಗೆ ಏನೆಂದು ಪ್ರಶ್ನೆ ಮಾಡುತ್ತಾರೆ. ಜಿಲ್ಲೆಯ ರೈತರ 648 ಕೋಟಿ ರೂ. ಸಾಲವನ್ನು 20 ತಿಂಗಳ ನನ್ನ ಅಧಿಕಾರಾವಧಿಯಲ್ಲಿ ಮನ್ನಾ ಮಾಡಿ ಮಂಡ್ಯ ಜನರ ಕಷ್ಟಕ್ಕೆ ನೆರವಾಗಿದ್ದೇನೆ. ನನ್ನನ್ನು ಪ್ರಶ್ನಿಸುವವರು ಜಿಲ್ಲೆಗೆ ನಾನು ಕೊಟ್ಟ ಕೊಡುಗೆ ಅರ್ಥ ಮಾಡಿಕೊಳ್ಳಬೇಕೆಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಪಟ್ಟಣದ ಟಿಎಪಿಸಿಎಂಎಸ್ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ದಕ್ಷಿಣ ಪದವೀಧರರ ಕ್ಷೇತ್ರ ಚುನಾವಣೆ ಹಿನ್ನಲೆ ಜೆಡಿಎಸ್ ಅಭ್ಯರ್ಥಿ ಎಚ್.ಕೆ.ರಾಮು ಪರ ಚುನಾವಣೆ ಪ್ರಚಾರ ನಡೆಸಿ ಬಳಿಕ ಮಾತನಾಡಿದ ಅವರು, ಜಿಲ್ಲೆಯಲ್ಲಿ ನೂರಾರು ರೈತರು ಆತ್ಮಹತ್ಯೆಗೆ ಶರಣಾದ ವೇಳೆ ಅಧಿಕಾರದಲ್ಲಿ ಇಲ್ಲದಿದ್ದರೂ, ಅವರ ಕುಟುಂಬಕ್ಕೆ ವೈಯಕ್ತಿಕವಾಗಿ ಆರ್ಥಿಕ ನೆರವು ನೀಡಿದ್ದೇನೆ. ಮೈಷುಗರ್



ಅಭಿವೃದ್ಧಿಗೆ ಬಜೆಟ್‌ನಲ್ಲಿ 100 ಕೋಟಿ ರೂ. ಮೀಸಲಿಟ್ಟಿದ್ದೆ. ಏಳಕ್ಕೆ ಏಳು ಸ್ಥಾನ ನೀಡಿ ಗೆಲ್ಲಿಸಿದ್ದ ನನ್ನ ಮಂಡ್ಯ ಜಿಲ್ಲೆಯನ್ನು ವಿಶೇಷವಾಗಿ ಪರಿಗಣಿಸಿ 9 ಸಾವಿರ ಕೋಟಿ ಅಭಿವೃದ್ಧಿ ನೀಡಲು ವಿಧಾನಸಭೆಯ ಕಲಾಪದಲ್ಲಿ ಮುಂದಾದಾಗ ರಾಷ್ಟ್ರೀಯ ಪಕ್ಷಗಳೆರಡು ಕೇವಲವಾಗಿ ಹಾಸ್ಯ ಮಾಡಿದರು. ಮಂಡ್ಯ ನಗರದ ಅಭಿವೃದ್ಧಿಗೆ 50 ಕೋಟಿ ರೂ. ನೀಡಿದ್ದೆ, ಆದರೆ ಲೋಕಸಭೆ ಚುನಾವಣೆಯಲ್ಲಿ ಉದ್ದೇಶಪೂರ್ವಕವಾಗಿ ಸೋಲಿಸಿ, ನೀವು ನೀಡಿದ ಹಾರೈಕೆಯ ಸರ್ಕಾರವನ್ನು ಕುತಂತ್ರದಿಂದ ಕಿತ್ತು ಹಾಕಿದರು. ಕಾಂಗ್ರೆಸ್ ಪಕ್ಷದ ಪ್ರಭಾವಿ ನಾಯಕರು ಮಂಡ್ಯ ಜಿಲ್ಲೆಗೆ ಜೆಡಿಎಸ್‌ನ ಕೊಡುಗೆ ಏನು ಎಂದು ಪ್ರಶ್ನಿಸುತ್ತಾರೆ. ಮಂಡ್ಯವನ್ನು ಹಾಸ್ಯ ಮಾಡಿ ಜರಿದಿದ್ದ ಮತ್ತೊಂದು ಪಕ್ಷ ಕೇಸರಿ ಭಾವುಟ ಹಿಡಿದು ತನ್ನ ಅಸ್ತಿತ್ವ ಸ್ಥಾಪಿಸಲು ಬಂದಿದೆ. ಆದರೆ ನನ್ನ ಮಣ್ಣಿನ ರೈತಾಪಿ ಜನರಿಗೂ ಇವರಿಗೂ ಸಂಬಂಧ ಏನು ಎಂದು ಪ್ರಶ್ನಿಸಿದರು.

ಇದೀಗ ನನ್ನ ಜನರ ಏಳ್ಗೆಗೆ ಕನಸು ಹೊತ್ತು ಪಂಚರತ್ನ ಯೋಜನೆಗಳ ಮೂಲಕ ನದಿಯ ನೀರುಗಳ ಬಳಕೆಗೆ ಜನತಾ ಜಲಧಾರೆ ಮೂಲಕ 2023ಕ್ಕೆ ಜನತಾ ಸರ್ಕಾರ ತರಲು ಮುಂದಾಗಿದ್ದು, ಈ ಚುನಾವಣೆ ಮುಂದಿನ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯಾಗಿದೆ. ಪಕ್ಷದ ಅಭ್ಯರ್ಥಿ ಗೆಲುವಿಗೆ ಸಹಕರಿಸಿ ಎಂದರು.

ಶಾಸಕ ರವೀಂದ್ರ ಶ್ರೀಕಂಠಯ್ಯ ಮಾತನಾಡಿ, ಅಭ್ಯರ್ಥಿ ಎಚ್.ಕೆ.ರಾಮು ನಮ್ಮವರಾಗಿದ್ದು, ನಮ್ಮಲ್ಲಿ 3 ಸಾವಿರಕ್ಕೂ ಹೆಚ್ಚು ಪದವೀಧರರಿದ್ದು, ನಿಮ್ಮೊಂದಿಗೆ ಜಿಲ್ಲೆಯ ನಿಮ್ಮ ಬಂಧುಗಳು, ಸ್ನೇಹಿತರಿಗೆ ತಿಳಿಸಿ ಗೆಲುವಿಗೆ ಸಹಕರಿಸಿ ಎಂದರು. ಕಾರ್ಯಕ್ರಮದಲ್ಲಿ ಮಾಜಿ ಸಚಿವ ಬಂಡೆಪ್ಪ ಕಾಶಂಪುರ್, ಶಾಸಕ ಸುರೇಶ್ ಗೌಡ, ಎಂಎಲ್‌ಸಿ ಕೆ.ಟಿ. ಶ್ರೀಕಂಠೇಗೌಡ, ಅಭ್ಯರ್ಥಿ ಎಚ್.ಕೆ.ರಾಮು, ಜೆಡಿಎಸ್ ಪಕ್ಷದ ರಾಜ್ಯ ಉಪಾಧ್ಯಕ್ಷ ಎಂ.ಸಂತೋಷ್, ಜಿಲ್ಲಾಧ್ಯಕ್ಷ ಡಿ.ರಮೇಶ್, ತಾಲೂಕು ಅಧ್ಯಕ್ಷ ಪೈಮುಕುಂದ, ಟಿಎಪಿಸಿಎಂಎಸ್ ಅಧ್ಯಕ್ಷ ಎಸ್.ಎಲ್. ದಿವಾಕರ್, ನಗರ ಘಟಕ ಅಧ್ಯಕ್ಷ ಸುರೇಶ್, ಪುರಸಭಾ ಉಪಾಧ್ಯಕ್ಷ ಕೃಷ್ಣಪ್ಪ, ಸದಸ್ಯರಾದ ಪ್ರಕಾಶ್, ರವಿ, ಎಸ್.ಟಿ.ರಾಜು, ಶಿವು ಇತರರಿದ್ದರು.

## ಜೆಡಿಎಸ್ ಅಭ್ಯರ್ಥಿ ಪರ ಶಾಸಕ ಸಿಎಸ್‌ಪಿ ಪ್ರಚಾರ



ಪಾಂಡವಪುರ, ಜೂ.7– ದಕ್ಷಿಣ ಪದವೀಧರ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಎಚ್.ಕೆ. ರಾಮು ಪರ ಶಾಸಕ ಸಿ.ಎಸ್.ಪುಟ್ಟರಾಜು ಮಂಗಳವಾರ ಬಿರುಸಿನ ಪ್ರಚಾರ ನಡೆಸಿದರು.

ಪಟ್ಟಣದ ಮಿನಿ ವಿಧಾನಸೌಧದ ತಾಲೂಕು ಕಚೇರಿ ಅಧಿಕಾರಿಗಳು, ಸಿಬ್ಬಂದಿ ಬಳಿ ಮತಯಾಚಿಸಿದ ಶಾಸಕ ಸಿ.ಎಸ್.ಪುಟ್ಟರಾಜು, ಬಳಿಕ ಬಡ್ಸ್ ಫೌಂಡೇಷನ್ ಸಂಸ್ಥೆ, ಬಿಜಿಎಸ್ ಕಾಲೇಜು, ಬಿಇಓ ಕಚೇರಿ, ಬಾಲಕಿಯರ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರಥಮ ದರ್ಜೆ ಕಾಲೇಜು, ಟಿಎಪಿಸಿಎಂಎಸ್ ಸಂಸ್ಥೆ, ವಿಜಯ ಪ್ರಥಮ ದರ್ಜೆ ಕಾಲೇಜು ಸೇರಿದಂತೆ ವಿವಿಧೆಡೆ ಬಿರುಸಿನ ಪ್ರಚಾರ ನಡೆಸಿ ಪಕ್ಷದ ಅಭ್ಯರ್ಥಿ ಎಚ್.ಕೆ.ರಾಮು ಪರವಾಗಿ ಮತಯಾಚಿಸಿದರು. ಬಳಿಕ ಮಾತನಾಡಿದ ಅವರು, ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಎಚ್.ಕೆ.ರಾಮು, ರಾಜ್ಯಸಭೆ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಕುಪೇಂದ್ರರೆಡ್ಡಿ ಗೆಲುವು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಪುರಸಭಾಧ್ಯಕ್ಷೆ ಅರ್ಚನಾ, ಉಪಾಧ್ಯಕ್ಷ ಶ್ವೇತಾ, ಟಿಎಪಿಸಿಎಂಎಸ್ ಅಧ್ಯಕ್ಷ ಡಿ.ಶ್ರೀನಿವಾಸ್ ಸೇರಿದಂತೆ ಪುರಸಭೆ ಸದಸ್ಯರು, ಮುಖಂಡರು ಹಾಜರಿದ್ದರು.

## ವಿಧಾನ ಪರಿಷತ್‌ನಲ್ಲಿ ಗಟ್ಟಿಧನಿಗೆ ರವಿಶಂಕರ್ ಗೆಲ್ಲಿಸುವುದು ಅನಿವಾರ್ಯ

ಇಂಧನ ಸಚಿವ ಸುನೀಲ್‌ಕುಮಾರ್ ಮನವಿ



ಮೈಸೂರು, ಜೂ.7(ಎಂಕೆ)– ಹಿಂದುತ್ವ ಹಾಗೂ ವೈಚಾರಿಕತೆಯನ್ನು ಗಟ್ಟಿಯಾಗಿ ಪ್ರತಿಪಾದಿಸುವ ಮೈ.ವಿ.ರವಿಶಂಕರ್ ಅವರಿಗೆ ಮೊದಲ ಪ್ರಾಶಸ್ತ್ಯ ಮತ ನೀಡಿ ಗೆಲ್ಲಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಇಂಧನ ಸಚಿವ ಸುನೀಲ್ ಕುಮಾರ್ ಮನವಿ ಮಾಡಿದರು.

ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮ ಸಭಾಂಗಣದಲ್ಲಿ ತುಳು ಶಿವಳ್ಳಿ ಮಾಧ್ವ ಬ್ರಾಹ್ಮಣ ಮಹಾಮಂಡಲದ ವತಿಯಿಂದ ಆಯೋಜಿಸಿದ್ದ ದಕ್ಷಿಣ ಪದವೀಧರರ ಕ್ಷೇತ್ರ ಚುನಾವಣೆ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ದೇಶದ ಇತಿಹಾಸ ತಿಳಿಸುವ ಸರ್ಕಾರದ ಕೆಲಸವನ್ನು ವಿರೋಧಿಸುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇಂತಹ ಸಂದರ್ಭದಲ್ಲಿ ನಮ್ಮೆಲ್ಲರ ಧ್ವನಿಯಾಗಿ ವಿಧಾನ ಪರಿಷತ್‌ನಲ್ಲಿ ಮೈ.ವಿ.ರವಿಶಂಕರ್ ಕೆಲಸ ಮಾಡಲಿದ್ದಾರೆ. ಆದ್ದರಿಂದ ಅವರನ್ನು ಜಯಶೀಲರನ್ನಾಗಿ ಮಾಡುವಂತೆ ಕೋರಿದರು.

ಹಣ ಬೆಂಬಲ, ರಾಜಕೀಯ ಹಿನ್ನೆಲೆಯಿಲ್ಲದೆ ಕಳೆದ 30 ವರ್ಷಗಳಿಂದ ಬಿಜೆಪಿಯ ಸಾಮಾನ್ಯ ಕಾರ್ಯಕರ್ತನಾಗಿ ಸೇವೆ ಸಲ್ಲಿಸಿರುವ ರವಿಶಂಕರ್ ಅವರಿಗೆ ಮೊದಲ ಪ್ರಾಶಸ್ತ್ಯದ ಮತ ನೀಡಿ. ಎರಡು ಮತ್ತು ಮೂರನೇ ಪ್ರಾಶಸ್ತ್ಯ ಮತ ಹಾಕದಿದ್ದರೂ ತೊಂದರೆ ಇಲ್ಲ, ಕಡ್ಡಾಯವೂ ಅಲ್ಲ. ಮೊದಲ ಮತ ನೀಡುವ ಮೂಲಕವೇ ಅವರನ್ನು ಗೆಲ್ಲಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಬಿಜೆಪಿ ನಗರಾಧ್ಯಕ್ಷ ಟಿ.ಎಸ್.ಶ್ರೀವತ್ಸ, ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಕೃಷ್ಣ ಮಿತ್ರ ಮಂಡಳಿಯ ಅಧ್ಯಕ್ಷ ಸುಬ್ರಹ್ಮಣ್ಯ ತಂತ್ರಿ, ಕೃಷ್ಣದಾಸ್ ಪುರಾಣಿಕ್, ತುಳು ಶಿವಳ್ಳಿ ಮಾಧ್ವ ಮಹಾಮಂಡಳ ಅಧ್ಯಕ್ಷ ರವಿಶಾಸ್ತ್ರಿ, ಮಹೇಶ್ ಕಾಮತ್, ಬೆಂಗಳೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಬಿಜೆಪಿ ಮುಖಂಡರಾದ ಮಹೇಂದ್ರ, ದೇವನೂರು ಪ್ರತಾಪ್, ಪರೀಕ್ಷಿತ್ ರಾಜ್ ಅರಸ್, ಅರುಣ್ ಕುಮಾರ್ ಗೌಡ ಮತ್ತಿತರರು ಉಪಸ್ಥಿತರಿದ್ದರು.

## ಡಾ.ಸಿಪಿಕೆ ಸಂಸ್ಕೃತದಿಂದ ಕನ್ನಡಕ್ಕೆ ಅನುವಾದಿಸಿರುವ 10 ನಾಟಕ ಕೃತಿಗಳ ಬಿಡುಗಡೆ

ಕಾಲ–ಕಾಲಕ್ಕೆ ನಾಟಕಗಳು, ಕಾದಂಬರಿಗಳು ತರ್ಜುಮೆಗೊಂಡರೆ ತಪ್ಪಿಲ್ಲ: ಡಾ.ಹೆಚ್.ವಿ.ನಾಗರಾಜರಾವ್

ಮೈಸೂರು, ಜೂ.7(ಎಸ್‌ಪಿಎನ್)– ಮೈಸೂರು ರಂಗಾಯಣದ ಬಿ.ವಿ.ಕಾರಂತರ ರಂಗ ಚಾವಡಿಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ರಂಗಾಯಣ ಹಾಗೂ ಕನ್ನಡ ಸಾಹಿತ್ಯ ಕಲಾ ಕೂಟದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಅವರು ಸಂಸ್ಕೃತದಿಂದ ಕನ್ನಡಕ್ಕೆ ಅನುವಾದಿಸಿರುವ ಹತ್ತು ನಾಟಕ ಕೃತಿಗಳನ್ನು ಸಂಸ್ಕೃತ ವಿದ್ವಾಂಸ ಹಾಗೂ ಅಂಕಣಕಾರ ಡಾ.ಹೆಚ್.ವಿ. ನಾಗರಾಜರಾವ್ ಬಿಡುಗಡೆಗೊಳಿಸಿದರು.

ಈ ವೇಳೆ ಮಾತನಾಡಿದ ಡಾ.ಹೆಚ್.ವಿ. ನಾಗರಾಜರಾವ್ ಅವರು, ಭಟ್ಟನಾರಾಯಣನ 'ವೇಣೀ ಸಂಹಾರ', ಶ್ರೀ ಹರ್ಷನ 'ರತ್ನಾವಳಿ', ನಾಗಾನಂದ, 'ಪ್ರಿಯದರ್ಶಿಕಾ', ಭಾಸನ 'ಸ್ವಪ್ನವಾಸದತ್ತ', ಪ್ರತಿಜ್ಞಾ ಯೌಗಂಧರಾಯಣ, ಪಂಚರಾತ್ರ, ಊರುಭಂಗ, ಭವಭೂತಿಯ 'ಉತ್ತರ ರಾಮಚರಿತ', ಕಾಳಿದಾಸನ 'ಅಭಿಜ್ಞಾನ ಶಾಕುಂತಲ' ನಾಟಕ ಕೃತಿಗಳು ಬಿಡುಗಡೆಗೊಂಡಿವೆ. ಇದರಲ್ಲಿ ಭಾಸನ 4, ಶ್ರೀ ಹರ್ಷನ 3, ಭಟ್ಟ ನಾರಾಯಣ, ಭವಭೂತಿ ಹಾಗೂ ಕಾಳಿದಾಸನ ತಲಾ ಒಂದೊಂದು ಕೃತಿಗಳನ್ನು ಇಂದಿನ ಸನ್ನಿವೇಶಕ್ಕೆ ತಕ್ಕಂತೆ ಸಿಪಿಕೆ ಅನುವಾದಿಸಿದ್ದಾರೆ ಎಂದರು.

ನೂರು ವರ್ಷಗಳ ಹಿಂದೆ ಬಸವಪ್ಪ ಶಾಸ್ತ್ರಿಗಳು ಅಭಿಜ್ಞಾನ ಶಾಕುಂತಲ ನಾಟಕವನ್ನು ಸಂಸ್ಕೃತದಿಂದ ಕನ್ನಡಕ್ಕೆ ತರ್ಜುಮೆಗೊಳಿಸಿದ್ದರು. ಅದು ಆಗಿನ ಕಾಲಕ್ಕೆ ಸರಿಯಾಗಿತ್ತು. ಆದರೆ, ಕಾಲ ಬದಲಾದಂತೆ ನಾವು ಮಾತನಾಡುವ ಭಾಷೆ ಪರಿವರ್ತನೆಗೊಂಡಿದೆ ಹಾಗಾಗಿ ಈಗಿನ ಕಾಲದ ಭಾಷೆಗೆ ತಕ್ಕಂತೆ ಹಿರಿಯ ಸಾಹಿತಿ ಡಾ.ಸಿಪಿಕೆ ಅದ್ಭುತವಾಗಿ ಅದನ್ನು ಅನುವಾದಿಸಿದ್ದಾರೆ ಎಂದು ಕೆಲ ಉದಾಹರಣೆ ಸಹಿತ ವಿವರಿಸಿದರು.

ಅಭಿನವ ಶಾಕುಂತಲ ಮೂಲ ಸಂಸ್ಕೃತ ನಾಟಕದಲ್ಲಿ ಮುಖ್ಯ ಪಾತ್ರಧಾರಿ ಶಾಕುಂತಲಾಳನ್ನು ಗಂಡನ ಮನೆಗೆ ಕಳುಹಿಸಿಕೊಡುವ ಸಂದರ್ಭದಲ್ಲಿ ಕಣ್ವ ಮಹರ್ಷಿ ವಿವರಿಸುವ ಸಂದರ್ಭವನ್ನು ಹಿರಿಯ ವಿದ್ವಾಂಸ ಬಸವಪ್ಪ ಶಾಸ್ತ್ರಿಗಳು ಮನೋಜ್ಞವಾಗಿ ವಿವರಿಸಿದ್ದರು. ಅದೇ ಸನ್ನಿವೇಶವನ್ನೇ ಈಗಿನ ಕಾಲಕ್ಕೆ ತಕ್ಕಂತೆ ಸಿಪಿಕೆ ಕನ್ನಡದಲ್ಲಿ ಕಟ್ಟಿಕೊಟ್ಟಿದ್ದಾರೆ. ಅಂದರೆ, ಕಾಲಕಾಲಕ್ಕೆ ಐತಿಹಾಸಿಕ ನಾಟಕ, ಕಾದಂಬರಿ ತರ್ಜುಮೆಗೊಂಡರೆ ತಪ್ಪಿಲ್ಲ ಎಂಬುದಕ್ಕೆ ಈ ಸನ್ನಿವೇಶವೇ ಸಾಕ್ಷಿ ಎಂದರು.

ರಾಮಾಯಣ, ಮಹಾಭಾರತ ಸೇರಿದಂತೆ ಐಸಿಹಾಸಿಕ ನಾಟಕಗಳು 50 ವರ್ಷಗಳಿಗೊಮ್ಮೆ ಅನುವಾದವಾಗಬೇಕು. ಏಕೆಂದರೆ ಕಳೆದ ಐವತ್ತು ವರ್ಷಗಳಲ್ಲಿ ನಾವು ಮಾತನಾಡುವ ಭಾಷೆ, ಜನ ಎಲ್ಲರೂ ಬದಲಾಗಿರುತ್ತಾರೆ. ಎಷ್ಟೋ ಪದಗಳಿಗೆ ಈಗಿನ ಕಾಲಕ್ಕೆ ತಕ್ಕಂತೆ ಅರ್ಥೈಸುವ ಅನಿವಾರ್ಯತೆ ಲೇಖಕರಿಗೆ ಇರುತ್ತದೆ. ಹಾಗಾಗಿ ಮೂಲ ನಾಟಕ ಸಾರಾಂಶ, ಸನ್ನಿವೇಶ ಹಾಗೂ ಕಥಾವಸ್ತುಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸಬೇಕಾದರೆ ಅನುವಾದವಾಗಬೇಕು. ಈ ನಿಟ್ಟಿನಲ್ಲಿ ಸಿಪಿಕೆ ಅವರ ಅನುವಾದ ಸುಂದರವಾಗಿ ಮೂಡಿಬಂದಿದೆ ಎಂದು ಪ್ರತಿಪಾದಿಸಿದರು.

ಈ ವೇಳೆ ರಂಗಾಯಣ ನಿರ್ದೇಶಕ ಅಡ್ಡಂಡ ಕಾರ್ಯಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್ ಪ್ರಾಸ್ತಾವಿಕ ಭಾಷಣ ಮಾಡಿದರು. ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ತನುಮನು ಪ್ರಕಾಶಕ ಮಾನಸ, ಹಿರಿಯ ರಂಗಕರ್ಮಿ ರಾಜಶೇಖರ ಕದಂಬ ಉಪಸ್ಥಿತರಿದ್ದರು. ಗೌರವ ಕಾರ್ಯದರ್ಶಿ ಲತಾ ಮೋಹನ್ ಕಾರ್ಯಕ್ರಮ ನಿರೂಪಿಸಿದರು.



ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಅವರು ಸಂಸ್ಕೃತದಿಂದ ಕನ್ನಡಕ್ಕೆ ಅನುವಾದಿಸಿರುವ ಹತ್ತು ನಾಟಕ ಕೃತಿಗಳನ್ನು ಸಂಸ್ಕೃತ ವಿದ್ವಾಂಸ ಹಾಗೂ ಅಂಕಣಕಾರ ಡಾ.ಹೆಚ್.ವಿ. ನಾಗರಾಜರಾವ್ ಬಿಡುಗಡೆಗೊಳಿಸಿದರು. ಈ ವೇಳೆ ರಂಗಾಯಣ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ, ಕಸಾಪಾ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್ ಉಪಸ್ಥಿತರಿದ್ದರು.

## ಮೈಸೂರಲ್ಲಿ 'ಸಿಲ್ಕ್ ವೀವರ್ಸ್' ಮೇಳ

ನಾನಾ ರೀತಿಯ ಸಿಲ್ಕ್ ಸ್ಯಾರಿಗಳ ಮಾರಾಟ, ಪ್ರದರ್ಶನ

ಮೈಸೂರು, ಜೂ.7(ಎಂಕೆ)– ಮೈಸೂರಿನ ವಿನೋಬ ರಸ್ತೆಯಲ್ಲಿರುವ ನಂಜರಾಜ್ ಬಹದ್ದೂರ್ ಛತ್ರದಲ್ಲಿ ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಆಯೋಜಿಸಿರುವ 'ಸಿಲ್ಕ್ ವೀವರ್ಸ್–2022' ಮೇಳ(ವಸ್ತುಪ್ರದರ್ಶನ ಮತ್ತು ಮಾರಾಟ)ಕ್ಕೆ ಶಾಸಕ ಎಲ್.ನಾಗೇಂದ್ರ ಸೋಮವಾರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು. ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಆಯೋಜಿಸಿರುವ 'ಸಿಲ್ಕ್ ವೀವರ್ಸ್' ಮೇಳವನ್ನು ಮೈಸೂರಿಗರು ಸದುಪಯೋಗಪಡೆದುಕೊಳ್ಳುವಂತೆ ಮನವಿ ಮಾಡಿದರು. ಈ ವೇಳೆ ಆಯೋಜಕರಾದ ಅಮೀನ್ ಶಾ, ಎಸ್.ಎಂ. ಆದಿ ಮತ್ತಿತರರಿದ್ದರು. ಸುಮಾರು 45 ಮಳಿಗೆಗಳಿರುವ 'ಸಿಲ್ಕ್ ವೀವರ್ಸ್' ಮೇಳ ಜೂ.12ರವರೆಗೆ(ಬೆಳಗ್ಗೆ 10ರಿಂದ ರಾತ್ರಿ 9.30ರವರೆಗೆ)ನಡೆಯಲಿದ್ದು, ಕಾಶ್ಮೀರಿ ಸೀರೆಗಳು, ಶಾಲ್ಸ್, ಪಶ್ಚಿಮ ಬಂಗಾಳದ ಸೀರೆಗಳು, ಇಕ್ಕತ್ ಸೀರೆಗಳು, ಉರ್ಡಿಶಾ ಸೀರೆಗಳು, ಬನಾರಸ್ ಸೀರೆಗಳು, ಟಸ್ಸರ್ ಸಿಲ್ಕ್ ಸೀರೆಗಳು, ಜ್ಯೂಟ್ ಸೀರೆಗಳು, ರಾಜಸ್ಥಾನ, ಜೈಪುರ್ ಟಾಪ್ಸ್, ಬಾಗಲ್‌ಪುರ್ ಸೂಟ್‌ಗಳು, ಕಲಂಕಾರಿ ಟಾಪ್ಸ್, ಹುಬ್ಬಳ್ಳಿ ಸೀರೆಗಳು, ಜೈಪುರ ಬೆಡ್‌ಶೀಟ್‌ಗಳು, ಕುಚ್ ಬುಚ್ ಟಾಪ್ಸ್, ಒಂದು ಗ್ರಾಂ ಗೋಲ್ಡ್ ಜ್ಯುವೆಲರಿ ಸೇರಿದಂತೆ ಹಲವು ಬಗೆಯ ಅಲಂಕಾರಿಕ ವಸ್ತುಗಳ ಪ್ರದರ್ಶನ ಮತ್ತು ಮಾರಾಟವಿದೆ.



## ಮುಖ್ಯಮಂತ್ರಿ ಚಂದ್ರು ಆಮ್ ಆದ್ಮಿ ಪಕ್ಷ ಸೇರ್ಪಡೆ




ಬೆಂಗಳೂರು, ಜೂ.7– ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿರುವ ನಟ ಮುಖ್ಯಮಂತ್ರಿ ಚಂದ್ರು ಮಂಗಳವಾರ ಆಮ್ ಆದ್ಮಿ ಪಕ್ಷ (ಎಎಪಿ) ಸೇರಿದ್ದಾರೆ. ಕರ್ನಾಟಕದ 'ಮುಖ್ಯಮಂತ್ರಿ' ಈಗ ಆಮ್ ಆದ್ಮಿ. ನಮ್ಮ ಕುಟುಂಬಕ್ಕೆ ಸ್ವಾಗತ ಮುಖ್ಯಮಂತ್ರಿಗಳೇ, ಎಂದು ಎಎಪಿ ಟ್ವೀಟ್ ಮಾಡಿದೆ. ಜತೆಗೆ ಚಂದ್ರು ಅವರ ಪಕ್ಷ ಸೇರ್ಪಡೆ ಕಾರ್ಯಕ್ರಮದ ಫೇಸ್‌ಬುಕ್ ನೇರ ಪ್ರಸಾರದ ಲಿಂಕ್ ಅನ್ನು ಹಂಚಿಕೊಂಡಿದೆ. ಚಂದ್ರು ಅವರು ಮೇ 29ರಂದು ಕಾಂಗ್ರೆಸ್ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರು.

## ಮದುವೆಗೆ ಹೋಗುತ್ತಿದ್ದವರು ಮಸಣಕ್ಕೆ

### ಭೀಕರ ಅಪಘಾತದಲ್ಲಿ ಒಂದೇ ಕುಟುಂಬದ 8 ಮಂದಿ ದುರ್ಮರಣ

ಜೈಪುರ, ಜೂ.7– ರಾಜಸ್ಥಾನದ ಬಾರ್ಮರ್ ಜಿಲ್ಲೆಯಲ್ಲಿ ಟ್ರಕ್ ಮತ್ತು ಎಸ್‌ಯುವಿ ನಡುವೆ ಭೀಕರ ಅಪಘಾತ ಸಂಭವಿಸಿ ಇಬ್ಬರು ಅಪ್ರಾಪ್ತರು ಸೇರಿದಂತೆ ಒಂದೇ ಕುಟುಂಬದ ಎಂಟು ಮಂದಿ ಸಾವನ್ನಪ್ಪಿದ್ದಾರೆ. ಒಬ್ಬರಿಗೆ ಗಂಭೀರ ಗಾಯವಾಗಿದೆ.

ಗುಡಾ ಮಲಾನಿ ಪೊಲೀಸ್ ಠಾಣೆ ವ್ಯಾಪ್ತಿಯ ಮೆಗಾ ಹೈವೇ ಬಳಿ ಈ ಘಟನೆ ನಡೆದಿದೆ. ಒಟ್ಟು ಒಂಬತ್ತು ಜನರು ಎಸ್‌ಯುವಿ ಕಾರಿನಲ್ಲಿ ಜಲೋರ್ ಜಿಲ್ಲೆಯ ಸೇಡಿಯಾದಿಂದ ಗುಡಾ ಮಲಾನಿಯ ಕಂಧಿ ಕಿ ಧನಿಗೆ ಮದುವೆ ಕಾರ್ಯಕ್ರಮಕ್ಕೆ ಹೋಗುತ್ತಿದ್ದರು. ಈ ವೇಳೆ ನಿಯಂತ್ರಣ ತಪ್ಪಿಬಂದ ಟ್ರಕ್ ಎಸ್‌ಯುವಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ಕುಟುಂಬದ ಆರು ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ವೇಳೆ ಇಬ್ಬರು ಸಾವನ್ನಪ್ಪಿದ್ದಾರೆ. ಒಬ್ಬರಿಗೆ ಗಂಭೀರವಾಗಿ ಗಾಯವಾಗಿದೆ. ವಾಹನದಿಂದ ದೇಹ ಗಳನ್ನು ಹೊರತೆಗೆಯಲು ಸುಮಾರು ಎರಡು ಗಂಟೆ ಬೇಕಾಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಮರಣೋತ್ತರ ಪರೀಕ್ಷೆಯ ನಂತರ ಮೃತದೇಹಗಳನ್ನು ಕುಟುಂಬ ಸದಸ್ಯರಿಗೆ ಹಸ್ತಾಂತರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಶಾರ್ಟ್ ಸರ್ಕ್ಯೂಟ್‌ನಿಂದ ಮೊಬೈಲ್ ಅಂಗಡಿಗೆ ಬೆಂಕಿ

### 30 ಲಕ್ಷಕ್ಕೂ ಅಧಿಕ ಪದಾರ್ಥಗಳು ಭಸ್ಮ

ಮೈಸೂರು, ಜೂ.7– ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಮೊಬೈಲ್ ಅಂಗಡಿಯೊಂದು ಸಂಪೂರ್ಣ ಸುಟ್ಟು ಹೋಗಿರುವ ಘಟನೆ ನಗರದ ಅಗ್ರಹಾರದಲ್ಲಿ ಸಂಭವಿಸಿದೆ.

ಅಗ್ರಹಾರದ ಮಾಧವಚಾರ್ ರಸ್ತೆಯಲ್ಲಿರುವ ಎ.ಎಂ.ಸೆಲ್ ಝೋನ್ ಅಂಗಡಿಯಲ್ಲಿ ಸೋಮವಾರ ರಾತ್ರಿ 10.30ಕ್ಕೆ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತುಕೊಂಡಿದ್ದು ದಟ್ಟವಾದ ಹೊಗೆ ಕಾಣಿಸಿಕೊಂಡಿದೆ. ತಕ್ಷಣ ಸ್ಥಳಕ್ಕೆ ಧಾವಿಸಿದ ಅಗ್ನಿ ಶಾಮಕ ದಳದ ಸಿಬ್ಬಂದಿ ಒಂದು ಗಂಟೆ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಂದಿಸಿದರಾದರೂ ಅಷ್ಟರಾಗಲೇ ಅಂಗಡಿಯಲ್ಲಿರುವ ಮೊಬೈಲ್ ಮತ್ತಿತರ ವಸ್ತುಗಳು ಸುಟ್ಟು ಭಸ್ಮವಾಗಿದ್ದವು. ಸುಮಾರ್ 30ಲಕ್ಷ ರೂ. ಬಂಡವಾಳದಲ್ಲಿ ಮೊಬೈಲ್ ಅಂಗಡಿ ಆರಂಭಿಸಿದ್ದೆ, ಎಲ್ಲಾ ಉಪಕರಣಗಳೂ ಸಂಪೂರ್ಣ ಸುಟ್ಟುಹೋಗಿವೆ. ವಿಮೆಯೂ ಇಲ್ಲದ್ದರಿಂದ ದಿಕ್ಕು ತೋಚದಾಗಿದೆ ಎಂದು ಅಂಗಡಿ ಮಾಲೀಕ ಸಯ್ಯದ್ ತೌಕೀರ್ ಅಳಲು ತೋಡಿಕೊಂಡಿದ್ದಾರೆ. ಬೆಂಕಿ ಅವಘಡದ ಕುರಿತು ಮಾಲೀಕರು ದೂರು ನೀಡಿದ್ದು, ಕೃಷ್ಣರಾಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರತ್ಯೇಕ ಪ್ರಕರಣಗಳಲ್ಲಿ ಅಪರಿಚಿತರಿಬ್ಬರ ಸಾವು

ಮೈಸೂರು, ಜೂ. 7– ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಇಬ್ಬರು ಅಪರಿಚಿತರು ಸಾವನ್ನಪ್ಪಿದ್ದಾರೆ.

ಬನ್ನಿಮಂಟಪದ ಸೆಂಟ್ ಫಿಲೋಮಿನಾಸ್ ಕಾಲೇಜು ಮುಂದಿರುವ ಪಾರ್ಕಿನಲ್ಲಿ 65 ವರ್ಷದ ಅಪರಿಚಿತ ವ್ಯಕ್ತಿ ಅಸ್ವಸ್ಥರಾಗಿ ಬಿದ್ದಿದ್ದು, ಅವರನ್ನು ಕೆಆರ್ ಆಸ್ಪತ್ರೆಗೆ ದಾಖಲಿಸಲಾಗಿ ಆತ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ.

ಈತ ಬೂದು ಬಣ್ಣದ ಪ್ಯಾಂಟ್, ಆಕಾಶ ನೀಲಿ, ಕಾಫಿ ಬಣ್ಣದ ಬಿಳಿ ಮಿಶ್ರಿತ ಶರ್ಟ್ ಧರಿಸಿದ್ದಾನೆ. ವಾರಸುದಾರರು ದೂ.: 0821–2418312, 2419311 ಮೂಲಕ ಸಂಪರ್ಕಿಸಲು ಕೋರಲಾಗಿದೆ. ನರಸಿಂಹರಾಜ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

**ಮಹಿಳೆ ಸಾವು:** ಮತ್ತೊಂದು ಪ್ರಕರಣದಲ್ಲಿ ಅಪರಿಚಿತ ಮಹಿಳೆಯೊಬ್ಬರು ಸಾವನ್ನಪ್ಪಿದ್ದಾರೆ. ಗ್ರಾಮಾಂತರ ಬಸ್ ನಿಲ್ದಾಣದ ಬಳಿ ಅರೆಪ್ರಜ್ಞೆ ಸ್ಥಿತಿಯಲ್ಲಿ ಬಿದ್ದಿದ್ದ ಈಕೆಯನ್ನು ಕೆಆರ್ ಆಸ್ಪತ್ರೆಗೆ ಸೇರಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ.

ಸುಮಾರು 60ರಿಂದ 65 ವರ್ಷ ವಯಸ್ಸು, 5.3 ಅಡಿ ಎತ್ತರ, ಹೂವಿನ ಚಿತ್ತಾರವುಳ್ಳ ನೈಟಿ ಧರಿಸಿದ್ದಾರೆ. ವಾರಸುದಾರರು ಮೊ.: 9480802232, 2418307, 2418180, 2418339 ಮೂಲಕ ಸಂಪರ್ಕಿಸಲು ಕೋರಲಾಗಿದೆ.

### ಆನೆಮಡುವಿನ ಕೆರೆಗೆ ನೀರು ತುಂಬಿಸುವಂತೆ ಆಗ್ರಹಿಸಿ

# ಉಡಿಗಾಲದಿಂದ ಚಾ.ನಗರದವರೆಗೆ ಪಾದಯಾತ್ರೆ

## ಡಿಸಿ ಕಚೇರಿ ಎದುರು ಮುಂದುವರೆದ ರೈತರ ಅನಿರ್ದಿಷ್ಟಾವಧಿ ಧರಣಿ




ಚಾಮರಾಜನಗರ, ಜೂ.7(ಎಸ್‌ಎಸ್)–ತಾಲೂಕಿನ ಉಡಿಗಾಲ ಗ್ರಾಮದ ಬಳಿ ಇರುವ ಆನೆಮಡುವಿನ ಕೆರೆಗೆ ಚಿಕ್ಕಮೋರಿ ಕಾಲುವೆ ಮೂಲಕ ನೀರು ಹರಿಸಲು ವಿಳಂಬ ಮಾಡುತ್ತಿರುವುದಾಗಿ ಆರೋಪಿಸಿ, ಅಧಿಕಾರಿಗಳ ವಿರುದ್ಧ ರೈತರು ಉಡಿಗಾಲ ಗ್ರಾಮದಿಂದ ಚಾಮರಾಜನಗರ ದವರೆಗೆ ಪಾದಯಾತ್ರೆ ನಡೆಸಿ, ಜಿಲ್ಲಾಡಳಿತ ಭವನದ ಎದುರು ಅನಿರ್ದಿಷ್ಟಾವಧಿ ಧರಣಿ ಮುಂದುವರೆಸಿದ್ದಾರೆ.

ಆನೆಮಡುವಿನ ಕೆರೆಗೆ ಚಿಕ್ಕಮೋರಿ ಕಾಲುವೆ ಮೂಲಕವೇ ನೀರು ತುಂಬಿಸಬೇಕು ಎಂದು ಒತ್ತಾಯಿಸಿ, ಆ ಭಾಗದ ರೈತರು, ರಾಜ್ಯ ಕಬ್ಬು ಬೆಳೆಗಾರರ ಸಂಘ ಹಾಗೂ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಆಶ್ರಯದಲ್ಲಿ ಉಡಿಗಾಲ ಗ್ರಾಮ ದಲ್ಲಿ ಭಾನುವಾರದಿಂದ ಧರಣಿ ನಡೆಸುತ್ತಿದ್ದರು. ಇದಕ್ಕೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸ್ಪಂದಿಸದ ಕಾರಣ ಮಂಗಳವಾರ ಉಡಿಗಾಲ ಗ್ರಾಮದಿಂದ ಚಾಮರಾಜನಗರದ ವರೆಗೆ 13 ಕಿ.ಮೀ. ಪಾದಯಾತ್ರೆ ನಡೆಸಿ, ಬೇಡಿಕೆ ಈಡೇರಿಕೆಗೆ ಆಗ್ರಹಿಸಿದರು. ಜಿಲ್ಲಾಡಳಿತ ಭವನ ಎದುರು ಜಮಾಯಿಸಿ ಪ್ರತಿಭಟಿಸಿದ ರೈತರು, ಸರ್ಕಾರ, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ವಿರುದ್ಧ ಭಿತ್ತಿಪತ್ರಗಳನ್ನು ಪ್ರದರ್ಶಿಸಿ, ಜಿಲ್ಲಾಡಳಿತ ಭವನದ ಮುಂಭಾಗವೇ ಮಧ್ಯಾಹ್ನ ಊಟ ಮಾಡಿ ಮತ್ತೆ ಧರಣಿ ಆರಂಭಿಸಿದರು.

ಆನೆಮಡುವಿನಕೆರೆಗೆ ಚಿಕ್ಕಮೋರಿ ಕಾಲುವೆ ಮೂಲಕ ನೀರು ತುಂಬಿಸಲು 3 ಕೋಟಿ ರೂ. ಬಿಡುಗಡೆಯಾಗಿದೆ. ಆದರೆ ಅಧಿಕಾರಿಗಳು ಗುರುತ್ವಾಕರ್ಷಣೆ ಮೂಲಕ ನೀರು ತುಂಬಿಸುವ ಬದಲು ತಮ್ಮಡಹಳ್ಳಿ ಕೆರೆಯಿಂದ ಪೈಪ್‌ಲೈನ್ ಮೂಲಕ ಕೆರೆಗೆ ನೀರು ತುಂಬಿಸಲು ಮುಂದಾಗಿದ್ದಾರೆ. ಇದಕ್ಕೆ ತಮ್ಮ ವಿರೋಧವಿದೆ. ಕೆರೆಗೆ ಗುರುತ್ವಾಕರ್ಷಣೆ ಮೂಲಕವೇ ನೀರು ತುಂಬಿಸಿ ಅಂತರ್ಜಲ ಮಟ್ಟ ಹೆಚ್ಚಿಸಬೇಕು ಎಂದು ರೈತರು ಒತ್ತಾಯಿಸಿದರು.

ಸ್ಥಳಕ್ಕಾಗಮಿಸಿದ ಡಿಸಿ ಚಾರುಲತಾ ಸೋಮಲ್ ಅವರು, ರೈತರ ಮನವೊಲಿಸಲು ಯತ್ನಿಸಿದರು. ಪಟ್ಟುಬಿಡದ ರೈತರು, ಕೆರೆಗೆ ನೀರು ತುಂಬಿಸುವ ಕಾಮಗಾರಿ ಆರಂಭವಾಗುವವರೆಗೆ ಸ್ಥಳದಿಂದ ಕದಲುವುದಿಲ್ಲ ಎಂದು ಧರಣಿ ಮುಂದುವರೆಸಿದರು.

ಧರಣಿಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್, ಮುಖಂಡರಾದ ಮೂಕಹಳ್ಳಿ ಮಹದೇವಸ್ವಾಮಿ, ಪಟೇಲ್ ಶಿವಮೂರ್ತಿ, ಹಾಡ್ಯ ರವಿ, ಕೆರೆಹುಂಡಿ ರಾಜಣ್ಣ ಹೆಗ್ಗೋಠಾರ ಶಿವಸ್ವಾಮಿ, ಕುರುಬೂರು ಸಿದ್ದೇಶ್, ನಾಗರಾಜ್, ಷಡಕ್ಷರಿ, ಗೌರಿ ಸೇರಿದಂತೆ ಉಡಿಗಾಲ ಹಾಗೂ ಸುತ್ತಮುತ್ತಲಿನ ರೈತರು ಪಾಲ್ಗೊಂಡಿದ್ದರು.

# ಮೋದಿ ನಾಯಕತ್ವ ಬೆಂಬಲಿಸಲು ಬಿಜೆಪಿ ಅಭ್ಯರ್ಥಿ ಗೆಲ್ಲಿಸಿ

### ದಕ್ಷಿಣ ಪದವೀಧರ ಕ್ಷೇತ್ರದ ಪಕ್ಷದ ಅಭ್ಯರ್ಥಿ ಪರ ಸಂಸದ ವಿ.ಶ್ರೀನಿವಾಸ ಪ್ರಸಾದ್ ಮತಯಾಚನೆ



ಚಾಮರಾಜನಗರ, ಜೂ.7(ಎಸ್‌ಎಸ್)– ಬಿಜೆಪಿ ದೂರದೃಷ್ಟಿವುಳ್ಳ ರಾಷ್ಟ್ರೀಯ ಪಕ್ಷವಾಗಿದ್ದು, ಪ್ರಧಾನಿ ಮೋದಿ ಅವರು ತಮ್ಮ ದಕ್ಷ ನಾಯಕತ್ವದಿಂದ 8 ವರ್ಷದಿಂದ ಉತ್ತಮ ಆಡಳಿತ ನೀಡುತ್ತಿದ್ದಾರೆ. ಹೀಗಾಗಿ ದಕ್ಷಿಣ ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಪದವೀಧರ ಮತದಾರರು ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಅವರಿಗೆ ಮೊದಲ ಪ್ರಾಶಸ್ತ್ಯದ ಮತ ನೀಡಬೇಕು ಎಂದು ಸಂಸದ ವಿ.ಶ್ರೀನಿವಾಸ ಪ್ರಸಾದ್ ಮನವಿ ಮಾಡಿದರು.

ನಗರದ ನಿಜಗುಣ ರೆಸಿಡೆನ್ಸಿಯಲ್ಲಿ ಮಂಗಳವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಕಳೆದ 8 ವರ್ಷದಿಂದ ಮೋದಿ ಅವರ ಆಡಳಿತದಲ್ಲಿ ಒಂದೇ ಒಂದು ಹಗರಣ ನಡೆದಿಲ್ಲ. ಇದೇ ಉತ್ತಮ ಆಡಳಿತಕ್ಕೆ ಸಾಕ್ಷಿ. ಇದನ್ನು ಮತದಾರರು ಅರ್ಥ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

**ನೆಹರು ಹೋಲಿಕೆ ಸರಿಯಲ್ಲ:** ಮಾಜಿ ಪ್ರಧಾನಿ ನೆಹರು ಅವರಿಗೆ ಪ್ರಧಾನಿ ಮೋದಿ ಅವರನ್ನು ಹೋಲಿಸುವುದು ಸರಿಯಲ್ಲ. ಪ್ರಸ್ತುತ ಪರಿಸ್ಥಿತಿಯಲ್ಲಿ ನರೇಂದ್ರ ಮೋದಿ ಹಾಗೂ ರಾಹುಲ್‌ಗಾಂಧಿ ಅವರ ನಡುವೆ ಹೋಲಿಕೆ ಮಾಡಬೇಕು. ಯಾವಾಗಲೂ ರಾಹುಲ್‌ಗಾಂಧಿ ಬಾಲಿಶ ಹೇಳಿಕೆ ನೀಡುತ್ತಾರೆ. ಕಾಂಗ್ರೆಸ್ ನಾಯಕತ್ವ ದುರ್ಬಲವಾಗಿದೆ ಎಂದರು.

**ಆರ್‌ಎಸ್‌ಎಸ್‌ನದ್ದು ಈಗ ಪ್ಯಾಂಟು:** ಮಾಜಿ ಸಿಎಂ ಸಿದ್ದರಾಮಯ್ಯ ಅವರು ಆರ್‌ಎಸ್‌ಎಸ್ ವಿರುದ್ಧ ಚಡ್ಡಿ ಸುಡುವ ಅಭಿಯಾನ ನಡೆಸುವ ಹೇಳಿಕೆಗೆ ಪ್ರತಿಕ್ರಿಯಿಸಿದ ಸಂಸದರು, ಆರ್‌ಎಸ್‌ಎಸ್‌ನವರದ್ದು ಈಗ ಚಡ್ಡಿ ಅಲ್ಲ. ಪ್ಯಾಂಟು ಬಂದಿದೆ. ಈಗ ಅವರ ಚಡ್ಡಿಯನ್ನು ಸುಡಬೇಕಷ್ಟೇ ಎಂದು ವ್ಯಂಗ್ಯವಾಡಿದರು.

**ಎಡವಿರುವುದು ಸತ್ಯ:** ಪಠ್ಯ ಪುಸ್ತಕ ಪರಿಷ್ಕರಣಾ ಸಮಿತಿ ಎಡವಿರುವುದು ಸತ್ಯ. ಆಗಿರುವ ತಪ್ಪುಗಳನ್ನು ಸರಿಪಡಿಸುವುದಾಗಿ ಮುಖ್ಯಮಂತ್ರಿಗಳು ಈಗಾಗಲೇ ಹೇಳಿದ್ದಾರೆ ಎಂದರು.

**ಧರ್ಮ ಅಫೀಮಿನಂತೆ:** ಯಾರೊಬ್ಬರೂ ತಮ್ಮ ರಾಜಕೀಯ ಲಾಭಕ್ಕಾಗಿ ಭಾವನಾತ್ಮಕ ವಿಚಾರಗಳನ್ನು ಬಳಸಬಾರದು. ಧರ್ಮ ಎಂಬುದು ಅಫೀಮಿನಂತೆ. ಇದನ್ನು ಮನುಷ್ಯನ ಒಳಿತಿಗೆ ಬಳಸಬೇಕು. ಆದರೀಗ ವೈಜ್ಞಾನಿಕರಣಗೊಳ್ಳುತ್ತಿದೆ ಎಂದು ವಿಷಾದಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಎನ್.ಮಹೇಶ್, ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷ ಎಂ.ರಾಮಚಂದ್ರ, ಬಿಜೆಪಿ ಜಿಲ್ಲಾ ಅಧ್ಯಕ್ಷ ಆರ್.ಸುಂದರ್, ಹಾಸನ ಜಿಲ್ಲಾ ಉಸ್ತುವಾರಿ ಜಿ.ನಿಜಗುಣರಾಜು, ಮುಖಂಡರಾದ ಅಮ್ಮನಪುರ ಮಲ್ಲೇಶ್, ಹನುಮಂತ ಶೆಟ್ಟಿ, ವಕೀಲ ಚಿನ್ನಸ್ವಾಮಿ, ಅಯ್ಯನಪುರ ಶಿವಕುಮಾರ್, ಮಾಧ್ಯಮ ಪ್ರಮುಖ ಮಂಜುನಾಥ್, ಚಂದ್ರಶೇಖರ್ ಇದ್ದರು.

### ದಕ್ಷಿಣ ಪದವೀಧರ ಕ್ಷೇತ್ರ ಚುನಾವಣೆ

## ಕಾಂಗ್ರೆಸ್ ಅಭ್ಯರ್ಥಿ ಪರ ಧ್ರುವನಾರಾಯಣ್ ಪ್ರಚಾರ



ಹನೂರು, ಜೂ.7(ಸೋಮು)–ದೇಶ ಮತ್ತು ರಾಜ್ಯದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರಗಳು ನಡೆಸುತ್ತಿರುವ ದುರಾಡಳಿತ ಅರಿತು ಪ್ರಜ್ಞಾವಂತ ಪದವೀಧರ ಮತದಾರರು ಕಾಂಗ್ರೆಸ್ ಅಭ್ಯರ್ಥಿ ಮಧು ಜಿ.ಮಾದೇಗೌಡರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ, ಜಯಶೀಲರನ್ನಾಗಿಸಬೇಕು ಎಂದು ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ಆರ್.ಧ್ರುವನಾರಾಯಣ್ ಮನವಿ ಮಾಡಿದರು.

ದಕ್ಷಿಣ ಪದವೀಧರ ಕ್ಷೇತ್ರ ಚುನಾವಣೆ ಹಿನ್ನೆಲೆಯಲ್ಲಿ ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಬಿಜೆಪಿ ಹಾಗೂ ಜೆಡಿಎಸ್ ಅಭ್ಯರ್ಥಿಗಳನ್ನು ಹೋಲಿಕೆ ಮಾಡಿದರೆ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಮಧು.ಜಿ.ಮಾದೇಗೌಡರು ಶಿಕ್ಷಣ ಪ್ರೇಮಿ ಹಾಗೂ ತಜ್ಞರು. ಇವರು ಬೃಹತ್ ಶಿಕ್ಷಣ ಸಂಸ್ಥೆ ನಡೆಸುತ್ತಿದ್ದು, ಶಿಕ್ಷಕರು, ಉಪನ್ಯಾಸಕರು ಸೇರಿದಂತೆ ನಿರುದ್ಯೋಗಿ ಪದವೀಧರರ ಕುಂದು–ಕೊರತೆಗಳ ಅರಿವಿದೆ. ಅವರು ವಿಜೇತರಾದರೆ ಈ ಸಮಸ್ಯೆಗಳನ್ನು ಬಗೆಹರಿಸುತ್ತಾರೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶಾಸಕ ಆರ್. ನರೇಂದ್ರ, ಹನೂರು ರಾಮಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಈಶ್ವರ್, ದೇವರಾಜು, ಜಿಪಂ ಮಾಜಿ ಉಪಾಧ್ಯಕ್ಷ ಬಸವರಾಜು, ಮುರುಡೇಶ್ವರಸ್ವಾಮಿ ಇನ್ನಿತರರಿದ್ದರು.

## ಚಾಮುಲ್ ಚುನಾವಣೆ; 24 ಅಭ್ಯರ್ಥಿಗಳ ನಾಮಪತ್ರವೂ ಕ್ರಮಬದ್ಧ

ಚಾಮರಾಜನಗರ, ಜೂ.7(ಎಸ್‌ಎಸ್)– ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ(ಚಾಮುಲ್)ದ ಆಡಳಿತ ಮಂಡಳಿಯ 9 ನಿರ್ದೇಶಕ ಸ್ಥಾನಕ್ಕೆ ಸ್ಪರ್ಧಿಸಿರುವ 24 ಅಭ್ಯರ್ಥಿಗಳ ನಾಮಪತ್ರ ಪರಿಶೀಲನಾ ಕಾರ್ಯ ಮಂಗಳವಾರ ನಡೆಯಿತು.

ಕುದೇರು ಗ್ರಾಮದಲ್ಲಿ ಇರುವ ಚಾಮುಲ್ ಆಡಳಿತ ಕಚೇರಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿ ಕೆ.ಎ.ರಾಜೇಂದ್ರಪ್ರಸಾದ್ ನಾಮಪತ್ರಗಳನ್ನು ಪರಿಶೀಲಿಸಿದರು. ಎಲ್ಲಾ ಅಭ್ಯರ್ಥಿಗಳ ನಾಮಪತ್ರವೂ ಸಹ ಕ್ರಮಬದ್ಧವಾಗಿದೆ ಎಂದು ಅವರು 'ಮೈಸೂರುಮಿತ್ರ'ನಿಗೆ ತಿಳಿಸಿದರು.

**ದೂರು:** ನಾಮಪತ್ರಗಳ ಪರಿಶೀಲನಾ ಸಂದರ್ಭದಲ್ಲಿ ಜಿಲ್ಲಾ ಮಹಿಳಾ ಸಂಘಗಳ ಒಕ್ಕೂಟ ಕ್ಷೇತ್ರದಿಂದ ನಾಮಪತ್ರ ಸ್ಪರ್ಧಿಸಿರುವ ಜಿ.ಪ್ರಮೋದಾ ಅವರು ಕಾಂಗ್ರೆಸ್ ಬೆಂಬಲಿತರಾಗಿ ಸ್ಪರ್ಧಿಸಿರುವ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರ ಪುತ್ರಿ ಶೀಲಾ ಪುಟ್ಟರಂಗಶೆಟ್ಟಿ ಅವರ ವಿರುದ್ಧ ದೂರು ಸಲ್ಲಿಸಿದರು.

ಶೀಲಾ ಅವರು ರಾಮಚಂದ್ರು ಅವರನ್ನು ವಿವಾಹವಾಗಿದ್ದರೂ ಸಹ ನಾಮಪತ್ರದಲ್ಲಿ ಕುಮಾರಿ ಎಂದು ನಮೂದಿಸಿದ್ದಾರೆ. ಮೈಸೂರಿನಲ್ಲಿ ವಾಸವಿದ್ದರೂ ಸಹ ಖಾಯಂ ವಿಳಾಸವನ್ನು ಮರೆಮಾಚಿ ಉಪ್ಪಿನಮೋಳೆ ವಿಳಾಸ ನೀಡಿದ್ದಾರೆ. ನಕಲು ದಾಖಲೆಗಳ ಮೂಲಕ ಮತದಾರರ ಪಟ್ಟಿಗೆ ಸೇರ್ಪಡೆಯಾಗಿರುವ ಶೀಲಾ ಅವರು ಚುನಾವಣೆಯ ನಿಯಮಗಳನ್ನು ಗಾಳಿಗೆ ತೂರಿದ್ದು, ಅವರ ನಾಮಪತ್ರ ತಿರಸ್ಕರಿಸುವಂತೆ ದೂರಿನಲ್ಲಿ ತಿಳಿಸಿದ್ದಾರೆ. ಈ ಕುರಿತು 'ಮೈಸೂರುಮಿತ್ರ'ನೊಂದಿಗೆ ಮಾತನಾಡಿದ ಚುನಾವಣಾಧಿಕಾರಿ ರಾಜೇಂದ್ರ ಪ್ರಸಾದ್ ಅವರು, ಶೀಲಾ ಅವರ ವಿರುದ್ಧ ಸಲ್ಲಿಸಿದ್ದ ದೂರುಗಳ ಬಗ್ಗೆ ದಾಖಲೆ ಪರಿಶೀಲಿಸಲಾಯಿತು. ದೂರಿನಲ್ಲಿ ಸತ್ಯಾಂಶ ಇರಲಿಲ್ಲ. ಹೀಗಾಗಿ ಶೀಲಾ ಅವರ ನಾಮಪತ್ರವನ್ನು ಅಂಗೀಕರಿಸಲಾಯಿತು ಎಂದರು.

## ಆಲೂರಿನಲ್ಲಿ ಇಂದು ಭಗೀರಥ ಜಯಂತಿ

ಆಲೂರು, ಜೂ.7– ಚಾಮರಾಜನಗರ ತಾಲೂಕಿನ ಆಲೂರು ಗ್ರಾಮದ ಉಪ್ಪಾರ ಸಮಾಜ ಹಾಗೂ ಭಗೀರಥ ಯುವಕ ಸಂಘದ ಸಂಯುಕ್ತಾಶ್ರಯದಲ್ಲಿ ಬುಧವಾರ ಮಹರ್ಷಿ ಭಗೀರಥ ಜಯಂತ್ಯುತ್ಸವ ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 9ಗಂಟೆಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಹರ್ಷಿ ಭಗೀರಥ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ನಂತರ ಹೂವಿನ ಪಲ್ಲಕ್ಕಿಯಲ್ಲಿ ಮಹರ್ಷಿ ಭಗೀರಥರ ಭಾವಚಿತ್ರ ಮೆರವಣಿಗೆ ನಡೆಯಲಿದೆ.



**ಗುಂಡ್ಲುಪೇಟೆ ಪಟ್ಟಣದ ಪ್ಲೇಗ್ ಮಾರಮ್ಮ ದೇವಸ್ಥಾನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ವಿಶ್ವ ತಂಬಾಕು ವಿರೋಧಿ ದಿನ ಆಚರಿಸಲಾಯಿತು. ತಾಲೂಕು ಆಸ್ಪತ್ರೆ ಹಿರಿಯ ದಂತ ವೈದ್ಯೆ ಡಾ.ಸ್ಮಿತಾ ಮಾತನಾಡಿದರು. ಪಟ್ಟಣ ಠಾಣೆ ಅಪರಾಧ ವಿಭಾಗದ ಪಿಎಸ್‌ಐ ಸುಜಾತಾ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಪ್ರಸಾದ್, ಗ್ರಾಮಾಭಿವೃದ್ಧಿ ತಾಲೂಕು ಯೋಜನಾಧಿಕಾರಿ ಶಿವಪ್ರಸಾದ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಮಂಜುಳಾ, ವಲಯ ಮೇಲ್ವಿಚಾರಕ ಪುಟ್ಟರಾಜು ಸೇರಿದಂತೆ ಇತರರಿದ್ದರು.**

## ಯಳಂದೂರು ಎಸ್‌ಡಿವಿಎಸ್ ಶಾಲೆಯಿಂದ ಪರಿಸರ ಜಾಗೃತಿ



ಯಳಂದೂರು, ಜೂ.7(ವಿ.ನಾಗರಾಜು)–ಪಟ್ಟಣದ ಎಸ್‌ಡಿವಿಎಸ್ ವಿದ್ಯಾಸಂಸ್ಥೆಯಲ್ಲಿ ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಜಾಥಾ ನಡೆಯಿತು.

ಪರಿಸರ ದಿನಾಚರಣೆ ಅಂಗವಾಗಿ ಇಕೋ ಕ್ಲಬ್‌ನಿಂದ ಹಮ್ಮಿಕೊಂಡಿದ್ದ ಜಾಥಾ ಹಿನ್ನೆಲೆಯಲ್ಲಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಭಿತ್ತಿಪತ್ರಗಳನ್ನು ಹಿಡಿದು ಸಾಗಿದ ವಿದ್ಯಾರ್ಥಿಗಳು, ಪರಿಸರ ಸಂರಕ್ಷಣೆ ಕುರಿತ ಜಾಗೃತಿ ಘೋಷಣೆಗಳನ್ನು ಕೂಗಿ ಸಾರ್ವಜನಿಕರಲ್ಲಿ ಪರಿಸರ ಅರಿವು ಮೂಡಿಸಿದರು. ಸಂಸ್ಥೆಯ ಮುಖ್ಯಶಿಕ್ಷಕ ವೀರಭದ್ರಸ್ವಾಮಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ. ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ವ್ಯಾಖ್ಯಾನದಂತೆ ವಿದ್ಯಾರ್ಥಿ ದೆಸೆಯಿಂದಲೇ ಮಕ್ಕಳು ಈ ಕುರಿತು ಹೆಚ್ಚು–ಹೆಚ್ಚು ಅರಿವು ಬೆಳೆಸಿಕೊಳ್ಳಬೇಕು. ಇದರೊಂದಿಗೆ ತಮ್ಮವರಲ್ಲೂ ಸಹ ಅರಿವು ಮೂಡಿಸುವ ಕೆಲಸವಾಗಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಪಟ್ಟಣದ ಸಾರ್ವಜನಿಕರಿಗೆ ಗಿಡಗಳನ್ನು ಉಚಿತವಾಗಿ ನೀಡಲಾಯಿತು. ಸಾಹಿತ್ಯ ಕುಟೀರದ ವತಿಯಿಂದ ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ಅವರ ಜನ್ಮ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಗುಂಬಳ್ಳಿ ಬಸವರಾಜು, ಮಂಗಳಮ್ಮ, ಶಶಿ, ಮಲ್ಲಿಕಾರ್ಜುನಸ್ವಾಮಿ, ನಾಗರಾಜು ಮಂಜುನಾಥ, ಶಿವಮೂರ್ತಿ, ಪ್ರಕಾಶ್, ಜಬಿನ್‌ತಾಜ್, ರೂಪಾ, ಪವಿತ್ರ, ನಂದಿನಿ, ಶಬೀನ ತಾಜ್, ನೀಲಾಂಬರಿ, ಸಹನಾ ಸೇರಿದಂತೆ ಇತರರಿದ್ದರು.

# ಅಂತರರಾಷ್ಟ್ರೀಯ ಯೋಗ ದಿನಾಚರಣೆ ಸಿದ್ಧತೆಗೆ ಸೂಚನೆ



ಮಡಿಕೇರಿ, ಜೂ.7– ಜೂ.21 ರಂದು 8 ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕೈಗೊಳ್ಳುವ ಸಂಬಂಧ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಬಿ.ಸಿ. ಸತೀಶ, ಮಳೆ ವಾತಾವರಣ ಇಲ್ಲದಿದ್ದಲ್ಲಿ ನಗರದ ಭಾರತೀಯ ಕ್ರೀಡಾ ಪ್ರಾಧಿಕಾರ(ಸಾಯಿ), ಮಳೆ ಇದ್ದಲ್ಲಿ ಜಿಲ್ಲೆಯ ಕ್ರಿಸ್ಟಲ್ ಕೋರ್ಟ್ ಅಥವಾ ಕಾವೇರಿ ಹಾಲ್‌ನಲ್ಲಿ ಯೋಗ ದಿನಾಚರಣೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ಯೋಗ ದಿನಾಚರಣೆ ಯಶಸ್ಸುಗೊಳಿಸುವ ನಿಟ್ಟಿನಲ್ಲಿ ಸರ್ಕಾರದ ಜೊತೆ ಸರ್ಕಾರೇತರ ಸಂಸ್ಥೆಗಳನ್ನು ಆಹ್ವಾನಿಸಿ ಯೋಗ ದಿನಾಚರಣೆ ಯಶಸ್ಸಿಗೆ ಸಹಕರಿಸುವಂತೆ ಅವರು ಕೋರಿದರು. ಯೋಗ ದಿನಾಚರಣೆಯ ಮಹತ್ವವನ್ನು ಸಾರುವ ನಿಟ್ಟಿನಲ್ಲಿ ಜಾಥಾ ಹಮ್ಮಿಕೊಳ್ಳುವುದು, ಮಾಧ್ಯಮಗಳ ಮೂಲಕ ಹೆಚ್ಚಿನ ಪ್ರಚಾರ ಕೈಗೊಳ್ಳುವುದು ಮತ್ತಿತರ ಎಲ್ಲರ ಸಹಕಾರ ಪಡೆದು ಕಾರ್ಯಕ್ರಮ ಯಶಸ್ಸಿಗೆ ಶ್ರಮಿಸುವಂತೆ ಜಿಲ್ಲಾ ಆಯುಷ್ ಅಧಿಕಾರಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ರೇಣುಕಾದೇವಿ ಮಾಹಿತಿ ನೀಡಿ ಜೂ.21 ರಂದು ಯೋಗ ದಿನಾಚರಣೆಯನ್ನು ಮೈತ್ರಿ ಹಾಲ್‌ನಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ. ಅದಕ್ಕೂ ಮೊದಲು ಜೂ.19 ರಂದು ಜಾಥಾ ಏರ್ಪಡಿಸಲು ಉದ್ದೇಶಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಮಾತನಾಡಿದ ಡಿವೈಎಸ್‌ಪಿ ಗಜೇಂದ್ರ ಪ್ರಸಾದ್, ಪ್ರಸಕ್ತ ವಾರವೇ ಎನ್‌ಡಿಆರ್‌ಎಫ್ ತಂಡ ಆಗಮಿಸಿ, ಮೈತ್ರಿ ಸಭಾಂಗಣದಲ್ಲಿ ವಾಸ್ತವ್ಯ ಹೂಡಲಿದೆ ಎಂದು ತಿಳಿಸಿದರು.

ಯೋಗ ಶಿಕ್ಷಕ ಮಹೇಶ್‌ಕುಮಾರ್ ಜಾಥಾವನ್ನು ನಗರದ ಗಾಂಧಿ ಮೈದಾನದಿಂದ ಜನರಲ್ ತಿಮ್ಮಯ್ಯ ವೃತ್ತ ಕಾಲೇಜು ರಸ್ತೆ ಮೂಲಕ ಹಮ್ಮಿಕೊಳ್ಳಬಹುದಾಗಿದೆ ಎಂದು ಸಲಹೆ ಮಾಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಎನ್‌ಎಸ್‌ಎಸ್, ಎನ್‌ಸಿಸಿ, ಯೋಗ ಸಂಸ್ಥೆಗಳ ಸಹಕಾರದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ. ಯೋಗ ದಿನಾಚರಣೆಯಲ್ಲಿ ಸುಮಾರು 300 ಮಂದಿ ಪಾಲ್ಗೊಳ್ಳಲಿದ್ದಾರೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ರೇಣುಕಾದೇವಿ ಮಾಹಿತಿ ನೀಡಿದರು.

ಜಿಲ್ಲಾ ಮಟ್ಟದ ಎಲ್ಲಾ ಹಂತದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತಾಗಬೇಕು. ತಾಲ್ಲೂಕು ಮಟ್ಟದಲ್ಲಿಯೂ ಸಹ ತಹಶೀಲ್ದಾರರು, ತಾಪಂ ಇಒ ಇತರರ ಸಮ್ಮುಖದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳುವಂತಾಗಬೇಕು ಎಂದು ಅವರು ಸಲಹೆ ಮಾಡಿದರು.

ಜಿಪಂ ಸಿಇಒ ಭಂವರ್ ಸಿಂಗ್ ಮೀನಾ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎನ್.ಪಿ.ಅನಿತಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆರ್.ವೆಂಕಟೇಶ್, ಡಿಡಿಪಿಐ ವೇದಮೂರ್ತಿ, ಜಿಲ್ಲಾ ಸರ್ಜನ್ ಡಾ.ವಿಶಾಲ್ ಕುಮಾರ್, ಸ್ಕೌಟ್ಸ್ ಮತ್ತು ಗೈಡ್ಸ್‌ನ ಪ್ರಧಾನ ಆಯುಕ್ತರಾದ ಕೆ.ಟಿ.ಬೇಬಿ ಮ್ಯಾಥ್ಯೂ, ನಗರಾಭಿವೃದ್ಧಿ ಯೋಜನಾ ಶಾಖೆಯ ಯೋಜನಾ ನಿರ್ದೇಶಕ ಬಸಪ್ಪ, ಪೌರಾಯುಕ್ತ ರಾಮದಾಸ್, ಸಹಕಾರ ಇಲಾಖೆಯ ಉಪ ನಿಬಂಧಕ ಎಚ್.ಎನ್.ರಮೇಶ್, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ನಾರಾಯಣ ರೆಡ್ಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಜಿ.ಎಸ್.ಗುರುಸ್ವಾಮಿ, ಟ್ರಾವೆಲ್ ಕೂರ್ಗ್‌ನ ಚೆಯ್ಯಂಡ ಸತ್ಯ, ಬಿ.ಕೆ.ರವೀಂದ್ರ ರೈ, ಡಾ.ರಾಜಾರಾಂ, ನಾನಾ ಇಲಾಖೆ ಅಧಿಕಾರಿಗಳಿದ್ದರು.

## ಕುಶಾಲನಗರದಲ್ಲಿ ತಂಬಾಕು ವಿರೋಧಿ ದಿನಾಚರಣೆ



ಕುಶಾಲನಗರ, ಜೂ.7– ಯುವ ಜನಾಂಗ ದುಶ್ಚಟದಿಂದ ದೂರವಿದ್ದು, ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡುವಲ್ಲಿ ತೊಡಗಿಸಿಕೊಳ್ಳಬೇಕು ಎಂದು ಆರೋಗ್ಯ ಇಲಾಖೆಯ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎಚ್.ಕೆ. ಶಾಂತಿ ಸಲಹೆ ನೀಡಿದರು.

ಪಟ್ಟಣದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಮತ್ತು ವಿವೇಕಾನಂದ ಎಜುಕೇಷನ್ ಟ್ರಸ್ಟ್ ಆಶ್ರಯದಲ್ಲಿ ಏರ್ಪಡಿಸಿದ್ದ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ತಂಬಾಕು ಉತ್ಪನ್ನಗಳನ್ನು ಬಳಕೆ ಮಾಡುವ ಮೂಲಕ ಆರೋಗ್ಯ ಸಂಪೂರ್ಣ ಕೆಡುವುದರೊಂದಿಗೆ ಇಡೀ ಕುಟುಂಬ ನಾಶವಾಗುವ ಸಂಭವವೇ ಅಧಿಕ ಎಂದರು. ತಂಬಾಕು ಸೇವನೆ ದುಷ್ಪರಿಣಾಮದಿಂದ ವಿಶ್ವದಲ್ಲಿ ಪ್ರತಿ ಆರು ಸೆಕೆಂಡುಗಳ ಅವಧಿಯಲ್ಲಿ ಒಬ್ಬನ ಸಾವು ಉಂಟಾಗುತ್ತಿರುವ ಮಾಹಿತಿ ಇದೆ. ಇದು ಬಹಳ ಅಪಾಯಕಾರಿ ಬೆಳವಣಿಗೆಯಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳ ಮೂಲಕ ಇಂತಹ ಅನಾಹುತಗಳ ಬಗ್ಗೆ ಕುಟುಂಬ ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸಲು ಸಾಧ್ಯ ಎಂದರು. ಗ್ರಾಮೀಣಾಭಿವೃದ್ಧಿ ಯೋಜನೆ ಕೊಡಗು ಜಿಲ್ಲಾ ನಿರ್ದೇಶಕಿ ಲೀಲಾವತಿ ಮಾತನಾಡಿ, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಕಳೆದ ಹಲವು ವರ್ಷಗಳಿಂದ ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡುವ ಬಗ್ಗೆ ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದೆ ಎಂದರು.

ಮಹಾತ್ಮ ಗಾಂಧಿ ಮೆಮೋರಿಯಲ್ ಪದವಿ ಕಾಲೇಜಿನ ಪ್ರಾಂಶುಪಾಲೆ ಲಿಖಿತ ಅಧ್ಯಕ್ಷತೆ ವಹಿಸಿದ್ದರು. ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಎಂ. ಎನ್.ಚಂದ್ರಮೋಹನ್, ಯೋಜನಾಧಿಕಾರಿ ರೋಹಿತ್, ಕಾಲೇಜಿನ ಆಡಳಿತಾಧಿಕಾರಿ ಮಹೇಶ್ ಅಮೀನ್ ಇದ್ದರು. ಕಾರ್ಯಕ್ರಮದಲ್ಲಿ ಕಾಲೇಜಿನ ಎನ್‌ಎಸ್‌ಎಸ್ ಘಟಕ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಪ್ರಾಧ್ಯಾಪಕ ಮಂಜೇಶ್ ನಿರೂಪಿಸಿದರು. ಯೋಜನಾಧಿಕಾರಿ ರೋಹಿತ್ ಸ್ವಾಗತಿಸಿದರು. ಯೋಜನೆಯ ಮೇಲ್ವಿಚಾರಕಿ ಪೂರ್ಣಿಮಾ ವಂದಿಸಿದರು.

## ಹೆದ್ದಾರಿ ಅಪಘಾತ ತಡೆಗೆ ಮನವಿ

ಮಡಿಕೇರಿ, ಜೂ.7– ಇತ್ತೀಚಿನ ದಿನಗಳಲ್ಲಿ ಮಡಿಕೇರಿ–ಕುಶಾಲನಗರ ಹೆದ್ದಾರಿಯಲ್ಲಿ ಅಪಘಾತಗಳ ಸಂಖ್ಯೆ ಮಿತಿ ಮೀರುತ್ತಿದ್ದು, ಪ್ರತಿದಿನ ಸಾವು ನೋವುಗಳು ಸಂಭವಿಸುತ್ತಿವೆ. ಇದನ್ನು ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಕೊಡಗು ರಕ್ಷಣಾ ವೇದಿಕೆ ರಾಷ್ಟ್ರೀಯ ಹೆದ್ದಾರಿ ಮಂಗಳೂರು ವೃತ್ತದ ಕೊಡಗು ಜಿಲ್ಲಾ ಉಸ್ತುವಾರಿ ಸಹಾಯಕ ಮುಖ್ಯ ಅಭಿಯಂತರ ನಾಗರಾಜ್ ಅವರಿಗೆ ಮನವಿ ಪತ್ರ ಸಲ್ಲಿಸಿತು.

ನಗರದಲ್ಲಿ ಅಭಿಯಂತರರನ್ನು ಭೇಟಿಯಾದ ಕೊ.ರ.ವೇ ಅಧ್ಯಕ್ಷ ಪವನ್ ಪೆಮ್ಮಯ್ಯ ಹಾಗೂ ನಿರ್ದೇಶಕ ಸುಲೇಮಾನ್, ಹೆದ್ದಾರಿ ಹೆಚ್ಚು ಅಪಾಯಕಾರಿಯಾಗಿದೆ ಎಂದು ವಿವರಿಸಿದರು.

ಮಡಿಕೇರಿ–ಕುಶಾಲನಗರ ರಾಷ್ಟ್ರೀಯ ಹೆದ್ದಾರಿ 275ರ 32 ಕಿ.ಮೀ ವ್ಯಾಪ್ತಿಯಲ್ಲಿ ನಿತ್ಯ ಅಪಘಾತಗಳು ಸಂಭವಿಸಿ ಸಾವು, ನೋವುಗಳಾಗುತ್ತಿವೆ. ಅಲ್ಲದೆ ಸಾರ್ವಜನಿಕ ಆಸ್ತಿಗೂ ಹಾನಿಯಾಗುತ್ತಿದೆ. ಆದ್ದರಿಂದ ಅಪಘಾತ ವಲಯವನ್ನು ಗುರುತಿಸಿ ಬ್ಯಾರಿಕೇಡ್, ಸಣ್ಣ ಪ್ರಮಾಣದ ವೇಗ ನಿಯಂತ್ರಕ, ರಸ್ತೆಯ ಬದಿಗಳಲ್ಲಿ ಎಚ್ಚರಿಕೆಯ ಸೈನ್ ಬೋರ್ಡ್‌ಗಳನ್ನು ಅಳವಡಿಸಬೇಕು. ಕಾಡು ಕಡಿಯಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು. ಅಭಿಯಂತರ ನಾಗರಾಜ್ ಸೂಕ್ತ ಕ್ರಮದ ಭರವಸೆ ನೀಡಿದರು.

## ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ



ಮಡಿಕೇರಿ, ಜೂ.7– ಶಿಕ್ಷಣ ಕ್ಷೇತ್ರದಲ್ಲಿ ಗೊಂದಲ ಸೃಷ್ಟಿಸುತ್ತಿರುವ ಶಿಕ್ಷಣ ಸಚಿವರು ತಕ್ಷಣ ರಾಜೀನಾಮೆ ಸಲ್ಲಿಸಬೇಕೆಂದು ಒತ್ತಾಯಿಸಿ ಕೊಡಗು ಜಿಲ್ಲಾ ದಲಿತ ಸಂಘರ್ಷ ಸಮಿತಿಗಳ ಒಕ್ಕೂಟ ಪ್ರತಿಭಟನೆ ನಡೆಸಿತು.

ಜಿಲ್ಲಾಡಳಿತದ ಮೂಲಕ ಸರಕಾರಕ್ಕೆ ಮನವಿ ಪತ್ರ ಸಲ್ಲಿಸಿದ ಪ್ರತಿಭಟನಾಕಾರರು, ಪಠ್ಯ ಪುಸ್ತಕ ಪರಿಷ್ಕರಣೆ ಪ್ರಕ್ರಿಯೆಯನ್ನು ಕೈಬಿಡಬೇಕು ಮತ್ತು ಶಿಕ್ಷಣ ಕ್ಷೇತ್ರದ ಅವ್ಯವಸ್ಥೆಯ ನೈತಿಕ ಹೊಣೆ ಹೊತ್ತು ಶಿಕ್ಷಣ ಸಚಿವರು ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿದರು. ನಂತರ ಮಾತನಾಡಿದ ಒಕ್ಕೂಟದ ಜಿಲ್ಲಾಧ್ಯಕ್ಷ ಜೆ.ಆರ್.ಪಾಲಾಕ್ಷ, ಪರಿಷ್ಕರಣೆಗೊಂಡಿರುವ ಪಠ್ಯ ಪುಸ್ತಕಗಳು ಬ್ರಾಹ್ಮಣ್ಯದಿಂದ ಕೂಡಿದೆ ಎಂದು ಆರೋಪಿಸಿದರು. ತಕ್ಷಣ ಪರಿಷ್ಕರಣಾ ಸಮಿತಿಯನ್ನು ವಜಾಗೊಳಿಸಿ, ಪರಿಷ್ಕೃತ ಪಠ್ಯವನ್ನು ಕೈಬಿಡಬೇಕೆಂದು ಆಗ್ರಹಿಸಿದರು.

ಸಮಿತಿಯ ಅಧ್ಯಕ್ಷ ರೋಹಿತ್ ಚಕ್ರತೀರ್ಥ ಆರ್‌ಎಸ್‌ಎಸ್ ಕಾರ್ಯಕರ್ತನೇ ಹೊರತು ಶಿಕ್ಷಣ ತಜ್ಞನಲ್ಲ. ಆದರೂ ಪ್ರೊಫೆಸರ್ ಎಂದು ಸುಳ್ಳು ಹೇಳಿಕೆ ನೀಡಿ ತನ್ನೆಲ್ಲ ತಪ್ಪುಗಳನ್ನು ಸಮರ್ಥಿಸಿಕೊಂಡಿದ್ದಾರೆ. ಇಷ್ಟೆಲ್ಲಾ ಅವಾಂತರ ನಡೆಯಲು ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ಕಾರಣ ಎಂದು ಅವರು ಆರೋಪಿಸಿದರು.

ಒಕ್ಕೂಟದ ವಿರಾಜಪೇಟೆ ಉಪಾಧ್ಯಕ್ಷ ಹೆಚ್.ಆರ್.ಪರಶುರಾಮ್ ಮಾತನಾಡಿ, ಪಠ್ಯ ಪುಸ್ತಕ ಪರಿಸ್ಕರಣೆ ಸಮಿತಿಯಲ್ಲೂ ಬಿಜೆಪಿ, ಆರ್‌ಎಸ್‌ಎಸ್, ಬಜರಂಗದಳದವರನ್ನು ಸೇರಿಸಿಕೊಂಡು ದಮನಕಾರಿ ಧೋರಣೆ ಅನುಸರಿಸಲಾಗಿದೆ. ಚುನಾವಣೆ ಸಮೀಪಿಸುತ್ತಿರುವಂತೆಯೇ ಕೋಮು ಗಲಭೆ ಸೃಷ್ಟಿಸಿ ರಾಜಕೀಯ ಲಾಭ ಮಾಡಿಕೊಳ್ಳುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದರು.

ಈ ವೇಳೆ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಎಂ.ಎಸ್.ವಿರೇಂದ್ರ ಪಾಟೀಲ್, ಸೋಮವಾರಪೇಟೆ ತಾಲೂಕು ಅಧ್ಯಕ್ಷ ಜೆ.ಎಲ್.ಜನಾರ್ಧನ, ಜಿಲ್ಲಾ ಸಂಘಟನಾ ಸಂಚಾಲಕ ರಜನಿಕಾಂತ್ ಹಾಗೂ ಮಂಗಳೂರು ಜಿಲ್ಲಾ ಸಂಚಾಲಕ ಆನಂದ ಬೆಳ್ಳಾರೆ ಉಪಸ್ಥಿತರಿದ್ದರು.



**ಸೋಮವಾರಪೇಟೆ ವೆಂಕಟೇಶ್ವರ ಬ್ಲಾಕ್ ಅಂಗನವಾಡಿ ಕೇಂದ್ರದಲ್ಲಿ ವಿಶ್ವ ಪರಿಸರ ದಿನ ಆಚರಿಸಲಾಯಿತು. ಈ ಸಂದರ್ಭ ಪಟ್ಟಣ ಪಂಚಾಯಿತಿ ಸದಸ್ಯೆ ಶೀಲಾ ಡಿಸೋಜ, ಆರೋಗ್ಯ ಅಧಿಕಾರಿ ಜಾಸ್ಮಿನ್, ಮಹಿಳಾ ಮೇಲ್ವಿಚಾರಕರಾದ ಸಾವಿತ್ರಿ, ಕಾರ್ಯಕರ್ತೆ ಜೆನಿಫರ್ ತಾರಾ ಲೋಬೊ, ಜಗದಾಂಬ, ರೇಣುಕಾ ಹಾಗೂ ಪೋಷಕರು ಹಾಜರಿದ್ದರು**

## ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಜೂ.7– ತುರ್ತು ನಿರ್ವಹಣೆ ಹಾಗೂ ದುರಸ್ತಿ ಕಾರ್ಯ ನಿರ್ವಹಿಸಬೇಕಿರುವುದರಿಂದ ಜೂ.8 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಪೊನ್ನಂಪೇಟೆ, ಗೋಣಿಕೊಪ್ಪಲು, ನಲ್ಲೂರು, ಹುದಿಕೇರಿ, ತಿತಿಮತಿ, ಹಾತೂರು, ಪಾಲಿಬೆಟ್ಟ, ಶ್ರೀಮಂಗಲ, ಬಾಳಲೆ, ಕಾನೂರು, ಬಿರುನಾಣಿ, ಕುಟ್ಟ, ವಿರಾಜಪೇಟೆ, ಬಿ.ಶೆಟ್ಟಿಗೇರಿ, ಬೇತ್ರಿ, ಕಡಂಗಮರೂರು, ಕಾಕೋಟುಪರಂಬು, ಅಮ್ಮತ್ತಿ, ಸಿದ್ದಾಪುರ, ಮಾಲ್ದಾರೆ, ಮೂರ್ನಾಡು, ಮರಗೋಡು, ನಾಪೋಕ್ಲು, ಕಕ್ಕಬೆ, ಅರೆಕಾಡು, ಐಯ್ಯಂಗೇರಿ ಹಾಗೂ ಸುತ್ತಮುತ್ತಲ ವ್ಯಾಪ್ತಿಯ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಸೆಸ್ಕ್ ಕಾರ್ಯನಿರ್ವಾಹಕ ಎಂಜಿನಿಯರ್ ಕೋರಿದ್ದಾರೆ.

## ವಿ.ಪೇಟೆಗೆ ಜಿಲ್ಲಾಧಿಕಾರಿ ದಿಢೀರ್ ಭೇಟಿ



ವಿರಾಜಪೇಟೆ, ಜೂ.7– ಜಿಲ್ಲಾಧಿಕಾರಿ ಡಾ. ಬಿ.ಸಿ. ಸತೀಶ್ ಅವರು ವಿರಾಜಪೇಟೆಯ ವಿವಿಧ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ತಾಲೂಕು ಕಚೇರಿಯ ಭೂಮಿ ಶಾಖೆ ಹಾಗೂ ವಿವಿಧ ಇಲಾಖೆಯ ಕಡತಗಳನ್ನು ಪರಿಶೀಲಿಸಿದ ಜಿಲ್ಲಾಧಿಕಾರಿ, ಸಾರ್ವಜನಿಕ ಕಡತಗಳನ್ನು ಆದಷ್ಟು ಬೇಗ ವಿಲೇವಾರಿ ಮಾಡುವಂತೆ ಆಯಾಯ ಅಧಿಕಾರಿಗಳಿಗೆ ಸೂಚಿಸಿದರು. ಬಳಿಕ ತಾಲೂಕು ಕಚೇರಿಯ ಮೇಲಂತಸ್ಥಿನ ನೂತನ ಕಟ್ಟಡ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ಪಟ್ಟಣ ಪಂಚಾಯಿತಿಗೆ ಭೇಟಿ ನೀಡಿ ವಿವಿಧ ವಿಚಾರಗಳ ಕುರಿತು ಮಾಹಿತಿ ಪಡೆದರು. ಜಿಲ್ಲಾಧಿಕಾರಿ ಭೇಟಿ ಸಂದರ್ಭ ತಹಸೀಲ್ದಾರ್ ಆರ್.ಯೋಗಾನಂದ, ಪಂಚಾಯಿತಿ ಮುಖ್ಯಾಧಿಕಾರಿ ಚಂದ್ರಕುಮಾರ್ ಹಾಗೂ ಇತರ ಅಧಿಕಾರಿಗಳು ಹಾಜರಿದ್ದರು.

## ಒಂದೇ ಸ್ಥಳದಲ್ಲಿ ಮಳೆ ಹನಿಗಳ ಲೀಲೆ...

### ನೋಡಲು ಮುಗಿಬಿದ್ದ ಜನತೆ



ಮಡಿಕೇರಿ, ಜೂ.7– ಪ್ರಕೃತಿಯಲ್ಲಿ ಹಲವಾರು ವೈಚಿತ್ರ್ಯಗಳು ಕಂಡು ಬಂದು ಮನುಕುಲವನ್ನು ಆಗಾಗ್ಗೆ ವಿಸ್ಮಯಗೊಳಿಸುತ್ತದೆ. ಪ್ರಕೃತಿಯ ಈ ವಿಸ್ಮಯಕ್ಕೆ ಯಾವುದೇ ಎಣೆಯಿಲ್ಲ ಆದ್ದರಿಂದಲೇ ಪ್ರಕೃತಿ ಎದುರು ಮನುಷ್ಯ ಎಷ್ಟೇ ಸಾಧನೆಗೈದಿದ್ದರೂ ಕುಬ್ಜನಾಗಿದ್ದಾನೆ. ಇದೀಗ ಮತ್ತೊಂದು ವಿಸ್ಮಯ ಮಡಿಕೇರಿ ತಾಲೂಕಿನ ಬೆಟ್ಟಗೇರಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಬಳಿಯ ಮರವೊಂದರ ಎಲೆಗಳ ನಡುವೆ ಮಾತ್ರ ಮಳೆ ಹನಿಗಳು ಬಿದ್ದು, ಜನರನ್ನು ಆಶ್ಚರ್ಯಗೊಳಿಸಿದೆ. ಮರದ ಸುತ್ತ ಐದು ಅಡಿ ಪರಿಧಿಯಲ್ಲಿ ಮಾತ್ರ ಎಲೆಗಳ ನಡುವಿನಿಂದ ಹನಿಗಳು ಕೆಲಕಾಲ ಬಿದ್ದಿದ್ದು, ಇದನ್ನು ನೋಡಲು ಜನರು ಮುಗಿಬಿದ್ದರು. ಈ ವೈಚಿತ್ರ್ಯದ ಬಗ್ಗೆ ವಿಷಯ ತಿಳಿದ ಗ್ರಾಪಂ ಅಧಿಕಾರಿಗಳು ಆ ಹನಿಗಳನ್ನು ಸಂಗ್ರಹಿಸಿ ನೀರಿನ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಿದ್ದಾರೆ ಎನ್ನಲಾಗಿದೆ.

ಒಂದನೇ ಪುಟದಿಂದ

## ಯೋಗಾ ಮಾಡುವ ಯೋಗ

ನಿರ್ವಹಿಸಬೇಕು. ಈ ಕುರಿತು ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಸಾಧಿಸುವಂತೆ ಸೂಚಿಸಿದರು. ಇದರೊಂದಿಗೆ ಕೇಂದ್ರ ಆಯುಷ್ ಸಚಿವಾಲಯವು ಯೋಗಕ್ಕೆ ಸಂಬಂಧಿಸಿದಂತೆ ವಸ್ತುಪ್ರದರ್ಶನವನ್ನು ಸಹ ಏರ್ಪಡಿಸಿದೆ. ಇದಕ್ಕೆ ಅಗತ್ಯ ಸಹಕಾರವನ್ನು ನೀಡುವಂತೆಯೂ ಸೂಚಿಸಿದರು. ಈ ಕಾರ್ಯಕ್ರಮದ ಯಶಸ್ಸಿಗೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯ ಕೋರ್ ಕಮಿಟಿ ಸೇರಿದಂತೆ ಒಟ್ಟು 14 ಸಮಿತಿಗಳನ್ನು ರಚಿಸಲಾಗಿದ್ದು, ಈ ಸಮಿತಿಗಳು ಎಚ್ಚರಿಕೆಯಿಂದ ತಮ್ಮ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸುವಂತೆ ಸೂಚಿಸಿದರು. ಪ್ರಧಾನಿಯವರ ಭೇಟಿ ಸಂದರ್ಭದಲ್ಲಿ ಭದ್ರತಾ ವ್ಯವಸ್ಥೆಯಲ್ಲಿ ಲೋಪವಾಗದಂತೆ ಕ್ರಮ ಕೈಗೊಳ್ಳಲು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ದೇಶದ 75 ಪಾರಂಪರಿಕ ತಾಣಗಳಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಜ್ಯದ 5 ತಾಣಗಳಾದ ಮೈಸೂರು, ಹಳೇಬೀಡು, ಹಂಪಿ, ಪಟ್ಟದಕಲ್ ಹಾಗೂ ವಿಜಯಪುರದ ಗೋಲಗುಂಬಜ್ ಈ ಕಾರ್ಯಕ್ರಮಕ್ಕೆ ಆಯ್ಕೆಯಾಗಿವೆ. ಪ್ರಧಾನಿ ನರೇಂದ್ರ ಮೋದಿ ಅವರು ಮೈಸೂರಿನಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದು, ಹಳೇಬೀಡಿನಲ್ಲಿ ಕೇಂದ್ರ ಕೃಷಿ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಹಂಪಿಯಲ್ಲಿ ಕಲ್ಲಿದ್ದಲು ಖಾತೆ ಸಚಿವ ಪ್ರಹ್ಲಾದ್ ಜೋಷಿ, ಪಟ್ಟದಕಲ್ಲಿನಲ್ಲಿ ಕೌಶಲ್ಯ ಅಭಿವೃದ್ಧಿ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ರಾಜ್ಯ ಸಚಿವ ರಾಜೀವ್ ಚಂದ್ರಶೇಖರ್ ಹಾಗೂ ವಿಜಯಪುರದ ಗೋಲಗುಂಬಜ್‌ನಲ್ಲಿ ನವೀಕರಿಸಬಹುದಾದ ಇಂಧನ, ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವ ಭಗವಂತ ಖೂಬಾ ಪಾಲ್ಗೊಳ್ಳಲಿದ್ದಾರೆ. ಇದಲ್ಲದೆ ರಾಜ್ಯಮಟ್ಟದ 75 ಐತಿಹಾಸಿಕ ಸ್ಥಳಗಳಲ್ಲಿ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗುವುದು. ಸಭೆಯಲ್ಲಿ ಸಚಿವರಾದ ಡಾ.ಕೆ.ಸುಧಾಕರ್, ಎಸ್.ಟಿ.ಸೋಮಶೇಖರ್, ನಾರಾಯಣಗೌಡ, ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮ, ಸಿಎಂ ಪ್ರಧಾನ ಕಾರ್ಯದರ್ಶಿ ಎನ್.ಮಂಜುನಾಥಪ್ರಸಾದ್, ಯೋಜನೆ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಪೊಲೀಸ್ ಮಹಾನಿರ್ದೇಶಕ ಪ್ರವೀಣ್ ಸೂದ್, ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಟಿ.ಕೆ.ಅನಿಲ್‌ಕುಮಾರ್ ಮತ್ತು ಇತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು

## ಕಾಶ್ಮೀರಿ ಉಗ್ರನ ಬಂಧನ

ಸಂಘಟನೆಯೊಂದಿಗೆ ತಾಲಿಬ್ ಹುಸೇನ್ ಸಂಪರ್ಕ ಇದೆ ಎಂಬ ಮಾಹಿತಿ ಆಧಾರದ ಮೇಲೆ ಜಮ್ಮು ಪೊಲೀಸರು ಮತ್ತು ಭದ್ರತಾ ಪಡೆಗಳು ಜಂಟಿ ಕಾರ್ಯಾಚರಣೆ ನಡೆಸಿ, ಕಳೆದ ಭಾನುವಾರ ವಶಕ್ಕೆ ತೆಗೆದುಕೊಂಡಿದ್ದವು. ಈತ ನಗರದಲ್ಲಿ ಲೋಡಿಂಗ್, ಅನ್‌ಲೋಡಿಂಗ್ ಕೆಲಸ ಮಾಡುತ್ತಿದ್ದಾಗಿ ಹೇಳಿಕೊಂಡಿದ್ದ. ಈತನಿಗೆ ಆಶ್ರಯ ನೀಡಿದ್ದ ಶ್ರೀರಾಮಪುರ ಮಸೀದಿ ಅಧ್ಯಕ್ಷ ಅನ್ವರ್ ಮಾವಡ ಪ್ರಕಾರ ಹುಸೇನ್ ಕಳೆದ ಹತ್ತು ವರ್ಷಗಳಿಂದ ರೈಲ್ವೆ ಸ್ಟೇಷನ್‌ನಲ್ಲಿ ಕೊರಿಯರ್ ಕೆಲಸ ಮಾಡುತ್ತಿದ್ದ. ಕೊರೊನಾ ಬಂದ ನಂತರ ಆತನಿಗೆ ಕೆಲಸವಿರಲಿಲ್ಲ. ಮಗು ಕೂಡಾ ಇತ್ತು. ಹಾಗಾಗಿ ಮಾನವೀಯತೆ ಆಧಾರದ ಮೇಲೆ ಮಸೀದಿ ಬಳಿ ಆಶ್ರಯ ಕೊಟ್ಟಿದ್ದೇವೆ. ಜಮ್ಮು ಪೊಲೀಸರು ಕಳೆದ ಒಂದು ವಾರದ ಹಿಂದೆಯೇ ಬಂದು ಪರಿಶೀಲನೆ ನಡೆಸಿ, ಹುಸೇನ್‌ನನ್ನು ಕರೆದುಕೊಂಡು ಹೋಗಿದ್ದಾರೆ. ಆನಂತರ ನಮಗೆ ಕಾಶ್ಮೀರದ ಕಾಲಾಕೋಟ್ ಮೂಲದವರು ಎಂದು ಗೊತ್ತಾಯಿತು. ಅವರು ಯಾವ ಸಂಘಟನೆಗೆ ಸೇರಿದವನು ಎಂಬುದರ ಬಗ್ಗೆ ನಮಗೆ ಮಾಹಿತಿ ಇಲ್ಲ. ತುಂಬಾ ಒಳ್ಳೆಯ ವ್ಯಕ್ತಿ. ಇಲ್ಲಿ ಎಂದೂ ಗಲಾಟೆ ಮಾಡಿಕೊಂಡಿರಲಿಲ್ಲ. ಹಿಂದೆ ಕಾಶ್ಮೀರದಲ್ಲಿ ಒಂದು ಮದುವೆಯಾಗಿದ್ದ, ಪತ್ನಿ ಅಸುನೀಗಿದ ನಂತರ ಬೆಂಗಳೂರಿಗೆ ಬಂದು ನೆಲೆಸಿ ಮತ್ತೊಂದು ಮದುವೆಯಾಗಿದ್ದ ಎಂದು ಮಾಹಿತಿ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಗೃಹ ಸಚಿವ ಆರಗ ಜ್ಞಾನೇಂದ್ರ ನಗರದಲ್ಲಿ ನೆಲೆಸಿದ್ದ ಶಂಕಿತ ಉಗ್ರನಿಗೆ ಆಶ್ರಯ ನೀಡಿದ ವ್ಯಕ್ತಿಗಳು ಹಾಗೂ ಸಂಸ್ಥೆಯ ಬಗ್ಗೆ ನಮ್ಮ ಪೊಲೀಸರು ಜಮ್ಮು-ಕಾಶ್ಮೀರ್ ರಾಜ್ಯದ ಪೊಲೀಸರ ಜೊತೆ ಸಮನ್ವಯ ಸಾಧಿಸಿ, ತನಿಖೆ ತೀವ್ರಗೊಳಿಸಿದ್ದಾರೆ.

ಹೆಚ್ಚಿನ ವಿಚಾರಣೆಗಾಗಿ, ರಾಜ್ಯದ ಪೊಲೀಸರು ಜಮ್ಮು ಕಾಶ್ಮೀರದ ಪೊಲೀಸರೊಂದಿಗೆ ಸಂಪರ್ಕ ಹೊಂದಿದ್ದು, ತನಿಖೆ ಮುಂದುವರೆದಿದೆ. ಭಯೋತ್ಪಾದಕನಿಗೆ ಸಂಬಂಧಿಸಿದಂತೆ ಜಮ್ಮು ಕಾಶ್ಮೀರ ಪೊಲೀಸರಿಗೆ ಸರ್ಕಾರ ಅಗತ್ಯ ನೆರವು ಒದಗಿಸಲಾಗುವುದು ಎಂದರು.

## ತಮಿಳುನಾಡು ಮತ್ತೆ ತಕರಾರು

ಮೇಕೆದಾಟು ಯೋಜನೆ ಬಗ್ಗೆ ಚರ್ಚಿಸಲು ಕರ್ನಾಟಕ ರಾಜ್ಯ ಸರ್ಕಾರ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಲಿಖಿತ ಮನವಿ ಮಾಡಿದೆ. ಪ್ರಾಧಿಕಾರದ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಈ ಬಗ್ಗೆ ಚರ್ಚೆ ಮಾಡುವ ಭರವಸೆ ನೀಡಿದೆ. ಸುಪ್ರೀಂಕೋರ್ಟ್‌ನಲ್ಲಿ ಮೇಕೆದಾಟು ಯೋಜನೆಗೆ ಸಂಬಂಧಿಸಿದ ಮೂಲ ಅರ್ಜಿ ವಿಚಾರಣೆ ಬಾಕಿ ಇರುವ ಹೊತ್ತಲ್ಲಿ ಪ್ರಾಧಿಕಾರಕ್ಕೆ ಈ ಬಗ್ಗೆ ಚರ್ಚಿಸುವ ಯಾವುದೇ ಅಧಿಕಾರವಿಲ್ಲ. ಕೇಂದ್ರ ಸರ್ಕಾರವೇ ಡಿಪಿಆರ್ ಸಲ್ಲಿಸಲು ಅನುಮತಿ ನೀಡಿದ್ದು, ಆದರೆ ಪರಿಸರ ಇಲಾಖೆ ಅನುಮತಿಗೆ ನೆರೆ ರಾಜ್ಯಗಳ ಅನುಮತಿ ಅಗತ್ಯ ಎಂದು ಹೇಳಿದೆ. ಹೀಗಾಗಿ ಪ್ರಾಧಿಕಾರದ ಸಭೆಯಲ್ಲಿ ಈ ಬಗ್ಗೆ ಚರ್ಚಿಸುವುದು ಸೂಕ್ತವಲ್ಲ. ಈ ಹಿನ್ನೆಲೆ ಮುಂದಿನ ಸಭೆಯಲ್ಲಿ ಪ್ರಾಧಿಕಾರದ ಅಧಿಕಾರಿಗಳು ಮೇಕೆದಾಟು ಅಣೆಕಟ್ಟು ನಿರ್ಮಾಣದ ಬಗ್ಗೆ ಚರ್ಚೆ ಮಾಡದಂತೆ ಹಾಗೂ ಯಾವುದೇ ಆದೇಶಗಳನ್ನು ಮಾಡದಂತೆ ಕೋರ್ಟ್ ತಡೆಯಾಜ್ಞೆ ನೀಡಬೇಕು ಎಂದು ತಮಿಳುನಾಡು ತನ್ನ ಅರ್ಜಿಯಲ್ಲಿ ಮನವಿ ಮಾಡಿದೆ.

## ಹರಕೆಯ ಕುರಿ ಮಾಡಬೇಡಿ...!!

**ಶಿಸ್ತು ಕಲಿತುಕೊಳ್ಳಿ:** ಈ ಎಲ್ಲಾ ಬೆಳವಣಿಗೆಯಿಂದ ಇರಿಸು ಮುರಿಸಿನಿಂದಲೇ ಭಾಷಣ ಆರಂಭಿಸಿದ ಸಚಿವ ವಿ.ಸೋಮಣ್ಣ, ದಯವಿಟ್ಟು ಎಲ್ಲಾ ಆರಾಮಾಗಿರಿ, ನಾನು 45 ವರ್ಷದಿಂದ ರಾಜಕೀಯದಲ್ಲಿದ್ದೇನೆ. ದಯಮಾಡಿ ಇದೆಲ್ಲಾ ಬಿಡಿ, ಒಳ್ಳೆಯ ಸಂದೇಶಕ್ಕಾಗಿ ಸಮುದಾಯದ ಪ್ರಮುಖರ ಸಭೆ ಆಯೋಜಿಸಿದ್ದಾರೆ ಎಂದರು. ಈ ವೇಳೆಯೇ ವೇದಿಕೆಯಲ್ಲಿದ್ದ ವಿಜಯೇಂದ್ರಗೆ ಅವರ ಅಭಿಮಾನಿಗಳಿಬ್ಬರು ಹೂಗುಚ್ಛ ನೀಡುವುದನ್ನು ಗಮನಿಸಿ, ರೀ ಸ್ವಾಮಿ ಇವೆಲ್ಲಾ ಬಿಡ್ರೀ, ಶಿಸ್ತು ಕಲಿತುಕೊಳ್ಳಿ ಸ್ವಲ್ಪ ಎಂದು ಕಿಡಿಕಾರಿದರು.

**ಚಿಕ್ಕವರನ್ನಾಗಿ ಮಾಡಬೇಡಿ:** ವಿಜಯೇಂದ್ರ ಮತ್ತು ಸೋಮಣ್ಣ ಬಂದರೆ ಏನೋ ಆಗುತ್ತದೆ ಎಂದಲ್ಲ. ಒಂದು ಕಡೆ ಕಾಂಗ್ರೆಸ್-ಜೆಡಿಎಸ್ ನಾಯಕರ ಹೇಳಿಕೆ, ಮತ್ತೊಂದು ಕಡೆ ಮುಖವನ್ನೇ ಕಾಣದ ಯಾರೋ ಒಬ್ಬನಿಗೆ ಮತ ಹಾಕುತ್ತಾರೆಂಬ ಅಪಪ್ರಚಾರದಿಂದ ಗೊಂದಲ ಸೃಷ್ಟಿಯಾಗಿದೆ. ಗೊಂದಲ ನಿವಾರಣೆಗೆ ಈ ಭಾಗದ ಮುಖಂಡರು ಸಭೆ ಆಯೋಜಿಸಿ ಒಳ್ಳೆಯ ಕೆಲಸ ಮಾಡಿದ್ದಾರೆ. ಹೀಗೆಯೇ ಒಳ್ಳೆಯ ಕೆಲಸ ಮುಂದುವರೆಸಿ. ರೈಲು ಹತ್ತಿಸುವುದನ್ನು ಬಿಡಿ, ವಿಜಯೇಂದ್ರನ ಹಣೆ ಬರಹದಲ್ಲಿ ಇದ್ದರೆ ಏನಾಗಬೇಕೋ ಅದಾಗುತ್ತಾನೆ ಎಂದು ಹೇಳುತ್ತಿದ್ದಂತೆ ಶಿಳ್ಳೆ, ಕೇಕೆ ಹೆಚ್ಚಾಗಿ ಗದ್ದಲ ಉಂಟಾಯಿತು. ಇದು ಪಕ್ಷದ ಚುನಾವಣಾ ಪ್ರಚಾರ ಸಭೆ, ತನ್ನದೇ ಆದ ನೀತಿ ನಿಯಮಗಳಿವೆ. ದಯವಿಟ್ಟು ವಿನಂತಿ ಮಾಡುತ್ತೀನಿ ಯಾರನ್ನೂ ಚಿಕ್ಕವರನ್ನಾಗಿ ಮಾಡಬೇಡಿ. ಇದರ ಹಿಂದಿರುವ ವಾಸ್ತವಾಂಶವನ್ನು ಅರ್ಥ ಮಾಡಿಕೊಳ್ಳಬೇಕು. ಏನಾದರೂ ಚರ್ಚೆ ಮಾಡುವುದಾದರೆ ಪ್ರತ್ಯೇಕ ಸಭೆ ಸೇರೋಣ ಎಂದು ಸಿಟ್ಟಿನಿಂದ ನುಡಿದರು.

**ಹರಕೆಯ ಕುರಿ ಮಾಡಬೇಡಿ:** ನಾನು ಬೆಂಗಳೂರು ಮಹಾನಗರದದಲ್ಲಿ 5 ಬಾರಿ ಶಾಸಕ, 2 ಬಾರಿ ಎಂಎಲ್‌ಸಿ, 6 ಬಾರಿ ಸಚಿವನಾಗಿದ್ದೇನೆ. ಸ್ವತಂತ್ರವಾಗಿಯೂ ಚುನಾವಣೆ ಎದುರಿಸಿ ಗೆದ್ದಿದ್ದೇನೆ ಎಲ್ಲೋ ಒಂದು ಕಡೆ ವಿಜಯೇಂದ್ರ ಅವರನ್ನು ಹರಕೆಯ ಕುರಿ ಮಾಡಬೇಡಿ ಎಂದು ಏರುಧ್ವನಿಯಲ್ಲಿ ಎಚ್ಚರಿಕೆ ನೀಡಿದರು. ಈ ವೇಳೆ ಮೈಕ್ ಬಳಿ ಬಂದ ವಿಜಯೇಂದ್ರ, ಸೋಮಣ್ಣನವರು ಸಮಾಜದ ಹಿರಿಯರು ನನ್ನ ಬಗ್ಗೆ ನಾಲ್ಕು ಒಳ್ಳೆ ಮಾತನ್ನಾಡುತ್ತಿದ್ದಾರೆ ಅನ್ಯತಾ ಭಾವಿಸಬೇಡಿ ಎಂದು ಮನವಿ ಮಾಡಿದರು.

**ನಾಯಕತ್ವ ಕೊರತೆ ಇದೆ:** ಮಾತು ಮುಂದುವರೆಸಿದ ಸಚಿವ ಸೋಮಣ್ಣ, ನಮ್ಮಲ್ಲೇ ವಿಷ ಬೀಜ ಬಿತ್ತುವ ಹುನ್ನಾರಕ್ಕೆ ಈ ವೇದಿಕೆ ಮೂಲಕ ತೆರೆ ಎಳೆಯಬೇಕು. ಲಕ್ಷಾಂತರ ಜನ ನೋಡುತ್ತಿದ್ದಾರೆ, ಅವಲೋಕನ ಮಾಡುತ್ತಿದ್ದಾರೆ. ಬೇರೆ ಸಮುದಾಯದಲ್ಲಿರುವ ಒಗ್ಗಟ್ಟು ನಮ್ಮಲ್ಲೂ ಬರಬೇಕು. ಈ ಭಾಗದಲ್ಲಿ ಸಮಾಜದ ನಾಯಕತ್ವದ ಕೊರತೆ ಇದೆ. ನಾನು 72ನೇ ವರ್ಷಕ್ಕೆ ಕಾಲಿಡುತ್ತಿದೇನೆ. ನೀವು ಅರ್ಥ ಮಾಡಿಕೊಳ್ಳಬೇಕು. ನಾನು ಸ್ವತಂತ್ರವಾಗಿ ಚುನಾವಣೆ ಎದುರಿಸಿ 36 ಸಾವಿರ ಮತಗಳಲ್ಲಿ ಗೆದ್ದಿದ್ದೇನೆ. ಯಡಿಯೂರಪ್ಪನವರು ಮುಖ್ಯಮಂತ್ರಿಯಾಗಿದ್ದಾಗ ಅವರನ್ನು ಯಾರು ಯಾವ ರೀತಿ ಬಳಸಿಕೊಂಡರು ಎನ್ನುವುದು ಚೆನ್ನಾಗಿ ಗೊತ್ತಿದೆ. ನಾನು ಬೇರೆ ಪಕ್ಷದಲ್ಲಿದ್ದರೂ ಯಡಿಯೂರಪ್ಪನವರ 65 ವರ್ಷ ಹುಟ್ಟುಹಬ್ಬದಲ್ಲಿ ಭಾಗಿಯಾಗಿದ್ದೇನೆ. ವಿಜಯೇಂದ್ರ ಆಗಿನ್ನೂ ಓದುತ್ತಿದ್ದರು. ಅದನ್ನೆಲ್ಲಾ ನಿಮ್ಮೆದುರು ಹೇಳುವ ಅವಶ್ಯಕತೆ ಇಲ್ಲ ಎಂದು ಸಿಡಿಮಿಡಿಗೊಂಡರು.


**ವಿಜಯೇಂದ್ರಗೆ ಸಾಟಿ ಅಲ್ಲ:** ವಿಜಯೇಂದ್ರ ಅವರಿಗೆ ಕಪ್ಪುಚುಕ್ಕೆ ಆಗಬಾರದು, ದೂರು ಬರಬಾರದು ಎನ್ನುವ ಕಾರಣಕ್ಕೆ ಬಂದಿದ್ದೇನೆ. ನಾಯಕನಾಗಿ ಬೆಳೆಯುವ ಲಕ್ಷಣವಿರುವ ವಿಜಯೇಂದ್ರ ಪರಿಷತ್‌ಗೆ ಹೋದರೆ ನಿಮಗೇನು ಹೊಟ್ಟೆಕಿಚ್ಚು ಎಂದು ಮೊದಲು ಪ್ರಶ್ನಿಸಿದ್ದು ನಾನು. ಒಬ್ಬರ ಬಗ್ಗೆ ಮಾತನಾಡುವಾಗ ಇನ್ನೊಬ್ಬರ ದುಡಿಮೆಯನ್ನು ಕಡೆಗಾಣಿಸಬೇಡಿ. ನಾನು ವಿಜಯೇಂದ್ರನಿಗೆ ಸಾಟಿ ಅಲ್ಲ. ಅವನಿಗೆ 40 ವರ್ಷ, ನನಗೆ 71 ವರ್ಷ. ಪಕ್ಷದಲ್ಲಿ ಜವಾಬ್ದಾರಿ ನಿರ್ವಹಿಸಲು ಇನ್ನು 4 ವರ್ಷ ಮಾತ್ರ ಅವಕಾಶವಿದೆ. ಬಿಜೆಪಿಯಲ್ಲಿ ಯಡಿಯೂರಪ್ಪನವರು ಮಾತ್ರ 75ರ ನಂತರವೂ ಜವಾಬ್ದಾರಿ ನಿರ್ವಹಿಸಿದವರು. ವಿಜಯೇಂದ್ರ ಪಕ್ಷದ ತೀರ್ಮಾನವೇ ಅಂತಿಮ ಅವರು ಎಲ್ಲಿಗೆ ಟಿಕೆಟ್ ಕೊಡುತ್ತಾರೋ ಅಲ್ಲಿ ನಿಲ್ಲುತ್ತೇನೆ ಎಂದು ಹೇಳಿದ್ದಾರೆ. ವರುಣಾ ಅಥವಾ ಹನೂರು ಕ್ಷೇತ್ರ ಎಲ್ಲಿಯಾದರೂ ನಿಲ್ಲಲಿ, ಅದು ಪಕ್ಷದ ತೀರ್ಮಾನಕ್ಕೆ ಬಿಟ್ಟದ್ದು. ಗೋವಿಂದರಾಜನಗರ, ವಿಜಯನಗರ ಕ್ಷೇತ್ರದ ಜನ ನನ್ನನ್ನು ತಲೆ ಮೇಲೆ ಮೆರೆಸುತ್ತಿದ್ದಾರೆ. ಇಂತಹವನ್ನೆಲ್ಲಾ ದಯಮಾಡಿ ಬಿಡಿ, ಮೊದಲು ನೀವು ಸರಿಹೋಗಿ ವ್ಯವಸ್ಥೆಯನ್ನು ಸರಿಮಾಡಿಕೊಳ್ಳಿ ಎಂದು ವಾಗ್ದಾಳಿ ನಡೆಸಿ, ಎಂ.ವಿ.ರವಿಶಂಕರ್ ಗೆಲ್ಲಿಸಲು ಮನವಿ ಮಾಡಿದರು. ಬಿಜೆಪಿ ಉಪಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ, ಎಂ.ರಾಜೇಂದ್ರ, ಸಂಸದ ಪ್ರತಾಪ್‌ಸಿಂಹ, ಶಾಸಕರಾದ ಎಲ್.ನಾಗೇಂದ್ರ, ನಿರಂಜನ್ ಕುಮಾರ್, ಎಂ.ಪಿ.ಕುಮಾರಸ್ವಾಮಿ, ಮೇಯರ್ ಸುನಂದಾ ಪಾಲನೇತ್ರ, ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ, ಬಿಜೆಪಿ ನಗರಾಧ್ಯಕ್ಷ ಶ್ರೀವತ್ಸ, ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ಅಭ್ಯರ್ಥಿ ಮೈ.ವಿ.ರವಿಶಂಕರ್, ಮುಖಂಡರಾದ ರಘು ಆರ್.ಕೌಟಿಲ್ಯ, ಎಲ್.ಆರ್.ಮಹದೇವಸ್ವಾಮಿ, ಕಾರ್ಪೊರೇಟರ್ ಬಿ.ವಿ.ಮಂಜುನಾಥ್, ಅಖಿಲ ಭಾರತ ವೀರಶೈವ ಮಹಾಸಭಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

### 'ಮಸೀದಿಯಲ್ಲಿ ಶಿವಲಿಂಗವಿದೆ ಎಂದು ಹುಡುಕಾಡುವುದು ಬೇಡ'

# ಆರ್‌ಎಸ್‌ಎಸ್ ನಾಯಕ ಮೋಹನ್ ಭಾಗವತ್ ಮಾತಿಗೂ ಗೌರವ ಕೊಡದ ಕಟ್ಟಾಳುಗಳು

### ವಿಧಾನ ಪರಿಷತ್ ಸದಸ್ಯ ವಿಶ್ವನಾಥ್ ವಾಗ್ದಾಳಿ

ಮೈಸೂರು ,ಜೂ.7(ಆರ್‌ಕೆಬಿ)- ಮುಸ್ಲೀಮರು ಬೇರೆ ಯಾರೂ ಅಲ್ಲ. ಅವರು ನಮ್ಮ ಸಹೋದರರು. ಭಾರತ ಬೇರೆಯಾದಾಗ ಭಾರತದಲ್ಲಿದ್ದ ಮುಸ್ಲೀಮರು ಭಾರತದಲ್ಲಿಯೇ ಉಳಿದಿದ್ದಾರೆ. ಮಸೀದಿಯಲ್ಲಿ ಶಿವಲಿಂಗವಿದೆ ಎಂದು ಹುಡುಕುವುದು ಬೇಡ. ಪರಸ್ಪರ ಗೌರವದಿಂದ ನಡೆದುಕೊಳ್ಳಬೇಕು. ಅಂಥ ವಿಚಾರಗಳಿಗೆ ಅವಕಾಶ ನೀಡಬಾರದು ಎಂದು ಆರ್‌ಎಸ್‌ಎಸ್ ನಾಯಕ ಮೋಹನ್ ಭಾಗವತ್ ಹೇಳಿಕೆ ನೀಡಿದ್ದಾರೆ. ಆದರೆ ಆರ್‌ಎಸ್‌ಎಸ್ ಕಟ್ಟಾಳುಗಳು ಮೋಹನ್ ಭಾಗವತ್ ಹೇಳಿಕೆಗೆ ಗೌರವ ಕೊಡುತ್ತಿಲ್ಲವೇಕೆ? ಅವರು ಹೇಳಿದ್ದನ್ನು ಕೇಶವ ಕೃಪಾದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಹೇಳಲಿಲ್ಲವೇಕೆ? ಎಂದು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಅವರು ಆರ್‌ಎಸ್‌ಎಸ್ ನಾಯಕರ ವಿರುದ್ಧ ಟೀಕಾಪ್ರಹಾರ ನಡೆಸಿದರು.



ಮೈಸೂರು ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೋಹನ್ ಭಾಗವತ್ ದೇಶ ಮೆಚ್ಚುವಂತಹ ಮಾತುಗಳನ್ನಾಡಿದ್ದಾರೆ. ಧರ್ಮದ ಉಪಾಸನೆ ಹೆಸರಿನಲ್ಲಿ ಭಾರತದ ಅಖಂಡತೆಗೆ ಧಕ್ಕೆ ತರಬಾರದು ಎಂದಿದ್ದಾರೆ. ಆರ್‌ಎಸ್‌ಎಸ್‌ನವರು ಮಾತನಾಡದಿದ್ದರೆ ನಾವೇನು ತಿಳಿದುಕೊಳ್ಳಬೇಕು. ಭಾಗವತ್‌ರ ಮಾತನ್ನು ನೀವು ವಿರೋಧಿಸಿದ್ದೀರಿ ಎಂದು ಅರ್ಥ ಮಾಡಿಕೊಳ್ಳಬೇಕೆ? ನೀವೇಕೆ ಮಾತನಾಡುತ್ತಿಲ್ಲ ಎಂದು ಪ್ರತಾಪ್‌ಸಿಂಹ, ಸಿ.ಟಿ.ರವಿ, ತೇಜಸ್ವಿ ಸೂರ್ಯ, ಯತ್ನಾಳ್ ಇನ್ನಿತರರ ವಿರುದ್ಧ ಕಿಡಿಕಾರಿದರು.

ಮಸೀದಿಗಳಿಗೆ ಸಂಬಂಧಿಸಿದಂತೆ ಇರುವ ವಿವಾದಗಳನ್ನು ನ್ಯಾಯಾಲಯದ ಮೂಲಕ ಬಗೆಹರಿಸಿಕೊಳ್ಳೋಣ ಎಂದು ಮೋಹನ್ ಭಾಗವತ್ ಹೇಳಿದ್ದಾರೆ. ಅವರ ಹೇಳಿಕೆಯ ಹಿಂದೆ ಒಳ್ಳೆಯ ಉದ್ದೇಶವಿದೆ. ಮೋಹನ್ ಭಾಗವತ್ ಹೇಳಿಕೆಯನ್ನು ಕಟ್ಟಾ ಆರ್‌ಎಸ್‌ಎಸ್ ವಾದಿಗಳು ಏಕೆ ಸ್ವಾಗತಿಸುತ್ತಿಲ್ಲ. ಭಾಗವತ್ ಅವರ ಹೇಳಿದ ಮೇಲೂ ನೀವು ಇನ್ನೂ ಮಸೀದಿ, ಶಿವಲಿಂಗ ಎಂದೆಲ್ಲಾ ಕುಣಿಯುತ್ತಿದ್ದೀರಿ ಏಕೆ? ಪ್ರತಾಪ್‌ಸಿಂಹ ಈ ಬಗ್ಗೆ ಸುಮ್ಮನಿದ್ದಾರೇಕೆ? ಬೆಂಕಿ ಹಚ್ಚು ವ ಕೆಲಸ ಮಾಡುತ್ತಿದ್ದೀರಿ. ಭಾಗವತರ ಹೇಳಿಕೆ ಮೇಲೆ ನಿಮಗೆ ಗೌರವ ಇಲ್ಲವೇ? ಎಂದು ಕಟುವಾಗಿ ಪ್ರಶ್ನಿಸಿದರು.

ಮಸೀದಿಯಲ್ಲಿ ಶಿವಲಿಂಗವನ್ನು ಹುಡುಕುವ ಮೂಲಕ ರಾಜ್ಯದಲ್ಲಿ ಶಾಂತಿ ಕದಡಲಾಗುತ್ತಿದೆ. ರಾಜ್ಯದ ಮಾನವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹರಾಜು ಹಾಕಿದ್ದಾರೆ. ಇದು ಜಾಗತಿಕ ಮಟ್ಟದಲ್ಲಿ ಚರ್ಚೆಯಾಗುತ್ತಿದೆ. ಇದರಿಂದಾಗಿ ಪ್ರಜಾಪ್ರಭುತ್ವವೇ ಇಲ್ಲದ ಅರಬ್ ರಾಷ್ಟ್ರಗಳಿಂದಲೂ ಪ್ರಜಾಪ್ರಭುತ್ವ ಕುರಿತಂತೆ ಪಾಠ ಕೇಳಿಸಿಕೊಳ್ಳುವ, ತಲೆತಗ್ಗಿಸಿಕೊಳ್ಳುವ ಪರಿಸ್ಥಿತಿಗೆ ದೇಶ ಬಂದು ನಿಂತಿದೆ. ಮುಸ್ಲಿಂ ರಾಷ್ಟ್ರಗಳಲ್ಲಿ ಸುಮಾರು 25 ಲಕ್ಷ ಕುಟುಂಬಗಳು ಕೆಲಸ ಮಾಡುತ್ತ ಇಲ್ಲಿನ ತಮ್ಮ ತಂದೆ ತಾಯಿಯರಿಗೆ ಹಣ ಕಳಿಸುತ್ತಿದ್ದಾರೆ. ಒಂದು ವೇಳೆ ಅಲ್ಲೇನಾದರೂ ಪರಿಸ್ಥಿತಿ ವಿಕೋಪಕ್ಕೆ ಹೋದರೆ ಇವರ ಗತಿಯೇನು? ಎಂದು ಪ್ರಶ್ನಿಸಿದರು.

ಇಲ್ಲಿರುವುದು ಬಿಜೆಪಿ ಆಡಳಿತವೇ ಹೊರತು ಆರ್‌ಎಸ್‌ಎಸ್ ಸರ್ಕಾರವಲ್ಲ. ನಾವು 17 ಮಂದಿ ಬಿಜೆಪಿ ಸರ್ಕಾರ ಬೆಂಬಲಿಸಿ ಬಂದವರು. ನಾವು ಆರ್‌ಎಸ್‌ಎಸ್ ಬೆಂಬಲಿಸಿ ಬಂದಿದ್ದಲ್ಲ. ನಿಮಗೆ ನಾಚಿಕೆಯಾಗುವುದಿಲ್ಲವೇ? ಎಂದು ಕಿಡಿಕಾರಿದರು.

### ಪರಿಷ್ಕೃತ ಪಠ್ಯ ಒಪ್ಪಿಸ ಬೇಕಾದದ್ದು ಶಿಕ್ಷಕರು, ಪೋಷಕರು, ವಿದ್ಯಾರ್ಥಿಗಳು, ವಿಪಕ್ಷ ನಾಯಕರಿಗೆ ಹೊರತು ಆರ್‌ಎಸ್‌ಎಸ್‌ಗಲ್ಲ

#### ಶಿಕ್ಷಣ ಸಚಿವ ನಾಗೇಶ್ ವಿರುದ್ಧ ವಿಶ್ವನಾಥ್ ಗರಂ

ಮೈಸೂರು, ಜೂ.7- ಪ್ರಾಥಮಿಕ ಶಿಕ್ಷಣ ಸಚಿವ ನಾಗೇಶ್ ಅವರು ಪರಿಷ್ಕೃತ ಪಠ್ಯವನ್ನು ಆರ್‌ಎಸ್‌ಎಸ್ ಪ್ರಧಾನ ಕಚೇರಿಗೆ ಹೋಗಿ ಒಪ್ಪಿಸಿ ಒಪ್ಪಿಗೆ ಪಡೆದು ಬಂದಿದ್ದಾರೆ. ಆದರೆ ಅವರು ಅದನ್ನು ಶಿಕ್ಷಕರಿಗೆ, ಪೋಷಕರಿಗೆ, ವಿದ್ಯಾರ್ಥಿಗಳಿಗೆ, ವಿರೋಧ ಪಕ್ಷದ ನಾಯಕರಾದ ಸಿದ್ದರಾಮಯ್ಯ, ಎಚ್.ಡಿ.ಕುಮಾರಸ್ವಾಮಿ ಹಾಗೂ ವಿಚಾರ ವಾದಿಗಳಿಗಳಿಗೆ ಒಪ್ಪಿಸಬೇಕಾಗಿತ್ತು ಎಂದು ವಿಧಾನ ಪರಿಷತ್ ಸದಸ್ಯ ಅಡಗೂರು ವಿಶ್ವನಾಥ್ ಅವರು ಶಿಕ್ಷಣ ಸಚಿವ ನಾಗೇಶ್ ನಡವಳಿಕೆಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸ್ವಾಮೀಜಿಗಳಿಗೆ ಒಪ್ಪಿಸಿದ್ದೇವೆ ಎನ್ನುತ್ತಾರೆ. ಸ್ವಾಮೀಜಿಗಳು ಡೊನೇಷನ್ ಗಿರಾಕಿಗಳಾಗಿರುವ ಕಾರಣ ಇದು ಸಹ ಸರಿಯಲ್ಲ. ಹೀಗಾಗಿ ರೋಹಿತ್ ಚಕ್ರತೀರ್ಥ ಸಮಿತಿಯ ಪರಿಷ್ಕರಣೆ ಪಕ್ಕಕ್ಕಿಟ್ಟು, ಹಿಂದಿನ ಪಠ್ಯವನ್ನೇ ಮುಂದುವರಿಸಬೇಕು. ಈಗಾಗಲೇ 35 ಕೋಟಿ ಖರ್ಚಾಗಿದ್ದರೂ ಪರವಾಗಿಲ್ಲ ಎಂದು ಆಗ್ರಹಿಸಿದರು.

ಪದವೀಧರ ಕ್ಷೇತ್ರದ ಚುನಾವಣೆ ವೇಳೆ ಮೂರೂ ಪಕ್ಷದವರೂ ಮತದಾರರಿಗೆ ಸ್ಪರ್ಧೆಯ ಮೇಲೆ ಮದ್ಯ ಕುಡಿಸುತ್ತಿದ್ದಾರೆ. ಹೀಗಾಗಿ ಎಲ್ಲ ಹೊಟೇಲ್‌ಗಳ ಮೇಲೆ ದಾಳಿ ನಡೆಯಬೇಕು ಎಂದರು.

ಸಿದ್ದರಾಮಯ್ಯ ಅವರು ವಕೀಲರಾಗಿ ಕೆಲಸ ಮಾಡಿದವರಾಗಿದ್ದಾರೆ. ವಕೀಲಿ ವೃತ್ತಿ ಬಗ್ಗೆ ಸಂಸದ ಪ್ರತಾಪ್‌ಸಿಂಹ ಅವಮಾನಕರವಾಗಿ ಮಾತನಾಡಬಾರದಾಗಿತ್ತು. ಎಂದ ಅವರು, ಮಹಾರಾಜರರನ್ನು ಬಿಟ್ಟರೆ ತಾವೇ ಹೆಚ್ಚಿನ ಅಭಿವೃದ್ಧಿ ಮಾಡಿದವರು ಇವರೇ ಅಂತೆ. ಆದರೆ ಇವರ ಕಾಲದಲ್ಲಿ ಏನೂ ಆಗಿಲ್ಲ ಎಂದು ಸಂಸದ ಪ್ರತಾಪ್‌ಸಿಂಹ ವಿರುದ್ಧ ಕಿಡಿಕಾರಿದರು.

### ನಾನು ಫ್ಲೆಕ್ಸ್ ನಾಯಕನಲ್ಲ... ನಿಜವಾದ ನಾಯಕ...

ಮೈಸೂರು, ಜೂ.7- ನಾನು ಫ್ಲೆಕ್ಸ್ ನಾಯಕನಲ್ಲ..., ನಿಜವಾದ ನಾಯಕ ಎಂದು ತಮ್ಮನ್ನು ತಾವು ಬಣ್ಣಿಸಿಕೊಂಡವರು ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್. ದಕ್ಷಿಣ ಪದವೀಧರ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ನಡೆಯುತ್ತಿರುವ ಚುನಾವಣೆ ಪ್ರಚಾರದಲ್ಲಿ ಬಿಜೆಪಿ ಪ್ರತಿನಿತ್ಯ ಪಕ್ಷದ ನಾಯಕರನ್ನು ಮೈಸೂರಿಗೆ ಕರೆಸಿ, ಸುದ್ದಿಗೋಷ್ಠಿ ನಡೆಸುತ್ತಿದ್ದು, ಅದರಲ್ಲಿ ನಿಮ್ಮನ್ನು ಕಡೆಗಣಿಸಿದ್ದಾರೆಯೇ ಎಂದು ಮೈಸೂರು ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಕೇಳಿದ ಪ್ರಶ್ನೆಗೆ ಅವರು ಈ ರೀತಿ ಪ್ರತಿಕ್ರಿಯಿಸಿದರು.

ನಾನು ಹುಣಸೂರು ವಿಧಾನಸಭಾ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಪರ ಪ್ರಚಾರದಲ್ಲಿ ತೊಡಗಿದ್ದೇನೆ. ನಾನು ಫ್ಲೆಕ್ಸ್ ನಾಯಕನಲ್ಲ. ನಿಜವಾದ ನಾಯಕ ಎಂದು ಹಾಸ್ಯಮಿಶ್ರಿತವಾಗಿ ಸ್ಪಷ್ಟಪಡಿಸಿದರು.

### ಸಂಶೋಧಕರ ನೂತನ ಹಾಸ್ಟೆಲ್‌ಗೆ ಪ್ರವೇಶಾತಿಯೂ ಸೇರಿದಂತೆ

## ವಿವಿಧ ಬೇಡಿಕೆಗಳ ಈಡೇರಿಸಲು ಒತ್ತಾಯಿಸಿ ಮೈಸೂರು ವಿವಿ ವಿದ್ಯಾರ್ಥಿಗಳ ಪ್ರತಿಭಟನೆ



ಮೈಸೂರು,ಜೂ.7(ಪಿಎಂ)- ಸಂಶೋಧಕರ ನೂತನ ಹಾಸ್ಟೆಲ್‌ಗೆ ಶೀಘ್ರ ಪ್ರವೇಶಾತಿ ನೀಡುವುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ಮೈಸೂರು ವಿವಿ ವಿದ್ಯಾರ್ಥಿ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಮೈಸೂರು ಮಾನಸ ಗಂಗೋತ್ರಿಯ ಕ್ಲಾಕ್ ಟವರ್ ಬಳಿ ಮಂಗಳವಾರ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಸಂಶೋಧಕರ ನೂತನ ಹಾಸ್ಟೆಲ್ ಕಟ್ಟಡ ಉದ್ಘಾಟನೆಗೊಂಡು ಒಂದೂವರೆ ವರ್ಷ ಕಳೆದಿದೆ. ಆದರೆ ವಿಶ್ವವಿದ್ಯಾನಿಲಯ ಇನ್ನೂ ಇಲ್ಲಿಗೆ ಪ್ರವೇಶಾತಿ ನೀಡದೆ ವಿಳಂಬ ಮಾಡುತ್ತಿದೆ. ಇದರಿಂದ ಹಲವಾರು ಸಂಶೋಧನಾ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ನೂತನ ಹಾಸ್ಟೆಲ್‌ಗೆ ಪ್ರವೇಶಾತಿ ನೀಡಬೇಕೆಂದು ಹಲವು ಬಾರಿ ಕುಲಪತಿಗಳಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಕೂಡಲೇ ಇಲ್ಲಿಗೆ ಪ್ರವೇಶಾತಿ ನೀಡಲು ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳ ಪ್ರವೇಶ ಮತ್ತು ಪರೀಕ್ಷಾ ಶುಲ್ಕವನ್ನು ಕೂಡಲೇ ಪಾವತಿಸಬೇಕೆಂದು ವಿವಿ ಹೊರಡಿಸಿರುವ ಆದೇಶವನ್ನು ರದ್ದುಪಡಿಸಿ, ವಿದ್ಯಾರ್ಥಿವೇತನ ಬಂದ ನಂತರ ಸದರಿ ಶುಲ್ಕಗಳನ್ನು ಕಡಿತ ಮಾಡಿಕೊಳ್ಳಬೇಕು. ಜೂ.13ರಂದು ದಕ್ಷಿಣ ಪದವೀಧರರ ಕ್ಷೇತ್ರದ ಪರಿಷತ್ ಚುನಾವಣೆಯ ಮತದಾನ ಪ್ರಕ್ರಿಯೆ ನಡೆಯುವ ಹಿನ್ನೆಲೆಯಲ್ಲಿ ಅಂದು ನಿಗದಿಗೊಳಿಸಿರುವ ಸ್ನಾತಕೋತ್ತರ ಪದವಿ ಪರೀಕ್ಷೆಗಳನ್ನು ಮುಂದೂಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಸಂಶೋಧಕರ ಸಂಘದ ಅಧ್ಯಕ್ಷ ಎಸ್.ಮರಿದೇವಯ್ಯ, ಮೈಸೂರು ವಿವಿ ಸಂಶೋಧಕರ ಸಂಘದ ಅಧ್ಯಕ್ಷ ಶಶಿ ಕುಮಾರ್, ದಲಿತ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಕರುಣ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

> ಪ್ರತಿಭಟನಾ ಸ್ಥಳಕ್ಕೆ ಕುಲಸಚಿವರಾದ ಪ್ರೊ.ಶಿವಣ್ಣ, ಪ್ರೊ.ಎ.ಪಿ.ಜ್ಞಾನಪ್ರಕಾಶ್ ಆಗಮಿಸಿ, ಅಹವಾಲು ಆಲಿಸಿದರು. ಸಂಶೋಧಕರ ನೂತನ ಹಾಸ್ಟೆಲ್‌ಗೆ ನಾಳಿದ್ದರಿಂದ ಪ್ರವೇಶಾತಿ ನೀಡಲು ಕ್ರಮ ವಹಿಸಲಾಗುವುದು. ವಿದ್ಯಾರ್ಥಿ ವೇತನ ಬಂದ ಬಳಿಕ ಸ್ನಾತಕೋತ್ತರ ಪದವಿಯ ಪ್ರವೇಶ ಶುಲ್ಕ, ಪರೀಕ್ಷಾ ಶುಲ್ಕ ಪಾವತಿಗೆ ಅವಕಾಶ ಕಲ್ಪಿಸಲಾಗುವುದು. ಜೂ.13ರಂದು ನಿಗದಿಗೊಳಿಸಿರುವ ಸ್ನಾತಕೋತ್ತರ ಪದವಿ ಪರೀಕ್ಷೆಗಳನ್ನು ಮುಂದೂಡಲಾಗುವುದು ಎಂಬ ಭರವಸೆ ನೀಡಿದರು. ನಂತರ ಪ್ರತಿಭಟನೆ ಕೈಬಿಡಲಾಯಿತು.
> -ಎಸ್.ಮರಿದೇವಯ್ಯ



ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಪತ್ರಕರ್ತರ ಸುರಕ್ಷಾ ನಿಧಿಗೆ ವಿಧಾನ ಪರಿಷತ್ ಸದಸ್ಯ ಅಡಗೂರು ವಿಶ್ವನಾಥ್ ಅವರು 75 ಸಾವಿರ ರೂ. ಚೆಕ್ ಅನ್ನು ಪತ್ರಕರ್ತರ ಭವನದಲ್ಲಿ ಸಂಘದ ಪದಾಧಿಕಾರಿಗಳಿಗೆ ವಿತರಿಸಿದರು. ಚಿತ್ರದಲ್ಲಿ ಪತ್ರಕರ್ತರ ಸಂಘದ ಪದಾಧಿಕಾರಿಗಳಾದ ಆರ್.ರಂಗಸ್ವಾಮಿ, ಆರ್.ಕೃಷ್ಣ, ನಾಗೇಶ್ ಪಾಣತ್ತಲೆ, ಬಸವಣ್ಣ ಇತರರು ಇದ್ದಾರೆ.

### ಸಿದ್ದರಾಮಯ್ಯ ಬಗ್ಗೆ ಪ್ರತಾಪ್‌ಸಿಂಹರ ಅಪ್ರಬುದ್ಧ ಹೇಳಿಕೆ

## ಕಾಂಗ್ರೆಸ್ ಎಸ್‌ಸಿ ವಿಭಾಗ ಕಿಡಿ




ಮೈಸೂರು, ಜೂ.7(ಆರ್‌ಕೆಬಿ)- ಹದಿಮೂರು ಬಾರಿ ಬಜೆಟ್ ಮಂಡಿಸಿ, ಅವು ಸಮತೋಲನ ಬಜೆಟ್‌ಗಳಾಗಿದ್ದವೆಂಬ ಪ್ರಶಂಸೆ ಎಲ್ಲೆಡೆ ವ್ಯಕ್ತಿವಾಗಿದ್ದರೂ, ಅದರ ಬಗ್ಗೆ ಸ್ವಲ್ಪವೂ ಅರಿವಿಲ್ಲದೇ ಸಂಸದ ಪ್ರತಾಪ್‌ಸಿಂಹ ಅಪ್ರಬುದ್ಧರಾಗಿ ಸಿದ್ದರಾಮಯ್ಯ ವಿರುದ್ಧ ಅನಗತ್ಯ ಟೀಕೆ ಮಾಡುತ್ತಿದ್ದಾರೆ ಎಂದು ವಿಧಾನಪರಿಷತ್ ಮಾಜಿ ಸದಸ್ಯರೂ ಆಗಿರುವ ಕಾಂಗ್ರೆಸ್ ಎಸ್‌ಸಿ ವಿಭಾಗದ ರಾಜ್ಯಾಧ್ಯಕ್ಷ ಆರ್.ಧರ್ಮಸೇನಾ ಪ್ರತಾಪ್‌ಸಿಂಹ ವಿರುದ್ಧ ಕಿಡಿಕಾರಿದರು. ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಲಿತ ನಾಯಕ ಎಂದೇ ಬಿಂಬಿತರಾಗಿರುವ ಛಲವಾದಿ ನಾರಾಯಣಸ್ವಾಮಿ ಅವರು ಸಿದ್ದರಾಮಯ್ಯ ಅವರನ್ನು ಟೀಕಿಸಿದರೆ ಮುಂದೆ ತಮಗೆ ಸಚಿವ ಸ್ಥಾನ ದೊರೆಯುತ್ತದೆ ಎಂಬ ಭ್ರಮೆಯಲ್ಲಿರುವಂತೆ ಕಾಣುತ್ತಿದೆ ಎಂದು ವ್ಯಂಗ್ಯವಾಡಿದರು.

ಜನರ ಸೇವೆ ಮಾಡಲೆಂದು ಆಯ್ಕೆ ಮಾಡಿದ ರಾಜ್ಯದ ಜನರ ಬೇಕು ಬೇಡಗಳ ಬಗ್ಗೆ ಗಮನ ಹರಿಸದೇ ಬಿಜೆಪಿ ನಾಯಕರು ಕೇವಲ ಕಾಂಗ್ರೆಸ್ ಅನ್ನು ಟೀಕೆ ಮಾಡುವುದರಲ್ಲೇ ನಿರತರಾಗಿದ್ದಾರೆ ಎಂದು ಟೀಕಿಸಿದರು. ಪಠ್ಯ ಪುಸ್ತಕ ಪರಿಷ್ಕರಣೆ ವೇಳೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಅಪಮಾನ ಆಗುತ್ತಿದ್ದರು ಹಿರಿಯ ಸಂಸದ ವಿ.ಶ್ರೀನಿವಾಸಪ್ರಸಾದ್ ಮೌನ ವಹಿಸಿರುವ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ಪಂಜಾಬ್‌ನಲ್ಲಿ ಆಮ್ ಆದ್ಮಿ ಪಕ್ಷದವರು ಓರ್ವ ಸಚಿವ ಕೇವಲ ಒಂದು ಪರ್ಸೆಂಟ್ ಕಮಿಷನ್ ಪಡೆದರೆಂಬ ಕಾರಣದಿಂದಲೇ ಸಚಿವ ಸ್ಥಾನದಿಂದಲೇ ಉಚ್ಚಾಟಿಸಿದರು. ಆದರೆ ರಾಜ್ಯದಲ್ಲಿ ಶೇ.40 ಕಮಿಷನ್ ನಡೆಯುತ್ತಿದ್ದರೂ ಸುಮ್ಮನಿರುವುದನ್ನು ನೋಡಿದರೆ ಬಿಜೆಪಿ ಸರ್ಕಾರ ಭ್ರಷ್ಟಾಚಾರಕ್ಕೆ ಹೇಗೆ ಕುಮ್ಮಕ್ಕು ನೀಡುತ್ತಿದೆ ಎಂಬುದರ ಅರಿವಾಗುತ್ತದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿ ಶಿವಣ್ಣ, ಶ್ರೀಧರ್, ಸತ್ಯರಾಜ್ ಉಪಸ್ಥಿತರಿದ್ದರು.

## ಕೇಂದ್ರ ಸಚಿವ ಗಡ್ಕರಿ ಇಂದು ಮೈಸೂರಿಗೆ



ಮೈಸೂರು,ಜೂ.7-ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಮೈಸೂರು ಹಾಗೂ ಕೊಡಗು ಪ್ರವಾಸ ಕೈಗೊಂಡಿದ್ದಾರೆ. ನಾಗ್ಪುರದಿಂದ ನಾಳೆ(ಜೂ.8) ಸಂಜೆ 4.35ಕ್ಕೆ ವಿಶೇಷ ವಿಮಾನದಲ್ಲಿ ಮೈಸೂರಿಗೆ ಆಗಮಿಸಲಿದ್ದು, ಮಹಾತ್ಮಗಾಂಧಿ ರಸ್ತೆಯ ರ್‍ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ನಲ್ಲಿ ಸಂಜೆ 6ಕ್ಕೆ ಬಹು ಮಾದರಿ ಲಾಜಿಸ್ಟಿಕ್ಸ್ ಪಾರ್ಕ್‌ಗಳು (ಎಂಎಂಎಲ್‌ಪಿ) ಹಾಗೂ ಮೈಸೂರು ವಲಯದ ರಾಷ್ಟ್ರೀಯ ಹೆದ್ದಾರಿಗಳ ಕುರಿತ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ.

ಜೂ.9ರ ಬೆಳಗ್ಗೆ 10ಕ್ಕೆ ಕೊಡಗಿನತ್ತ ಪ್ರಯಾಣ ಬೆಳೆಸಿ ಮಧ್ಯಾಹ್ನ 12.30ಕ್ಕೆ ಪಾಲಿಬೆಟ್ಟದ ತನೀರ್ಹುಲ್ಲಾ ಬಂಗಲೆಯಲ್ಲಿ ತಂಗಲಿದ್ದಾರೆ. ನಂತರ ಮೂರು ದಿನ ಮಡಿಕೇರಿಯಲ್ಲಿ ವಾಸ್ತವ್ಯ ಹೂಡಲಿದ್ದು, ಜೂ.13ರ ಬೆಳಗ್ಗೆ ರಸ್ತೆ ಮೂಲಕ ಬೆಂಗಳೂರಿಗೆ ತೆರಳಿ, ಅಲ್ಲಿಂದ ನಾಗ್ಪುರಕ್ಕೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆ ರಂಗು

# ಬಿಜೆಪಿ ಅಭ್ಯರ್ಥಿ ಪರ ಮೈಸೂರಲ್ಲಿ ಸಚಿವರಿಂದ ಮತಯಾಚನೆ

ಮೈಸೂರು,ಜೂ.7(ಎಂಟಿವೈ)- ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಚುನಾವಣಾ ಪ್ರಚಾರ ಕಣ ದಿನದಿಂದ ದಿನಕ್ಕೆ ರಂಗೇರುತ್ತಿದ್ದು, ಮೂವರು ಸಚಿವರು ಪ್ರತ್ಯೇಕವಾಗಿ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಪರ ಬಿರುಸಿನ ಪ್ರಚಾರ ನಡೆಸಿದರು.

**ಸಚಿವ ವಿ.ಸೋಮಣ್ಣ:** ಚುನಾವಣಾ ಪ್ರಚಾರದ ಹಿನ್ನೆಲೆಯಲ್ಲಿ ಮೈಸೂರಿಗೆ ಆಗಮಿಸಿದ್ದ ವಸತಿ ಸಚಿವ ವಿ.ಸೋಮಣ್ಣ ಇಂದು ಬೆಳಗ್ಗೆ ಮರಿಮಲ್ಲಪ್ಪ ಹಾಗೂ ಎಸ್‌ಜೆಸಿ ಕಾಲೇಜಿಗೆ ತೆರಳಿ ದಕ್ಷಿಣ ಪದವೀಧರರ ಕ್ಷೇತ್ರದಿಂದ ಮೇಲ್ಮನೆಗೆ ನಡೆಯುವ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಮೈ.ವಿ.ರವಿಶಂಕರ್ ಅವರಿಗೆ ಮತ ನೀಡುವಂತೆ ಮನವಿ ಮಾಡಿದರು.

ಸಚಿವರ ಆಗಮನದ ಹಿನ್ನೆಲೆಯಲ್ಲಿ ತರಗತಿಗಳಿಗೆ ಯಾವುದೇ ಅಡ್ಡಿಯಾಗದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಶಿಕ್ಷಕರು ಹಾಗೂ ಉಪನ್ಯಾಸಕರನ್ನು ಕಾಲೇಜಿನ ಮುಂಭಾಗದ ಪ್ರಾಂಗಣಕ್ಕೆ ಕರೆಸಲಾಗಿತ್ತು. ಈ ವೇಳೆ ಸ್ಥಳಕ್ಕಾಗಮಿಸಿದ ಸಚಿವ ವಿ. ಸೋಮಣ್ಣ ಶಿಕ್ಷಕರೊಂದಿಗೆ ಕುಶಲೋಪರಿ ವಿಚಾರಿಸಿ ಅಂತಿಮವಾಗಿ ಮತಯಾಚನೆ ಮಾಡುವ ಮೂಲಕ ಬೆಂಬಲ ಕೋರಿದರು.

ಈ ಸಂದರ್ಭದಲ್ಲಿ ಮರಿಮಲ್ಲಪ್ಪ ಕಾಲೇಜಿ ಪ್ರಾಂಶುಪಾಲ ಬಿ.ನೀಲಕಂಠ, ಬೋಧಕ ವರ್ಗದ ಮಂಗಳ ಮುದ್ದುಮಾದಪ್ಪ, ಮಮತಾ, ಬಿಜೆಪಿ ಮುಖಂಡರುಗಳಾದ ಎಸ್.ಎಂ.ಪಿ ಶಿವಪ್ರಕಾಶ್, ಆರ್.ಪರಮೇಶ, ಯು.ಎಸ್.ಶೇಖರ್ ಮತ್ತು ಸಂಸ್ಥೆಯ ಶಿಕ್ಷಕ ವರ್ಗ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಉನ್ನತ ಶಿಕ್ಷಣ ಸಚಿವ ಡಾ.ಅಶ್ವಥ್‌ನಾರಾಯಣ್ ಅವರು ಮಂಗಳವಾರ ಯುವರಾಜ ಕಾಲೇಜಿನಲ್ಲಿ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಪರ ಮತಯಾಚಿಸಿದರು.

**ಸಚಿವ ಡಾ.ಅಶ್ವಥ್ ನಾರಾಯಣ್:** ಉನ್ನತ ಶಿಕ್ಷಣ ಸಚಿವ ಡಾ.ಅಶ್ವಥ್ ನಾರಾಯಣ್ ಅವರು ಇಂದು ಶಾಸಕ ಎಲ್.ನಾಗೇಂದ್ರ ಹಾಗೂ ಅಭ್ಯರ್ಥಿ ಮೈ.ವಿ. ರವಿಶಂಕರ್ ಅವರೊಂದಿಗೆ ಮೈಸೂರಿನ ಸರ್ಕಾರಿ ಆಯುರ್ವೇದ ಕಾಲೇಜು, ಸರ್ಕಾರಿ ಮೆಡಿಕಲ್ ಕಾಲೇಜು, ಯುವರಾಜ ಕಾಲೇಜು, ಮಹಾರಾಜ ಕಾಲೇಜು ಹಾಗೂ ಬಿಜಿಎಸ್ ಕಾಲೇಜಿಗೆ ತೆರಳಿ ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ನಗರ ಘಟಕದ ಮಾಜಿ ಅಧ್ಯಕ್ಷ ಶಿವಕುಮಾರ್, ನಗರ ಉಪಾಧ್ಯಕ್ಷ ಟಿ.ರಮೇಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

**ಸಚಿವ ಸುನೀಲ್ ಕುಮಾರ್:** ಖಾಸಗಿ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಳ್ಳಲು ಮೈಸೂರಿಗೆ ಆಗಮಿಸಿದ್ದ ಇಂಧನ ಸಚಿವ ಸುನಿಲ್ ಕುಮಾರ್ ಹಿನ್‌ಕಲ್‌ನಲ್ಲಿರುವ ಕೆಪಿಟಿಸಿಎಲ್ ಕಚೇರಿ, ಹರ್ಷ ರಸ್ತೆಯಲ್ಲಿರುವ ಚೆಸ್ಕಾಂ, ಪುಷ್ಕರಣಿ ಶಾಲೆ, ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿರುವ ಸ್ಕ್ಯಾನ್‌ರೇ ಕಂಪನಿಗೆ ತೆರಳಿ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಅವರಿಗೆ ಮತ ನೀಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ಯುವ ಮುಖಂಡ ಪ್ರತಾಪ್ ಜಿ.ದೇವನೂರು, ರಾಘವೇಂದ್ರ, ವಸಂತ್ ಕುಮಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಮರಿಮಲ್ಲಪ್ಪ ಕಾಲೇಜಿನಲ್ಲಿ ವಸತಿ ಸಚಿವ ವಿ.ಸೋಮಣ್ಣ ದಕ್ಷಿಣ ಪದವೀಧರರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಪರ ಮತಯಾಚಿಸಿದರು.

ಮೈಸೂರು ಮಿತ್ರ



## ಪಿರಿಯಾಪಟ್ಟಣದಲ್ಲಿ ಮರ್ಯಾದೆ ಹತ್ಯೆ

# ಕತ್ತು ಬಿಗಿದು ಮಗಳನ್ನೇ ಕೊಂದು ಪೊಲೀಸರಿಗೆ ಶರಣಾದ ತಂದೆ!

ಪಿರಿಯಾಪಟ್ಟಣ, ಜೂ.7(ವೀರೇಶ್)– ಅನ್ಯ ಕೋಮಿನ ಯುವಕನನ್ನು ಪ್ರೀತಿಸುತ್ತಿದ್ದ ಮಗಳನ್ನು ತಂದೆ ಕತ್ತು ಬಿಗಿದು ಕೊಲೆ ಮಾಡಿರುವ ಘಟನೆ ತಾಲೂಕಿನ ಗ್ರಾಮವೊಂದರಲ್ಲಿ ಸೋಮವಾರ ರಾತ್ರಿ ನಡೆದಿದ್ದು, ಬಳಿಕ ತಂದೆ ನೇರವಾಗಿ ಪೊಲೀಸ್ ಠಾಣೆಗೆ ಬಂದು ಶರಣಾಗಿದ್ದಾನೆ. ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಅಪ್ರಾಪ್ತೆ, ಬೇರೆ ಗ್ರಾಮದ ಅನ್ಯ ಕೋಮಿನ ಯುವಕನನ್ನು ಕಳೆದ 2 ವರ್ಷಗಳಿಂದ ಪ್ರೀತಿಸುತ್ತಿದ್ದಳು. ಕೆಲದಿನಗಳ ಹಿಂದೆ ಈ ವಿಚಾರ ಅಪ್ರಾಪ್ತೆಯ ಪೋಷಕರಿಗೆ ತಿಳಿದು, ಯುವಕನೊಂದಿಗೆ ಗಲಾಟೆಯೂ ನಡೆದಿತ್ತು ಈ ವಿಚಾರ ಪೊಲೀಸ್ ಠಾಣೆಯ ಮೆಟ್ಟಿಲೇರಿ ಪೊಲೀಸರು ರಾಜೀ– ಪಂಚಾಯಿತಿ ಮಾಡಿದ್ದರು. ಈ ವೇಳೆ ಅಪ್ರಾಪ್ತೆ ಪೋಷಕರೊಂದಿಗೆ ಮನೆಗೆ ಹೋಗಲು ನಿರಾಕರಿಸಿದಳು. ಬಳಿಕ, ಪೊಲೀಸರು ಅಪ್ರಾಪ್ತೆಯನ್ನು ಮೈಸೂರಿನ ಬಾಲ ಮಂದಿರಕ್ಕೆ ಕಳುಹಿಸಿದ್ದರು.

ಕಳೆದ ಮೇ. 18ರಂದು ತಂದೆ–ತಾಯಿ ಬಾಲಮಂದಿರಕ್ಕೆ ಹೋಗಿ ಮಗಳ ಮನವೊಲಿಸಿ ಆಕೆಯ ಭವಿಷ್ಯದ ದೃಷ್ಟಿಯಿಂದ ಒಪ್ಪಿಗೆ ಪತ್ರ ಬರೆದುಕೊಟ್ಟು ಮನೆಗೆ ಕರೆದುಕೊಂಡು ಬಂದಿದ್ದರು. ಬಂದ ನಂತರ ಯುವಕನ ಜೊತೆಗೆ ಹೋಗದಂತೆ ಬುದ್ಧಿವಾದ ಹೇಳಿದರೂ, ಕೇಳದ ಆಕೆ ಸಾಮಾಜಿಕ ಜಾಲತಾಣದ ಮೂಲಕ ಯುವಕನ ಸಂಪರ್ಕದಲ್ಲಿ ಇದ್ದಳು ಎನ್ನಲಾಗಿದೆ. ಸೋಮವಾರ ರಾತ್ರಿ ಈಕೆ ತನ್ನ ಪ್ರಿಯಕರನ ಮನೆಗೆ ಹೋಗುವುದಾಗಿ ಹೇಳಿ ಮನೆ ಬಾಗಿಲು ತೆಗೆದು ಹೋಗುವಾಗ ತಂದೆ ಮಗಳನ್ನು ತಡೆಯಲು ಯತ್ನಿಸಿದ್ದಾರೆ. ಹಠ ಹಿಡಿದ ಮಗಳು ತಂದೆಯ ಮಾತನ್ನು ಧಿಕ್ಕರಿಸಿದ್ದಾಳೆ. ಕೋಪಗೊಂಡ ತಂದೆ, ಮಗಳ ಕತ್ತು ಹಿಸುಕಿ ಕೊಲೆ ಮಾಡಿದ್ದಾರೆ ಎನ್ನಲಾಗಿದೆ.

ನಂತರ ಶವವನ್ನು ಬೈಕ್‌ನಲ್ಲಿ ಯುವಕನ ಮನೆಯ ಬಳಿ ಸಾಗಿಸಲು ಯತ್ನಿಸಿ, ಸಾಧ್ಯವಾಗದೆ ರಸ್ತೆ ಬದಿ ಮಲಗಿಸಿ ಬಂದಿದ್ದಾಗಿ ಅಪ್ರಾಪ್ತೆಯ ತಂದೆ ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಸಂಬಂಧ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಇಂದು ವಿದ್ಯುತ್ ವ್ಯತ್ಯಯ

ಹೆಚ್.ಡಿ.ಕೋಟೆ, ಜೂ.7(ಮಂಜು)– ತಾಲೂಕಿನ ಉಪವಿಭಾಗ ಭೀಮನಹಳ್ಳಿ, ಹಿರೇಹಳ್ಳಿ, ಅಣ್ಣೂರು, ಚಿಕ್ಕಕೆರೆಯೂರು, ಸವ್ವೆ ಮತ್ತು ನಾಗನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 1ನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ಜೂ. 8ರಂದು ಬೆಳಗ್ಗೆ 10ರಿಂದ ಸಂಜೆ 6 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಕಾಂಗ್ರೆಸ್ ಗೆಲ್ಲಿಸಿ, ಬಿಜೆಪಿಗೆ ತಕ್ಕಪಾಠ ಕಲಿಸಿ

## ಪದವೀಧರ ಕ್ಷೇತ್ರ ಚುನಾವಣೆ: ಮಧು ಜಿ ಮಾದೇಗೌಡ ಪರ ಶಾಸಕ ಯತೀಂದ್ರ ಸಿದ್ದರಾಮಯ್ಯ ಪ್ರಚಾರ



ಹುಣಸೂರು, ಜೂ.7(ಕೆಕೆ)– ಓಟಿಗಾಗಿ ಧರ್ಮ, ಜಾತಿಗಳ ನಡುವೆ ವಿಷಬೀಜ ಬಿತ್ತುತ್ತಾ ದೇಶ ಒಡೆಯುವ ಕೆಲಸ ಮಾಡುತ್ತಿರುವ ಬಿಜೆಪಿಗೆ ಪದವೀಧರ ಮತದಾರರು ಕಾಂಗ್ರೆಸ್ ಅಭ್ಯರ್ಥಿ ಮಧು ಜಿ.ಮಾದೇಗೌಡರನ್ನು ಗೆಲ್ಲಿಸುವ ಮೂಲಕ ತಕ್ಕಪಾಠ ಕಲಿಸುವಂತೆ ಶಾಸಕ ಯತೀಂದ್ರ ಸಿದ್ದರಾಮಯ್ಯ ಮನವಿ ಮಾಡಿದರು.

ನಗರದ ವಿವಿಧೆಡೆ ಮತಯಾಚಿಸಿ ಮಾತನಾಡಿದ ಅವರು, ನೆಲ, ಜಲ, ಭಾಷೆ ಬಗ್ಗೆ ಅಪಾರ ಅಭಿಮಾನ ಹೊಂದುವ ಮೂಲಕ ಸದಾ ಹೋರಾಟ ಮಾಡುತ್ತಿದ್ದ ಜಿ.ಮಾದೇಗೌಡರಂತೆ ಅವರ ಪುತ್ರ ಮಧು ಮಾದೇಗೌಡರು ಕೂಡ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಕೆಲಸ ಮಾಡಿದ್ದಾರೆ. ಹೀಗಾಗಿ ಪದವೀಧರ ಚುನಾವಣೆಯಲ್ಲಿ ಅವರಿಗೆ ಮೊದಲ ಪ್ರಾಶಸ್ತ್ಯದ ಮತ ನೀಡುವ ಮೂಲಕ ಭಾರೀ ಅಂತರದಿಂದ ಗೆಲ್ಲಿಸಿ, ವಿಧಾನ ಪರಿಷತ್‌ನಲ್ಲಿ ಪದವೀಧರರ ಪರ ಕೆಲಸ ಮಾಡಲು ಅವಕಾಶ ಮಾಡಿಕೊಡಬೇಕು ಎಂದರು.

ಶಾಸಕ ಹೆಚ್.ಪಿ.ಮಂಜುನಾಥ್ ಮಾತನಾಡಿ, ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಹಣದುಬ್ಬರ ಹೆಚ್ಚಾಗಿದೆ. ಕಳೆದ 8 ವರ್ಷಗಳಲ್ಲಿ 5 ಲಕ್ಷ ಕೋಟಿ ಸಾಲ ಮಾಡಿರುವುದೇ ದೊಡ್ಡ ಸಾಧನೆ. ದೇಶದಲ್ಲಿ ನಿರುದ್ಯೋಗ ತಾಂಡವಾಡುತ್ತಿದ್ದು, ವಿದ್ಯಾವಂತರ ಬದುಕು ಅತಂತ್ರವಾಗಿದೆ. ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ. ರಾಜ್ಯದಿಂದ 10 ಲಕ್ಷ ಕೋಟಿ ಜಿಎಸ್‌ಟಿ ಸಂಗ್ರಹಿಸಿ ಕೇವಲ ಶೇ.21ರಷ್ಟು ಮಾತ್ರ ನೀಡಿ ದೊಡ್ಡ ಅನ್ಯಾಯ ಮಾಡಿದೆ. ಧರ್ಮ, ಜಾತಿಗಳ ನಡುವೆ ಭಯದ ವಾತಾವರಣ ಉಂಟು ಮಾಡಿ, ಇಂಧನ, ಅನಿಲ, ರಸಗೊಬ್ಬರ ಸೇರಿದಂತೆ ದಿನಬಳಕೆಯ ವಸ್ತುಗಳ ಬೆಲೆ ಹೆಚ್ಚಿಸುವ ಮೂಲಕ ಜನರಿಗೆ ಅನ್ಯಾಯ ಮಾಡಿದ್ದಾರೆ. ಹೀಗಾಗಿ ಪ್ರಬುದ್ಧ ಮತದಾರರು ಚುನಾವಣೆಯಲ್ಲಿ ಮಧು ಜಿ.ಮಾದೇಗೌಡರನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಕೆ.ಆರ್.ನಗರ ಕಾಂಗ್ರೆಸ್ ಮುಖಂಡ ರವಿಶಂಕರ್, ಯುವ ಮುಖಂಡ ಸುನೀಲ್‌ಬೋಸ್ ಮಾತನಾಡಿದರು. ಶಾಸಕ ಅನಿಲ್ ಚಿಕ್ಕಮಾದು, ಕಾಂಗ್ರೆಸ್ ಯುವ ವಕ್ತಾರ ಹರ್ಷವರ್ಧನ್ ರಮೇಶ್, ಉದ್ಯಮಿ ಅಮರ್‌ನಾಥ್, ಕಾಂಗ್ರೆಸ್ ಅಧ್ಯಕ್ಷ ರಮೇಶ್, ನಾರಾಯಣ್, ದೇವರಾಜ್, ಕೆಂಪೇಗೌಡ, ತಾಪಂ ಮಾಜಿ ಸದಸ್ಯ ರವಿಪ್ರಸನ್ನ, ಕುಮಾರ್, ರಘು ಮತ್ತಿತರರಿದ್ದರು.

### ಸಿದ್ದರಾಮಯ್ಯ ಅನುಭವಗಳ ಐರಾವತ

ಸಂಸದ ಪ್ರತಾಪ್‌ಸಿಂಹ ಕೇವಲ ಪುಸ್ತಕದ ಬದನೆಕಾಯಿ. ಸಿದ್ದರಾಮಯ್ಯನವರು ಅನುಭವಗಳ ಐರಾವತ. ಸಿದ್ದರಾಮಯ್ಯನವರು ತಮ್ಮ ಅನುಭವದಿಂದಲೇ 13 ಬಾರಿ ಬಜೆಟ್ ಮಂಡಿಸಿದ್ದಾರೆ. ಅವರ ಅನುಭವದ ಆಯವ್ಯಯವು ದೇಶದ ಗಮನ ಸೆಳೆದಿದೆ. ಅವರನ್ನು ಟೀಕಿಸುವ ನೈತಿಕತೆ ಪ್ರತಾಪ ಸಿಂಹರಿಗೆ ಇಲ್ಲ.

- ಹೆಚ್.ಪಿ.ಮಂಜುನಾಥ್, ಶಾಸಕ.



# ಮಾಸ್ತಿ ವೆಂಕಟೇಶ ಅಯ್ಯಂಗಾರ್ ಜನ್ಮದಿನಾಚರಣೆ




ಹೆಚ್.ಡಿ.ಕೋಟೆ, ಜೂ.7(ಮಂಜು)– ತಾಲೂಕಿನ ತುಂಬಸೋಗೆ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲೂಕು ಕಸಾಪದಿಂದ ಡಾ.ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಜನ್ಮದಿನ ಆಚರಿಸಲಾಯಿತು.

ಸಾಹಿತಿ ಮತ್ತು ಸಂಸ್ಕೃತಿ ಚಿಂತಕ ಡಾ.ಕಿರಣ್ ಸಿಡ್ಲೇಹಳ್ಳಿ ಮಾತನಾಡಿ, ನುಡಿದಂತೆ ಬರೆದ, ಬರೆದಂತೆ ಬದುಕಿದ ಕೆಲವೇ ಸಾಹಿತಿಗಳಲ್ಲಿ ಮಾಸ್ತಿಯವರು ಒಬ್ಬರು. ಅವರು ಜಿಲ್ಲಾಧಿಕಾರಿಯಾಗಿದ್ದಾಗ ಸ್ಥಳೀಯ ನೀತಿ ನಿಯಮಗಳನ್ನು ಕನ್ನಡಕ್ಕೆ ಅನುವಾದ ಮಾಡಬೇಕೆಂದು ಧ್ವನಿ ಎತ್ತಿದ್ದರಿಂದ ಕನ್ನಡದ ಆಸ್ತಿಯಾಗಿ ಬೆಳೆದರು ಎಂದರು.

ಮೈಸೂರಿನಲ್ಲಿ ಅಧಿಕಾರಿಯಾಗಿದ್ದಾಗ ಹೆಚ್.ಡಿ.ಕೋಟೆ ತಾಲೂಕಿಗೆ ಸಾಕಷ್ಟು ಬಾರಿ ಭೇಟಿ ನೀಡಿ, ಇಲ್ಲಿನ ಪ್ರಕೃತಿ ಸೌಂದರ್ಯ ಮತ್ತು ಬುಡಕಟ್ಟು ಸಮುದಾಯದ ಸಂಸ್ಕೃತಿಯನ್ನು ತಮ್ಮ 'ಕಾಕನಕೋಟೆ' ನಾಟಕದಲ್ಲಿ ಕಟ್ಟಿ ಕೊಟ್ಟಿದ್ದಾರೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ವೈ.ಡಿ.ರಾಜಣ್ಣ ಮಾತನಾಡಿದರು. ಈ ವೇಳೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 591 ಅಂಕ ಪಡೆದ ಶಾಲೆಯ ವಿದ್ಯಾರ್ಥಿನಿ ಭೂಮಿಕಾರನ್ನು ಸನ್ಮಾನಿಸಲಾಯಿತು.

ಕಸಾಪ ತಾಲೂಕು ಅಧ್ಯಕ್ಷ ಕನ್ನಡ ಪ್ರಮೋದ, ಪ್ರಭಾರ ಮುಖ್ಯಶಿಕ್ಷಕ ಎಂ.ಪಿ.ನಾರಾಯಣ, ಸರಗೂರು ಘಟಕದ ಕಸಾಪ ಅಧ್ಯಕ್ಷ ಕೆಂಡಗಣ್ಣಸ್ವಾಮಿ, ತಾಲೂಕು ಛಾಯಾಗ್ರಾಹಕ ಸಂಘದ ಅಧ್ಯಕ್ಷ ರಘುರಾಮ, ಪತ್ರಕರ್ತೆ ರೇಣುಕಾ, ಕಸಾಪ ಕೋಶಾಧ್ಯಕ್ಷ ಎಂ.ಮಹದೇವಸ್ವಾಮಿ, ಶಿಕ್ಷಕರಾದ ದೇವಪ್ರಸಾದ್, ಸುರೇಶ್, ಆಲ್ವಿನ್, ಬಿಂದು, ಮಹಾದೇವಿ, ರೂಪಾ, ಶರತ್ ಇದ್ದರು.

# ಶ್ರೀಕಂಠೇಶ್ವರಸ್ವಾಮಿ ದರ್ಶನ ಪಡೆದ ಇಂಧನ ಸಚಿವ ಸುನೀಲ್‌ಕುಮಾರ್



ನಂಜನಗೂಡು, ಜೂ.7(ಸುದರ್ಶನ್)– ಇಲ್ಲಿನ ಶ್ರೀಕಂಠೇಶ್ವರ ದೇವಾಲಯಕ್ಕೆ ಇಂಧನ ಸಚಿವ ಸುನೀಲ್‌ಕುಮಾರ್ ಮಂಗಳವಾರ ಭೇಟಿ ನೀಡಿ, ದೇವರ ದರ್ಶನ ಪಡೆದರು.

ಕುಟುಂಬದವರ ಹೆಸರಿನಲ್ಲಿ ಅರ್ಚನೆ, ಪಾರ್ವತಿದೇವಿ ಗುಡಿಯಲ್ಲಿ ಕುಂಕುಮಾರ್ಚನೆ ನೆರವೇರಿಸಿ, ದೇವಾಲಯದ ಗರ್ಭಗುಡಿಯಲ್ಲಿ ಕೆಲಕಾಲ ಧ್ಯಾನಸಕ್ತರಾಗಿದ್ದರು. ದೇವಾಲಯದ ವತಿಯಿಂದ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡು ಫಲ, ತಾಂಬೂಲ ನೀಡಿ ಗೌರವಿಲಾಯಿತು. ಈ ವೇಳೆ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಎನ್.ಆರ್. ಕೃಷ್ಣಪ್ಪಗೌಡ, ದೇವನೂರು ಪ್ರತಾಪ್ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಇದ್ದರು.

# ಪಠ್ಯದಿಂದ ಸಂವಿಧಾನ ಶಿಲ್ಪಿ ಪದ ತೆಗದಿದ್ದಕ್ಕೆ ಹರ್ಷವರ್ಧನ್ ಆಕ್ರೋಶ



ಮಲ್ಲುಂಡಿ, ಜೂ.7(ಚನ್ನಪ್ಪ)– ಪರಿಷ್ಕೃತ ಪಠ್ಯದಿಂದ ಸಂವಿಧಾನ ಶಿಲ್ಪಿ ಪದ ತೆಗೆದಿರುವುದು ಅತ್ಯಂತ ಖಂಡನೀಯವಾಗಿದೆ ಎಂದು ಶಾಸಕ ಬಿ.ಹರ್ಷವರ್ಧನ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಅವರು, ದಕ್ಷಿಣ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ನಾನು ಬೆಂಗಳೂರಿಗೆ ಹೋಗಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಅವರನ್ನು ಭೇಟಿಯಾಗಲು ಸಾಧ್ಯವಾಗಿಲ್ಲ. ಮುಖ್ಯಮಂತ್ರಿಗಳು ಜೂ.8ರಂದು ಮೈಸೂರಿಗೆ ಆಗಮಿಸಲಿದ್ದಾರೆ ಅಂದು ಹಿರಿಯ ರಾಜಕಾರಣಿಗಳಾದ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರೊಂದಿಗೆ ಭೇಟಿ ಮಾಡಿ ಹಳೇ ಪಠ್ಯವನ್ನು ಮುಂದುವರಿಸುವಂತೆ ಒತ್ತಾಯ ಮಾಡುತ್ತೇನೆ ಎಂದು ತಿಳಿಸಿದರು.

ನೂತನ ಪಠ್ಯ ಪರಿಷ್ಕರಣೆ ಮಾಡಿ ಸಂವಿಧಾನ ಶಿಲ್ಪಿ ಪದ ತೆಗೆದಿರುವವರ ವಿರುದ್ಧ ಕ್ರಮ ಜರುಗಿಸಬೇಕು. ಮುಂದಿನ ದಿನಗಳಲ್ಲಿ ಮುಜುಗರಕ್ಕೆ ಒಳಗಾಗುವ ಇಂತಹ ಪ್ರಕರಣಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡುತ್ತೇವೆ ಎಂದು ತಿಳಿಸಿದರು.

## ಶ್ರೀಕ್ಷೇತ್ರ ಧರ್ಮಸ್ಥಳದಿಂದ ಆಕ್ಸಿಜನ್ ಕಾನ್ಸಂಟ್ರೇಟರ್ ವಿತರಣೆ



ನಂಜನಗೂಡು, ಜೂ.7(ಸುದರ್ಶನ್)– ಕೊರೊನಾದಿಂದ ಶ್ವಾಸಕೋಶ ತೊಂದರೆಯಿಂದ ಬಳಲುತ್ತಿರುವ ತಾಲೂಕಿನ ನಗರ್ಲೆ ಗ್ರಾಮದ ನಿವಾಸಿ ಮಹದೇವಯ್ಯ ಅವರಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಆಕ್ಸಿಜನ್ ಕಾನ್ಸಂಟ್ರೇಟರ್ ಕಿಟ್ ವಿತರಿಸಲಾಯಿತು. ಈ ವೇಳೆ ಯೋಜನೆಯ ಜಿಲ್ಲಾ ನಿರ್ದೇಶಕ ಒ.ಲಕ್ಷ್ಮಣ್, ಯೋಜನಾಧಿಕಾರಿ ಆನಂದಗೌಡ ಹಾಗೂ ಗ್ರಾಮಸ್ಥರು ಇದ್ದರು.



ಹೆಚ್.ಡಿ.ಕೋಟೆ ಪಟ್ಟಣದಲ್ಲಿ ನಡೆದ ತೋಟಗಾರಿಕೆ ಬೆಳೆಗಾರರ ಸಂಘದ ಚುನಾವಣೆಯಲ್ಲಿ ಜಯ ಗಳಿಸಿದ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳನ್ನು ಬಿಜೆಪಿ ಮುಖಂಡ ಡಾ.ಹೆಚ್.ವಿ.ಕೃಷ್ಣಸ್ವಾಮಿ ಅಭಿನಂದಿಸಿದರು. ಈ ವೇಳೆ ಅಭ್ಯರ್ಥಿಗಳಾದ ನಟರಾಜ್, ನಂದೀಶ್, ಸ್ವಾಮಿ, ಶ್ರೀನಿವಾಸ್, ಪ್ರೇಮ, ಮುತ್ತಣ್ಣ, ರಾಮಚಂದ್ರ, ಬಿಜೆಪಿಯ ತಾಲೂಕು ಘಟಕದ ಮಾಜಿ ಅಧ್ಯಕ್ಷ ಸಿ.ಕೆ.ಗಿರೀಶ್, ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷ ಕಾಶಿಪತಿ, ಶಿವರಾಜಪ್ಪ, ಪುಟ್ಟರಾಜು ಇತರರಿದ್ದರು.

# ಪರಿಸರ ಸಂರಕ್ಷಣೆಗೆ ಮುಂದಾಗಲು ಕರೆ



ಬೈಲಕುಪ್ಪೆ, ಜೂ.7(ರಾಜೇಶ್)– 'ಮನೆಗೊಂದು ಗಿಡ, ಊರಿಗೊಂದು ವನ' ಎಂಬಂತೆ ಪರಿಸರ ಸಂರಕ್ಷಣೆಗೆ ಎಲ್ಲರೂ ಮುಂದಾಗಬೇಕು ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಕೊಡಗು ಜಿಲ್ಲಾ ಕೋಶಾಧಿಕಾರಿ ಮತ್ತು ತಾಲೂಕು ಪಂಚಾಯಿತಿ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಎ.ಟಿ.ರಂಗಸ್ವಾಮಿ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ಆಲನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ನಡೆದ ವಿಶ್ವ ಪರಿಸರ ದಿನದ ಕಾರ್ಯಕ್ರಮದಲ್ಲಿ ಗಿಡ ನೆಟ್ಟು ಮಾತನಾಡಿದ ಅವರು, ವಾಯು ಮಾಲಿನ್ಯದಿಂದ ಪರಿಸರಕ್ಕೆ ತೊಂದರೆಯಾಗುತ್ತಿದ್ದು, ಇದನ್ನು ತಡೆಗಟ್ಟಲು ಗಿಡ ಬೆಳೆಸಬೇಕು. ಈ ನಿಟ್ಟಿನಲ್ಲಿ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಲವು ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದರು.

ಮಹಿಳೆಯರಿಗೆ ಅತಿ ಹೆಚ್ಚಿನ ಉತ್ತೇಜನ ನೀಡುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದೆ. ಸಹಕಾರ ಸಂಘಗಳ ಬೆಳವಣಿಗೆಗೆ, ಕೃಷಿ ಚಟುವಟಿಕೆಗೆ, ಸೋಲಾರ್, ಮನೆಗೆ ಅಗತ್ಯವಾದ ಸಲಕರಣೆ ನೀಡುವ ಕೆಲಸವನ್ನು ಧರ್ಮಸ್ಥಳ ಸಂಘ ಮಾಡುತ್ತಿದೆ ಎಂದರು.

ತಾಲೂಕು ಯೋಜನಾಧಿಕಾರಿ ಸುರೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಗಣೇಶ್, ಹುಣಸವಾಡಿ ಗ್ರಾಪಂ ಮಾಜಿ ಸದಸ್ಯ ಗಣೇಶ್, ಕೃಷಿ ಮೇಲ್ವಿಚಾರಕ ಹರೀಶ್, ವಲಯ ಮೇಲಧಿಕಾರಿ ಮಧುರ, ನವಜೀವನ ಅಧ್ಯಕ್ಷ ವಸಂತ, ಮುಖ್ಯಶಿಕ್ಷಕ ಪುಟ್ಟರಾಜು, ನವ ಜೀವನ ಸೇವಾ ಪ್ರತಿನಿಧಿ ನಜ್ಮಾ, ಧರ್ಮಸ್ಥಳ ಸಂಘದ ಮಹಿಳಾ ಅಧ್ಯಕ್ಷೆ ಜಯಂತಿ ಹಾಜರಿದ್ದರು.

# ಬಿಜೆಪಿ ಅಭ್ಯರ್ಥಿಗೆ ಮೊದಲ ಪ್ರಾಶಸ್ತ್ಯದ ಮತ ನೀಡಿ



ತಿ.ನರಸೀಪುರ, ಜೂ.7(ಎಸ್‌ಕೆ)– ಪ್ರಧಾನಿ ಮೋದಿ ನಾಯಕತ್ವ ಹಾಗೂ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಬೆಂಬಲಿಸಲು ದಕ್ಷಿಣ ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಮೈ.ವಿ.ರವಿಶಂಕರ್ ಅವರಿಗೆ ಪದವೀಧರರು ಮೊದಲ ಪ್ರಾಶಸ್ತ್ಯದ ಮತ ನೀಡಿ ವಿಧಾನ ಪರಿಷತ್‌ಗೆ ಆಯ್ಕೆ ಮಾಡಬೇಕು ಎಂದು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಹಿಂದುಳಿದ ವರ್ಗಗಳ ಮೋರ್ಚಾ ಸಂಯೋಜಕ ಹಾಗೂ ಮಂಡಲ ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಆರ್.ಸೋಮಶೇಖರ್ ಮನವಿ ಮಾಡಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಚುನಾವಣೆಯಲ್ಲಿ ವಿದ್ಯಾವಂತರೇ ಮತ ಚಲಾಯಿಸುವ ಹಕ್ಕನ್ನು ಹೊಂದಿರುವುದು ವಿಶೇಷವಾಗಿದ್ದು, ಬಲಿಷ್ಠ ಭಾರತ ಕಟ್ಟಲು ಶ್ರಮಿಸುತ್ತಿರುವ ಪ್ರಧಾನಿ ಮೋದಿ ನಾಯಕತ್ವ ಮತ್ತು ಕೇಂದ್ರ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿ ಬೆಂಬಲಿಸಲು ಪದವೀಧರ ಮತದಾರರು ಬಿಜೆಪಿ ಅಭ್ಯರ್ಥಿ ಬೆಂಬಲಿಸಬೇಕು ಎಂದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮತ್ತು ಹಾಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನಾಯಕತ್ವಕ್ಕೆ ಬಲ ತುಂಬಲು ಈ ಚುನಾವಣೆಯಲ್ಲಿ ದಕ್ಷಿಣ ಜಿಲ್ಲೆಯ ಜನರ ಸಹಕಾರ ಮುಖ್ಯವಾಗಿದೆ. ಆದ್ದರಿಂದ ನಾಲ್ಕು ಜಿಲ್ಲೆಗಳ ಪದವೀಧರರು ವಿಪಕ್ಷಗಳ ಅಪಪ್ರಚಾರಕ್ಕೆ ಕಿವಿಗೊಡಬಾರದು ಎಂದರು.

ಸರಳ, ಸಜ್ಜನಿಕೆ ವ್ಯಕ್ತಿಯಾಗಿರುವ ಮೈ.ವಿ.ರವಿಶಂಕರ್ ಕಳೆದ ಚುನಾವಣೆಯಲ್ಲಿ ಪರಾಭವಗೊಂಡಿದ್ದರು. ಅವರ ನಿಷ್ಠೆ, ಸಂಘಟನಾ ಚತುರತೆ ಪರಿಗಣಿಸಿ ಪಕ್ಷವು 2ನೇ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ಕಲ್ಪಿಸಿದ್ದಾರೆ. ಅವರ ಪರ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಹಗಲಿರುಳು ದುಡಿಯುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಜೂ.13 ರಂದು ನಡೆಯಲಿರುವ ಚುನಾವಣೆಯಲ್ಲಿ ಪದವೀಧರರು ರವಿಶಂಕರ್‌ಗೆ ಮತ ನೀಡುವ ಮೂಲಕ ವಿಧಾನ ಪರಿಷತ್‌ಗೆ ಚುನಾಯಿಸಬೇಕೆಂದು ಮನವಿ ಮಾಡಿದ್ದಾರೆ.



## ನಿಂತಿದ್ದ ಲಾರಿಗೆ ಬೈಕ್ ಡಿಕ್ಕಿ: ಪತಿ ಸಾವು, ಪತ್ನಿಗೆ ಗಾಯ

ಹುಣಸೂರು, ಜೂ.7(ಕೆಕೆ)– ನಿಂತಿದ್ದ ಲಾರಿಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಪತಿ ಸಾವನ್ನಪ್ಪಿ, ಪತ್ನಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಕಲ್ಲಹಳ್ಳಿ ಗ್ರಾಮದ ಸಮೀಪ ಸೋಮವಾರ ರಾತ್ರಿ ನಡೆದಿದೆ.

ಮಲ್ಟಿ ಪರ್ಪಸ್‌ಕೋ–ಆಪರೇಟಿವ್ ಬ್ಯಾಂಕ್‌ನ ನಿರ್ದೇಶಕ ಮುಬಾರಕ್ ಹುಸೈನ್(60) ಮೃತಪಟ್ಟವರು. ಇವರ ಪತ್ನಿ ಸನ್ನ ಗಾಯಗೊಂಡಿದ್ದು, ಹುಣಸೂರು ಆಸ್ಪತ್ರೆಗೆ ದಾಖಲಿಸಲಾಗಿದೆ. ಇವರು ಪಿರಿಯಾಪಟ್ಟಣದಿಂದ ಹುಣಸೂರಿಗೆ ಬೈಕ್‌ನಲ್ಲಿ ಬರುತ್ತಿದ್ದಾಗ, ಕಲ್ಲಹಳ್ಳಿ ಗ್ರಾಮದ ಸಮೀಪ ಹೆದ್ದಾರಿ ಬದಿಯಲ್ಲಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ ಬೈಕ್‌ನಿಂದ ಬಿದ್ದು, ಮುಬಾರಕ್ ಹುಸೈನ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಈತನ ಪತ್ನಿ ಸನ್ನಗೆ ಗಂಭೀರ ಗಾಯವಾಗಿದ್ದು, ಸ್ಥಳೀಯರ ಸಹಾಯದಿಂದ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ

# ಸಿದ್ದರಾಮಯ್ಯರನ್ನು ಪ್ರಶ್ನಿಸಲು ಪ್ರತಾಪ್‌ಸಿಂಹರಿಗೆ ನೈತಿಕತೆ ಇಲ್ಲ

## ಪುರಸಭೆ ಮಾಜಿ ಅಧ್ಯಕ್ಷ ಎನ್.ಸೋಮು ಕಿಡಿ



ತಿ.ನರಸೀಪುರ, ಜೂ.7(ಎಸ್‌ಕೆ)– ವಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ಆರ್ಥಿಕತೆ ಬಗ್ಗೆ ಏನು ಗೊತ್ತು ಎಂದು ಹೇಳಿಕೆ ನೀಡಿರುವ ಸಂಸದ ಪ್ರತಾಪ್‌ಸಿಂಹ ಅವರದ್ದು ಬಾಲಿಷ ಹೇಳಿಕೆ ಸಿದ್ದರಾಮಯ್ಯರನ್ನು ಪ್ರಶ್ನಿಸಲು ಅವರಿಗೆ ಯಾವುದೇ ನೈತಿಕತೆ ಇಲ್ಲ ಎಂದು ಪುರಸಭೆ ಮಾಜಿ ಅಧ್ಯಕ್ಷ ಎನ್.ಸೋಮು ಕಿಡಿಕಾರಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಯಾಗಿ 5 ವರ್ಷ ಯಶಸ್ವಿಯಾಗಿ ಆಡಳಿತ ನಡೆಸಿ, ಉಪ ಮುಖ್ಯಮಂತ್ರಿಯಾಗಿ 13 ಬಾರಿ ಬಜೆಟ್ ಮಂಡಿಸಿ, ಹಿಂದುಳಿದವರು, ಅಲ್ಪಸಂಖ್ಯಾತರು, ದಲಿತರ ಪರ ಸದಾ ನಿಲ್ಲುವ ವಿಪಕ್ಷ ನಾಯಕ ಸಿದ್ದರಾಮಯ್ಯನವರ ಆರ್ಥಿಕತೆ ತಿಳುವಳಿಕೆ ಬಗ್ಗೆ ಪ್ರಶ್ನಿಸಿರುವ ಸಂಸದ ಪ್ರತಾಪ್ ಸಿಂಹರಿಗೆ ಇರುವ ಅರ್ಹತೆ ಯಾದರೂ ಏನು? ಸಿದ್ದರಾಮಯ್ಯನವರು ಆರ್‌ಎಸ್‌ಎಸ್ ಮೇಲೆ ಆರೋಪ ಮಾಡಿದ ವೇಳೆ ಆರ್‌ಎಸ್‌ಎಸ್‌ನಲ್ಲಿ ದಲಿತರು, ಹಿಂದುಳಿದವರು ಒಬ್ಬರಾದರೂ ಕಾರ್ಯಕರ್ತರಿದ್ದಾರಾ, ಅವರಿಗೆ ಅವಕಾಶ ಕಲ್ಪಿಸಿಕೊಟ್ಟಿದ್ದೀರಾ ಎಂಬ ಸರಳ ಪ್ರಶ್ನೆಗೆ ಉತ್ತರಿಸಲು ಸಾಧ್ಯವಾಗದ ಬಿಜೆಪಿಯವರು ಹತಾಶರಾಗಿ ಸಿದ್ದರಾಮಯ್ಯರ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿರುವುದು ಖಂಡನೀಯ ಎಂದರು.

ಮೈಸೂರಿನಲ್ಲಿ ಜಯದೇವ ಆಸ್ಪತ್ರೆ, ನೂತನ ಜಿಲ್ಲಾಧಿಕಾರಿ ಕಚೇರಿ ನಿರ್ಮಾಣ ಸೇರಿದಂತೆ ಮತ್ತಿತರ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿರುವ ಸಿದ್ದರಾಮಯ್ಯರವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದ ವೇಳೆ, ಲೋಕೋಪಯೋಗಿ ಸಚಿವರಾಗಿದ್ದ ಆಸ್ಕರ್ ಫರ್ನಾಂಡಿಸ್‌ರಿಂದ ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಗೆ ಹಣ ಬಿಡುಗಡೆ ಮಾಡಿಸಿದ್ದರು. ಆದರೆ ಪ್ರತಾಪ್ ಸಿಂಹ ಯಾರದೋ ಮಗುವಿಗೆ ನಾನೇ ಅಪ್ಪ ಎನ್ನುವಂತೆ ಕಾಂಗ್ರೆಸ್ ಮಾಡಿದ ಯೋಜನೆಯನ್ನು ತನ್ನದೆಂದು ಹೇಳಿಕೊಳ್ಳುತ್ತಿರುವುದು ನಾಚಿಕೆ ಗೇಡಿನ ಸಂಗತಿ ಎಂದು ವ್ಯಂಗ್ಯವಾಡಿದರು.

ಮುಖಂಡ ಸಂದೇಶ್‌ಗೌಡ, ಎನ್‌ಎಸ್‌ಯುಐ ಮಾಜಿ ಅಧ್ಯಕ್ಷ ಮಣಿಕಂಠಸ್ವಾಮಿ ಮಾತನಾಡಿ, ಬಿಜೆಪಿ ಮುಖಂಡರು ಸ್ವಾರ್ಥಿಗಳಂತೆ ವರ್ತಿಸುತ್ತಿದ್ದು, ಕೇವಲ ಹೇಳಿಕೆ ನೀಡಲಷ್ಟೇ ತಮ್ಮ ಅಧಿಕಾರ ಬಳಸಿಕೊಳ್ಳುತ್ತಿದ್ದಾರೆ. ಇವರಿಂದ ರಾಜ್ಯದ ಅಭಿವೃದ್ಧಿಗೆ ಕೊಡುಗೆ ಇಲ್ಲ ಎಂದು ದೂರಿದರು.


ಸುದ್ದಿಗೋಷ್ಠಿಯಲ್ಲಿ ವರುಣಾ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜು(ಅಮಾಸೆ), ವೀರಶೈವ ಮುಖಂಡ ಬಸಪ್ಪ, ವೈದ್ಯಕೀಯ ವಿಭಾಗದ ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಡಾ.ಪ್ರದೀಪ್, ಶಿವಸ್ವಾಮಿ ಹಾಜರಿದ್ದರು.

## ಸಾರ್ವಜನಿಕ ಪ್ರಕಟಣೆ

ಷೆಡ್ಯೂಲ್ ಸ್ವತ್ತಿನ ವಿವರ


ಸಹಿ/- ...
ಮೊ: 98446 40641
Email: sidlawfirm2021@gmail.com

## ಪುಣ್ಯಸ್ಮರಣೆ



ಪಿ.ಜಿ. ಚಿಕ್ಕಬಸವಯ್ಯ










## ನೈರುತ್ಯ ರೈಲ್ವೆ

ಇ-ಟೆಂಡರ್ ಪ್ರಕಟಣೆ ಸಂ.: ನೈ/ಇ 29/2022-23/03 ದಿನಾಂಕ: 03.06.2022

ಈ ಕೆಳ ಸಹಿದಾರರು, ಭಾರತದ ರಾಷ್ಟ್ರಪತಿಗಳ ಪರವಾಗಿ ಈ ಕೆಳಗಿನ ಕಾಮಗಾರಿಗಾಗಿ ಇ-ಟೆಂಡರ್‌ಗಳಲ್ಲಿ ಭಾಗವಹಿಸಲು ಆಹ್ವಾನಿಸಲಾಗಿದೆ.

| ಕಾಮಗಾರಿ ವಿವರ | ಅಂದಾಜು ವೆಚ್ಚ |
|---|---|
| ಮೈಸೂರಿನಲ್ಲಿ ಟ್ರಾಕ್ಷನ್ ಪವರ್ ಕಂಟ್ರೋಲ್ ಮತ್ತು ರಿಮೋಟ್ ಕಂಟ್ರೋಲ್ ಸೆಂಟರ್ ನಿರ್ಮಾಣ. | Rs. 37,04,511/- |

ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 27.06.2022 ಸಮಯ: 11:00 ಗಂಟೆಯವರೆಗೆ.
ಹೆಚ್ಚಿನ ಮಾಹಿತಿಗಾಗಿ www.ireps.gov.in ಲಾಗ್ ಆನ್ ಮಾಡಿ
ಹಿರಿಯ ವಿಭಾಗೀಯ ಎಲೆಕ್ಟ್ರಿಕಲ್ ಇಂಜಿನಿಯರ್ ಮೈಸೂರು
S.W.Railways SWRRLY SWRRLY



















## 7ನೇ ವರ್ಷದ ಪುಣ್ಯಸ್ಮರಣೆ



ಜನನ: 23.07.1955 ಮರಣ: 08.06.2015

**ಶ್ರೀ ಡಿ. ತಮ್ಮಯ್ಯ (ಎಂ.ಎಸ್ಸಿ)**

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ
ನೀವು ನಮ್ಮನ್ನು ಅಗಲಿ ಇಂದಿಗೆ ಏಳು ವರ್ಷಗಳಾದರೂ ನಮ್ಮ ಹೃದಯಗಳಲ್ಲಿ ಚಿರಸ್ಥಾಯಿಯಾಗಿರುವಿರಿ. ದೇವರು ನಿಮ್ಮ ಆತ್ಮಕ್ಕೆ ಶಾಂತಿ ಕೊಡಲೆಂದು ಪ್ರಾರ್ಥಿಸುತ್ತೇವೆ.

ಇಂತಿ: ಕುಟುಂಬವರ್ಗ ಮತ್ತು ಬಂಧುಮಿತ್ರರು
ಫೋನ್: 9964514442

## ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಜನನ 08.10.1974 ಮರಣ 28.05.2022

**ಎಂ.ಎಸ್.ಎಸ್. ಕುಮಾರ**

ದಿ.08.06.2022 ಬುಧವಾರ ಬೆಳಗ್ಗೆ 9 ಗಂಟೆಗೆ ಹಾಲುತುಪ್ಪ ಮತ್ತು ಮಧ್ಯಾಹ್ನ 1 ರವರೆಗೆ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ನಮ್ಮ ಸ್ವಗೃಹ, ಮೂಗೂರು ಗ್ರಾಮ, ಟಿ. ನರಸೀಪುರ ತಾ|| ಇಲ್ಲಿ ಏರ್ಪಡಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು: ಕುಟುಂಬವರ್ಗದವರು, ಮೂಗೂರು

## 9ನೇ ವರ್ಷದ ಸವಿನೆನಪು



ನೀನು ನಮ್ಮನ್ನಗಲಿ ಇಂದಿಗೆ ಒಂಬತ್ತು ವರ್ಷ ಆಯಿತು. ನಿನ್ನ ಆತ್ಮಕ್ಕೆ ಚಿರಶಾಂತಿ ಕೋರುವ,
ತಂದೆ- ಹೆಬ್ಬಾಳೇಗೌಡ ಹಾಗೂ ಕುಟುಂಬವರ್ಗ ಡಿ. ಸಾಲುಂಡಿ

**ಹೆಚ್. ಬೀರೇಗೌಡ**
ಜನನ: 15-1-2000 ಮರಣ: 08-06-2013

## ಕಾವೇರಿ ನೀರಾವರಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಒಂದು ಉದ್ಯಮ)

### ಸಂಕ್ಷಿಪ್ತ ಟೆಂಡರ್ ಪ್ರಕಟಣೆ (ದ್ವಿ-ಲಕೋಟೆ ಪದ್ಧತಿ)

(ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ಮಾತ್ರ)

ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಕಬಿನಿ ನಾಲೆಗಳ ವಿಭಾಗ, ನಂಜನಗೂಡು, ಮೈಸೂರು ಜಿಲ್ಲೆ. ದೂರವಾಣಿ / ಫ್ಯಾಕ್ಸ್ ಸಂಖ್ಯೆ : 08221-226261 | Email: kcdngd@gmail.com

ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: 07/2022-23 ದಿನಾಂಕ: 06-06-2022

ರೂ 280.00 ಲಕ್ಷದ, ಕೆರೆಗಳಿಗೆ ನೀರು ತುಂಬಿಸುವ ಒಂದು ಕಾಮಗಾರಿಗೆ ಐಟಂವಾರು ಟೆಂಡರ್ ಅನ್ನು ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್ ಮೆಂಟ್‌ನಲ್ಲಿ ಕಾವೇರಿ ನೀರಾವರಿ ನಿಗಮ ನಿಯಮಿತದಲ್ಲಿ ಕಡ್ಡಾಯವಾಗಿ ಹೆಸರು ನೊಂದಾಯಿಸಿರುವ ಅರ್ಹ ಗುತ್ತಿಗೆದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.
ಟೆಂಡರ್ ಪ್ರೊಸೆಸಿಂಗ್ ಶುಲ್ಕ, ಇ.ಎಂ.ಡಿ ಮೊತ್ತ ಹಾಗೂ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಟೆಂಡರ್ ಅನ್ನು ತೆರೆಯುವ ದಿನಾಂಕ ಹಾಗು ಇತರೆ ವಿವರಗಳನ್ನು ಅಂತರ್ಜಾಲದ ಮೂಲಕ ವೆಬ್‌ಸೈಟ್ ವಿಳಾಸ: www.eproc.karnataka.gov.in ರಲ್ಲಿ ಪಡೆಯಬಹುದು. ಆರ್ಥಿಕ ಬಿಡ್‌ಅನ್ನು ತಾಂತ್ರಿಕ ಬಿಡ್‌ಗೆ ಅನುಮೋದನೆ ದೊರೆತ ನಂತರ ತೆರೆಯಲಾಗುವುದು.
ಹೆಚ್ಚಿನ ವಿವರಗಳನ್ನು ಸದರಿ ಕಛೇರಿಯಿಂದ ಪಡೆಯಬಹುದಾಗಿದೆ.

ಸಹಿ/- ಕಾರ್ಯಪಾಲಕ ಇಂಜಿನಿಯರ್,
ಕಬಿನಿ ನಾಲೆಗಳ ವಿಭಾಗ, ನಂಜನಗೂಡು

## PUBLIC NOTICE

My client is intending to purchase the schedule property from **Smt. ANUSUYA, W/o. Sri. M.S. Dhananjaya.** residing at No. 441, 5th Cross, M block, Kuvempunagar, Chamaraja mohalla, Mysuru. Anybody has got any sort of right, claim, interest over the schedule property or having any sort of objection for the said transaction shall approach the under mentioned Advocate **within 7 days** from this day with documentary evidence, failing which my client shall proceed further in accordance with the terms of the agreement considering there is no objection to the said sale transaction.

**SCHEDULE PROPERTY**

**ITEM No.1 :** ALL THAT PART AND PARCEL the undeveloped residentially converted property bearing Sy. No. 66/4, totally measuring 00-20 ½ guntas of land, converted vide Official Memorandum No. ALN(3)CR.270/2013-14 dt: 30/06/2014 issued by Deputy commissioner, Mysuru district, situated at **Jantagalli village, Varuna Hobli, Mysuru Taluk, Mysuru district,** presently within the administrative jurisdiction At Mosambayanahalli village panchayath,
And BOUNDED ON:
**EAST BY** : Land bearing Sy. No. 66/1
**WEST BY** : Land bearing Sy. No. 66/5
**NORTH BY** : Land bearing Sy. No. 66/2
**SOUTH BY** : Land bearing Sy. No. 65.

**ITEM No.2.** ALL THAT PART AND PARCEL the undeveloped residentially converted property bearing Sy. No. 66/5, totally measuring 00-20 ½ guntas of land, converted vide Official Memorandum No. ALN(3)CR.270/2013-14 dt: 30/06/2014 issued by Deputy commissioner, Mysuru district, situated at **Jantagalli village, Varuna Hobli, Mysuru Taluk, Mysuru district,** presently within the administrative jurisdiction of Mosambayanahalli village panchayath.
And BOUNDED ON:
**EAST BY** : Land bearing Sy. No. 66/4
**WEST BY** : Land bearing Sy. No. 68
**NORTH BY** : Land bearing Sy. No. 66/3
**SOUTH BY** : Land bearing Sy. No. 65.

**N.S. SHIVASHANKAR, Advocate**
# 48/1, 2nd Floor, 1st Cross, Opp: Canara Bank, Vallabha Nagar, Uttarahalli Main Road, Uttarahalli, Bangalore-61.
Ph No. 9343094442, 080-41628629



## ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆಯ

ರಾಜ್ಯಾಧ್ಯಕ್ಷರಾದ ಕೆ.ಎಸ್.ಶಿವರಾಮು ಅವರ ಜನುಮದಿನದ ಅಂಗವಾಗಿ

ಸಾಮರಸ್ಯಕ್ಕಾಗಿ ದ್ರಾವಿಡರು, ಮುಸ್ಲಿಂ ಹಾಗೂ ಕ್ರಿಶ್ಚಿಯನ್ ಸೌಹಾರ್ದ ಕೂಟ ಮತ್ತು ಸಹಪಂಕ್ತಿ ಭೋಜನಾ

ದಿನಾಂಕ : 08-06-2022ರ ಬುಧವಾರ
ಸಮಯ : ಬೆಳಗ್ಗೆ 11.30 ಗಂಟೆಗೆ
ಸ್ಥಳ : ರುದ್ರಭೂಮಿ (ಸುಡುವ)
ಚಾಮುಂಡಿ ಬೆಟ್ಟದ ಪಾದದ ರಸ್ತೆ, ಮೈಸೂರು



ಶುಭಕೋರುವವರು : ಕೆ.ಎಸ್. ಶಿವರಾಮು ಅಭಿಮಾನಿಗಳ ಬಳಗ